ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 28 ಶುಕ್ರವಾರ 2025

ಸಂಪುಟ: 45 | ಸಂಚಿಕೆ: 338 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871


ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

ಮೂತ್ರಕೋಶದಲ್ಲಿ 21 ಕಲ್ಲುಗಳಿದ್ದ ವೃದ್ಧನಿಗೆ ಮಣಿಪಾಲ್ ಆಸ್ಪತ್ರೆಯಲ್ಲಿ ಯಶಸ್ವಿ ಲೇಸರ್ ಶಸ್ತ್ರಚಿಕಿತ್ಸೆ

ಮೈಸೂರು, ಮಾ.27(ಜಿಎ)–ಮೂತ್ರಕೋಶದಲ್ಲಿ 21 ಕಲ್ಲುಗಳ ಜಟಿಲ ಸಮಸ್ಯೆಯಿಂದ ಬಳಲುತ್ತಿದ್ದ ಸುಮಾರು 72 ವರ್ಷ ವಯಸ್ಸಿನ ವ್ಯಕ್ತಿಯೊಬ್ಬರಿಗೆ ಹೋಲ್ಮಿಯಂ ಲೇಸರ್ ಲಿಥೋಟ್ರಿಪ್ಸಿ ಹಾಗೂ ಹೋಲೆಪ್ ಲೇಸರ್ ಶಸ್ತ್ರಚಿಕಿತ್ಸೆಯನ್ನು ಜಂಟಿಯಾಗಿ ನಡೆಸುವ ಮೂಲಕ ಸಮಸ್ಯೆ ಬಗೆಹರಿಸಲಾಗಿದೆ ಎಂದು ಮಣಿಪಾಲ್ ಆಸ್ಪತ್ರೆ ತಜ್ಞ ವೈದ್ಯ ಡಾ.ಟಿ.ಪಿ.ದಿನೇಶ್‌ಕುಮಾರ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೋಗಿಯೂ ಮೂತ್ರ ಕೋಶದ ಸಂಕೀರ್ಣ ಸಮಸ್ಯೆ ಎದುರಿಸುತ್ತಿದ್ದರು. ಇವರ ಮೂತ್ರದಲ್ಲಿ ನಿರಂತರವಾಗಿ ರಕ್ತ ಹೋಗುತ್ತಿತ್ತು. ಮೂತ್ರ ವಿಸರ್ಜನೆ ಕಷ್ಟಕರವಾಗುತ್ತಿತ್ತು. ಇದರಿಂದಾಗಿ ತೀರಾ ಬಳಲುತ್ತಿದ್ದ ಇವರು ಅನೇಕ ಕಡೆ ಚಿಕಿತ್ಸೆ ಪಡೆದರೂ ಗುಣವಾಗದ ಹಿನ್ನೆಲೆಯಲ್ಲಿ ನಮ್ಮ ಆಸ್ಪತ್ರೆಗೆ ಬಂದರು. ಜೊತೆಗೆ, ಇವರು ಮಧುಮೇಹ ಹಾಗೂ ಅಧಿಕ ರಕ್ತದೊತ್ತಡದಿಂದ ಬಳಲುತ್ತಿದ್ದ ಹಿನ್ನೆಲೆಯಲ್ಲಿ ಸಾಂಪ್ರದಾಯಿಕವಾದ ಭೇದನ ಶಸ್ತ್ರಚಿಕಿತ್ಸೆ ನಡೆಸಿದಲ್ಲಿ ಸೋಂಕು ಹಾಗೂ ಇನ್ನಿತರ ಅಪಾಯ ಸಾಧ್ಯತೆ ಇದ್ದವು. ಹೀಗಾಗಿ ಈ ನೂತನ ಹಾಗೂ ಪರಿಣಾಮಕಾರಿಯಾದ ಶಸ್ತ್ರ ಚಿಕಿತ್ಸಾ ವಿಧಾನಕ್ಕೆ ನಿರ್ಧರಿಸಲಾಯಿತು ಎಂದರು.

ಯಾವುದೇ ಶಸ್ತ್ರಚಿಕಿತ್ಸೆ ಅಥವಾ ಭೇದನವಿಲ್ಲದೇ ಈ ವಿಧಾನದ ಮೂಲಕ ನೈಸರ್ಗಿಕ ಮೂತ್ರನಾಳದ ಮೂಲಕ ಹೋಲೆಪ್ ಬಳಸಿ, ವಿಸ್ತರಣೆಗೊಂಡಿದ್ದ ಪ್ರಾಸ್ಟೇಟ್ ತೆಗೆದುಹಾಕಲಾಯಿತು. ಇದರೊಡನೆ, ದೊಡ್ಡ ಗಾತ್ರದ ಗಡುಸಾದ 21 ಕಲ್ಲುಗಳನ್ನು ಸಹಾ ಲೇಸರ್ ಸಾಧನ ಮೂಲಕ ಪುಡಿ ಪುಡಿ ಮಾಡಿ ತೆಗೆಯಲಾಗಿದೆ. ಇತರೆ ಸಾಂಪ್ರದಾಯಿಕ ವಿಧಾನದ ಶಸ್ತ್ರಚಿಕಿತ್ಸೆಗಿಂತ ಇದು ಪರಿಣಾಮಕಾರಿ. ಏಕೆಂದರೆ ರೋಗಿ ಶೀಘ್ರ ಚೇತರಿಸಿ ಕೊಂಡು ಮನೆಗೆ ಮರಳುತ್ತಾರೆ. ಹೀಗಾಗಿ ಇವರ ರೀತಿಯ ಜಟಿಲ ಸಂದರ್ಭದಲ್ಲಿ ಈ ವಿಧಾನ ಅಗತ್ಯವಾಗಿದೆ. ಇನ್ನು, ವಾಟ್ಸಪ್, ಸಾಮಾಜಿಕ ಜಾಲ ಮಾಧ್ಯಮಗಳ ಮೂಲಕ ಕೆಲವರು ಮೂತ್ರ ಕೋಶದ ಕಲ್ಲುಗಳನ್ನು ಹೊರ ತೆಗೆಯಲು ಈ ವಿಧಾನ, ಆ ವಿಧಾನ ಬಳಸಿ ಎನ್ನುತ್ತಾರೆ. ಜನತೆ ಮರುಳಾಗಬಾರದು. ವೈದ್ಯರ ನೆರವು ಪಡೆಯಬೇಕೆಂದು ಕೋರಿದರು.



ವರುಣ ಕ್ಷೇತ್ರದ ದೇವಲಾಪುರ ಗುರುಮಲ್ಲೇಶ್ವರ ಮಠದಲ್ಲಿ ಆಯೋಜಿಸಿದ್ದ ಆರಾಧನಾ ಮಹೋತ್ಸವ, ಪ್ರಾರ್ಥನಾ ಮಂದಿರ ಉದ್ಘಾಟನಾ ಸಮಾರಂಭದಲ್ಲಿ ಶ್ರೀಮಠದ ಗುರುಗಳಾದ ಶ್ರೀ ಜಡೇಸ್ವಾಮಿಗಳನ್ನು ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್. ಮಹದೇವಸ್ವಾಮಿ ಅಭಿನಂದಿಸಿದರು. ದೇವಲಾಪುರ ಗ್ರಾಮಸ್ಥರು ಉಪಸ್ಥಿತರಿದ್ದರು.

ಜ್ಯೂಸ್ ಅಂಗಡಿಯವನಿಗೆ 7.79 ಕೋಟಿ ಪಾವತಿಗೆ ಐಟಿ ನೋಟಿಸ್

ಅಲಿಘರ್: ಉತ್ತರಪ್ರದೇಶದ ಅಲಿಘರ್‌ನ ಜಿಲ್ಲಾ ನ್ಯಾಯಾಲಯದ ಕಾಂಪೌಂಡ್‌ನಲ್ಲಿ ಒಂದು ಸಣ್ಣ ಜ್ಯೂಸ್ ಅಂಗಡಿ ಇಟ್ಟುಕೊಂಡಿರುವ ಮಾರಾಟಗಾರರೊಬ್ಬರಿಗೆ 7.79 ಕೋಟಿ ಬಾಕಿ ಪಾವತಿಗಾಗಿ ಐಟಿ ನೋಟಿಸ್ ನೀಡಿದ್ದು, ಇದರಿಂದ ಆಘಾತಕ್ಕೀಡಾಗಿದ್ದಾರೆ. ಮಾ.18ರಂದು ಜ್ಯೂಸ್ ಅಂಗಡಿ ಮಾಲೀಕ ಮೊಹಮ್ಮದ್ ರಹೀಸ್ ನೋಟಿಸ್ ಸ್ವೀಕರಿಸಿದಾಗಿನಿಂದ ಚಿಂತಾಕ್ರಾಂತರಾಗಿದ್ದಾರೆ. ಹೇಗೆ ಪ್ರತಿಕ್ರಿಯಿಸಬೇಕೆಂದು ತಿಳಿಯದೆ, ತಕ್ಷಣವೇ ನೋಟಿಸ್ ವಿಷಯಗಳನ್ನು ತಿಳಿಯಲು ಸ್ನೇಹಿತರ ನೆರವನ್ನು ಪಡೆದಿದ್ದಾರೆ. ಅದರಲ್ಲಿ ಮಾ.28ರೊಳಗೆ ಉತ್ತರಿಸುವಂತೆ ಸೂಚಿಸಲಾಗಿದೆ. ದಿನವೊಂದಕ್ಕೆ ಕೇವಲ 400 ರೂ. ಗಳಿಸುವ ರಹೀಸ್, ತನ್ನ ವೃದ್ಧ, ಅಸ್ವಸ್ಥ ತಂದೆ ತಾಯಿ ಸೇರಿದಂತೆ ಇಡೀ ಕುಟುಂಬವನ್ನು ಪೋಷಿಸುತ್ತಿದ್ದು, ಅನಿರೀಕ್ಷಿತ ನೋಟಿಸ್ ತನಗೆ ತೀವ್ರ ನೋವನ್ನುಂಟು ಮಾಡಿದೆ. ಈ ನೋಟಿಸ್ ತೀವ್ರ ಆತಂಕವನ್ನು ಉಂಟು ಮಾಡಿದ್ದು, ನನ್ನ ರಕ್ತದೊತ್ತಡ ಹೆಚ್ಚಾಗಿದೆ. ಈ ಬಿಕ್ಕಟ್ಟನ್ನು ಹೇಗೆ ಎದುರಿಸಬೇಕೆಂದು ನನಗೆ ತಿಳಿದಿಲ್ಲ ಎಂದರು.

ಹಾಸನ ಮಿತ್ರ

18 ಶಾಸಕರ ಅಮಾನತು, ದಲಿತರ ಅನುದಾನ ದುರ್ಬಳಕೆ ಖಂಡಿಸಿ ಬಿಜೆಪಿ ಪ್ರತಿಭಟನೆ



ಹಾಸನ,ಮಾ.27–ವಿಧಾನಸಭೆಯಿಂದ 18 ಶಾಸಕರ ಅಮಾನತು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅನುದಾನ ದುರ್ಬಳಕೆ ಖಂಡಿಸಿ ನಗರದಲ್ಲಿ ಕಾಂಗ್ರೆಸ್ ವಿರುದ್ಧ ಜಿಲ್ಲಾ ಬಿಜೆಪಿ ಪಕ್ಷದಿಂದ ಪ್ರತಿ ಭಟನೆ ನಡೆಸಿ ಅಮಾನತು ವಾಪಸ್ ಪಡೆಯುವಂತೆ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅವರಿಗೆ ಮನವಿ ಸಲ್ಲಿಸಲಾಯಿತು.

ನಗರದ ಆರ್.ಸಿ. ರಸ್ತೆ ಬಳಿ ಇರುವ ಬಿಜೆಪಿ ಕಚೇರಿ ಬಳಿಯಿಂದ ಮೆರವಣಿಗೆ ಹೊರಟ ಪ್ರತಿಭಟನಾಕಾರರು ಜಿಲ್ಲಾ ಪಂಚಾಯತ್ ಮುಂದಿನ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿದರು. ಬಳಿಕ ಜಿಲ್ಲಾಧಿಕಾರಿ ಕಚೇರಿ ಆವರಣಕ್ಕೆ ಆಗಮಿಸಿ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಶಾಸಕ ಹಾಗೂ ಬಿಜೆಪಿ ಎಸ್ಸಿ ಮೋರ್ಚಾ ರಾಜ್ಯಾಧ್ಯಕ್ಷ ಸಿಮೆಂಟ್ ಮಂಜು ಮಾತನಾಡಿ, ವಿಧಾನ ಸಭೆಯಲ್ಲಿ ಸಣ್ಣ ಕಾರಣಕ್ಕೆ 18 ಶಾಸಕರನ್ನು ರಾಜಕೀಯ ದುರುದ್ದೇಶದಿಂದ 6 ತಿಂಗಳ ಕಾಲ ಅಮಾನತು ಮಾಡಿ ಸ್ಪೀಕರ್ ಆದೇಶ ಹೊರಡಿಸಿರುವುದು ಖಂಡನೀಯ. ಇದೊಂದು ರಾಜಕೀಯ ಪಿತೂರಿಯಾಗಿದೆ. ಕೂಡಲೇ ಅಮಾನತು ಆದೇಶವನ್ನು ಹಿಂಪಡೆದು ಎಲ್ಲರನ್ನೂ ಸಮಾನವಾಗಿ ತೆಗೆದುಕೊಂಡು ಹೋಗುವ ನಿಟ್ಟಿನಲ್ಲಿ ಸ್ಪೀಕರ್ ಮುಂದಾಗಬೇಕು ಎಂದರು.

ಹುಡಾ ಮಾಜಿ ಅಧ್ಯಕ್ಷ ನವೀಲೆ ಅಣ್ಣಪ್ಪ ಮಾತನಾಡಿ, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎನ್.ರಾಜಣ್ಣ ಅವರು, ನನ್ನ ಮೇಲೆ ಹನಿಟ್ರಾಪ್ ಪ್ರಯತ್ನ ಆಗಿದೆ ಎಂದು ವಿಧಾನಸಭೆಯಲ್ಲಿ ಅಸಹಾಯಕತೆ ತೋಡಿಕೊಂಡಾಗ ಇದರ ವಿರುದ್ಧ ತನಿಖೆ ಆಗಲಿ ಎಂದು ವಿಧಾನಸಭೆಯಲ್ಲಿ ಬಿಜೆಪಿ ಶಾಸಕರು ಪ್ರತಿಭಟನೆ ಮಾಡಿದರೇ ಅವರನ್ನು 6 ತಿಂಗಲ ಕಾಲ ಅಮಾನತು ಮಾಡಿರುವ ಘಟನೆ ದೇಶದಲ್ಲಿ ಎಲ್ಲೂ ನಡೆದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಈ ಸರ್ಕಾರ ತೊಘಲಕ್ ಸರಕಾರವಾಗಿ ಬಿಜೆಪಿ ಶಾಸಕರನ್ನು ಅಮಾನತ್ತು ಮಾಡಿರುವುದು ನೋಡಿದರೇ ಸರ್ವಾಧಿಕಾರ ಧೋರಣೆ ಆಡಳಿತ ಎನಿಸುತ್ತದೆ.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ಅಟಾಲ್ ಬಿಹಾರಿ ವಾಜಪೇಯಿ ಜನ್ಮ ಶತಾಬ್ಧಿ ಸಹ ಸಂಚಾಲಕ ಫಣೀಶ್, ಬಿಜೆಪಿ ಸಂಘಟನಾ ಪರ್ವ ಜಿಲ್ಲಾ ಸಂಚಾಲಕ ರಾಜಕುಮಾರ್, ನಾರಾಯಣಗೌಡ, ಎಸ್.ಡಿ. ಚಂದ್ರು, ರತೀಶ್, ಚನ್ನಕೇಶವ, ಶೋಭನ್‌ಬಾಬು, ಶೇಷಮ್ಮ ಕುಮಾರ್, ರಘು, ಪ್ರಸಾದ್, ಬಿಜೆಪಿ, ಮುಖಂಡರು, ಕಾರ್ಯಕರ್ತರು ಇತರರು ಉಪಸ್ಥಿತರಿದ್ದರು.

ಕಾರ್ತಿಕ್ ನಿಧನ




ಹಾಸನ, ಮಾ.27– ನಗರದ ಎಂ.ಜಿ. ರಸ್ತೆಯ ಸ್ಟೇಡಿಯಂ ಮುಂಭಾಗ ವಾಸವಿದ್ದ ಕುಸುಮ ಗ್ಯಾಸ್ ಏಜೆನ್ಸಿಯ ಕೃಪೇಶ್ ಅವರ ಪುತ್ರ 28 ವರ್ಷದ ಕಾರ್ತಿಕ್ ಗುರುವಾರ ನಿಧನರಾದರು.

ಮೃತರು ತಂದೆ, ತಾಯಿ, ಪತ್ನಿ ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಇವರ ನಿಧನಕ್ಕೆ ಹಾಸನ ತಾಲೂಕು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷ ಕಟ್ಟಾಯ ಶಿವಕುಮಾರ್ ಹಾಗೂ ಸಮಾಜದವರು ಸಂತಾಪ ಸೂಚಿಸಿದ್ದಾರೆ.

ಅರಣ್ಯ, ಗೋಮಾಳ, ನಗರ ಪ್ರದೇಶದ ತುಂಡು ಭೂಮಿಯಲ್ಲಿ ಸಾಗುವಳಿ ಮಾಡುತ್ತಿರುವ

ರೈತರಿಗೆ ಹಕ್ಕುಪತ್ರ ನೀಡಲು ಆಗ್ರಹಿಸಿ ಪ್ರತಿಭಟನೆ



ಬಡ ಸಾಗುವಳಿ ರೈತರಿಗೆ ಸಾಗುವಳಿ ಪತ್ರ ನೀಡಬೇಕೆಂದು ಒತ್ತಾಯಿಸಿ ಮೈಸೂರು ತಾಲೂಕು ಕಚೇರಿ ಮುಂಭಾಗ ಬುಧವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಮಾ.27(ಜಿಎ)–ಅರಣ್ಯ ಭೂಮಿ, ಗೋಮಾಳ, ನಗರ ಪ್ರದೇಶದಿಂದ 10 ಕಿ.ಮಿ ವ್ಯಾಪ್ತಿಯ ತುಂಡು ಭೂಮಿಯಲ್ಲಿ ಕಳೆದ 50–60ಕ್ಕೂ ಹೆಚ್ಚು ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ಬಡ ರೈತರಿಗೆ ಸಾಗುವಳಿ ಪತ್ರ ನೀಡಬೇಕೆಂದು ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘದಿಂದ ಮೈಸೂರು ತಾಲೂಕು ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಕಳೆದ 50–60 ವರ್ಷಗಳಿಂದ ಗೋಮಾಳ, ಗುಂಡು ತೋಪು, ಅರಣ್ಯ ಭೂಮಿಗಳಲ್ಲಿ ಬಡ ಬಗರ್ ಹುಕುಂ ಸಾಗುವಳಿದಾರರು ಉಳುಮೆ ಮಾಡುತ್ತಾ ಜೀವನ ನಡೆಸುತ್ತಾ ಬಂದಿದ್ದಾರೆ. ಬಡ ಸಾಗುವಳಿದಾರರಿಗೆ ಸಾಗುವಳಿ ಪತ್ರ ನೀಡದೆ ಕಾನೂನಿನ ತೊಡಕಿನ ನೆಪ ಹೇಳಿ ವಂಚಿಸಲಾಗುತ್ತಿದೆ. ಆದರೆ, ಕೈಗಾರಿಕೆಗಳಿಗೆ, ಸಂಘ, ಸಂಸ್ಥೆಗಳಿಗೆ ಮಾತ್ರ ರೈತರು ಸಾಗುವಳಿ ಮಾಡುತ್ತಿರುವ ಭೂಮಿ ನೀಡಲಾಗುತ್ತಿದೆ. ಆಗ ಅಡ್ಡಿಯಾಗದ ಕಾನೂನು ಬಡ ರೈತರಿಗೆ ಸಾಗುವಳಿ ನೀಡಲು ಅಡ್ಡಿಯಾಗುತ್ತಿರುವುದು ರೈತ ವಿರೋಧಿಯಾಗಿದೆ ಎಂದು ಕಿಡಿಕಾರಿದರು.

ಹಸುಗಳಿಗೆ ಗೋಮಾಳ ಇರಬೇಕೆಂಬ ಕಾರಣ ಹೇಳಿ ಸಾಗುವಳಿ ವಂಚಿಸಲಾಗುತ್ತಿದೆ. ಆದರೆ, 100 ಹಸುಗಳಿಗೆ 30 ಎಕರೆ ಜಮೀನು ಬಿಟ್ಟು ಉಳಿದ ಜಮೀನನ್ನು ರೈತರಿಗೆ ನೀಡುವ ಅವಕಾಶವಿದೆ. ಆದರೆ, ಸ್ಥಳೀಯ ಅಧಿಕಾರಿಗಳು ಇದರ ಬಗ್ಗೆ ಗಮನ ನೀಡುತ್ತಿಲ್ಲ. ಮತ್ತೊಂದೆಡೆ ಅರಣ್ಯ ಭೂಮಿಗಳಲ್ಲಿ 50–60 ವರ್ಷಗಳಿಂದ ಸಾಗುವಳಿಗೆ ಅರ್ಜಿ ಸಲ್ಲಿಸಿ ರೈತರು ವ್ಯವಸಾಯ ಮಾಡುತ್ತಿದ್ದಾರೆ. ಆದರೆ, ಅರಣ್ಯ ಇಲಾಖೆ ಇತ್ತೀಚೆಗೆ ರೈತರಿಗೆ ನೋಟೀಸ್ ನೀಡಿ ಉಳುಮೆ ಮಾಡುತ್ತಿರುವ ಭೂಮಿಗೆ ದಾಖಲೆ ಕೇಳುತ್ತಿದೆ. ಒತ್ತುವರಿ ತೆರವು ಮಾಡುವುದಾಗಿ ಬೆದರಿಕೆ ಹಾಕುತ್ತಿದೆ. ನಗರದ 10 ಕಿ.ಮೀ. ವ್ಯಾಪ್ತಿಯಲ್ಲಿಯೂ ಬಡ ರೈತರು ಹಲವಾರು ವರ್ಷಗಳಿಂದ ಸಾಗುವಳಿ ಮಾಡುತ್ತಾ ಬಂದಿದ್ದಾರೆ. ಆದರೆ, ಇತ್ತೀಚೆಗೆ ನಗರ ವ್ಯಾಪ್ತಿ ವಿಸ್ತರಣೆಯಾಗುತ್ತಿರುವುದು, ನಗರಸಭೆ, ಪುರಸಭೆಗಳು ರಚನೆಯಾಗಿರುವುದರಿಂದ ಈ ರೈತರು ಸಾಗುವಳಿಯಿಂದ ವಂಚಿತರಾಗಿದ್ದಾರೆ. ಬಡ ರೈತರಿಗೆಲ್ಲ ಈ ಭೂಮಿಯೇ ಜೀವನಾಧಾರವಾಗಿರುವುದರಿಂದ ಇವರಿಗೆ ಸಾಗುವಳಿ ಪತ್ರ ನೀಡಬೇಕು. ತಕ್ಷಣವೇ ದರಕಾಸ್ತು ಸಮಿತಿ ರಚಿಸಿ ಬಾಕಿ ಇರುವ ಅರ್ಜಿಗಳನ್ನು ವಿಲೇವಾರಿ ಮಾಡಬೇಕೆಂದು ಆಗ್ರಹಿಸಿದರು.

ಹಕ್ಕೊತ್ತಾಯಗಳು: ಗೋಮಾಳ, ಅರಣ್ಯ ಭೂಮಿ, ಸರ್ಕಾರಿ ಜಾಗಗಳಲ್ಲಿ ಕಳೆದ 50–60 ವರ್ಷಗಳಿಂದ ಸಾಗುವಳಿ ಮಾಡುತ್ತಿರುವ ಬಡ ಸಾಗುವಳಿದಾರರಿಗೆ ಸಾಗುವಳಿ ಪತ್ರ ನೀಡಬೇಕು. ತಾಲೂಕಿನ ಎಲ್ಲಾ ಗ್ರಾಮಗಳಲ್ಲಿರುವ ಗೋವುಗಳ ಸಮೀಕ್ಷೆ ಮಾಡಿ ಉಳಿದ ಭೂಮಿಯನ್ನು ಸಾಗುವಳಿ ಮಾಡುತ್ತಿರುವ ರೈತರಿಗೆ ಹಂಚಲು ಕ್ರಮ ವಹಿಸಬೇಕು. ಆದಿವಾಸಿಯೇತರ ಅರಣ್ಯ ಭೂಮಿ ಬಡ ಸಾಗುವಳಿದಾರರಿಗೆ ಹಕ್ಕು ಪತ್ರ ದೊರೆಯುವಂತೆ ಅರಣ್ಯ ಹಕ್ಕು ಮಾನ್ಯತಾ ಕಾಯ್ದೆಗೆ ತಿದ್ದುಪಡಿ ಮಾಡಬೇಕು. ನಗರ ಮಿತಿಯನ್ನು 10 ಕಿ.ಮಿಗಿಂತಲೂ ಕಡಿಮೆ ಮಾಡಬೇಕು. ಬಡ ರೈತರಿಗೆ ಸಾಗುವಳಿ ನೀಡಲು ಅಡ್ಡಿ ಇರುವ ಕಾನೂನಿಗೆ ತಿದ್ದಪಡಿ ಮಾಡಿ ಸಾಗುವಳಿ ಪತ್ರ ನೀಡಬೇಕು. ಕೂಡಲೇ ಅಕ್ರಮ–ಸಕ್ರಮ ಸಮಿತಿ ರಚಿಸಿ ಸಾಗುವಳಿ ಅರ್ಜಿಗಳನ್ನು ವಿಲೇವಾರಿ ಮಾಡಬೇಕು. ತಾಲೂಕಿನ ಎಲ್ಲಾ ಜಮೀನುಗಳನ್ನು ಹದ್ದಬಸ್ತು ಮಾಡಿಸಿ, ಪಕ್ಕಾಪೋಡು ಮಾಡಿ ರೈತರಿಗೆ ಅನುಕೂಲ ಮಾಡಿಕೊಡಬೇಕು.

ಪ್ರತಿಭಟನೆಯಲ್ಲಿ ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ಜಗದೀಶ್ ಸೂರ್ಯ, ತಾಲೂಕು ಅಧ್ಯಕ್ಷ ದೂರ ಲೋಕೇಶ್, ಕಾರ್ಯದರ್ಶಿ ಮಹೇಶ್ ಜಯಪುರ, ಕೆಂಪಯ್ಯ, ಚೌಡಮ್ಮ, ಕೆಂಪಮ್ಮ, ಶಿವಪ್ಪ ಆಯರಳ್ಳಿ ಸಣ್ಣನಾಯ್ಕ, ಪುಟ್ಟರಾಜ, ನಾರಾಯಣ, ಸತೀಶ್, ತೋಟಪ್ಪ, ನಿಂಗಮ್ಮ, ರೇಖ, ಸಾಮಿತ್ರಮ್ಮ, ರಂಗಸ್ವಾಮಿ ಇನ್ನಿತರರು ಪಾಲ್ಗೊಂಡಿದರು.

ಮೇಘಾಲಯ ರಾಜ್ಯಪಾಲರ ವಿಶೇಷ ಕರ್ತವ್ಯಾಧಿಕಾರಿಯಾಗಿ ಡಾ. ಬಿ.ಎಸ್.ಕೃಷ್ಣಪ್ರಸಾದ್ ನೇಮಕ

ಮೈಸೂರು, ಮಾ.27– ಕರ್ನಾಟಕ ಮೂಲದ ಮೇಘಾಲಯದ ರಾಜ್ಯಪಾಲ ಸಿ.ಹೆಚ್. ವಿಜಯಶಂಕರ್ ಅವರ ವಿಶೇಷ ಕರ್ತವ್ಯಾಧಿಕಾರಿ ಮತ್ತು ವಿಶೇಷ ಸಲಹೆಗಾರರಾಗಿ ಡಾ.ಬಿ.ಎಸ್.ಕೃಷ್ಣ ಪ್ರಸಾದ್ ನೇಮಕಗೊಂಡಿದ್ದಾರೆ. ಡಾ.ಬಿ.ಎಸ್.ಕೃಷ್ಣ ಪ್ರಸಾದ್, ಕೆಪಿಎಸ್‌ಸಿ ಸದಸ್ಯರಾಗಿ ಅನೇಕ ಸುಧಾರಣೆಗಳನ್ನು ತರುವಲ್ಲಿ ಯಶಸ್ವಿಯಾಗಿದ್ದು, ಈ ಹಿಂದೆ ಕೆಎಎಸ್ ಅಧಿಕಾರಿಯಾಗಿ ಸೃಜನಾತ್ಮಕ ಆಡಳಿತದ ಮೂಲಕ ಪ್ರಖ್ಯಾತಿ ಗಳಿಸಿದ್ದರು.



ಮಹಿಳಾ ಸಬಲೀಕರಣ ಯೋಜನೆ ಮನಸ್ವಿನಿ ಯೋಜನೆಯ ರೂವಾರಿಯೂ ಆದ ಇವರು ತಹಶೀಲ್ದಾರರಾಗಿ ಸೇವೆ ಸಲ್ಲಿಸುವಾಗ ತಾಂಬೂಲ ತಹಶೀಲ್ದಾರ್ ಎಂದೇ ಜನಪ್ರಿಯರಾಗಿದ್ದವರು. ಅವರ ಪ್ರಾಮಾಣಿಕ ವಿನೂತನ ಆಡಳಿತ ವೈಖರಿಯನ್ನು ಗುರುತಿಸಿ ಕರ್ನಾಟಕ ಸರ್ಕಾರ ಅವರಿಗೆ ಅಸಾಧಾರಣ ನಾಗರಿಕ ಸೇವಾ ಪ್ರಶಸ್ತಿಯನ್ನು 2005 ರಲ್ಲಿ ನೀಡಿ ಗೌರವಿಸಿದೆ. ದೆಹಲಿಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ ಕರ್ನಾಟಕ ರಾಜ್ಯ ಸರ್ಕಾರದ ಯೋಜನೆಗಳ ಸಮನ್ವಯ ಕಾರ್ಯವನ್ನು ಸಮರ್ಥವಾಗಿ ನಿರ್ವಹಿಸಿ ಅಧಿಕಾರ ವರ್ಗದಿಂದ ಮೆಚ್ಚುಗೆ ಪಡೆದವರಾಗಿದ್ದಾರೆ.

ಗಾಂಜಾ ಸೇವನೆ ; ವ್ಯಕ್ತಿ ಹಿಡಿದು ಪೊಲೀಸರಿಗೆ ಒಪ್ಪಿಸಿದ ಸಾರ್ವಜನಿಕರು

ಮೈಸೂರು, ಮಾ.27(ಎಸ್‌ಬಿಡಿ)– ಗಾಂಜಾ ಸೇವನೆ ಮಾಡುತ್ತಿದ್ದ ವ್ಯಕ್ತಿಯನ್ನು ಸಾರ್ವಜನಿಕರೇ ಹಿಡಿದು ಪೊಲೀಸರಿಗೆ ಒಪ್ಪಿಸಿದ ಘಟನೆ ಮೈಸೂರಿನ ಗಂಗೋತ್ರಿ ಲೇಔಟ್‌ನಲ್ಲಿ ಬುಧವಾರ ನಡೆದಿದೆ. ರ್‍ಯಾಪಿಡೋ ರೈಡರ್ ಆಗಿರುವ ಕೆ.ಆರ್.ಮೊಹಲ್ಲಾ ನಿವಾಸಿ ಇಮ್ರಾನ್ ಬೇಗ್(33)ನನ್ನು ಪೊಲೀಸರು ವಶಕ್ಕೆ ಪಡೆದು, ಆತನಿಂದ ಸುಮಾರು 200 ಗ್ರಾಂ ಗಾಂಜಾ ಹಾಗೂ ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದಾರೆ.

ಈತ ಬುಧವಾರ ಬೆಳಗ್ಗೆ ಖಾಲಿ ಜಾಗದಲ್ಲಿ ಗಾಂಜಾ ಸೇವನೆಗೆ ತಯಾರಿ ಮಾಡಿಕೊಳ್ಳುತ್ತಿದ್ದ. ಇದನ್ನು ಗಮನಿಸಿದ ಸಾರ್ವಜನಿಕರು ಇಮ್ರಾನ್‌ನನ್ನು ಹಿಡಿದು, ಪೊಲೀಸರಿಗೆ ಮಾಹಿತಿ ನೀಡಿದರು. ಕೂಡಲೇ ಸರಸ್ವತಿಪುರಂ ಠಾಣೆ ಪೊಲೀಸರು ಸ್ಥಳಕ್ಕೆ ಧಾವಿಸಿ, ಆತನನ್ನು ವಶಕ್ಕೆ ಪಡೆದರು. ಆ ವೇಳೆ ಆತನ ಬ್ಯಾಗ್‌ನಲ್ಲಿ ಗಾಂಜಾ ಪತ್ತೆಯಾಗಿದೆ.

ತನ್ನ ದ್ವಿಚಕ್ರ ವಾಹನದಲ್ಲಿ ರ್‍ಯಾಪಿಡೋ ಡ್ರಾಪ್ ಮಾಡಿದ ನಂತರ ಗಾಂಜಾ ಸೇವನೆಗೆ ಮುಂದಾದಾಗ ಜನ ನನ್ನನ್ನು ಹಿಡಿದುಕೊಂಡರು. ಮಂಡಿ ಮೊಹಲ್ಲಾದ ವ್ಯಕ್ತಿಯೊಬ್ಬನಿಂದ ಗಾಂಜಾ ಖರೀದಿಸಿದ್ದು, ಸಮಯ ಸಿಕ್ಕಾಗ ಸೇವಿಸುತ್ತೇನೆ. ರ್‍ಯಾಪಿಡೋ ರೈಡ್ ವೇಳೆ ಯಾರಾದರೂ ಕೇಳಿದರೆ ಮಾರಾಟ ಮಾಡುತ್ತೇನೆ ಎಂದು ವಿಚಾರಣೆ ವೇಳೆ ಹೇಳಿದ್ದಾಗಿ ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ಸರಸ್ವತಿಪುರಂ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಇಂದು 'ಅನಂತಗಾನ, ಅಶ್ವತ್ಥಯಾನ' ಕಾರ್ಯಕ್ರಮ


ಮೈಸೂರು, ಮಾ.27 (ಜಿಎ)–ಕರ್ನಾಟಕ ಸುಗಮ ಸಂಗೀತ ಪರಿಷತ್ ಮೈಸೂರು ಘಟಕ ಹಾಗೂ ವಿವಿ ಕ್ರಿಯೇಷನ್ಸ್‌ನ ಸಂಯುಕ್ತಾಶ್ರಯದಲ್ಲಿ ಮಾರ್ಚ್ 28ರಂದು ಸಂಜೆ 5 ಗಂಟೆಗೆ ನಾದಬ್ರಹ್ಮ ಸಂಗೀತ ಸಭಾದಲ್ಲಿ 'ಅನಂತ ಗಾನ, ಅಶ್ವತ್ಥಯಾನ' ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಪರಿಷತ್ ಅಧ್ಯಕ್ಷ ನಾಗರಾಜು ವಿ.ಭೈರಿ ಈ ವಿಷಯ ತಿಳಿಸಿ, ಮರೆಯಲಾಗದ ಮಹನೀಯರು ಮಾಲಿಕೆ ಅಡಿಯಲ್ಲಿ ಇವರ ಹಾಡುಗಳ ಗಾಯನ ನೈಜ ಸಂಗೀತದೊಂದಿಗೆ ಮೂಡಿ ಬರಲಿದೆ. ಎಲ್ಲರಿಗೂ ಉಚಿತ ಪ್ರವೇಶವಿದ್ದು, ವಿಮಲಾ ವೀರೇಶ್, ಡಾ.ವೈ.ಡಿ.ರಾಜಣ್ಣ, ಎಂ.ಡಿ.ಸುದರ್ಶನ್, ಅಂಶಿ ಪ್ರಸನ್ನಕುಮಾರ್, ಜಯಪ್ಪ ಹೊನ್ನಾಳಿ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ನಿತಿನ್ ರಾಜಾರಾಂ ಶಾಸ್ತ್ರಿ, ಎ.ಡಿ.ಶ್ರೀನಿವಾಸ್, ಇಂದ್ರಾಣಿ ಅನಂತರಾಮ್, ಹಂಸಿನಿ ಮೊದಲಾದವರು ಹಾಡಲಿದ್ದಾರೆ ಎಂದು ಮಾಹಿತಿ ನೀಡಿದರು. ಸುದ್ದಿಗೋಷ್ಠಿಯಲ್ಲಿ ವಿಮಲಾ ವೀರೇಶ್, ಎನ್.ಬೆಟ್ಟೇಗೌಡ, ಪ್ರೊ.ಎ.ಡಿ.ಶ್ರೀನಿವಾಸ್ ಉಪಸ್ಥಿತರಿದ್ದರು.

ನಾಳೆ ಶನಿ ಮಹಾ ಶಾಂತಿ

ಮೈಸೂರು,ಮಾ.27–ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಮಾ.29ರ ಶನಿವಾರ ಶನಿದೇವ ಕುಂಭರಾಶಿಯಿಂದ ಮೀನ ರಾಶಿಗೆ ಪ್ರವೇಶ ಮಾಡುತ್ತಿರುವುದರಿಂದ ಮೇಷ, ಕರ್ಕಾಟಕ, ಸಿಂಹ, ತುಲಾ, ವೃಶ್ಚಿಕ, ಮಕರ ರಾಶಿಯವರಿಗೆ ಶನಿಮಹಾಶಾಂತಿ ಏರ್ಪಡಿಸಲಾಗಿದೆ ಸಂಕಲ್ಪ ಬೆಳಗ್ಗೆ 7.30ಕ್ಕೆ, ಹೋಮ 10ಕ್ಕೆ ಪ್ರಾರಂಭವಾಗಿ 12.30ಕ್ಕೆ ಪೂರ್ಣಾಹುತಿ. ವಿವರಗಳಿಗೆ ಜಾತಕ ವಿಮರ್ಶಕರಾದ ಮೈ ಕುಮಾರ್ ಅವರ ಮೊ. 9845183392, 9845183399 ಸಂಪರ್ಕಿಸಬಹುದು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

28.03.2025 ಶುಕ್ರವಾರ, ಮಳೆ ನಕ್ಷತ್ರ: ಉತ್ತರಭಾದ್ರಾ 17.03.2025 ರಿಂದ 30.03.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಫಾಲ್ಗುಣ ಮಾಸ, ಕೃಷ್ಣ ಪಕ್ಷ,
ತಿಥಿ: ಚತುರ್ದಶಿ ನಕ್ಷತ್ರ: ಪೂಭಾ, ರಾಹುಕಾಲ: ಬೆಳಗ್ಗೆ 10.30 ರಿಂದ 12 ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 9 ರಿಂದ ಮೂಲವ್ಯಾಧಿ/ಪೈಲ್ಸ್ ರೋಗ ಚಿಕಿತ್ಸಾ ಶಿಬಿರ, ವಸಂತ ವೇಮನ ದೇಹ ಶುದ್ಧಿ ಚಿಕಿತ್ಸಾ ಶಿಬಿರ, ಇಸುಬು ತಪಾಸಣಾ ಶಿಬಿರ, ಒಟೋಮೈಕೋಸಿಸ್ –ಕಿವಿಯ ಫಂಗಲ್ ಸೋಂಕಿಗೆ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ಒಬೆಸಿಟಿ (ತೂಕ ಇಳಿಸುವಿಕೆ) ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ದೇವೇಗೌಡ ಸರ್ಕಲ್, ಕೆಬಿಎಲ್ ಲೇಔಟ್, ಬೆಳಗ್ಗೆ 10 ಗಂಟೆಗೆ.

■ **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.

■ **ಮೈಸೂರು ವಿವಿ, ಮಹಿಳಾ ಅಧ್ಯಯನ ಕೇಂದ್ರ, ಮೈಸೂರು ವಿವಿ ಅಧ್ಯಾಪಕರ ಸಂಘ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಉದ್ಘಾಟನೆ : ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಶ್ರೀಮತಿ ಶಿಲ್ಪಿ ಅಗರವಾಲ್, ಅಧ್ಯಕ್ಷತೆ : ಮೈಸೂರು ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಉಪಸ್ಥಿತರು : ಮೈಸೂರು ವಿವಿ ಕುಲಸಚಿವರಾದ ಶ್ರೀಮತಿ ಎಂ.ಕೆ. ಸವಿತಾ, ಪ್ರೊ. ಎನ್. ನಾಗರಾಜ, ಹಣಕಾಸು ಅಧಿಕಾರಿ ಶ್ರೀಮತಿ ಕೆ.ಎಸ್. ರೇಖಾ, ಮೈಸೂರು ವಿವಿ ಸ್ಪರ್ಶ ಸಮಿತಿ ಅಧ್ಯಕ್ಷ ಪ್ರೊ. ಸುತ್ತೂರು ಎಸ್. ಮಾಲಿನಿ, ಮಹಿಳಾ ಅಧ್ಯಯನ ಕೇಂದ್ರದ ಅಧ್ಯಕ್ಷೆ ಪ್ರೊ. ಎಂ. ಪುಷ್ಪ, ಸ್ಥಳ: ವಿಜ್ಞಾನ ಭವನ, ಮೈಸೂರು ವಿವಿ, ಮಾನಸಗಂಗೋತ್ರಿ, ಬೆಳಗ್ಗೆ 10.30ಕ್ಕೆ.

■ **ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್, ಹಿರಿಯ ನಾಗರಿಕರ ಹಗಲು ಯೋಗ ಕ್ಷೇಮ ಕೇಂದ್ರ :** ದತ್ತಿ ಉಪನ್ಯಾಸ ಕಾರ್ಯಕ್ರಮ, ಉದ್ಘಾಟನೆ : ಯೋಗ ಕ್ಷೇಮ ಕೇಂದ್ರದ ಅಧ್ಯಕ್ಷ ಮಲೆಯೂರು ಪ್ರಭುಸ್ವಾಮಿ, ಅಧ್ಯಕ್ಷತೆ : ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಸಂಯೋಜನಾಧಿಕಾರಿ ಡಾ. ಅವರೆಕಾಡು ವಿಜಯಕುಮಾರ್ ಅವರಿಂದ ಡಾ. ಎಚ್.ಕೆ. ಲಕ್ಕಪ್ಪಗೌಡ ಬದುಕು ಮತ್ತು ಸಾಹಿತ್ಯ ದತ್ತಿ ಹಾಗೂ ಅಡಗೂರು ಹುಚ್ಚೇಗೌಡ ರಾಮಮ್ಮ ದತ್ತಿ ಉಪನ್ಯಾಸ, ಉಪಸ್ಥಿತರು : ಸಾಹಿತಿ ಶ್ರೀಮತಿ ಎಸ್. ಲಲಿತಾ, ಸ್ಥಳ: ಹಿರಿಯ ನಾಗರೀಕರ ಹಗಲು ಯೋಗ ಕ್ಷೇಮ ಕೇಂದ್ರ, ರಾಮಕೃಷ್ಣನಗರ, ಬೆಳಗ್ಗೆ 11.30ಕ್ಕೆ.

■ **ಜೆಎಸ್‌ಎಸ್ ಪಾಲಿಟೆಕ್ನಿಕ್ :** ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ, ಮುಖ್ಯ ಅತಿಥಿಗಳು: ಡಿಸಿಪಿ ಜಾಹ್ನವಿ, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ ಉಪನಿರ್ದೇಶಕಿ ಮೇಘಲಾ, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಸಹಾಯಕ ನಿರ್ದೇಶಕಿ ಎಚ್.ಕೆ. ರೇಣುಕಾ, ಹಾಸ್ಯ ಕಲಾವಿದ ಮೈಸೂರು ಆನಂದ್, ಅಧ್ಯಕ್ಷತೆ : ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ಉಪಸ್ಥಿತರು : ಪ್ರಿನ್ಸಿಪಾಲ್ ಭಕ್ತವತ್ಸಲ, ಸ್ಥಳ: ಜೆಎಸ್‌ಎಸ್ ಪಾಲಿಟೆಕ್ನಿಕ್ ಆವರಣ, ಸಂಜೆ 4ಕ್ಕೆ.

■ **ಜೆಎಸ್‌ಎಸ್ ವೈದ್ಯಕೀಯ ಕಾಲೇಜು :** ಪದವೀಧರರ ದಿನಾಚರಣೆ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಧ್ಯಕ್ಷತೆ : ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ. ಸಿ.ಜಿ. ಬೆಟಸೂರ ಮಠ, ಗೌರವ ಅತಿಥಿಗಳು : ಸಮ ಕುಲಾಧಿಪತಿ ಡಾ.ಬಿ. ಸುರೇಶ್, ಕುಲಪತಿ ಡಾ.ಎಚ್. ಬಸವನಗೌಡಪ್ಪ, ಮುಖ್ಯ ಅತಿಥಿಗಳು : ಜೈಪುರದ ಮಹಾತ್ಮ ಗಾಂಧಿ ವೈದ್ಯಕೀಯ ವಿಜ್ಞಾನ ಮತ್ತು ತಂತ್ರಜ್ಞಾನ ವಿಶ್ವವಿದ್ಯಾನಿಲಯದ ಕುಲಪತಿ ಡಾ. ಅಚಲ್ ಗುಲಾಟಿ, ಸ್ಥಳ: ಜೆಎಸ್‌ಎಸ್ ವೈದ್ಯಕೀಯ ಸಂಸ್ಥೆ ಆವರಣ, ಸಂಜೆ 4ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಡಾ. ಬಿ.ಆರ್. ಅಂಬೇಡ್ಕರ್ ಸಂಶೋಧನಾ ಹಾಗೂ ವಿಸ್ತರಣಾ ಕೇಂದ್ರ, ವಿವಿ ಸಂಜೆ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ :** ಪ್ರೊ. ರಹಮತ್ ತರೀಕೆರೆ ಅವರಿಂದ ಡಾ. ಅಂಬೇಡ್ಕರ್ ಬರಹಗಳು : ಸಾಂಸ್ಕೃತಿಕ ವಿಶ್ಲೇಷಣೆ ಕುರಿತು ವಿಶೇಷ ಉಪನ್ಯಾಸ, ಅಧ್ಯಕ್ಷತೆ : ಪ್ರಿನ್ಸಿಪಾಲ್ ಪ್ರೊ. ವಿ. ಷಣ್ಮುಗಂ, ಉಪಸ್ಥಿತರು : ಹಿರಿಯ ಪ್ರಾಧ್ಯಾಪಕ ಡಾ. ಜೆ. ಸೋಮಶೇಖರ್, ಸ್ಥಳ: ವಿ.ವಿ. ಸಂಜೆ ಕಾಲೇಜು ಆವರಣ, ಸಂಜೆ 6ಕ್ಕೆ.

■ **ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಮೈಸೂರು ನಗರ ಘಟಕ, ಚಂಪಕ ರಾಷ್ಟ್ರೀಯ ಕಲಾ ಉತ್ಸವ–ಫಾಲ್ಗುಣ ಅಂಕ :** ದತ್ತಿ ಉಪನ್ಯಾಸ ಕಾರ್ಯಕ್ರಮ, ಉದ್ಘಾಟನೆ : ಸಮಾಜ ಸೇವಕ ಡಾ. ಕೆ. ರಘುರಾಮ್ ವಾಜಪೇಯಿ, ಡಾ. ನಾಗಲಕ್ಷ್ಮಿ ನಾಗರಾಜನ್ ಮತ್ತು ಶಿಷ್ಯ ವೃಂದದವರಿಂದ ವಚನ ನೃತ್ಯ ಸೌರಭ, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್, ಮೈಸೂರು ನಗರ ಘಟಕ ಅಧ್ಯಕ್ಷ ಮ.ಗು. ಸದಾನಂದಯ್ಯ, ಸ್ಥಳ: ಚಂಪಕ ಅಕಾಡೆಮಿ ಸಭಾಂಗಣ, ರಾಮಕೃಷ್ಣನಗರ, ಸಂಜೆ 6.30ಕ್ಕೆ

ಬನ್ನೂರಿನಲ್ಲಿಂದು, ತಿ. ನರಸೀಪುರ ತಾ.

■ **ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು, ಚಕೋರ ಸಾಹಿತ್ಯ ವಿಚಾರ ವೇದಿಕೆ, ಮೈಸೂರು :** ವಿಶೇಷ ಉಪನ್ಯಾಸ ಕಾರ್ಯಕ್ರಮ, ಅಧ್ಯಕ್ಷತೆ : ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಪ್ರಿನ್ಸಿಪಾಲ್ ಪ್ರೊ. ಹೆಚ್. ಸೀಗನಾಯಕ, ಪ್ರೊ. ಎಂ. ನಂಜುಂಡಯ್ಯ ಅವರಿಂದ ಮಧ್ಯಕಾಲೀನ ಕನ್ನಡ ಸಾಹಿತ್ಯ ಮತ್ತು ವೈಚಾರಿಕತೆ ಕುರಿತು ವಿಶೇಷ ಉಪನ್ಯಾಸ, ಮುಖ್ಯ ಅತಿಥಿಗಳು : ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಸಂಚಾಲಕ ಪ್ರೊ. ಎಸ್.ಚಂದ್ರಕಿರಣ್ ಕುಳವಾಡಿ, ಉಪಸ್ಥಿತರು : ಡಾ. ಎಂ. ಮುನಿಕೆಂಪೇಗೌಡ, ಡಾ. ಎನ್. ಯೋಗೇಶ್, ಶಭಾನ, ಸ್ಥಳ: ಬನ್ನೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣ, ಬೆಳಗ್ಗೆ 11ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಬಣ್ಣದ ಬಾನಾಡಿಗಳು–ಬಾನುಲಿ ಸರಣಿ, ರಚನೆ : ಡಾ. ಕಲೀಂವುಲ್ಲ, ಪ್ರಸ್ತುತಿ : ಜಿ. ಶಾಂತಕುಮಾರ್, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ದೀಪಿಕಾ ಪಾಂಡುರಂಗಿ, ಎನ್. ಹೇಮಾ, ವ್ಯಾಖ್ಯಾನ–ಮೊರಬದ ಮಲ್ಲಿಕಾರ್ಜುನ, 6.50 ರೈತರಿಗೆ ಸಲಹೆ, 7.15 KABHI-ಕರ್ನಾಟಕ–ಮೆದುಳು ಆರೋಗ್ಯ ಕುರಿತ ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ನಿಮ್ಹಾನ್ಸ್ ಸಂಸ್ಥೆ, ಬೆಂಗಳೂರು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ–ವಿಶ್ವ ಕ್ಷಯರೋಗ ದಿನಾಚರಣೆಯ ಸಂದರ್ಭದಲ್ಲಿ ಕ್ಷಯಮುಕ್ತ ಭಾರತ ಅಭಿಯಾನ 100 ದಿನಗಳ ಜಾಗೃತಿ ಆಂದೋಲನ ಕುರಿತು ಡಾ. ಮಲ್ಲಿಕಾ. ಬಿ ಅವರೊಂದಿಗೆ ಮಾತುಕತೆ ಮತ್ತು ಕ್ಷಯಮುಕ್ತ ಭಾರತ ಕ್ಷಯಮುಕ್ತ ಕರ್ನಾಟಕ ಕುರಿತು ಡಾ. ಜಯಂತ್. ಎಂ.ಎಸ್ ಹಾಗೂ ಡಾ. ಸಿ. ಪ್ರಶಾಂತ್ ಅವರೊಂದಿಗೆ ಮಾತುಕತೆ ಇವರೊಂದಿಗೆ ಭಾಗವಹಿಸುತ್ತಾರೆ–ಬೇದ್ರೆ ಮಂಜುನಾಥ್, 9.30 ಗಾಂಧಿ ಸ್ಮೃತಿ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಸಂಗೀತ ಸಂಭ್ರಮ ನಾದಲಯ ಸಂಗಮ, ಪ್ರಸ್ತುತಿ : ಹೆಚ್. ಎಲ್. ಶಿವಶಂಕರಸ್ವಾಮಿ **ಮಧ್ಯಾಹ್ನ:** 12.35 ದೇವರನಾಮ, 12.45 ಕಾದಂಬರಿ ವಿಹಾರ – ಎಂ. ಆರ್. ಶ್ರೀನಿವಾಸಮೂರ್ತಿ ಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್. ಎಸ್., 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ ಪ್ರಧಾನಮಂತ್ರಿ ಸೇತು ಭಾರತಂ ಯೋಜನೆ ಕುರಿತು ಎನ್. ವಿ. ಫಣೀಶ್ ಅವರಿಂದ ಭಾಷಣ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, 4.00 ಮಹಿಳಾರಂಗ–ಸಖೀ ಸಂವಾದ, ವಿಷಯ–ಟ್ರಾವೆಲಿಂಗ್ ಎಷ್ಟು ಮುಖ್ಯ, ಪ್ರಸ್ತುತಿ: ಕೀರ್ತನಾ ಮತ್ತು ಸಹನಾ, 4.30 ವೃತ್ತಿ ಮಾರ್ಗದರ್ಶನ– ಇಂಜಿನಿಯರಿಂಗ್ ಗಣಿತಶಾಸ್ತ್ರ ಅಂದರೆ ಇಂಜಿನಿಯ ರಿಂಗ್ ಮ್ಯಾಥಮೆಟಿಕ್ಸ್ ವಿಷಯದಲ್ಲಿ ಇರುವ ಅಧ್ಯಯನ ಹಾಗೂ ವೃತ್ತಿಪರ ಅವಕಾಶಗಳು ಕುರಿತು ರೇವಾ ವಿಶ್ವವಿದ್ಯಾಲಯದ ಗಣಿತ ವಿಭಾಗದ ಸಹಪ್ರಾಧ್ಯಾಪಕರಾದ ಡಾ. ಗಾಯತ್ರಿ. ಕೆ ಅವರೊಂದಿಗೆ ಮಾತುಕತೆ, ಇವರೊಂದಿಗೆ ಭಾಗವಹಿಸುತ್ತಾರೆ –ಬೇದ್ರೆ ಮಂಜುನಾಥ್, 6.50 ಕೃಷಿರಂಗ–ಸೀಬೆ ಬೆಳೆ ಉತ್ಪಾದನಾ ತಾಂತ್ರಿಕತೆಗಳು ಈ ಕುರಿತು ಸಂವಾದ. ಭಾಗವಹಿಸುತ್ತಾರೆ–ಮೈಸೂರು ತಾಲೂಕು ಎಲಚನಹಳ್ಳಿಯ ತೋಟಗಾರಿಕಾ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ. ಜಿ.ಕೆ. ರಾಮೇಗೌಡ ಮತ್ತು ಡಾ. ಹೆಚ್. ಆರ್. ಮನುಕುಮಾರ್, ಪ್ರಸ್ತುತಿ: ಎನ್. ಕೇಶವಮೂರ್ತಿ, 7.45 ಯಾರೂ ಕಾಣದ ಪ್ರವಾಸಿ ತಾಣ, 8.00 ಸಂಸತ್ ಸಮೀಕ್ಷಾ, 8.15 ಸಂಧ್ಯಾ ರಾಗ–ಹಿರಿಯ ಚುಕ್ಕಿ ಚಿತ್ರ ಕಲಾವಿದರಾದ ಮೋಹನ್ ವೆರ್ಣೇಕರ್ ಅವರೊಂದಿಗೆ ಸಂದರ್ಶನ. ಸಂದರ್ಶಕರು : ಜಿ. ಶಾಂತಕುಮಾರ್, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, 10.00 ಸಂಸತ್ತಿನ ಪ್ರಶ್ನೋತ್ತರ ಕಲಾಪಗಳ ಧ್ವನಿಮುದ್ರಣದ ಪ್ರಸಾರ

ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ


ಮಾರ್ಚ್ 28 ಶುಕ್ರವಾರ 2025

ಸಂಪುಟ: 45 | ಸಂಚಿಕೆ: 338 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಯುಗಾದಿ ಸಂಭ್ರಮದಲ್ಲಿರುವ ರಾಜ್ಯದ ಜನತೆಗೆ


ಹಾಲು ಬಿಸಿ; ವಿದ್ಯುತ್ ಶಾಕ್

• ಲೀಟರ್ ಹಾಲಿಗೆ 4 ರೂ. ಹೆಚ್ಚಳ • ಯೂನಿಟ್ ವಿದ್ಯುತ್ 36 ಪೈಸೆ ಏರಿಕೆ • ಏ.1ರಿಂದ ಪರಿಷ್ಕೃತ ದರ ಜಾರಿಗೆ



ಹಾಲಿನ ಪರಿಷ್ಕೃತ ದರ

ಹಾಲು	ಹಳೇ ದರ	ಹೊಸ ದರ
ನೀಲಿ ಪ್ಯಾಕೆಟ್	44 ರೂ.	48 ರೂ.
ನೀಲಿ ಪ್ಯಾಕೆಟ್ (ಟೋನ್ಡ್ ಹಾಲು)	45 ರೂ.	49 ರೂ.
ಆರೆಂಜ್ ಪ್ಯಾಕೆಟ್ ಹಾಲು	48 ರೂ.	52 ರೂ
ಆರೆಂಜ್ ಸ್ಪೆಷಲ್ ಹಾಲು	50 ರೂ.	54 ರೂ.
ಶುಭಂ ಹಾಲು	50 ರೂ.	54 ರೂ.
ಸಮೃದ್ಧಿ ಹಾಲು	53 ರೂ.	57 ರೂ.
ಶುಭಂ (ಟೋನ್ಡ್ ಹಾಲು)	51 ರೂ.	55 ರೂ
ಸಂತೃಪ್ತಿ ಹಾಲು	57 ರೂ.	61 ರೂ.
ಶುಭಂ ಗೋಲ್ಡ್ ಹಾಲು	51 ರೂ.	55 ರೂ.
ಶುಭಂ ಡಬಲ್ ಟೋನ್ಡ್ ಹಾಲು	43 ರೂ.	47 ರೂ.
ಮೊಸರು	50 ರೂ.	54 ರೂ.



ಬೆಂಗಳೂರು, ಮಾ.27– ಬಸ್, ಮೆಟ್ರೋ ಪ್ರಯಾಣ ದರ ಏರಿಕೆ ಬೆನ್ನಲ್ಲೇ ನಂದಿನಿ ಹಾಲು ಮತ್ತು ವಿದ್ಯುತ್ ದರ ಹೆಚ್ಚಳ ಮಾಡುವ ಮೂಲಕ ಯುಗಾದಿ ಸಂಭ್ರಮದಲ್ಲಿದ್ದ ರಾಜ್ಯದ ಜನತೆಗೆ ಸರ್ಕಾರ ಬಿಗ್ ಶಾಕ್ ನೀಡಿದೆ.

ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನ ಮಾಡಲಾಗಿದೆ. ಹಾಲಿನ ದರ ಲೀಟರ್‌ಗೆ 4 ರೂ. ಹೆಚ್ಚಳ ಮಾಡಿದರೆ, ವಿದ್ಯುತ್ ಯೂನಿಟ್‌ಗೆ 36 ಪೈಸೆ ಹೆಚ್ಚಿಸಲಾಗಿದೆ. ಏಪ್ರಿಲ್ 1ರಿಂದ ರಾಜ್ಯಾದ್ಯಂತ ಹಾಲು ಮತ್ತು ಪರಿಷ್ಕೃತ ವಿದ್ಯುತ್ ದರ ಜಾರಿಗೆ ಬರುತ್ತಿದೆ.

ಸಚಿವ ಸಂಪುಟ ಸಭೆಯಲ್ಲಿ ಪಶು ಸಂಗೋಪನಾ ಸಚಿವರು, ಹಾಲಿನ ದರವನ್ನು ಐದು ರೂಪಾಯಿ ಏರಿಕೆ ಮಾಡಬೇಕು ಎಂಬ ಬೇಡಿಕೆ ಇಟ್ಟಿದ್ದರು. ಹಾಲು ಒಕ್ಕೂಟಗಳು ಕೂಡ ಇದೇ ಬೇಡಿಕೆಯನ್ನು ಇಟ್ಟಿದ್ದವು. ಈ ನಿಟ್ಟಿನಲ್ಲಿ ಸಂಪುಟ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಯಿತು. ಸಭೆಯಲ್ಲಿ ಐದು ರೂಪಾಯಿ ಏರಿಕೆ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಒಪ್ಪಿಗೆ ನೀಡಲಿಲ್ಲ. ಬದಲಾಗಿ 4 ರೂ. ಏರಿಕೆ ಮಾಡಲು ಸಂಪುಟ ಒಪ್ಪಿಗೆ ನೀಡಿದೆ.

ಹಾಲಿನ ದರದ ಜೊತೆಗೆ ರಾಜ್ಯ ಸರ್ಕಾರ ಕರೆಂಟ್ ಶಾಕ್ ನೀಡಿದೆ. ಪ್ರತಿ ಯೂನಿಟ್‌ಗೆ 36 ಪೈಸೆ ಹೆಚ್ಚಳ ಮಾಡಿ ಕೆಇಆರ್‌ಸಿ ಆದೇಶ ನೀಡಿದೆ.

ವಿದ್ಯುತ್ ದರ ಹೆಚ್ಚಳದಿಂದ 3 ವರ್ಷದಲ್ಲಿ 8,519 ಕೋಟಿ ವಸೂಲಿ ಮಾಡಲು ಕೆಇಆರ್‌ಸಿ ನಿರ್ಧರಿಸಿದೆ. 2025–26 ರಲ್ಲಿ 36 ಪೈಸೆ ಹೆಚ್ಚಳ ಮಾಡಲಾಗುತ್ತಿದೆ. 2026–27ರಲ್ಲಿ ಪ್ರತಿ ಯೂನಿಟ್‌ಗೆ 35 ಪೈಸೆ, 2027–28 ರಲ್ಲಿ ಪ್ರತಿ ಯೂನಿಟ್‌ಗೆ 34 ಪೈಸೆ ಹೆಚ್ಚುವರಿಯಾಗಿ ವಿಧಿಸಲು ಆದೇಶ ನೀಡಲಾಗಿದೆ. ಒಟ್ಟಾರೆ ಗ್ರಾಹಕರಿಂದ ಮೂರು ವರ್ಷದಲ್ಲಿ 8,519 ಕೋಟಿ ರೂಪಾಯಿ ಹಣ ವಸೂಲಿ ಮಾಡಲು ಕೆಇಆರ್‌ಸಿ ಈ ದರ ಏರಿಕೆಗೆ ನಿರ್ಧಾರ ಮಾಡಿದೆ. ಕೆಲ ದಿನದ ಹಿಂದೆ ವಿದ್ಯುತ್ ನಿರ್ವಹಣಾ ವೆಚ್ಚಕ್ಕಾಗಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ದರ ಏರಿಕೆ ಮಾಡಿತ್ತು. ಇದೀಗ ವಿದ್ಯುತ್ ಪ್ರಸರಣ ಮತ್ತು ಸರಬರಾಜು ಸಂಸ್ಥೆಗಳ ಸಿಬ್ಬಂದಿ ಪಿಂಚಣಿ, ಗ್ರಾಚ್ಯುಟಿ ಹಣವನ್ನು ಗ್ರಾಹಕರಿಂದ ವಸೂಲಿ ಮಾಡಲಾಗುತ್ತಿದೆ.

ಒಳಮೀಸಲಾತಿಯ ಮಧ್ಯಂತರ ವರದಿ

ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಸಲ್ಲಿಸಿದ ನ್ಯಾ. ನಾಗಮೋಹನ್‌ದಾಸ್ ಆಯೋಗ



ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿ ಕಲ್ಪಿಸುವ ಸಂಬಂಧ ಮಧ್ಯಂತರ ವರದಿಯನ್ನು ಗುರುವಾರ ನ್ಯಾಯಮೂರ್ತಿ ನಾಗಮೋಹನ್‌ದಾಸ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಲ್ಲಿಸಿದರು.

ಬೆಂಗಳೂರು, ಮಾ.27– ಒಳಮೀಸಲಾತಿ ಜಾರಿ ವಿಚಾರವಾಗಿ ನಡೆಯುತ್ತಿರುವ ಹೋರಾಟಗಳ ನಡುವೆ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದಲ್ಲಿ ಮಧ್ಯಂತರ ವರದಿಯನ್ನು ಸಲ್ಲಿಸಲಾಗಿದೆ.

ಗುರುವಾರ ಕ್ಯಾಬಿನೆಟ್ ಸಭೆಗೂ ಮುನ್ನ ಸಿಎಂ ಸಿದ್ದರಾಮಯ್ಯ ಅವರಿಗೆ ನ್ಯಾ. ನಾಗಮೋಹನ್ ದಾಸ್ ಪರಿಶಿಷ್ಟ ಜಾತಿಗಳಲ್ಲಿ ಒಳ ಮೀಸಲಾತಿ ಕಲ್ಪಿಸುವ ಸಂಬಂಧ ಮಧ್ಯಂತರ ವರದಿಯನ್ನು ಸಲ್ಲಿಸಿದರು.

ವರದಿ ಸಲ್ಲಿಕೆ ಬಳಿಕ ಮಾತನಾಡಿದ ಅವರು, ಎರಡು ತಿಂಗಳಿಗಿಂತ ಹೆಚ್ಚು ನಾನು ಹಾಗೂ ನನ್ನ ತಂಡ ಆಳವಾದ ಅಧ್ಯಯನ ಮಾಡಿ 104 ಪುಟಗಳ ಒಳಮೀಸಲಾತಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದೇವೆ. ಇದರಲ್ಲಿ ತರಾತುರಿ ಪ್ರಶ್ನೆ ಇಲ್ಲ. ಮಧ್ಯಂತರ ವರದಿ ಕೊಡಿ ಎಂದು ಸರ್ಕಾರ ನಮ್ಮನ್ನು ಕೇಳಲಿಲ್ಲ. ನಾವೇ ಸ್ವ ಇಚ್ಛೆಯಿಂದ ವರದಿಯನ್ನು ನೀಡಿದ್ದೇವೆ ಎಂದರು.

ಮಧ್ಯಂತರ ವರದಿ ಕೊಡಿ ಎಂದು ಸರ್ಕಾರ ಕೇಳಿರಲಿಲ್ಲ. ಈ ವರದಿ ಮೇಲೆ ಸರ್ಕಾರ ಏನು ತೀರ್ಮಾನ ಮಾಡುತ್ತೊ ನೋಡೋಣ ಎಂದರು. ಉದ್ಯೋಗಾಕಾಂಕ್ಷಿಗಳಿಗೆ ಅನ್ಯಾಯ ಆಗಬಾರದು. ಅವರಿಗೆ ಶಾಶ್ವತವಾದ ಪರಿಹಾರ ಕೊಡಬೇಕು. ಈ ಬಗ್ಗೆ ಸರ್ಕಾರ ತೀರ್ಮಾನ ಕೈಗೊಳ್ಳುತ್ತದೆ. ವರದಿ ಬಗ್ಗೆ ಸರ್ಕಾರ ಏನೂ ಉತ್ತರ ಕೊಟ್ಟಿಲ್ಲ. ನೇಮಕಾತಿ ಬಗ್ಗೆ ನಾವು ಏನೂ ಸಲಹೆ ಕೊಟ್ಟಿಲ್ಲ ಎಂದರು.

ವರದಿ ನೀಡಿರುವ ಹಂತದಲ್ಲಿ ಬೇರೆ ಯಾವ ವಿಚಾರವನ್ನು ಹೇಳಲು ಸಾಧ್ಯವಿಲ್ಲ. ಸರ್ಕಾರದ ತೀರ್ಮಾನ ನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು. ಮಧ್ಯಂತರ ವರದಿ ನೀಡಿರುವುದು ಒಳ ಮೀಸಲಾತಿ ಜಾರಿಯ ವಿಳಂಬ ಧೋರಣೆಗೆ ಅನುಕೂಲ ಎಂಬ ವಾದವನ್ನು ನಿರಾಕರಣೆ ಮಾಡಿದ ಅವರು, ನನಗೆ ಹೀಗೆ ಅನ್ನಿಸಿಲ್ಲ ಎಂದು ಸ್ಪಷ್ಟಪಡಿಸಿದರು. ಶಾಶ್ವತವಾದ ಪರಿಹಾರವನ್ನು ಕೊಡಬೇಕು ಎಂಬುದು ನನ್ನ ಆಸೆಯಾಗಿದೆ. ■6ನೇ ಪುಟಕ್ಕೆ

ಬಿಜೆಪಿ ಈಗ ಕುಟುಂಬ ರಾಜಕಾರಣದಲ್ಲಿ ಮುಳುಗಿದೆ

ಪಕ್ಷದಿಂದ ಉಚ್ಚಾಟನೆಗೊಂಡಿರುವ ಬಸನಗೌಡ ಪಾಟೀಲ್ ಯತ್ನಾಳ್ ಮಾರ್ಮಿಕ ಟ್ವೀಟ್

ಬೆಂಗಳೂರು, ಮಾ.27(ಕೆಎಂಶಿ)– ಪಕ್ಷ ಬಲವರ್ಧನೆಗೆ ಟೊಂಕಕಟ್ಟಿ ಕೆಲಸ ಮಾಡಿದ ನನ್ನಂತಹವರನ್ನು ಉಚ್ಚಾಟನೆ ಮಾಡುವುದು ಪಕ್ಷದ ದ್ವಂದ್ವ ನೀತಿಗಳಿಗೆ ಹಿಡಿದ ಕೈಗನ್ನಡಿ ಎಂದು ನಿನ್ನೆಯಷ್ಟೇ ಬಿಜೆಪಿಯಿಂದ ಉಚ್ಚಾಟನೆಗೊಂಡ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಕಿಡಿಕಾರಿದ್ದಾರೆ.



ಈ ಸಂಬಂಧ ಟ್ವೀಟ್ ಮಾಡಿರುವ ಅವರು, ಪಕ್ಷದ ವಿರುದ್ಧ ಬಹಿರಂಗವಾಗಿ ಮಾತನಾಡಿ ಹಾಗೂ ಆಡಳಿತಾರೂಢ ಪಕ್ಷದ ಸಭೆಯಲ್ಲಿ ಭಾಗವಹಿಸುತ್ತಿದ್ದ ಶಾಸಕರನ್ನು ಉಚ್ಚಾಟಿಸದೆ, ಸಂಘಟನೆಗಾಗಿ ದುಡಿಯುತ್ತಿದ್ದ ನನ್ನಂತಹವರನ್ನು ಹೊರಹಾಕಿದ್ದಾರೆ. ಕಾರ್ಯಕರ್ತರ ಪಕ್ಷ ಎಂದು ಹೆಸರುವಾಸಿಯಾಗಿದ್ದ ಭಾರತೀಯ ■6ನೇ ಪುಟಕ್ಕೆ

ಯತ್ನಾಳ್ ಪರ ಇಂದು ಆಪ್ತರ ಸಭೆ

ಉಚ್ಚಾಟನೆ ನಿರ್ಧಾರ ಮರು ಪರಿಶೀಲನೆಗೆ ವರಿಷ್ಠರಲ್ಲಿ ಮನವಿ

ಬೆಂಗಳೂರು, ಮಾ.27(ಕೆಎಂಶಿ)– ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆ ವಿಚಾರವನ್ನು ಮರು ಪರಿಶೀಲಿಸುವಂತೆ ಅವರೊಂದಿಗೆ ಗುರುತಿಸಿಕೊಂಡಿದ್ದ ಮುಖಂಡರು ನಾಳೆ ಸಭೆ ಸೇರಿ ಬಿಜೆಪಿ ವರಿಷ್ಠರಿಗೆ ಪತ್ರ ಬರೆಯಲು ನಿರ್ಧರಿಸಿದ್ದಾರೆ. ಮಾಜಿ ಸಚಿವ ಕುಮಾರ್ ಬಂಗಾರಪ್ಪ ಅಧ್ಯಕ್ಷತೆಯಲ್ಲಿ ಮಾಜಿ ಸಚಿವರು, ಸಂಸದರು, ಹಾಲಿ ಶಾಸಕರು, ಮುಖಂಡರು ಸಭೆ ಸೇರಿ ನಿರ್ಣಯ ಕೈಗೊಳ್ಳಲಿದ್ದಾರೆ. ಈ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ, ಸಭೆ ಬಗ್ಗೆ ■6ನೇ ಪುಟಕ್ಕೆ

ಚಿನ್ನ ಕಳ್ಳ ಸಾಗಣೆ ಪ್ರಕರಣ: ನಟಿ ರನ್ಯಾಗೆ ಜೈಲೇ ಗತಿ

ಜಾಮೀನು ನಿರಾಕರಿಸಿದ ಸೆಷನ್ಸ್ ಕೋರ್ಟ್

ಬೆಂಗಳೂರು, ಮಾ.27– ಸುಮಾರು 15 ಕೋಟಿ ರೂಪಾಯಿ ಮೌಲ್ಯದ ಚಿನ್ನ ಕಳ್ಳಸಾಗಣೆ ಪ್ರಕರಣದಲ್ಲಿ ಬಂಧಿತರಾಗಿರುವ ಕನ್ನಡದ ನಟಿ ರನ್ಯಾ ರಾವ್ ಅವರ ಜಾಮೀನು ಅರ್ಜಿಯನ್ನು ಸೆಷನ್ಸ್ ಕೋರ್ಟ್ ಗುರುವಾರ ವಜಾಗೊಳಿಸಿದೆ.



ಜಾಮೀನು ಕೋರಿ ನಟಿ ರನ್ಯಾ ರಾವ್ ಸಲ್ಲಿಸಿದ್ದ ಜಾಮೀನು ಅರ್ಜಿಯ ವಿಚಾರಣೆ ನಡೆಸಿದ 64ನೇ ಸಿಸಿಹೆಚ್ ಕೋರ್ಟ್, ಅರ್ಜಿ ವಜಾಗೊಳಿಸಿ, ಆದೇಶ ಹೊರಡಿಸಿದೆ. ಈ ಮುಂಚೆ ಆರ್ಥಿಕ ಅಪರಾಧಗಳ ವಿಶೇಷ ನ್ಯಾಯಾಲಯ ರನ್ಯಾ ರಾವ್ ಅವರ ಜಾಮೀನು ಅರ್ಜಿಯನ್ನು ವಜಾಗೊಳಿಸಿತ್ತು. ಈಗ ಸೆಷನ್ಸ್ ಕೋರ್ಟ್ ಸಹ ನಟಿಗೆ ■6ನೇ ಪುಟಕ್ಕೆ

ಹನಿಟ್ರ್ಯಾಪ್ ಪ್ರಕರಣಕ್ಕೆ ರೋಚಕ ತಿರುವು

ಸಹಕಾರ ಸಚಿವ ರಾಜಣ್ಣ ಪುತ್ರ ಎಂಎಲ್ಸಿ ರಾಜೇಂದ್ರ ತಮ್ಮ ಕೊಲೆ ಯತ್ನ ಸಂಬಂಧ ಡಿಜಿಗೆ ದೂರು

• ತಂದೆ, ಮಗನ ದೂರುಗಳ ಪರಿಶೀಲನೆಗೆ ಸಿಐಡಿಗೆ ಒಪ್ಪಿಸಿದ ಡಿಜಿ • 14 ದಿನದಲ್ಲಿ ವರದಿ ನೀಡುವಂತೆ ಸೂಚನೆ • ನಂತರವಷ್ಟೇ ಉನ್ನತ ತನಿಖೆ ನಿರ್ಧಾರ

ಬೆಂಗಳೂರು, ಮಾ.27(ಕೆಎಂಶಿ)– ಹನಿಟ್ರ್ಯಾಪ್ ಪ್ರಕರಣ ದಿನದಿಂದ ದಿನಕ್ಕೆ ರೋಚಕ ತಿರುವು ಪಡೆಯುತ್ತಿದ್ದು, ಸಹಕಾರ ಸಚಿವ ಕೆ.ಎನ್.ರಾಜಣ್ಣ ಪುತ್ರ ಹಾಗೂ ವಿಧಾನ ಪರಿಷತ್ ಸದಸ್ಯ ರಾಜೇಂದ್ರ, ತಮ್ಮ ಕೊಲೆ ಯತ್ನವೂ ನಡೆದಿತ್ತು ಎಂದು ದೂರು ದಾಖಲಿಸಿದ್ದಾರೆ.



ರಾಜೇಂದ್ರ



ಅಲೋಕ್‌ಮೋಹನ್

ಹನಿಟ್ರ್ಯಾಪ್‌ಗೆ ಸಂಬಂಧಿಸಿದಂತೆ ರಾಜಣ್ಣ ನೀಡಿರುವ ದೂರು ಹಾಗೂ ರಾಜೇಂದ್ರ ಮಾಡಿರುವ ಆರೋಪಗಳ ಬಗ್ಗೆ ಪ್ರಾಥಮಿಕ ತನಿಖೆ ನಡೆಸಿ 14 ದಿನದಲ್ಲಿ ವರದಿ ನೀಡುವಂತೆ ಸಿಐಡಿಗೆ, ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್ ಆದೇಶಿಸಿದ್ದಾರೆ.

ಪೊಲೀಸ್ ಮಹಾನಿರ್ದೇಶಕರ ಆದೇಶದ ಮೇರೆಗೆ ಸಿಐಡಿ, ಬಿಎನ್‌ಎಸ್‌ಎಸ್ ಪ್ರಕಾರ ಎಫ್‌ಐಆರ್ ದಾಖಲಿಸದೆ, ದೂರುದಾರರು ನೀಡಿರುವ ಮಾಹಿತಿ ಆಧರಿಸಿ ತನಿಖೆ ಆರಂಭಿಸಿದೆ. ಪ್ರಕರಣದ ತನಿಖೆ ನಡೆಸುತ್ತಿರುವ ಸಿಐಡಿ, ಹನಿಟ್ರ್ಯಾಪ್ ಪ್ರಕರಣ ಹೆಚ್ಚುವರಿ ತನಿಖೆಗೆ ವಹಿಸಲು ಅರ್ಹವೇ ಎಂಬ ಬಗ್ಗೆಯಷ್ಟೇ ಪ್ರಾಥಮಿಕ ತನಿಖೆ ನಡೆದಿದೆ.

ಒಂದು ವೇಳೆ ಪೂರ್ಣ ಪ್ರಮಾಣದ ತನಿಖೆ ಅನಿವಾರ್ಯ ಎಂದಾದರೆ, ಪೊಲೀಸ್ ಮಹಾನಿರ್ದೇಶಕರಿಗೆ ಸಿಐಡಿ ವರದಿ ನೀಡಲಿದೆ. ಈ ವರದಿ ಆಧಾರದ ಮೇಲೆ ಪೊಲೀಸ್ ಮಹಾನಿರ್ದೇಶಕರು ಯಾವ ತನಿಖೆ ನಡೆಸಬೇಕೆಂಬ ■6ನೇ ಪುಟಕ್ಕೆ

ನನ್ನ ಮೇಲೆ ಹನಿಟ್ರ್ಯಾಪ್ ಆಗಿಲ್ಲ; ಕೊಲೆ ಯತ್ನ ನಡೆದಿದೆ

ಡಿಜಿಪಿ ಅವರನ್ನು ಭೇಟಿ ಮಾಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ರಾಜೇಂದ್ರ ನನ್ನ ಮೇಲೆ ಹನಿಟ್ರ್ಯಾಪ್ ಆಗಿಲ್ಲ, ಕಳೆದ ನವೆಂಬರ್ 16ರಂದು ಮಗಳ ಹುಟ್ಟುಹಬ್ಬಕ್ಕೆ ಶಾಮಿಯಾನ ಹಾಕಲು ಬಂದವರು, ನನ್ನ ಮೇಲೆ ಹಲ್ಲೆ ಅಥವಾ ಕೊಲೆ ಮಾಡಬೇಕು ಎಂಬ ಉದ್ದೇಶದಿಂದ ಬಂದಿದ್ದರು. ಆದರೆ, ಅವರ ಪ್ರಯತ್ನ ಸಫಲವಾಗಲಿಲ್ಲ. ಜನವರಿ ತಿಂಗಳಲ್ಲಿ ನನ್ನ ಕೊಲೆ ಸಂಚು ನಡೆದಿರುವ ಮಾಹಿತಿಯನ್ನು ಅನಾಮಿಕ ವ್ಯಕ್ತಿಯೊಬ್ಬ ದೂರವಾಣಿ ಮೂಲಕ ಮಾಹಿತಿ ನೀಡಿದ. ನಿಮ್ಮ ಮಗಳ ಹುಟ್ಟುಹಬ್ಬದ ದಿನ ನಿಮ್ಮನ್ನು ಕೊಲೆ ಮಾಡಬೇಕೆಂಬ ಯೋಜನೆ ■6ನೇ ಪುಟಕ್ಕೆ

ಮೈಸೂರಿನ ಹುಯಿಲಾಳು ಬಳಿ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ನಿರ್ಮಾಣ ಸಂಬಂಧ ಸಂಪುಟದಲ್ಲಿ ಪ್ರಸ್ತಾಪ

■ ಮುಂದಿನ ಸಭೆಯಲ್ಲಿ ಅಂತಿಮ ನಿರ್ಧಾರಕ್ಕೆ ತೀರ್ಮಾನ ■ ಅಂಬೇಡ್ಕರ್ ಭವನ ಪೂರ್ಣಗೊಳಿಸಲು ಮುಡಾ ವತಿಯಿಂದ 23 ಕೋಟಿ ಹಣ ಪೂರೈಕೆ ■ ಕಲಾಮಂದಿರ, ರಂಗಾಯಣ, ವಿಶ್ವ ಕನ್ನಡ ಸಮ್ಮೇಳನ ಅತಿಥಿ ಗೃಹ ನವೀಕರಣಕ್ಕೆ 14.64 ಕೋಟಿ ವೆಚ್ಚ



ಸಂಗ್ರಹ ಚಿತ್ರ


ಬೆಂಗಳೂರು, ಮಾ.27 (ಕೆಎಂಶಿ)–ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ (ಕೆಎಸ್‌ಸಿಎ) ಮೈಸೂರಿನ ಇಲವಾಲ ಹೋಬಳಿಯ ಹುಯಿಲಾಳು ಗ್ರಾಮದ ಬಳಿ ಸುಸಜ್ಜಿತ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಲು ಇಂದಿಲ್ಲಿ ಸೇರಿದ್ದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಯಿತಾದರೂ ಅಂತಿಮ ತೀರ್ಮಾನ ಕೈಗೊಳ್ಳಲು ಸಾಧ್ಯವಾಗಲಿಲ್ಲ.

ಕ್ರೀಡಾಂಗಣ ನಿರ್ಮಾಣಕ್ಕೆ ಅಗತ್ಯವಿರುವ 18.19 ಎಕರೆ ಸರ್ಕಾರಿ ಖರಾಬು ಜಮೀನನ್ನು ನೀಡುವ ಉದ್ದೇಶ ಇತ್ತು. ಆದರೆ, ಕೆಎಸ್‌ಸಿಎಗೆ ಭೂಮಿ ನೀಡುವ ಮೊದಲು ಕೆಲವು ಷರತ್ತು ವಿಧಿಸಿ ಅಂತರರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ನಿರ್ಮಾಣಕ್ಕೆ ಮಾಡಿಕೊಂಡಿರುವ ಸಿದ್ಧತೆ ಹಾಗೂ ಸಂಪನ್ಮೂಲ ಮಾಹಿತಿ ಪಡೆದು ಮುಂದಿನ ಸಂಪುಟ ಸಭೆಯಲ್ಲಿ ನಿರ್ಧರಿಸಲು ತೀರ್ಮಾನಿಸಲಾಯಿತು.

ಮೈಸೂರಿನಲ್ಲಿ ಡಾ.ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು 23 ಕೋಟಿ ರೂ. ವೆಚ್ಚ ಮಾಡುವ ತೀರ್ಮಾನಕ್ಕೆ ಸಂಪುಟ ಸಮ್ಮತಿಸಿದ್ದಲ್ಲದೆ, ಈ ಹಣವನ್ನು ಮುಡಾದಿಂದ ಭರಿಸಲು ನಿರ್ಧರಿಸಿತು.

ಮೈಸೂರಿನ ಕರ್ನಾಟಕ ಕಲಾಮಂದಿರ, ರಂಗಾಯಣ ಹಾಗೂ ವಿಶ್ವ ಕನ್ನಡ ಸಮ್ಮೇಳನ ಅತಿಥಿ ಗೃಹ ಕಟ್ಟಡಗಳ ಸಮಗ್ರ ನವೀಕರಣ ಕಾಮಗಾರಿಯನ್ನು ಅಂದಾಜು 14.64 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿದೆ.

ಕೊಡಗು ಜಿಲ್ಲೆ ಮಡಿಕೇರಿ ವಿಧಾನಸಭಾ ವ್ಯಾಪ್ತಿಯ ಕುಶಾಲನಗರ ತಾಲೂಕು ಮಸಗೋಡು, ಯಲಕನೂರು– ಕಣಿವೆ ರಸ್ತೆ ಅಭಿವೃದ್ಧಿ ಕಾಮಗಾರಿಗೆ 15 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕು ಆಡಳಿತ ಕೇಂದ್ರ ಪ್ರಜಾಸೌಧ ಕಟ್ಟಡವನ್ನು 16 ಕೋಟಿ ರೂ. ಅಂದಾಜು ಮೊತ್ತದಲ್ಲಿ ನಿರ್ಮಿಸಲು ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.



ಮುಡಾದಲ್ಲಿ 323.05 ಕೋಟಿ ಉಳಿತಾಯ ಬಜೆಟ್

ಮೈಸೂರು, ಮಾ.27(ಆರ್‌ಕೆ)– ಶೇ.50:50ರ ಅನುಪಾತದ ಪರಿಹಾರದಡಿ ಕೋಟ್ಯಾಂತರ ರೂ. ಬೆಲೆಬಾಳುವ ಸಾವಿರಾರು ನಿವೇಶನಗಳನ್ನು ಅನಧಿಕೃತವಾಗಿ ಮಂಜೂರು ಮಾಡಿ ದೇಶಾದ್ಯಂತ ಸುದ್ದಿಯಾಗಿದ್ದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ವು 2025–26ನೇ ಸಾಲಿಗೆ 323.05 ಕೋಟಿ ರೂ. ಉಳಿತಾಯ ಬಜೆಟ್ ಮಂಡಿಸಿದೆ.

ಮುಡಾ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ ಅವರ ಅಧ್ಯಕ್ಷತೆಯಲ್ಲಿ ಪ್ರಾಧಿಕಾರದ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ವಿಶೇಷ ಸಭೆಯಲ್ಲಿ ಆಯುಕ್ತ ಎ.ಎನ್.ರಘುನಂದನ್ ಪ್ರಸಕ್ತ ಸಾಲಿನ ಆಯ–ವ್ಯಯವನ್ನು ಮಂಡಿಸಿದರು.

ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಕೆ.ಹರೀಶ್‌ಗೌಡ, ಟಿ.ಎಸ್.ಶ್ರೀವತ್ಸ, ದರ್ಶನ್, ವಿಧಾನಪರಿಷತ್ ಸದಸ್ಯರಾದ ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಕೆ.ವಿವೇಕಾನಂದ, ಮೈಸೂರು ಮಹಾನಗರಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸೀಫ್, ಮುಡಾ ಸೂಪರಿಂಟೆಂಡೆಂಟ್ ಇಂಜಿನಿಯರ್ ಎಂ.ಮುರಳೀಧರ್, ನಗರ ಯೋಜನಾ ಸದಸ್ಯ ಶಿವರಾಮಯ್ಯ, ಮುಖ್ಯ ಲೆಕ್ಕಾಧಿಕಾರಿ ಮಂಜುಳಾ, ಚೆಸ್ಕಾಂ ಸೂಪರಿಂಟೆಂಡೆಂಟ್ ಇಂಜಿನಿಯರ್ ಸುನಿಲ್‌ಕುಮಾರ್, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಎಕ್ಸಿಕ್ಯುಟಿವ್ ಇಂಜಿನಿಯರ್ ಆಸೀಫ್ ಇಕ್ಬಾಲ್ ಕಲೀಲ್ ಸೇರಿದಂತೆ ಹಲವರು ಸಭೆಯಲ್ಲಿ ಉಪಸ್ಥಿತರಿದ್ದು, ಆಯ–ವ್ಯಯಕ್ಕೆ ಅನುಮೋದನೆ ನೀಡಿದರು.

2025–26ನೇ ಸಾಲಿಗೆ ಎಲ್ಲಾ ಮೂಲಗಳಿಂದ 87,154.30 ಲಕ್ಷ ರೂಗಳ ಆದಾಯ ನಿರೀಕ್ಷಿಸಿ ಪ್ರಾಧಿಕಾರವು ಕೈಗೊಳ್ಳುವ ಅಭಿವೃದ್ಧಿ ಕಾರ್ಯಗಳು ■6ನೇ ಪುಟಕ್ಕೆ



ಮುಡಾ ಆಯುಕ್ತ ಎ.ಎನ್.ರಘುನಂದನ್ ಗುರುವಾರ ಪ್ರಾಧಿಕಾರದ ಕಚೇರಿ ಸಭಾಂಗಣದಲ್ಲಿ ಬಜೆಟ್ ಮಂಡಿಸಿದರು. ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ಸಿ.ಎನ್.ಮಂಜೇಗೌಡ, ಡಾ.ಡಿ.ತಿಮ್ಮಯ್ಯ, ಟಿ.ಎಸ್.ಶ್ರೀವತ್ಸ, ದರ್ಶನ್ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಪ್ರಸಕ್ತ ಸಾಲಿನಲ್ಲಿ ಮುಡಾ ರೂಪಿಸಿರುವ ವಿಶೇಷ ಯೋಜನೆಗಳು

- ▶ ಮೈಸೂರು–ನಂಜನಗೂಡು ಸ್ಥಳೀಯ ಯೋಜನಾ ಅಭಿವೃದ್ಧಿ ವ್ಯಾಪ್ತಿಯಲ್ಲಿ 100 ಕೋಟಿ ವೆಚ್ಚದಲ್ಲಿ ವಸತಿ ಬಡಾವಣೆಗಳ ನಿರ್ಮಾಣ
- ▶ ಪೆರಿಫೆರಲ್ ರಿಂಗ್ ರಸ್ತೆ ಡಿಪಿಆರ್ ಸಿದ್ಧಪಡಿಸಲು 7.75 ಕೋಟಿ ರೂ. ಮೀಸಲು
- ▶ ವಿಜಯನಗರ 4ನೇ ಹಂತದಲ್ಲಿ 10 ಕೋಟಿ ವೆಚ್ಚದ ಕ್ರೀಡಾ ಸಂಕೀರ್ಣ ನಿರ್ಮಾಣ
- ▶ ನಿರ್ಮಾಣ ಹಂತದಲ್ಲಿರುವ ಮೈಸೂರಿನ ಡಾ. ಅಂಬೇಡ್ಕರ್ ಭವನ ಕಾಮಗಾರಿ ಪೂರ್ಣಗೊಳಿಸಲು 23.84 ಕೋಟಿ ರೂ. ಮೀಸಲು
- ▶ ಕುಕ್ಕರಹಳ್ಳಿ ಕೆರೆ ಬಳಿ ಲಾಲ್‌ಬಾಗ್ ಮಾದರಿ ಉದ್ಯಾನವನ ಅಭಿವೃದ್ಧಿಗೆ 2 ಕೋಟಿ ರೂ. ಅನುದಾನ
- ▶ ವಿಜಯಶ್ರೀಪುರದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಪಂಚತಾರಾ ಹೋಟೆಲ್, ವಾಣಿಜ್ಯ ಸಂಕೀರ್ಣ ನಿರ್ಮಾಣ

ಮೈಸೂರು–ನಂಜನಗೂಡು ಯೋಜನಾಭಿವೃದ್ಧಿ ಪ್ರದೇಶದಡಿ ಬಡಾವಣೆ ನಿರ್ಮಾಣ ಉದ್ದೇಶ

• ಇದಕ್ಕಾಗಿ 100 ಕೋಟಿ ಹಣ ಮೀಸಲು • ವಿಜಯನಗರ 4ನೇ ಹಂತದಲ್ಲಿ ಕ್ರೀಡಾ ಸಂಕೀರ್ಣ • ಪೆರಿಫೆರಲ್ ರಿಂಗ್ ರಸ್ತೆಗೆ ಡಿಪಿಆರ್‌ಗೆ ಹಣ ಮೀಸಲು • ಕುಕ್ಕರಹಳ್ಳಿ ಕೆರೆ ಆವರಣದಲ್ಲಿ ಲಾಲ್‌ಬಾಗ್ ಮಾದರಿ ಉದ್ಯಾನವನ • ವಿಜಯಶ್ರೀಪುರದಲ್ಲಿ ಪಿಪಿಪಿ ಅಡಿ ಪಂಚತಾರಾ ಹೋಟೆಲ್, ವಾಣಿಜ್ಯ ಸಂಕೀರ್ಣ

ಮೈಸೂರು, ಮಾ.27(ಆರ್‌ಕೆ)– ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ವು ಪ್ರಸಕ್ತ ಆರ್ಥಿಕ ವರ್ಷದಲ್ಲಿ ಮೈಸೂರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶದಲ್ಲಿ ಸಾರ್ವಜನಿಕರ ಉದ್ದೇಶಕ್ಕಾಗಿ ಹಲವು ವಿಶೇಷ ಯೋಜನೆಗಳನ್ನು ಅನುಷ್ಠಾನಗೊಳಿಸಲು ಬಜೆಟ್‌ನಲ್ಲಿ ಪ್ರಸ್ತಾಪಿಸಿ, ಅಗತ್ಯ ಅನುದಾನ ಮೀಸಲಿರಿಸಿದೆ.

ಮುಡಾ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಸಭೆಯಲ್ಲಿ 2025–26ನೇ ಸಾಲಿನ ಬಜೆಟ್ ಮಂಡಿಸಿದ ಆಯುಕ್ತ ಎ.ಎನ್. ರಘುನಂದನ್, ಉದ್ದೇಶಿತ ವಿಶೇಷ ಯೋಜನೆಗಳನ್ನು ಪ್ರಕಟಿಸಿದರು. ಆ ಪೈಕಿ ಮೈಸೂರು–ನಂಜನಗೂಡು ಸ್ಥಳೀಯ ಯೋಜನಾ ಅಭಿವೃದ್ಧಿ ಪ್ರದೇಶ (ಎಂಎನ್‌ಎಲ್‌ಪಿಎ) ರೈತರಿಂದ ನೇರವಾಗಿ ಭೂಮಿ ಖರೀದಿಸಿ ವಸತಿ ಬಡಾವಣೆ ರಚಿಸಲು 100 ಕೋಟಿ ರೂ.ಗಳನ್ನು ಕಾಯ್ದಿರಿಸಲಾಗಿದೆ.

ಬಹುನಿರೀಕ್ಷಿತ ಪೆರಿಫೆರಲ್ ರಿಂಗ್ ರೋಡ್ (ಹೊರಪರಿಧಿ ರಸ್ತೆ) ನಿರ್ಮಾಣಕ್ಕೆ ಡಿಪಿಆರ್ ತಯಾರಿಸಲು 7.75 ಕೋಟಿ ರೂಗಳನ್ನು ಮೀಸಲಿರಿಸಿದ್ದು, 45 ಮೀಟರ್ ಅಗಲ ಮತ್ತು 105.31 ಕಿ.ಮೀ. ಉದ್ದದ ಈ ರಸ್ತೆಯು 6 ಮುಖ್ಯ ಲೇನ್‌ಗಳು ಮತ್ತು 2 ಸರ್ವಿಸ್ ರಸ್ತೆಗಳನ್ನು ಹೊಂದಿರುತ್ತದೆ. ಮೈಸೂರು ನಗರಕ್ಕೆ ಸುಮಾರು 40 ಲಕ್ಷಕ್ಕೂ ಅಧಿಕ ಪ್ರವಾಸಿಗರು ಭೇಟಿ ನೀಡುತ್ತಿರುವುದರಿಂದ ನಗರದ ಹಾಲಿ ಇರುವ ರಿಂಗ್ ■6ನೇ ಪುಟಕ್ಕೆ

ನಕ್ಕರೆ ಅದೇ ಸ್ವರ್ಗ

ಭಿಕ್ಷುಕ : ಅಮ್ಮಾ, ಒಂದು ರೊಟ್ಟಿ ಕೊಡಿ ತಾಯಿ.
ಅಮ್ಮ : ಇನ್ನೂ ರೊಟ್ಟಿ ರೆಡಿ ಮಾಡಿಲ್ಲ. ಆಮೇಲೆ ಬಾ
ಭಿಕ್ಷುಕ : ಮೊಬೈಲ್ ನಂಬರ್ ತಗೊಳ್ಳಿ
ರೆಡಿ ಆದ ಮೇಲೆ ಮಿಸ್ಡ್ ಕಾಲ್ ಕೊಡಿ.

ಮೈಸೂರು ಮಿತ್ರ

ಶುಕ್ರವಾರ, 28 ಮಾರ್ಚ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ನಿಮಗೆ ಸೂರ್ಯನಂತೆ ಮಿಂಚುವ ಆಸೆಯಿದ್ದರೆ, ಮೊದಲು ಸೂರ್ಯನಂತೆ ಉರಿಯುವುದನ್ನು ಕಲಿಯಿರಿ.– ಡಾ. ಎ.ಪಿ.ಜೆ. ಅಬ್ದುಲ್ ಕಲಾಂ

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಣ ಇರುವ ಗಂಡನ ಕೈ ಹಿಡಿದರೂ ಋಣ ಇರುವಷ್ಟೇ ಪ್ರಾಪ್ತಿ.

ನಿಮ್ಮ ಪತ್ರಗಳು

ಐಪಿಎಲ್ ಮಾಯಾ ಲೋಕದಲ್ಲಿ ಸಿಲುಕದಿರಿ

ಮಾನ್ಯರೆ,

ಐಪಿಎಲ್ ಕ್ರಿಕೆಟ್ ಪ್ರಾರಂಭವಾಗಿದ್ದು, ಈ ಕ್ಷಣಕ್ಕಾಗಿ ಕೆಲವರು ಕಾತುರದಿಂದ ಕಾಯುತ್ತಿದ್ದಾರೆ. ಒಂದು ವರ್ಗದ ಕೆಲವು ಜನರು ಆಟ ನೋಡಿ ಖುಷಿ ಪಡುತ್ತಾರೆ. ಇನ್ನೊಂದು ವರ್ಗದ ಕೆಲವು ಜನರು ಆನ್‌ಲೈನ್ ಮೂಲಕ ಬೆಟ್ಟಿಂಗ್ ಆಡುತ್ತಾರೆ. ಹೆಚ್ಚಿನ ಹಣವನ್ನು ಗಳಿಸಿ ಅಲ್ಪ ಕಾಲದಲ್ಲಿ ಶ್ರೀಮಂತರಾಗಬಹುದು ಎಂಬ ದುರುದ್ದೇಶದಿಂದ ಗ್ರಾಮೀಣ ಹಾಗೂ ನಗರ ಪ್ರದೇಶದ ಕಾಲೇಜಿನ ಕೆಲವು ವಿದ್ಯಾರ್ಥಿಗಳು, ಯುವಕರು, ಮಧ್ಯ ವಯಸ್ಕರು ಕೂಡ ಈ ಬೆಟ್ಟಿಂಗ್‌ನಲ್ಲಿ ಬುಕ್ಕಿಗಳ, ಏಜೆಂಟ್‌ರ ಮೂಲಕ ಆನ್‌ಲೈನ್‌ನಲ್ಲಿ 1:2,1:3, 1:4, ಕೋಡ್ ವರ್ಡ್‌ಗಳನ್ನು ಕೊಟ್ಟು ಈ ಅನುಪಾತಗಳ ರೂಪದಲ್ಲಿ ಹಣವನ್ನು ಕಟ್ಟುತ್ತಾರೆ. ಒಂದು ಕಡೆ ಐಪಿಎಲ್ ಫೀವರ್ ಹೆಚ್ಚುತ್ತಿದ್ದರೆ, ಮತ್ತೊಂದು ಕಡೆ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪರೀಕ್ಷೆ ಫೀವರ್ ಹೆಚ್ಚಾಗುತ್ತಿದೆ. ಆದರೂ ಈ ವಿದ್ಯಾರ್ಥಿಗಳು ಕದ್ದುಮುಚ್ಚಿ ಐಪಿಎಲ್ ಪಂದ್ಯಗಳನ್ನು ವೀಕ್ಷಿಸುತ್ತಿದ್ದಾರೆ. ಕೆಲವು ವಿದ್ಯಾರ್ಥಿಗಳು ಬೆಟ್ಟಿಂಗ್ ದಂಧೆಯಲ್ಲೂ ಕೂಡ ಭಾಗಿಯಾಗುತ್ತಿದ್ದಾರೆ. ಪೋಷಕರು ತಮ್ಮ ಮಕ್ಕಳ ಬಗ್ಗೆ ಹದ್ದಿನಕಣ್ಣಿಟ್ಟಿರಬೇಕು. ಈ ಪರೀಕ್ಷೆಯು ವಿದ್ಯಾರ್ಥಿಗಳಿಗೆ ಅವರ ಭವಿಷ್ಯವನ್ನು ರೂಪಿಸುವಂತಿದ್ದು ಮೊದಲನೇ ಮೆಟ್ಟಿಲಾಗಿರುತ್ತದೆ.

ಕೆಲವು ಬಡ ಜನರು ತಮಗೆ ಅರಿವಿಲ್ಲದಂತೆ ದುಪ್ಪಟ್ಟು ಹಣವನ್ನು ಗಳಿಸಬಹುದು ಎಂದು ತಾವು ಕಷ್ಟಪಟ್ಟು ದುಡಿದ ಹಣವನ್ನು ಬೆಟ್ಟಿಂಗ್‌ಗೆ ಕಟ್ಟುತ್ತಾರೆ. ಕೆಲವು ಜನರಂತು ಹುಚ್ಚರಂತೆ ಸಿಕ್ಕ ಸಿಕ್ಕ ಕಡೆ ಹೆಚ್ಚಿನ ಬಡ್ಡಿಗೆ ಸಾಲ ಮಾಡಿ, ತಮ್ಮ ಮನೆಯಲ್ಲಿರುವ ಚಿನ್ನ ಆಭರಣಗಳನ್ನು ಗಿರವಿಯಿಟ್ಟು ಅಥವಾ ಮಾರಿ ಆಸ್ತಿ ಪಾಸ್ತಿ, ಮನೆ, ಸೈಟ್‌ಗಳನ್ನು ಮಾರಿ ಈ ಬೆಟ್ಟಿಂಗ್ ಆಡುತ್ತಾರೆ. ಕೊನೆಗೆ ಎಲ್ಲವನ್ನೂ ಕಳೆದುಕೊಂಡು ಸಾಲ ತೀರಿಸಲಾಗದೆ, ಎಷ್ಟೋ ಜನರು ತಮ್ಮ ಕುಟುಂಬವನ್ನು ಅನಾಥ ಮಾಡಿ ಆತ್ಮಹತ್ಯೆಗೆ ಶರಣಾಗಿರುವ ಉದಾಹರಣೆಗಳು ಕೂಡ ಇವೆ. ಈ ಬೆಟ್ಟಿಂಗ್‌ನಿಂದ ಹಣದ ವಿಷಯವಾಗಿ ವೈಷಮ್ಯದಿಂದ ಸಮಾಜದ ಸ್ವಾಸ್ಥ್ಯ ಕೂಡ ಹಾಳಾಗುತ್ತಿದೆ. ಈ ಮೂಲಕ ಪೋಷಕರಿಗೆ ಒಂದು ಕಿವಿಮಾತು ತಮ್ಮ ಮಕ್ಕಳ ಬಗ್ಗೆ ಮನೆಯಲ್ಲಿ ಅವರ ಚಲನವಲನಗಳನ್ನು ಗಮನಿಸಬೇಕು. ಈ ಬೆಟ್ಟಿಂಗ್ ದಂಧೆ ಬಗ್ಗೆ ಪೊಲೀಸ್ ಇಲಾಖೆಯು ಹದ್ದಿನ ಕಣ್ಣಿಟ್ಟಿದ್ದರು ಕೂಡ ಅವರ ಕಣ್ತಪ್ಪಿಸಿ ನಡೆಯುತ್ತಿದೆ. ಸರ್ಕಾರವು ಕೂಡ ಇದರ ಬಗ್ಗೆ ಕಠಿಣ ಕ್ರಮ ವಹಿಸಿ ಶಿಕ್ಷೆಯನ್ನು ನೀಡಬೇಕು ಹಾಗೂ ಜನರು ಕೂಡ ಎಚ್ಚೆತ್ತುಕೊಂಡು ಈ ಬೆಟ್ಟಿಂಗ್‌ನಿಂದ ದೂರ ಉಳಿಯಬೇಕು ಎಂಬುದೇ ನನ್ನ ಆಶಯವಾಗಿರುತ್ತದೆ.

–ಪರಶಿವಮೂರ್ತಿ ಎನ್.ಪಿ, ಶಿಕ್ಷಕರು, ನಂಜೀಪುರ, ಸರಗೂರು.

ಸಂವಿಧಾನ ಬದಲಾವಣೆ ಸಾಧ್ಯವಿಲ್ಲ, ಈ ವಿಚಾರ ಡಿಕೆಶಿ ಅವರಿಗೆ ತಿಳಿದಿಲ್ಲವೆ?

ಮಾನ್ಯರೆ,

ಕರ್ನಾಟಕ ರಾಜ್ಯದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರಿನ ಅರಮನೆ ಮೈದಾನದಲ್ಲಿ ಇತ್ತೀಚೆಗೆ ನಡೆದ ಯೂತ್ ಕಾಂಗ್ರೆಸ್ ಸಮಾವೇಶದಲ್ಲಿ 'ಮಂಡ್ಯ ಜನರ ಛತ್ರಿ ಆಟ' ನನಗೆ ಗೊತ್ತಿಲ್ಲವೇ ಎಂದು ಹೇಳಿರುವುದು ಮಂಡ್ಯ ಜಿಲ್ಲೆಯವರ ಆಕ್ರೋಶಕ್ಕೆ ಕಾರಣವಾಗಿದೆ ಎಂದು ಸುದ್ದಿ ಮಾಧ್ಯಮಗಳಲ್ಲಿ ಪ್ರಕಟವಾಗಿರುವುದು ಸರಿಯಷ್ಟೆ.

ಇಂತಹ ಸೂಕ್ಷ್ಮ ವಿಚಾರಗಳನ್ನು ಜನತೆಯ ಮುಂದೆ ಮಾತನಾಡುವಾಗ ಎಚ್ಚರಿಕೆಯ ನಡೆ ಅವಶ್ಯ. ತಮ್ಮ ತಪ್ಪನ್ನರಿತು ತಕ್ಷಣ ಕ್ಷಮೆಯನ್ನಾದರೂ ಕೇಳಿದ್ದರೆ ಪರಿಸ್ಥಿತಿ ಇಷ್ಟೊಂದು ವಿಕೋಪಕ್ಕೆ ಹೋಗುತ್ತಿರಲಿಲ್ಲ ಅನಿಸುತ್ತದೆ. ಅದು ಸಾಲದು ಎಂಬಂತೆ ಮುಸ್ಲೀಮರಿಗೆ ಸರ್ಕಾರಿ ಗುತ್ತಿಗೆ ಕಾಮಗಾರಿಗಳಲ್ಲಿ ಶೇ.4ರಷ್ಟು ಮೀಸಲಾತಿ ನೀಡಲು ಸಂವಿಧಾನವನ್ನೇ ಬೇಕಾದರೂ ಬದಲಾವಣೆ ಮಾಡುವುದಾಗಿ ಹೇಳಿಕೆ ಕೊಟ್ಟಿರುವುದು ಅವರ ಸೊಕ್ಕಿನ ಮಾತುಗಳ ಪರಮಾವಧಿ ಎನ್ನಬಹುದು.


ಈ ಹೇಳಿಕೆಯನ್ನು ಖಂಡಿಸಿ ರಾಜ್ಯದಾದ್ಯಂತ ಖಂಡನೆ ವ್ಯಕ್ತವಾಗಿದೆ. ಇದು ಸಹಜವೂ ಸಹ. ಇಂತಹ ಸೊಕ್ಕಿನ ಮಾತುಗಳು ಕಾಂಗ್ರೆಸ್ ಪಕ್ಷದವರಿಂದ ಅಲ್ಲದೆ ಅನ್ಯರಿಂದ ಬರಲು ಸಾಧ್ಯವಿಲ್ಲ. ಡಿಕೆಶಿ ಅವರ ಹೇಳಿಕೆ ನಿಜವಾಗಲು ಸಾಧ್ಯವಿಲ್ಲ. ಇದು ಡಾ.ಅಂಬೇಡ್ಕರ್ ಅವರು ಹಿರಿಯ ಮುಖಂಡರೊಡನೆ, ಮುತ್ಸದ್ಧಿ ಗಳೊಡನೆ ಚಿಂತಿಸಿ ಬರೆದ ಸಂವಿಧಾನ ಇದು. ಪ್ರಪಂಚದಲ್ಲಿಯೇ ಅತ್ಯಂತ ನಿಖರವಾದ ಸಂವಿಧಾನದ ರಚನೆ ಇದು ಎಂದು ಕೊಂಡಾಡಿರುವುದು ಸುಳ್ಳೇ?

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಈಗಲಾದರೂ ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡು, ಉಪ ಮುಖ್ಯಮಂತ್ರಿ ಸ್ಥಾನದಿಂದ ಅವರನ್ನು ವಜಾಗೊಳಿಸಬೇಕು ಎಂದು ರಾಜ್ಯದೆಲ್ಲೆಡೆಯಿಂದ ಪ್ರತಿಭಟನೆಗಳು ನಡೆಯುತ್ತಿರುವ ಸುದ್ದಿಗಳು ಬರುತ್ತಿವೆ. ದಲಿತ ಸಮುದಾಯಗಳು ಡಿಕೆಶಿಯವರ ಹೇಳಿಕೆಯನ್ನು ಖಂಡಿಸಿ ಪ್ರತಿಭಟನೆಗಿಳಿದಿವೆ. ಜಾತಿಗನುಗುಣವಾಗಿ ಮೀಸಲಾತಿ ಮಾಡಲು ಮತ್ತು ನೀಡಲು ಸಾಧ್ಯವಿಲ್ಲ ಎಂದು ಆ ಸಂಘಟನೆಗಳು ಹೇಳಿಕೆ ನೀಡಿವೆ. ದಲಿತ ಸಮುದಾಯದ ಭದ್ರಕೋಟೆ ಆಗಿದ್ದ ಕಾಂಗ್ರೆಸ್ ಪಕ್ಷದ ನಿಲುವು ಈಗೀಗ ಬದಲಾಗುತ್ತಿದೆ ಎಂದು ಪಕ್ಷದ ಕಾರ್ಯಕರ್ತರು ಮನಗಾಣುತ್ತಿದ್ದಾರೆ. ಇದು ಪಕ್ಷಕ್ಕೆ ಒಳ್ಳೆಯದಲ್ಲ ಎಂಬ ನಿಲುವು ಜನತೆಯದಾಗಿದೆ.

–ಬೇಲೂರು.ದ.ಶಂ. ಪ್ರಕಾಶ್, ಮೈಸೂರು.

ಕಾಮಗಾರಿಗೆ ಅಗೆದಿರುವ ಗುಂಡಿ ಮುಚ್ಚಿ

ಮಾನ್ಯರೆ,



ಮೈಸೂರಿನ ಕಾಳಿದಾಸ ರಸ್ತೆಯ ಮಧ್ಯ ಭಾಗದಲ್ಲಿರುವ ಸಿಗ್ನಲ್‌ನ ಬಳಿ ಯಾವುದೋ ಕಾಮಗಾರಿಗಾಗಿ ಅಗೆದು ರಸ್ತೆಯಲ್ಲಿ ಗುಂಡಿಯನ್ನು ಸರಿಯಾಗಿ ಮುಚ್ಚದೆ ಹಾಗೇ ಬಿಡಲಾಗಿದೆ. ಈ ರಸ್ತೆಯಲ್ಲಿ ದಿನವೂ ಸಾವಿರಾರು ವಾಹನಗಳು ಚಲಿಸುತ್ತವೆ.

ಈ ಸಿಗ್ನಲ್‌ನ ತಿರುವಿನಲ್ಲಿ ಈ ಗುಂಡಿಯು ಇರುವುದರಿಂದ ದ್ವಿಚಕ್ರ ವಾಹನ ಸವಾರರು ಈ ತಿರುವಿನಲ್ಲಿ ಆಯತಪ್ಪಿ ಬೀಳುವ ಸಂಭವವಿದೆ. ನಮ್ಮ ಮೈಸೂರಿನಲ್ಲೇ ಪ್ರಸಿದ್ಧಿಯಾದ ಈ ರಸ್ತೆಯ ಸಿಗ್ನಲ್‌ನಲ್ಲಿ ಇರುವ ಉದ್ದನಾದ ಈ ಗುಂಡಿಯನ್ನು ಮುಚ್ಚುವ ಮನಸ್ಸು ಸ್ಥಳೀಯ ವಾರ್ಡ್‌ನ ಅಧಿಕಾರಿಗಳಿಗೆ ಬಾರದಿರುವುದು ದುರದೃಷ್ಟಕರ. ದಯವಿಟ್ಟು ಸಂಬಂಧಪಟ್ಟ ಸ್ಥಳೀಯ ವಾರ್ಡ್‌ನ ಅಧಿಕಾರಿಗಳು ಶೀಘ್ರವೇ ಗುಂಡಿಯನ್ನು ಮುಚ್ಚುವ ಕಾರ್ಯ ಮಾಡಬೇಕಾಗಿ ವಿನಂತಿ. ಈ ತರಹನಾದ ಹಲವು ಗುಂಡಿಗಳು ಮೈಸೂರಿನ ಪ್ರಮುಖ ರಸ್ತೆಗಳಲ್ಲಿ ಇವೆ. ಸಂಬಂಧಪಟ್ಟ ಸ್ಥಳೀಯ ವಾರ್ಡ್‌ನ ಅಧಿಕಾರಿ ವರ್ಗದವರು ದಿನವೂ ಕಂಡೂ ಕಾಣದಂತೆ ಅದೇ ರಸ್ತೆಯಲ್ಲಿ ತಿರುಗಾಡುವ ಬದಲು ಸೂಕ್ತ ರೀತಿಯಲ್ಲಿ ಆಯಾ ವಾರ್ಡಿನ ರಸ್ತೆಗಳನ್ನು ಗುಂಡಿಮುಕ್ತ ರಸ್ತೆಯನ್ನಾಗಿರಿಸಿ ವಾಹನ ಸವಾರರ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಮನವಿ. ಹಾಗೆಯೇ ಓದುಗರು ನಿಮ್ಮ ವಾರ್ಡಿನ ವ್ಯಾಪ್ತಿಯ ರಸ್ತೆಗಳಲ್ಲಿ ಇರುವ ಗುಂಡಿ ಗಳನ್ನು ಸ್ಥಳೀಯ ಅಧಿಕಾರಿಗಳ ಗಮನಕ್ಕೆ ತಂದು ಸೂಕ್ತ ರೀತಿಯ ಪರಿಹಾರ ಕಂಡುಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕಾಗಿದೆ. ನಮ್ಮ ರಸ್ತೆ ನಮ್ಮ ಸುರಕ್ಷತೆ ನಮ್ಮೆಲ್ಲರ ಹೊಣೆ.

–ಮಂಜೇಶ್ ದೇವಗಳ್ಳಿ, ಮೈಸೂರು



ರಾಘವೇಂದ್ರ ಸಿ.ಎಸ್.
ಉಪನ್ಯಾಸಕರು
ಶ್ರೀ ರಾಮಕೃಷ್ಣ ವಿದ್ಯಾಶಾಲಾ, ಮೈಸೂರು
ಮೊ: 9036389640

ಈ ಜೀವನ

ಮಧ್ಯಮ ವರ್ಗದವರ ಬದುಕಿನ ಬವಣೆ

ಈ ಜಗತ್ತು ಅತ್ಯಂತ ಸುಂದರವಾಗಿದೆ. ಕಾರಣ ಇಲ್ಲಿ ಇದ್ದ ಹಾಗೆ ಯಾರು ಇಲ್ಲ. ಈ ಜಗತ್ತು ಇನ್ನೂ ಸುಂದರವಾಗಿದೆ. ಕಾರಣ ಇಲ್ಲಿ ಒಬ್ಬರ ಸ್ಥಿತಿಗತಿ ಮತ್ತೊಬ್ಬರ ಸ್ಥಿತಿಗತಿಗೆ ಹೊಂದುವುದೇ ಇಲ್ಲ. ಅದಕ್ಕಾಗಿಯೇ ಇಲ್ಲಿ ತಾರತಮ್ಯ ಭಾವ ಹೇರಳವಾಗಿದೆ. ಒಬ್ಬ ಚಿನ್ನದ ಚಮಚವನ್ನು ಬಾಯಲ್ಲಿ ಇಟ್ಟುಕೊಂಡು ಹುಟ್ಟಿರುವನೋ ಎಂಬ ಭಾವ ಮನವನ್ನು ಕಲಕಿದರೆ ಮತ್ತೊಂದು ಕಡೆ ಒಂದೊತ್ತಿನ ಊಟಕ್ಕೂ ಪರದಾಡುವ ನಿರ್ಗತಿಕ ಪಾಡು ತ್ರಿಶಂಕುವಿನ ಅತಂತ್ರ ಪರಿಸ್ಥಿತಿಯನ್ನು ಮನದ ಕನ್ನಡಿ ಮುಂದೆ ತಂದು ನಿಲ್ಲಿಸುತ್ತದೆ. ಇಷ್ಟೆಲ್ಲಾ ಪೀಠಿಕೆಯ ಮಾತುಗಳನ್ನು ಉಲ್ಲೇಖಿಸಿದ ಮೂಲಧಾತುವೆಂದರೆ ಈ ನೆಲದ ಬಯಲಲ್ಲಿ ಬಡವ, ಶ್ರೀಮಂತ, ಮಧ್ಯಮ ವರ್ಗದವರೆಂಬ ಮೂರು ವಿವಿಧ ವರ್ಗಗಳಿಗೆ ಸೇರಿರುವ ಜನರು ಕಂಡುಬರುತ್ತಾರೆ. ಶ್ರೀಮಂತರಿಗೆ ಅವರ ಹಣವನ್ನು, ಶ್ರೀಮಂತಿಕೆಯನ್ನು ಉಳಿಸಿಕೊಳ್ಳುವ, ಹೆಚ್ಚಿಸಿಕೊಳ್ಳುವ, ವೃದ್ಧಿಸಿಕೊಳ್ಳುವ ತುಡಿತಗಳಿದ್ದರೆ, ಬಡವರಿಗೆ ತಮ್ಮ ಬಡತನ ಬದಲಾಗಬಹುದೆಂಬ ಭರವಸೆ, ನಾಳೆಯಾದರೂ ಒಳ್ಳೆಯ ಕಾಲ ಬರಬಹುದೆಂಬ ಆಸೆ, ಏನನ್ನು ಬೇಕಾದರೂ ಸಾಧಿಸುವ ಛಲ, ನಂಬಿಕೆ, ಇರುವುದರಲ್ಲಿಯೇ ತೃಪ್ತಿಪಡುವ, ಯಾರಿಗೂ ಕೆಟ್ಟದ್ದನ್ನು ಬಯಸದೇ ಬದುಕು ಬಂದಂತೆ ನಡೆದುಕೊಳ್ಳಬೇಕೆಂಬ ವಿಧಿನಿಯಮವನ್ನು ಪಾಲಿಸುವವರು ತಾವು ಎಂಬಂತೆ ನಶ್ವರವಾದ ಬದುಕಿನಲ್ಲಿ ಶಾಶ್ವತವಾದ ಕನಸಿಗೆ ಆಸೆಪಡುತ್ತಾ ಗಾಳಿಗೋಪುರದಲ್ಲಿ ಗಗನ ಕುಸುಮದ ಪರಿಮಳದಲ್ಲಿ ತಮ್ಮ ಬದುಕನ್ನು ನಡೆಸುತ್ತಲೇ ಇರುತ್ತಾರೆ.

ಈ ಕಡೆ ಶ್ರೀಮಂತರು ಅಲ್ಲದೇ, ಆ ಕಡೆ ಬಡವರು ಎನಿಸಿಕೊಳ್ಳದೇ ಅತಂತ್ರ ಸ್ಥಿತಿಯಲ್ಲಿ ಸಿಲುಕಿ ಪರಿತಪಿಸುವವರು ಮಧ್ಯಮ ವರ್ಗದವರು. ನಮ್ಮ ದೇಶದಲ್ಲಿ ಮಧ್ಯಮವರ್ಗಕ್ಕೆ ಸೇರಿದ ಜನರೇ ಅಧಿಕ. ಅವರ ತಲ್ಲಣಗಳು, ಎತ್ತರವಾಗಿ ಜೀವಿಸುವ ಸಮಸ್ಯೆಗಳು, ಜೀವನವನ್ನು ಕಟ್ಟಿಕೊಳ್ಳಲು ಅನುಭವಿಸುವ ಪರಿತಾಪ, ತಾಪತ್ರಯಗಳು ಯಾವಾಗಲೂ ಅವರ ಕನಸುಗಳನ್ನು ಭಗ್ನಗೊಳಿಸಿ ಯಾಕೆ ಹೀಗೆ? ಎಂಬ ಬ್ರಹ್ಮಾಂಡದ ಪ್ರಶ್ನೆಯನ್ನು ತಂದೊಡ್ಡುತ್ತದೆ.

ನಾಲ್ಕು ಜನ ಏನಂದುಕೊಂಡಾರು: ಮಧ್ಯಮ ವರ್ಗದವರ ಬಹು ಜನರ ಸಮಸ್ಯೆ ಜೀವನವನ್ನು ನಮಗಾಗಿ ಬದುಕದೇ ಇತರರಿಗಾಗಿ ಬದುಕುವುದು. ನಾಲ್ಕು ಜನ ಏನಂದುಕೊಂಡಾರು? ಎಂಬ ಜನವರಿಕೆಯಲ್ಲಿಯೇ ಅವರನ್ನು ಮೆಚ್ಚಿಸುವುದಕ್ಕಾಗಿಯೇ ಕೆಲವೊಮ್ಮೆ ಅಗತ್ಯವಿಲ್ಲದಿದ್ದರೂ ಸಾಲ ಮಾಡಿ ಅವರನ್ನು ತೃಪ್ತಿಪಡಿಸುವ ಕೆಲಸದಲ್ಲಿ ಮುನ್ನುಗ್ಗುವರು. ಮದುವೆಯ ಸಂದರ್ಭದಲ್ಲಂತೂ ಹಣವಿಲ್ಲದಿದ್ದರೂ ನಾಲ್ಕು ಜನರ ಮುಂದೆ ನಮ್ಮ ಪ್ರತಿಷ್ಠೆ ತೋರಿಸಿಕೊಳ್ಳಬೇಕು ಎಂದೋ ಅಥವಾ ಅವರನ್ನು ಸಂತೋಷಪಡಿಸಲೆಂದೋ ನಮ್ಮ ಇತಿ–ಮಿತಿಯನ್ನು ಮೀರಿ ಸಾಲ ಮಾಡುವ ಮಧ್ಯಮವರ್ಗದ ಜನ ಮುಂದೆ ಇದೇ ಕಾರಣಕ್ಕಾಗಿ ಪರಿತಪಿಸುವುದನ್ನು ನೋಡಿದರೆ ನಗುವುದೋ, ಅಳುವುದೋ ತಿಳಿಯದಾಗಿದೆ.

ನಮಗಾಗಿ ಬದುಕುವುದಕ್ಕಿಂತ ಜನರಿಗಾಗಿ ಬದುಕುವವರೇ ಹೆಚ್ಚು. ಎಲ್ಲಿವರೆಗೆ ಈ ಮನೋಭಾವ ಇರುವುದೋ ಅಲ್ಲಿವರೆಗೆ ಸಮಸ್ಯೆ ಇದ್ದೇ ಇರುತ್ತದೆ. ಜನರನ್ನು ಮೆಚ್ಚಿಸಿ ಬಾಳಲು ಯಾರಿಂದಲೂ ಸಾಧ್ಯವಿಲ್ಲ. ಲೋಕೋ ಭಿನ್ನ ರುಚಿಃ ಎಂಬ ಮಾತಿನಂತೆ ಒಬ್ಬರ ಆಲೋಚನೆ, ಅಭಿರುಚಿಗಳು ಬೇರೆ ಬೇರೆಯಾಗಿ ಇರುವುದರಿಂದ ಯಾರನ್ನು ಮೆಚ್ಚಿಸಲು ಸಾಧ್ಯವಾಗದು.ಈ ಸತ್ಯ ಅರ್ಥವಾದ ದಿನ ನಮಗಾಗಿ ನಾವು ಬದುಕುವುದನ್ನು ರೂಢಿಸಿಕೊಳ್ಳಬಹುದು. ಆಗ ನಾಲ್ಕು ಜನರು ಏನಂದುಕೊಂಡಾರು ಎಂಬ ಮನೋಭಾವ ದೂರವಾಗಬಹುದೇನೋ? ಜನ ಮೆಚ್ಚುವುದಕ್ಕಿಂತ ಮನ ಮೆಚ್ಚುವ ರೀತಿಯಲ್ಲಿ ಬದುಕನ್ನು ಕಂಡುಕೊಂಡರೆ ಯೋಗ್ಯವಾದ ಜೀವನ ಸಾಧ್ಯವಾಗುತ್ತದೆ.

ಆಸೆಗಳಿಗೆ ಮಿತಿಯಿಲ್ಲ: ಮಧ್ಯಮವರ್ಗದವರ ಅತೀ ದೊಡ್ಡ ಸಮಸ್ಯೆಗಳಲ್ಲಿ ಆಸೆಯೂ ಒಂದು. ವಸ್ತುಗಳನ್ನಾಗಲೀ, ಪದಾರ್ಥಗಳನ್ನಾಗಲೀ ಖರೀದಿಸಬೇಕು, ಹಣ ಬೇಕು, ಇಷ್ಟ ಪಟ್ಟದ್ದನ್ನು ಪಡೆಯಬೇಕೆಂಬ ಹಂಬಲ ಇದ್ದೇ ಇರುತ್ತದೆ. ಆದರೆ ಆಸೆಗಳಿಗೆ ಮಿತಿ ಎಂಬುದು ಇರುವುದಿಲ್ಲ. ಒಂದು ಆಸೆ ಪೂರ್ಣಗೊಂಡ ನಂತರ ಕ್ಷಣ ಮಾತ್ರದಲ್ಲಿಯೇ ಮತ್ತೊಂದು ಆಸೆ ಉದ್ಭವವಾಗುತ್ತದೆ. ಆತ್ಮ ತೃಪ್ತಿ ಎಂಬುದೇ ಸಿಗಲಾರದು. ಕೆಲವೊಮ್ಮೆ ಅಗತ್ಯವಿಲ್ಲದಿದ್ದರೂ ಆಸೆ ಎಂಬ ಜಿದ್ದಿಗೆ ಬಿದ್ದು ಖರೀದಿಸುವ ವಸ್ತುಗಳಿಗೆ ಹಣವಿಲ್ಲದೇ ಇ.ಎಂ.ಐ ಮುಖಾಂತರ ಖರೀದಿಸಿ ಹಣ ಕಟ್ಟುವುದರಲ್ಲಿಯೇ ಅರ್ಧ ಆಯುಷ್ಯವನ್ನು ಕಳೆದುಕೊಳ್ಳುವ ಪರಿಸ್ಥಿತಿ ಮಧ್ಯಮವರ್ಗದವರದ್ದು.

ಬಡವರು ಹಣವಿಲ್ಲ, ಸಾಲ ಮಾಡಲು ಧೈರ್ಯವಿಲ್ಲ, ಒಂದು



> ನಮಗಾಗಿ ಬದುಕುವುದಕ್ಕಿಂತ ಜನರಿಗಾಗಿ ಬದುಕುವವರೆ ಹೆಚ್ಚು. ಎಲ್ಲಿವರೆಗೆ ಈ ಮನೋಭಾವ ಇರುವುದೋ ಅಲ್ಲಿವರೆಗೆ ಸಮಸ್ಯೆ ಇದ್ದೇ ಇರುತ್ತದೆ. ಜನರನ್ನು ಮೆಚ್ಚಿಸಿ ಬಾಳಲು ಯಾರಿಂದಲೂ ಸಾಧ್ಯವಿಲ್ಲ. ಲೋಕೋ ಭಿನ್ನ ರುಚಿಃ ಎಂಬ ಮಾತಿನಂತೆ ಒಬ್ಬರ ಆಲೋಚನೆ, ಅಭಿರುಚಿಗಳು ಬೇರೆ ಬೇರೆಯಾಗಿ ಇರುವುದರಿಂದ ಯಾರನ್ನು ಮೆಚ್ಚಿಸಲು ಸಾಧ್ಯವಾಗದು. ಈ ಸತ್ಯ ಅರ್ಥವಾದ ದಿನ ನಮಗಾಗಿ ನಾವು ಬದುಕುವುದನ್ನು ರೂಢಿಸಿಕೊಳ್ಳಬಹುದು. ಆಗ ನಾಲ್ಕು ಜನರು ಏನಂದುಕೊಂಡಾರು ಎಂಬ ಮನೋಭಾವ ದೂರವಾಗಬಹುದೇನೋ? ಜನ ಮೆಚ್ಚುವುದಕ್ಕಿಂತ ಮನ ಮೆಚ್ಚುವ ರೀತಿಯಲ್ಲಿ ಬದುಕನ್ನು ಕಂಡುಕೊಂಡರೆ ಯೋಗ್ಯವಾದ ಜೀವನ ಸಾಧ್ಯವಾಗುತ್ತದೆ.

ವೇಳೆ ಸಾಲ ಮಾಡಿದರೂ ತೀರಿಸುವುದಾದರೂ ಹೇಗೆ ಎಂಬ ಪ್ರಶ್ನೆ ಉದ್ಭವಿಸಿ ಇರುವುದರಲ್ಲಿಯೇ ತೃಪ್ತಿಪಡುವ ಕೆಲಸ ಮಾಡಿದರೆ ಮಧ್ಯಮ ವರ್ಗದವರಿಗೆ ಹೇಗಾದರೂ ಸಮಸ್ಯೆಗಳನ್ನು ಮೈ ಮೇಲೆ ತಂದುಕೊಂಡು ಬದುಕು ನೂಕಬೇಕೆಂಬ ಅಲಿಖಿತ ನಿಯಮವನ್ನು ರೂಢಿಸಿಕೊಂಡು ಪರಿತಪಿಸುವ ಪಾಡು ಹೇಳತೀರದು.

ಸ್ವಂತ ನೆಲೆಗಾಗಿ ಪರಿತಪಿಸುವಿಕೆ: ಮನೆ ಅಥವಾ ನೆಲೆ ಬದುಕಿನಲ್ಲಿ ಒದಗಬಹುದಾದ ಜೀವನಾವಶ್ಯಕವಾದ ಅಗತ್ಯ ಅಂಶಗಳಲ್ಲಿ ಒಂದು. ಸ್ಥಿರ ನೆಲೆಗಾಗಿ ಅಲೆದಾಡಿದರೂ ಲಭ್ಯವಾಗದೆ ಇದ್ದಾಗ ಬದುಕಲು ವಿಧಿಯಿಲ್ಲದೆ ಬಾಡಿಗೆ ಮನೆಯ ಮೊರೆ ಹೋಗಬೇಕಾಗುತ್ತದೆ. ಈ ಬಾಡಿಗೆ ಮನೆಯ ನೆರಳು ದೇಹವನ್ನು ತಂಪು ಮಾಡಬಹುದು. ಆದರೆ ಅಂತರಂಗದಲ್ಲಿ ಅದರ ಕಾವು ಮನಸ್ಸನ್ನು ದಹಿಸುತ್ತಲೇ ಇರುತ್ತದೆ. ಜೀವನದ ಉದ್ದಕ್ಕೂ ಬಾಡಿಗೆ ಮನೆಯಲ್ಲಿ ಕಾಲಕಳೆಯುವ ಮಧ್ಯಮವರ್ಗದ ಜನರು ಮನೆ ಮಾಲೀಕರ ಕಾಟಗಳಿಂದ ಬೇಸತ್ತು ಹೇಗಾದರೂ ಸರಿ ಜೀವನದಲ್ಲಿ ನಮ್ಮದೊಂದು ಸೂರು ಮಾಡಿಕೊಳ್ಳಬೇಕು ಎಂಬ ಹಠದಿಂದ ಸ್ವಂತ ಮನೆಯನ್ನು ಕಟ್ಟಿಸಲು ಪರಿತಪಿಸುತ್ತಾರೆ. ಖಾಲಿ ನಿವೇಶನವನ್ನು ಖರೀದಿಸಿ,ಮನೆ ಕಟ್ಟುವ ಕಾಲಕ್ಕಾಗಲೇ ತನ್ನ ಜೀವಿತಾವಧಿಯ ಕಡೆಯ ಘಟ್ಟಕ್ಕೆ ತಲುಪಿ ತಾನೇ ಕಟ್ಟಿಸಿದ ಮನೆಯಲ್ಲಿ ತಾನು ಬಾಳಲಾಗದೇ ಅಥವಾ ಬಾಳಿದರೂ ಮನೆಗಾಗಿ ಖರ್ಚು ಮಾಡಿದ ಹಣವನ್ನು ಸರಿದೂಗಿಸಲು ಇಡೀ ಬದುಕನ್ನೇ ಸಾಗಿಸಬೇಕಾಗಿರುತ್ತದೆ. ಸ್ವಂತ ನೆಲೆಯೊಂದು ಮಾಡಿಕೊಳ್ಳಲೇಬೇಕೆಂಬ ಆಸೆ ಸಹಜವಾದುದು.ಆದರೆ ನಮ್ಮ ಪರಿಸ್ಥಿತಿಗೆ ತಕ್ಕಂತೆ ಸರಿದೂಗಿಸಿಕೊಳ್ಳದಿದ್ದರೆ ಬದುಕು ಮೂರಾಬಟ್ಟೆಯಾಗುವುದರಲ್ಲಿ ಯಾವುದೇ ಅನುಮಾನವಿಲ್ಲ.

ಆರಕ್ಕೇರದ, ಮೂರಕ್ಕಿಳಿಯದ ಬದುಕು: ಬಲವಿರಬೇಕು ಬದುಕಲು ಬೆಂಬಲವಿರಬೇಕು ಜೀವಿಸಲು, ಈ ಬಗೆಯಲ್ಲಿ ಮಧ್ಯಮವರ್ಗದವರ ಬದುಕು ಆರಕ್ಕೇ ಏರುವುದಿಲ್ಲ. ಮೂರಕ್ಕೆ ಇಳಿಯುವುದಿಲ್ಲ. ಇಡೀ ಜೀವನದ ಉದ್ದಕ್ಕೂ ಈ ತರಹದ ಜಂಜಾಟದಲ್ಲಿಯೇ ಕಾಲಕಳೆಯುತ್ತಾರೆ. ಈ ಕಡೆ ಬಡವರು ಆಸೆ ಪಟ್ಟಂತೆ ಬದುಕು ನಡೆಸಲಾಗದು ಎಂದು ಕೈಬಿಡದೆ, ಆ ಕಡೆ ಶ್ರೀಮಂತರು ಎಂದು ಅದ್ದೂರಿಯಾಗಿ ಬಾಳಲು ಆಗದೇ ಮಧ್ಯಮ ವರ್ಗದವರೆನಿಸಿಕೊಂಡು ಜೀವನ ದೂಡುವುದು ಸರ್ವೇಸಾಮಾನ್ಯ. ಎಲ್ಲಿವರೆಗೆ ನಮ್ಮ ಬದುಕನ್ನು ಬೇರೆಯವರೊಂದಿಗೆ ಹೋಲಿಕೆ ಮಾಡಿಕೊಂಡು ಜೀವಿಸುತ್ತೇವೆಯೋ ಅಲ್ಲಿವರೆಗೂ ಈ ಒದ್ದಾಟ ಇದ್ದೇ ಇರುತ್ತದೆ.

ಹಗಲುಗನಸು ಕಾಣುವಿಕೆ: ವೇತನ ಹೆಚ್ಚಾದರೆ ನಾವಂದುಕೊಂಡ ಹಾಗೆ ಬದುಕಬಹುದು ಎಂಬ ಭ್ರಮೆ ಮಧ್ಯಮವರ್ಗದವರಲ್ಲಿದೆ. ವೇತನ ಹೆಚ್ಚಾದಷ್ಟು ಖರ್ಚುಗಳು ಸಹ ಹೆಚ್ಚಾಗುತ್ತವೆ ಎಂಬ ವಾಸ್ತವ ಅರಿವಾಗುವುದೇ ಇಲ್ಲ, ಸತ್ಯ ಅರಿವಾಗುವಷ್ಟರಲ್ಲಿ ಬದುಕು ನಮ್ಮನ್ನು ತುಂಬಾ ದೂರ ತಂದು ನಿಲ್ಲಿಸಿರುತ್ತದೆ. ಇನ್ನು ಕೆಲವರಿಗೆ ಕಡಿಮೆ ಸಮಯದಲ್ಲಿಯೇ ಹೆಚ್ಚು ದುಡಿಯುವ ಆಸೆ, ಅದು ಮಧ್ಯಮವರ್ಗದವರಲ್ಲಂತೂ ಈ ಆಸೆ ತುಸು ಹೆಚ್ಚಾಗಿಯೇ ಇರುತ್ತದೆ. ಹಾಗಾಗಿಯೇ ಹಣವನ್ನು ಹೂಡಿ ಎರಡರಷ್ಟು ಲಾಭ ಮಾಡಬಹುದೆಂಬ ಭರವಸೆಗಳನ್ನು ನೀಡುವವರನ್ನು ಕ್ಷಣ ಮಾತ್ರದಲ್ಲಿಯೇ ನಂಬಿ ಹಣ ನೀಡಿ ಮೋಸ ಹೋಗುತ್ತಾರೆ. ಕಷ್ಟಪಟ್ಟ ಹಣವೇ ಉಳಿಯುವುದಿಲ್ಲ. ಇನ್ನೂ ಅಡ್ಡ ಮಾರ್ಗದಲ್ಲಿ ಸಂಪಾದಿಸಿದ್ದು ಜೊತೆಗಿರಲು ಸಾಧ್ಯವೇ ಇಲ್ಲ, ಈ ಸತ್ಯ ಅರ್ಥಮಾಡಿಕೊಳ್ಳುವುದರೊಳಗೆ ಮೋಸದ ಜಾಲದಲ್ಲಿ ಸಿಲುಕಿಕೊಂಡು ನರಳುತ್ತೇವೆ.

ವಾಸ್ತವ ಅರ್ಥಮಾಡಿಕೊಳ್ಳಲಾರದ ಸ್ನೇಹಿತರು, ಸಂಬಂಧಿಕರು: ಸಾಲ ಮಾಡಿ ಮನೆ ಕಟ್ಟಿಸಿದ್ದರೂ, ಮದುವೆ ಮಾಡಿದ್ದರೂ, ವಾಹನ ಖರೀದಿಸಿದ್ದರೂ, ಗೃಹೋಪಯೋಗಿ ವಸ್ತುಗಳನ್ನು ಖರೀದಿಸಿದ್ದರೂ ಇದ್ಯಾವುದು ಆತ್ಮೀಯರಿಗೆ, ಸ್ನೇಹಿತರಿಗೆ, ಸಂಬಂಧಿಕರಿಗೆ ಅರ್ಥವಾಗುವುದೇ ಇಲ್ಲ. ನಿಮಗೇನು ಬಿಡಿ ಗಂಡ ಹೆಂಡತಿ ಇಬ್ಬರೂ ಕೆಲಸಕ್ಕೆ ಹೋಗುವಿರಿ, ಕೈ ತುಂಬಾ ಸಂಪಾದನೆ ಆಗುತ್ತದೆ ಎಂಬ ಮಾತುಗಳನ್ನಾಡುತ್ತಾ ವಾಸ್ತವದ ಅಂಶ ಮನದಟ್ಟು ಮಾಡಿಸಿದರೂ ನಂಬದ ಕೆಲವು ಸ್ನೇಹಿತರು,ಸಂಬಂಧಿಕರೊಡನೆ ಬದುಕು ಸಾಗಿಸಬೇಕಾದ ಒತ್ತಡ ಮಧ್ಯಮ ವರ್ಗದ ಜನರಲ್ಲಿ ಕಂಡುಬರುತ್ತದೆ.

ಕಾಡುವ ಚಿಂತೆ: ಬದುಕಿನ ಕಡಲಲ್ಲಿ ಸಂಸಾರದ ಹಡಗು ಸಾಗುತ್ತಿರಲಾಗಿ ಬಿರುಗಾಳಿಯ ಅಲೆಗಳು ಎದ್ದಾಗ ಸಂಭವಿಸಬಹುದಾದ ಪರಿಣಾಮಗಳನ್ನು ನೆನೆದು ಮನವು ಚಿಂತೆಯ ಚಿತಾಗ್ನಿಯಲ್ಲಿ ಬೇಯ್ಯುವುದು ಈ ಬಗೆಯ ಚಿಂತೆಗಳಿಗೆ ಯಾವುದೇ ಬಗೆಯ ಅರ್ಥಗಳಿಲ್ಲ. ಚಿಂತೆಗಳೆಲ್ಲ ಚಿಂತನೆಗಳಾಗಿ ಪರಿವರ್ತಿತವಾದರೆ ಬದುಕಿನ ಬಂಡಿ ಸರಾಗವಾಗಿ ಮುಂದೆ ಹೋಗಲು ಸಾಧ್ಯವಾಗುತ್ತದೆ. ಸಮಸ್ಯೆಗಳನ್ನು ಸವಾಲಾಗಿ ಸ್ವೀಕರಿಸಿ ಮುಂದೆ ಸಾಗಿದಾಗಲೇ ಸ್ವಚ್ಛಂದ ಬದುಕು ಸಾಧ್ಯ. ಸಾಮಾನ್ಯವಾಗಿ ನಮ್ಮ ಬದುಕನ್ನು ಬೇರೆಯವರ ದೃಷ್ಟಿಕೋನದಿಂದ ನೋಡುತ್ತ ಅವರಂತೆ ನಾವಿಲ್ಲ ಎಂದು ಪರಿತಪಿಸುವ ಗುಣ ಎಲ್ಲರಲ್ಲೂ ಇದ್ದರೂ ಮಧ್ಯಮ ವರ್ಗದ ಜನರಲ್ಲಿ ತುಸು ಹೆಚ್ಚಾಗಿಯೇ ಇರುತ್ತದೆ.

ನಮಗಿಂತ ಕೆಳಗಿರುವವರನ್ನು ನೋಡಿ ಅವರಿಗಿಂತ ನಮ್ಮ ಬದುಕು ಚೆನ್ನಾಗಿದೆ ಸಾಕು ಎಂಬ ತೃಪ್ತಿ ಬರುವ ಬದಲು ನಮಗಿಂತ ಮೇಲೆ ಇರುವವರನ್ನು ನೋಡಿ ಅವರಂತೆ ನಾವಿಲ್ಲ, ನಮ್ಮ ಹತ್ತಿರ ನಿವೇಶನ ಇಲ್ಲ, ಮನೆ ಇಲ್ಲ, ಹಣ ಇಲ್ಲ... ಹೀಗೆ ಇಲ್ಲದಿರುವುದರ ಪಟ್ಟಿಯೇ ಹೆಚ್ಚಾಗಿ ಕಾಣುವುದೇ ವಿನಃ ನಮ್ಮ ಪರಿಸ್ಥಿತಿ ಏನು, ನಮಗಿರುವ ಸಮಸ್ಯೆಗಳೇನು? ಏನು ಮಾಡಿದರೆ ಬದುಕನ್ನು ಭಿನ್ನವಾಗಿ ನೋಡಬಹುದು? ಇರುವುದರಲ್ಲಿ ಹೇಗೆ ಸಂತೋಷದಿಂದ ಬಾಳಬಹುದೆಂಬ ಕನಿಷ್ಠ ಯೋಚನೆಯನ್ನು ನಾವು ಮಾಡುವುದಿಲ್ಲ.ಈ ಕಾರಣದಿಂದಲೇ ಜೀವನದುದ್ದಕ್ಕೂ ಚಿಂತೆ ಚಿತೆಯಾಗಿ ಕಾಡುವುದು.

ನಮ್ಮ ಜೀವನವನ್ನು ಬೇರೆಯವರೊಂದಿಗೆ ಹೋಲಿಕೆ ಮಾಡಿಕೊಂಡು ಅವರಂತೆ ನಾವಿಲ್ಲವಲ್ಲ ಎಂದು ಪರಿತಪಿಸುವ ಬದಲು ಮೊದಲಿದ್ದ ನಮ್ಮ ಸ್ಥಿತಿಗೂ, ಪ್ರಸ್ತುತ ನಾವಿರುವ ಸ್ಥಿತಿಗೂ ಆಗಿರುವ ಬದಲಾವಣೆಯನ್ನು ಗಮನಿಸಿ ಇರುವುದರಲ್ಲಿಯೇ ಸಮಾಧಾನವನ್ನು ಕಾಣುವ ಮನೋಭಾವ ಬಂದಾಗ ಮಾತ್ರ ಚಿಂತೆ ಎಂಬ ಚಿತೆಯಿಂದ ಪಾರಾಗಬಹುದು. ನೊಂದವರ ನೋವ ನೋಯದವರೆತ್ತ ಬಲ್ಲರೊ? ಎಂಬ ಅಕ್ಕಮಹಾದೇವಿಯ ಮಾತಿನಂತೆ ನೊಂದವರ ನೋವನ್ನು ಹತ್ತಿರದಿಂದ ಬಲ್ಲವನಾಗಿ, ಮಧ್ಯಮ ವರ್ಗದಲ್ಲಿಯೇ ಹುಟ್ಟಿ ಬಂದಿರುವ ಅವರ ತಲ್ಲಣಗಳನ್ನು ಬರಹ ರೂಪದಲ್ಲಿಡುವ ಸಣ್ಣ ಪ್ರಯತ್ನ ಮಾಡಿರುವೆನು.

ಮಧ್ಯಮ ವರ್ಗದವರಯ್ಯ ಮಧ್ಯಮ ವರ್ಗದವರು
ಅನ್ನ, ನೀರು, ಸೂರಿಗಾಗಿ ಕಾದು ಕೂತವರು,
ಕನಸುಗಳ ಕಾಣುವವರು, ಆಸೆಗಳ ಗೋಪುರದಲ್ಲಿ
ಮರೀಚಿಕೆಯ ಕಳಸವನ್ನು ದಿಟ್ಟಿಸಿ ನೋಡುವವರು,
ಇರುವಷ್ಟು ಹಾಸಿಗೆಯಲ್ಲಿ ಕಾಲು ಚಾಚಿ ಬದುಕುವವರು,
ಕಂಡ ಕನಸುಗಳ ನನಸು ಮಾಡಲಾಗದೆ ಪರಿತಪಿಸುವವರು
ಸಿಕ್ಕ ಅಲ್ಪ ತೃಪ್ತಿಯಲ್ಲಿಯೇ ಕಾಲವನ್ನು ಕಳೆಯುವವರು,
ಬರಲಿರುವ ನಾಳೆಗಳ ನೆನೆದು ಇಂದಿನ
ದುಃಖವನ್ನು ಮರೆಯುವವರಯ್ಯ ಮಧ್ಯಮ ವರ್ಗದವರು



ಮೈಸೂರಿನ ಟಿ.ಕೆ. ಬಡಾವಣೆಯ ಶ್ರೀ ರಾಘವೇಂದ್ರ ಸ್ವಾಮಿ ಮಠದಲ್ಲಿ ಪ್ರತಿ ಗುರುವಾರ ಮಧ್ಯಾಹ್ನ ಉಚಿತ ಪ್ರಸಾದ ವಿತರಣೆ ಕಾರ್ಯಕ್ಕೆ ಮತ್ತೆ ಚಾಲನೆ ನೀಡಲಾಯಿತು.

ರಾಘವೇಂದ್ರ ಮಠದಲ್ಲಿ ಉಚಿತ ಪ್ರಸಾದ ವಿತರಣೆಗೆ ಮರು ಚಾಲನೆ

ಮೈಸೂರು, ಮಾ.27(ಬಿಎಲ್‌ಯು)– ನಗರದ ಟಿ.ಕೆ.ಬಡಾವಣೆಯ ಶ್ರೀ ರಾಘವೇಂದ್ರಸ್ವಾಮಿ ಮಠದಲ್ಲಿ ಪ್ರತಿ ಗುರುವಾರ ಮಧ್ಯಾಹ್ನ ಉಚಿತ ಪ್ರಸಾದ ವಿತರಣೆ ಮಾಡುವ ಕಾರ್ಯಕ್ಕೆ ಗುರುವಾರ ಮತ್ತೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ಗುರು ರಾಘವೇಂದ್ರ ಸೇವಾ ಟ್ರಸ್ಟ್‌ನ ಟ್ರಸ್ಟಿ ಕೆ.ಆರ್. ಶಿವಶಂಕರ್, ರಾಯರ ಮಠದಲ್ಲಿ ಮೊದಲಿನಿಂದಲೂ ಉಚಿತ ಪ್ರಸಾದ ವಿತರಣೆ ಮಾಡಲಾಗುತ್ತಿತ್ತು. ಆದರೆ ಕೋವಿಡ್ ಸಂದರ್ಭದಲ್ಲಿ ಸ್ಥಗಿತ ಮಾಡಲಾಗಿತ್ತು. ಈಗ ದಾನಿ ಶ್ರೀಹರಿ ಅವರು ಪ್ರಸಾದದ ದೇಣಿಗೆ ನೀಡುವುದರಿಂದ ಪ್ರಸಾದ ವಿತರಣೆ ಮರು ಚಾಲನೆಗೊಳ್ಳಲು ಸಾಧ್ಯವಾಗಿದೆ ಎಂದು ತಿಳಿಸಿದರು. ಈಗ 300 ಭಕ್ತರಿಗೆ ಪ್ರಸಾದ ವಿತರಣೆ ಮಾಡಲಾಗುತ್ತಿದ್ದು, ಮುಂದಿನ ದಿನದಲ್ಲಿ ಮತ್ತಷ್ಟು ಭಕ್ತರಿಗೆ ವಿತರಿಸಲಾಗುವುದು ಎಂದು ಭರವಸೆ ನೀಡಿದರು. ಈ ವೇಳೆ ಟ್ರಸ್ಟ್ ಅಧ್ಯಕ್ಷ ಎಚ್.ಎನ್.ಸುಬ್ಬರಾವ್, ಕಾರ್ಯಾಧ್ಯಕ್ಷ ಎಸ್.ಜಯರಾಮ್, ಉಪಾಧ್ಯಕ್ಷ ದ್ವಾರಕಾನಾಥ್, ಸಹಾಯಕರಾದ ವೆಂಕಟಾಚಲ, ಪಾರ್ಥಸಾರಥಿ ಇನ್ನಿತರರು ಉಪಸ್ಥಿತರಿದ್ದರು.

ಭಾರತವನ್ನ ಭ್ರಷ್ಟಾಚಾರ ಮುಕ್ತ ದೇಶವನ್ನಾಗಿಸಲು ಎಲ್ಲರೂ ಯತ್ನಿಸಬೇಕು

● ಕುದೇರು ಮಠದ ಶ್ರೀ ಗುರುಶಾಂತ ಸ್ವಾಮಿ ಅಭಿಮತ ● ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ, ಕಾರ್ಯಾಚರಣೆ ಸಮಿತಿ ಮೈಸೂರು ಜಿಲ್ಲಾ ಘಟಕ ಉದ್ಘಾಟನೆ


ಮೈಸೂರು,ಮಾ.27(ಎಂಟಿವೈ)– ಭ್ರಷ್ಟಾಚಾರ ನಿರ್ಮೂಲನೆ ಮಾಡಿ, ಭ್ರಷ್ಟಾಚಾರ ಮುಕ್ತ ದೇಶವನ್ನಾಗಿ ರೂಪಿಸಲು ಎಲ್ಲರೂ ಪ್ರಾಮಾಣಿಕವಾಗಿ ಹೋರಾಡಬೇಕು ಎಂದು ಕುದೇರು ಮಠದ ಶ್ರೀ ಗುರುಶಾಂತ ಸ್ವಾಮಿ ಸಲಹೆ ನೀಡಿದ್ದಾರೆ.

ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಖಾಸಗಿ ಹೋಟೆಲ್ ಸಭಾಂಗಣದಲ್ಲಿ ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಕಾರ್ಯಾಚರಣೆ ಸಮಿತಿ ಮೈಸೂರು ಜಿಲ್ಲಾ ಘಟಕವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಎಲ್ಲೆಡೆ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಇದರಿಂದ ದೇಶದ ಅಭಿವೃದ್ಧಿ ಕುಂಠಿತವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಭ್ರಷ್ಟಾಚಾರವನ್ನು ಎಲ್ಲರೂ ಸೇರಿ ನಿರ್ಮೂಲನೆ ಮಾಡಬೇಕು. ಭ್ರಷ್ಟಾಚಾರ ರಹಿತ ಭಾರತವನ್ನು ರೂಪಿಸಲು ಎಲ್ಲರೂ ಪಣ ತೊಡಬೇಕು. ಮೈಸೂರಲ್ಲಿ ನೂತನವಾಗಿ ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಕಾರ್ಯಾಚರಣೆ ಸಮಿತಿಯ ಘಟಕ ಆರಂಭಿಸಿರುವುದು ಶ್ಲಾಘನೀಯ. ಈ ಸಂಘಟನೆಯ ಚಟುವಟಿಕೆ ಮುಂದುವರೆಸಿಕೊಂಡು ಹೋಗಬೇಕು ಎಂದರು.

ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಕಾರ್ಯಾಚರಣೆ ಸಮಿತಿಯ ದಕ್ಷಿಣ ಭಾರತ ಘಟಕದ ಅಧ್ಯಕ್ಷ ಡಾ.ಎ.ಎಸ್.ಭದ್ರಶೆಟ್ಟಿ ಮಾತನಾಡಿ, ದೇಶದಲ್ಲಿ ಭ್ರಷ್ಟಾಚಾರ, ಅನಾಚಾರ, ಅತ್ಯಾಚಾರದಂತಹ ಘಟನೆಗಳು ಹೆಚ್ಚಾಗುತ್ತಿವೆ. ಇಂತಹ ಘಟನೆಗಳಿಂದ ದೇಶದ ಏಳಿಗೆಗೆ ಧಕ್ಕೆಯಾಗುತ್ತಿದೆ. ತಲೆತಗ್ಗಿಸುವ ಘಟನೆಗಳು ಮರುಕಳಿಸದಂತೆ ಹೋರಾಟ ಮಾಡಬೇಕಾಗಿದೆ. ಕಾರ್ಯಾಂಗ, ನ್ಯಾಯಾಂಗ, ಶಾಸಕಾಂಗ ವ್ಯಾಪ್ತಿಯಲ್ಲೂ ಭ್ರಷ್ಟಾಚಾರ ಎದ್ದು ಕಾಣುತ್ತಿದೆ. ಈ ಮೂರು ಅಂಗಗಳು ಸ್ವಚ್ಛಗೊಂಡು, ಪಾರದರ್ಶಕವಾಗಿ ಸೇವೆ ನೀಡಿದರೆ ದೇಶದ ಪರಿಸ್ಥಿತಿ ಸುಧಾರಿಸುತ್ತದೆ. ಆಗ ಮಾತ್ರ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿದಂತಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಅಖಿಲ ಭಾರತ ಮಹಿಳಾ ಸಮಾವೇಶ ಸಂಸ್ಥೆಯ ಅಧ್ಯಕ್ಷೆ ಹೇಮಲತಾ ಮಾತನಾಡಿ, ಭ್ರಷ್ಟಾಚಾರ ಬಹುತೇಕ ಎಲ್ಲಾ ಕ್ಷೇತ್ರಗಳಲ್ಲೂ ರಾಕ್ಷಸ ಪ್ರವೃತ್ತಿಯಂತೆ ಬೆಳೆಯುತ್ತಲೇ ಇದೆ. ಜನ ಅತಿಯಾಸೆಗೆ ಜೋತು ಬೀಳುತ್ತಿದ್ದಾರೆ. ಇದರಿಂದ ಎಲ್ಲೆಡೆ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಅದನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಎಲ್ಲರೂ ಪಣ ತೊಡಬೇಕು. ಸರ್ಕಾರಿ ಸೇರಿದಂತೆ ಎಲ್ಲಾ ವಲಯದಲ್ಲೂ ನಿಸ್ವಾರ್ಥದಿಂದ ಸೇವೆ ಸಲ್ಲಿಸಬೇಕು. ನಮ್ಮಂತೆ ಎಲ್ಲರೂ ಎಂಬ ಭಾವನೆ ಮೂಡಬೇಕು. ಯಾವುದೇ ಹೋರಾಟ ಮಾಡಬೇಕಾದರೆ ಸಂಘಟನೆ ಅಗತ್ಯ. ಯಾವುದೇ ತೀರ್ಮಾನ ಕೈಗೊಳ್ಳುವ ಸಂದರ್ಭದಲ್ಲಿ ಸಂಘಟನಾ ಶಕ್ತಿಯಾಗಿ ನಿಲ್ಲಬೇಕು. ಆಗ ಮಾತ್ರ ಹೋರಾಟಗಳು ಯಶಸ್ವಿಯಾಗಲು ಸಾಧ್ಯ ಎಂದರು.

ಕಾರ್ಯಕ್ರಮದಲ್ಲಿ ಲೋಕಾಯುಕ್ತ ಡಿವೈಎಸ್ಪಿ ಮ್ಯಾಥ್ಯೂ ಥಾಮಸ್, ನಿವೃತ್ತ ಪೊಲೀಸ್ ಅಧಿಕಾರಿ ಪಿ.ಸಿ.ಸ್ವಾಮಿ, ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನಾ ಸಂಸ್ಥೆ ರಾಜ್ಯಾಧ್ಯಕ್ಷ ಕೆ.ಪ್ರಭಾಕರ್, ಪ್ರಧಾನ ಕಾರ್ಯದರ್ಶಿ ದಯಾನಂದ, ಮೈಸೂರು ಘಟಕದ ಅಧ್ಯಕ್ಷ ಎಸ್.ಗುರುಸ್ವಾಮಿ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಹೆಚ್.ಪಿ.ಶ್ರೀಕಂಠಮೂರ್ತಿ, ಬೆಂಗಳೂರು ಘಟಕದ ಅಧ್ಯಕ್ಷ ಎಂ.ಎ.ಶ್ರೀನಿವಾಸ್, ನಗರ ಕಾರ್ಯದರ್ಶಿ ಎಂ.ಉಮೇಶ್, ಉಪಾಧ್ಯಕ್ಷರಾದ ಎಸ್.ಸಿದ್ಧಲಿಂಗಪ್ಪ, ಬಿ.ನಂಜುಂಡಸ್ವಾಮಿ, ಬಿ.ಆರ್. ರಾಮೇಗೌಡ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ರಾಷ್ಟ್ರೀಯ ಭ್ರಷ್ಟಾಚಾರ ನಿರ್ಮೂಲನೆ ಹಾಗೂ ಕಾರ್ಯಾಚರಣೆ ಸಮಿತಿಯ ಮೈಸೂರು ಜಿಲ್ಲಾ ಘಟಕವನ್ನು ಕುದೇರು ಮಠದ ಶ್ರೀ ಗುರುಶಾಂತ ಸ್ವಾಮಿ ಉದ್ಘಾಟಿಸಿದರು

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರಿನಲ್ಲಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಸಮಾರಂಭ

ವಿಜ್ಞಾನ-ತಂತ್ರಜ್ಞಾನ ಕಲಿಕೆ, ನಾವಿನ್ಯತೆಯೊಂದಿಗೆ ಮುನ್ನಡೆಯಿರಿ

- ವಿದ್ಯಾರ್ಥಿಗಳಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಟಿಪ್ಸ್
- ಸೋಲಿಗೆ ಅಂಜದಿರಿ, ಯಶಸ್ಸಿನತ್ತ ಮುನ್ನಡೆಯಿರಿ
- ಹೊಸ ಚಿಂತನೆ ನಾಯಕತ್ವದ ಸಾಮರ್ಥ್ಯ ನೀಡುತ್ತದೆ
- ಶಿಕ್ಷಕರು ಜ್ಞಾನ ನೀಡಿದರೆ, ಪೋಷಕರು ಬೆನ್ನೆಲುಬಾಗುತ್ತಾರೆ

ಮೈಸೂರು, ಮಾ.27(ಬಿಎಲ್ ಯು)– ಇಂದಿನ ಡಿಜಿಟಲ್ ಹಾಗೂ ಕೃತಕ ಬುದ್ಧಿಮತ್ತೆ ಯುಗದಲ್ಲಿ ವಿಜ್ಞಾನ ಮತ್ತು ಸುಧಾರಿತ ತಂತ್ರಜ್ಞಾನಗಳು ಜಗತ್ತಿಗೆ ಹೊಸ ಆಯಾಮ ನೀಡುತ್ತಿದ್ದು, ನಾವು ಕಲಿಕೆಯ ಜೊತೆಗೆ ನಾವೀನ್ಯತೆ ಹಾಗೂ ಸೃಜನಶೀಲತೆಯೊಂದಿಗೆ ಮುನ್ನಡೆಯಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಲಹೆ ನೀಡಿದರು.

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಇಂದು ವಿಶ್ವವಿದ್ಯಾನಿಲಯದ 20 ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪ್ರಧಾನ ಮಾಡಿ ಮಾತನಾಡಿದ ಅವರು, ವಿಶ್ವದಲ್ಲಿ ಪರಿಚಯಗೊಳ್ಳುವ ಹೊಸ ವಿಚಾರಗಳನ್ನು ಕಲಿಯುವುದರ ಜೊತೆಗೆ ನಾಯಕತ್ವದ ಸಾಮರ್ಥ್ಯ ಕೂಡ ಬೆಳೆಸಿಕೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಹೋರಾಟ ಮಾಡುವ ಸಂದರ್ಭದಲ್ಲಿ ವೈಫಲ್ಯತೆಗಳಾಗುತ್ತದೆ. ಹಾಗೆಂದ ಮಾತ್ರಕ್ಕೆ ಸೋಲಿನಿಂದ ಧೃತಿಗೆಡಬೇಡಿ. ಯಾವುದೇ ಕಾರಣಕ್ಕೂ ನಿಮ್ಮ ಕನಸು ಬಿಟ್ಟುಕೊಡದೆ, ತೊಂದರೆಗಳಿಗೆ ಅಂಜದೆ ಯಶಸ್ಸು ಸಾಧಿಸಲು ಹೊಸ ಸಾಧ್ಯತೆಗಳ ಹುಡುಕಾಟದಲ್ಲಿ ಮುಂದುವರೆಯಿರಿ ಎಂದು ಥಾವರ್ ಚಂದ್ ಗೆಹ್ಲೋಟ್ ವಿದ್ಯಾರ್ಥಿಗಳಲ್ಲಿ ಹುರುಪು ತುಂಬಿದರು.

ಸೋಲು ಯಶಸ್ಸಿನ ಮೆಟ್ಟಿಲು ಎಂಬ ಆಲ್ಬರ್ಟ್ ಐನ್ ಸ್ಟಿನ್ ಮಾತುಗಳಿಂದ ಪ್ರಭಾವಿತರಾಗಿ. ಸೋಲು ಮತ್ತು ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಯಶಸ್ಸಿನ ಹಾದಿಯಲ್ಲಿ ಸಾಗಿರಿ. ಹಿಂತಿರುಗಿ ನೋಡದೆ ಗೆಲುವಿನ ಮೆಟ್ಟಿಲು ಹತ್ತುತ್ತಾ ಹೋಗಿ ಎಂದು ಉತ್ತೇಜಿಸಿದರು.



ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಗುರುವಾರ ನಡೆದ ವಿಶ್ವವಿದ್ಯಾನಿಲಯದ 20 ನೇ ವಾರ್ಷಿಕ ಘಟಿಕೋತ್ಸವದಲ್ಲಿ ಶಿಕ್ಷಣ ಕ್ಷೇತ್ರದಲ್ಲಿನ ಸಾಧನೆ– ಸೇವೆಗಾಗಿ ಕಲ್ಬುರ್ಗಿಯ ಶರಣ ಬಸವೇಶ್ವರ ಸಂಘದ ಡಾ.ದಾಕ್ಷಾಯಿಣಿ ಅಪ್ಪ, ಸಮಾಜ ಸೇವಾ ಕ್ಷೇತ್ರದ ಸಾಧನೆಗಾಗಿ ಸಿ.ಎಂ.ಇರ್ಫಾನುಲ್ಲಾ ಷರೀಫ್ ಅವರಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಗೌರವ ಡಾಕ್ಟರೇಟ್ ನೀಡಿ ಅಭಿನಂದಿಸಿದರು.

ವಿದ್ಯಾವಂತ ಯುವಕರಿಂದ ಸಮಾಜದಲ್ಲಿ ಧನಾತ್ಮಕ ಬದಲಾವಣೆ ಕಾಣಬಹುದು. ವಿಜ್ಞಾನ, ತಂತ್ರಜ್ಞಾನ, ವ್ಯಾಪಾರ, ಕಲೆ ಅಥವಾ ಸಮಾಜ ಸೇವೆ ಸೇರಿದಂತೆ ಯಾವುದೇ ಕ್ಷೇತ್ರವಾಗಲಿ ಯುವಕರ ಪ್ರಯತ್ನದಿಂದ ದೇಶ ಪ್ರಗತಿ ಸಾಧಿಸಲಿದೆ ಎಂದು ಅಭಿಪ್ರಾಯಪಟ್ಟ ಥಾವರ್ ಚಂದ್ ಗೆಹ್ಲೋಟ್ ಅವರು, ಆಯಾ ಕಾಲಕ್ಕೆ ಬದಲಾಗಿ ಯಶಸ್ವಿ ವ್ಯಕ್ತಿಯಾಗಬೇಕು. ಈ ಮೂಲಕ ಹೊಸ ಚಿಂತನೆಗಳಿಂದ ನಾಯಕತ್ವ ಸಾಮರ್ಥ್ಯ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯ ದೂರ ಶಿಕ್ಷಣದ ಮೂಲಕ ಕಲಿಕೆಯ ಅವಕಾಶ ಒದಗಿಸುತ್ತಿದೆ. ಈ ಮೂಲಕ ವೈಯಕ್ತಿಕ ಮತ್ತು ವೃತ್ತಿಪರ ಆಕಾಂಕ್ಷೆ ಪೂರೈಸಿಕೊಳ್ಳಲು ಅನುಕೂಲವಾಗುತ್ತದೆ ಎಂದರು.

ವಿದ್ಯಾರ್ಥಿಗಳ ಬದುಕಿನಲ್ಲಿ ಶಿಕ್ಷಕರು ಜ್ಞಾನ ನೀಡಿ ಒಳ್ಳೆಯ ಹಾದಿ ತೋರಿಸುತ್ತಾರೆ. ಪೋಷಕರು ನಿಮ್ಮ ಯಶಸ್ವಿಗಾಗಿ ಬೆನ್ನೆಲುಬಾಗಿ ನಿಲ್ಲುತ್ತಾರೆ. ಈ ಹಿನ್ನೆಲೆಯಲ್ಲಿ ಶಿಕ್ಷಕರು ಹಾಗೂ ಪೋಷಕರನ್ನು ಗೌರವಿಸಬೇಕು ಎಂದು ತಿಳಿಸಿದರು.

ವಿಶ್ವವಿದ್ಯಾನಿಲಯದ ಜ್ಞಾನ ಮುಂದಿನ ಪೀಳಿಗೆಗೆ ಸ್ಫೂರ್ತಿ ಮೂಲವಾಗಿರಲಿ. ಏಕ್ ಭಾರತ್–ಶ್ರೇಷ್ಠ ಭಾರತ್ ಹಾಗೂ ಸ್ವಾವಲಂಬಿ ಭಾರತ್ ನಿರ್ಮಾಣಕ್ಕಾಗಿ ಪಣತೊಡಿ. ಈ ಮೂಲಕ ರಾಷ್ಟ್ರದ ಪ್ರಗತಿಗೆ ಕಾರಣೀಭೂತರಾಗಿ ಎಂದು ಹೇಳಿದರು.

ಶಿಕ್ಷಣ ವ್ಯಕ್ತಿಯ ಜೀವನದಲ್ಲಿ ಹೊಸ ಆಲೋಚನೆ, ಜ್ಞಾನ ಮತ್ತು ಸಾಧ್ಯತೆ ತುಂಬುವ ನಿರಂತರ ಪ್ರಯಾಣವಾಗಿದೆ ಎಂದು ಶಿಕ್ಷಣದ ಮಹತ್ವ ಮನದಟ್ಟು ಮಾಡಿ ಹೇಳಿದ ಥಾವರ್ ಚಂದ್ ಗೆಹ್ಲೋಟ್, ಸ್ವಾತಂತ್ರ್ಯ ನಂತರ ದೇಶ ಅಭೂತಪೂರ್ವ ಪ್ರಗತಿ ಸಾಧಿಸಿದೆ. ವಿಶ್ವದ ಆರ್ಥಿಕತೆಯಲ್ಲಿ ಭಾರತ 5ನೇ ಸ್ಥಾನದಲ್ಲಿದೆ. ಈ ಹಿನ್ನೆಲೆ ಮತ್ತಷ್ಟು ಪ್ರಗತಿ ಸಾಧಿಸಲು ಎಲ್ಲರೂ ಕಂಕಣ ಬದ್ಧರಾಗಿ ಶ್ರಮ ವಿನಿಯೋಗಿಸಬೇಕು ಎಂದು ಸಲಹೆ ನೀಡಿದರು.

ಶಿಕ್ಷಣ ಕ್ಷೇತ್ರದ ಸೇವೆಗಾಗಿ ಕಲ್ಬುರ್ಗಿಯ ಶರಣ ಬಸವೇಶ್ವರ ಸಂಘದ ಡಾ.ದಾಕ್ಷಾಯಿಣಿ ಅಪ್ಪ, ಸಮಾಜ ಸೇವಾ ಕ್ಷೇತ್ರದ ಸಾಧನೆಗಾಗಿ ಸಿ.ಎಂ.ಇರ್ಫಾನುಲ್ಲಾ ಷರೀಫ್ ಅವರಿಗೆ ಥಾವರ್ ಚಂದ್ ಗೆಹ್ಲೋಟ್ ಗೌರವ ಡಾಕ್ಟರೇಟ್ ನೀಡಿ ಗೌರವಿಸಿದರು.

ತರುವಾಯ ವಿವಿಧ ನಿಕಾಯಗಳಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರದವಿ ಪ್ರಧಾನ ಮಾಡಲಾಯಿತು.

ಕೌಶಲ್ಯ ಅಭಿವೃದ್ಧಿ ಮತ್ತು ವಾಣಿಜ್ಯೋದ್ಯಮ ಸಚಿವಾಲಯದ ಕಾರ್ಯದರ್ಶಿ ಅತುಲ್ ಕುಮಾರ್ ತಿವಾರಿ ಅವರು ಈ ವೇಳೆ ಘಟಿಕೋತ್ಸವ ಭಾಷಣ ಮಾಡಿದರು.

ಕುಲಪತಿ ಪ್ರೊ. ಶರಣಪ್ಪ ವಿ.ಹಲಸೆ, ಕುಲಸಚಿವರಾದ ಡಾ.ಹೆಚ್.ವಿಶ್ವನಾಥ್, ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ್, ಡೀನ್ ಡಾ.ಲಕ್ಷ್ಮಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ದೂರ ಶಿಕ್ಷಣದಲ್ಲಿ ಭಾರತ ಜಾಗತಿಕ ನಾಯಕನಾಗಲು ಸಜ್ಜಾಗಿದೆ

ಹೆಚ್ಚುತ್ತಿರುವ ಇಂಟರ್ ನೆಟ್ ಲಭ್ಯತೆ ಹಾಗೂ ಇ– ಕಲಿಕಾ ವೇದಿಕೆಗಳ ಅಭಿವೃದ್ಧಿಯಿಂದ ಭಾರತವು ದೂರ ಶಿಕ್ಷಣ ಕ್ಷೇತ್ರದಲ್ಲಿ ಜಾಗತಿಕ ನಾಯಕನಾಗಲು ಸಜ್ಜಾಗಿದೆ ಎಂದು ರಾಷ್ಟ್ರೀಯ ವೃತ್ತಿಪರ ಶಿಕ್ಷಣ ಮತ್ತು ತರಬೇತಿ ಮಂಡಳಿಯ ಕಾರ್ಯದರ್ಶಿ ಅತುಲ್ ಕುಮಾರ್ ತಿವಾರಿ ಅಭಿಪ್ರಾಯಪಟ್ಟರು.

ಕರ್ನಾಟಕ ಮುಕ್ತ ವಿಶ್ವವಿದ್ಯಾನಿಲಯದದಲ್ಲಿ ಇಂದು ಘಟಿಕೋತ್ಸವ ಭಾಷಣ ಮಾಡಿದ ಅವರು, ಭಾರತದಲ್ಲಿ ಆನ್‌ಲೈನ್ ಮತ್ತು ದೂರ ಶಿಕ್ಷಣ ಭೂದೃಶ್ಯವು ವೇಗವಾಗಿ ವಿಕಸನಗೊಳ್ಳುತ್ತಿದೆ ಎಂದರು. ರಾಷ್ಟ್ರೀಯ ಶಿಕ್ಷಣ ನೀತಿಯಲ್ಲಿ ತಂತಜ್ಞಾನ ಚಾಲಿತ ಶಿಕ್ಷಣದ ಪ್ರಾಮುಖ್ಯತೆಯನ್ನು ಒತ್ತಿ ಹೇಳಿದೆ. ಈ ಮೂಲಕ ಡಿಜಿಟಲ್ ಕಲಿಕೆಯಲ್ಲಿ ನಾವಿನ್ಯತೆ ಬೆಳೆಸುತ್ತಿದೆ. ಇದಲ್ಲದೆ ಉನ್ನತ ಶಿಕ್ಷಣ ಸಂಸ್ಥೆಗಳ ವ್ಯಾಪ್ತಿಯನ್ನು ವಿಸ್ತರಿಸುತ್ತಿದೆ ಎಂದು ಅತುಲ್ ಕುಮಾರ್ ತಿವಾರಿ ಹೇಳಿದರು.

ಮುಕ್ತ ದೂರ ಶಿಕ್ಷಣ ಮತ್ತು ಆನ್ ಲೈನ್ ಶಿಕ್ಷಣವು ಜಾಗತಿಕವಾಗಿ ಅಭೂತಪೂರ್ವ ಬೆಳವಣಿಗೆ ಕಾಣುತ್ತಿದೆ. ಆನ್ ಲೈನ್ ಕೋರ್ಸ್, ಕೃತಕ ಬುದ್ಧಿಮತ್ತೆ ಸೇರಿದಂತೆ ಹಲವು ರೀತಿಯ ಶಿಕ್ಷಣ ವಿಧಾನಗಳು ಹೆಚ್ಚು ಸಂವಾದಾತ್ಮಕ ಮತ್ತು ಆಕರ್ಷಕವಾಗಿ ಮಾಡಿದೆ. ವಿಶ್ವದ ಹಲವು ದೇಶಗಳು ಆನ್ ಲೈನ್ ಕಲಿಕೆಯನ್ನು ತಮ್ಮ ರಾಷ್ಟ್ರೀಯ ಶಿಕ್ಷಣ ನೀತಿಗಳಲ್ಲಿ ಸಂಯೋಜಿಸಿದೆ ಎಂದು ಹೇಳಿದರು.

ಶಿಕ್ಷಣವು ಪ್ರಗತಿಯ ಅಡಿಪಾಯವಾಗಿದ್ದು, ಆನ್ ಲೈನ್ ಕಲಿಕೆಯೊಂದಿಗೆ ಮುಕ್ತ ದೂರ ಶಿಕ್ಷಣವು ಜ್ಞಾನವನ್ನು ವಿಸ್ತರಣೆ ಮಾಡುತ್ತಿದೆ. ಕೆಲಸ ಮಾಡುವ ವೃತ್ತಿಪರರು, ಗೃಹಿಣಿಯರು, ದೂರ ಪ್ರದೇಶಗಳ ಕಲಿಕಾರ್ಥಿಗಳು ಮತ್ತು ಸಾಂಪ್ರದಾಯಿಕ ಶೈಕ್ಷಣಿಕ ಮಾರ್ಗಗಳನ್ನು ಅನುಸರಿಸಲು ಸಾಧ್ಯವಾಗದವರಿಗೆ ಉನ್ನತ ಶಿಕ್ಷಣವನ್ನು ಪ್ರವೇಶಿಸುವಂತೆ ಮಾಡುವಲ್ಲಿ ಇಂತಹ ಮುಕ್ತ ವಿಶ್ವವಿದ್ಯಾನಿಲಯಗಳು ಪ್ರಮುಖ ಪಾತ್ರ ವಹಿಸಿದೆ ಎಂದು ತಿಳಿಸಿದರು.

ರಾಜ್ಯಪಾಲರ ಸಿಟ್ಟು, ತಬ್ಬಿಬ್ಬಾದ ಅಧಿಕಾರಿಗಳು

ಪದವಿ ಸರ್ಟಿಫಿಕೇಟ್ ನೀಡುವ ವೇಳೆ ತಪ್ಪಾಗಿರುವುದನ್ನು ಗಮನಿಸಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಿಟ್ಟಾದ ಪ್ರಸಂಗ ಇಂದು ನಡೆಯಿತು.

ಪದವಿ ಪಡೆಯುವ ವಿದ್ಯಾರ್ಥಿಗಳ ಹೆಸರನ್ನು ಪಟ್ಟಿಯಲ್ಲಿರುವಂತೆ ಓದಿ ಅವರು ವೇದಿಕೆಗೆ ಬಂದ ಸಂದರ್ಭದಲ್ಲಿ ಹೆಸರು ಖಚಿತಪಡಿಸಿಕೊಂಡು ಸರ್ಟಿಫಿಕೇಟ್ ಪಡೆಯಲು ರಾಜ್ಯಪಾಲರ ಬಳಿ ಕಳುಹಿಸುವುದು ವಾಡಿಕೆ.

ಆದರೆ ಕಾರ್ಯಕ್ರಮದ ಆಯೋಜಕರು ಅಸಮರ್ಪಕ ರೀತಿ ಪಟ್ಟಿ ಸಿದ್ಧ ಮಾಡಿಕೊಂಡು, ಅಭ್ಯರ್ಥಿಗಳು ವೇದಿಕೆಗೆ ಬರುವಂತೆ ಹೇಳುತ್ತಿದ್ದರು. ಒಬ್ಬರ ಹೆಸರು ಕರೆದಾಗ ಮತ್ತ್ಯಾರೊ ಬಂದು ಪದವಿ ಸರ್ಟಿಫಿಕೇಟ್ ಪಡೆಯುತ್ತಿದ್ದರು.

ಇದರಿಂದ ಸ್ವತಃ ರಾಜ್ಯಪಾಲರೆ ಪದವಿ ಪಡೆದ ವಿದ್ಯಾರ್ಥಿಯ ಹೆಸರು ಖಚಿತಪಡಿಸಿಕೊಂಡು ಸರ್ಟಿಫಿಕೇಟ್ ನೀಡಬೇಕಾದ ಅನಿವಾರ್ಯತೆ ಎದುರಾಯಿತು.

ಇದರ ಜೊತೆಗೆ ಪದವಿ ನೀಡುವ ಪ್ರಕ್ರಿಯೆ ಕೂಡ ವಿಳಂಬವಾಗುತ್ತಿತ್ತು. ಇದರಿಂದ ರಾಜ್ಯಪಾಲರು ಇರಿಸು–ಮುರಿಸುಗೊಳಗಾಗಿ ಕೋಪದಿಂದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಹಾಲಿನ ದರ ಏರಿಕೆ ಬೆನ್ನಲ್ಲೇ ಕಾಫಿ ಟೀ ದರವೂ ಹೆಚ್ಚಳ

ಬೆಂಗಳೂರು, ಮಾ.27– ಕರ್ನಾಟಕದಲ್ಲಿ ನಂದಿನಿ ಹಾಲಿನ ದರ ಏರಿಕೆಗೆ ಸರ್ಕಾರ ಅನುಮೋದನೆ ನೀಡಿರುವ ಹಿನ್ನೆಲೆ, ಕಾಫಿ ಮತ್ತು ಟೀ ಬೆಲೆಯೂ ಹೆಚ್ಚಳವಾಗುವ ಸಾಧ್ಯತೆ ಎದುರಾಗಿದೆ. ಈ ಬಗ್ಗೆ ಬೆಂಗಳೂರು ಹೋಟೇಲ್ ಮಾಲೀಕರ ಸಂಘವು ತಮ್ಮ ನಿರ್ಧಾರವನ್ನು ಸ್ಪಷ್ಟಪಡಿಸಿದ್ದು, ಒಂದು ಕಪ್ ಕಾಫಿ ಅಥವಾ ಟೀ ದರವನ್ನು 2–3 ರೂಪಾಯಿಗಳಷ್ಟು ಹೆಚ್ಚಿಸುವ ತೀರ್ಮಾನಕ್ಕೆ ಬಂದಿದೆ.



ಬೆಂಗಳೂರು ಹೋಟೇಲ್ ಮಾಲೀಕರ ಸಂಘದ ಕಾರ್ಯದರ್ಶಿ ವೀರೇಂದ್ರ ಕಾಮತ್ ಮಾಧ್ಯಮಕ್ಕೆ ನೀಡಿದ ಹೇಳಿಕೆಯಲ್ಲಿ, ಬಹುತೇಕ ಹೋಟೇಲ್‌ಗಳಲ್ಲಿ ಕಾಫಿ ಮತ್ತು ಟೀ ತಯಾರಿಸಲು ನಂದಿನಿ ಹಾಲನ್ನೇ ಬಳಸಲಾಗುತ್ತದೆ. ಹಾಲಿನ ದರ ಏರಿಕೆಯಿಂದಾಗಿ ಕಾಫಿ ತಯಾರಿಕೆಯ ಹೆಚ್ಚುವರಿ ವೆಚ್ಚವನ್ನು ಭರಿಸಲು ದರ ಹೆಚ್ಚಿಸುವುದು ಅನಿವಾರ್ಯವಾಗಿದೆ ಎಂದು ತಿಳಿಸಿದ್ದಾರೆ. ಇದರ ಜೊತೆಗೆ ಕಾಫಿ ಪುಡಿಯ ದರವೂ ಇತ್ತೀಚೆಗೆ ಏರಿಕೆಯಾಗಿದೆ ಎಂಬುದನ್ನು ಸಂಘದ ಮಾಜಿ ಅಧ್ಯಕ್ಷ ಪಿ.ಸಿ.ರಾವ್ ಒಪ್ಪಿಕೊಂಡಿದ್ದಾರೆ. ಕಾಫಿ ಪುಡಿಯ ರೇಟ್ ಏರಿದಾಗಲೂ ನಾವು ಸುಮ್ಮನಿದ್ದೆವು. ಆದರೆ ಈಗ ಹಾಲಿನ ದರ ಏರಿಕೆಯೊಂದಿಗೆ ಇದನ್ನು ಮುಂದುವರಿಸುವುದು ಕಷ್ಟವಾಗಿದೆ ಎಂದು ಅವರು ಹೇಳಿದ್ದಾರೆ.

ದಿನಸಿ ಸಾಮಗ್ರಿಗಳ ದರವೂ ಏರಿಕೆಯಾಗುತ್ತಿರುವುದರಿಂದ ಒಟ್ಟಾರೆ ವೆಚ್ಚದ ಒತ್ತಡ ಹೆಚ್ಚಾಗಿದೆ. ಈ ಎಲ್ಲಾ ಕಾರಣಗಳಿಂದಾಗಿ ನಾವು ದರ ಹೆಚ್ಚಿಸುವ ಅನಿವಾರ್ಯ ಪರಿಸ್ಥಿತಿಯಲ್ಲಿದ್ದೇವೆ ಎಂದು ವೀರೇಂದ್ರ ಕಾಮತ್ ಸ್ಪಷ್ಟಪಡಿಸಿದ್ದಾರೆ.

ಈ ದರ ಏರಿಕೆಯಿಂದ ಗ್ರಾಹಕರಲ್ಲಿ ಅಸಮಾಧಾನ ಮೂಡುವ ಸಾಧ್ಯತೆ ಇದೆ. ಆದರೆ, ಹೋಟೇಲ್ ಮಾಲೀಕರು ತಮ್ಮ ವ್ಯಾಪಾರವನ್ನು ಉಳಿಸಿಕೊಳ್ಳಲು ಈ ನಿರ್ಧಾರ ಕೈಗೊಂಡಿರುವುದಾಗಿ ಹೇಳಿಕೊಂಡಿದ್ದಾರೆ. ನಮಗೂ ಇದು ಖುಷಿಯ ವಿಷಯವಲ್ಲ, ಆದರೆ ವೆಚ್ಚವನ್ನು ಸರಿದೂಗಿಸಲು ಬೇರೆ ದಾರಿ ಇಲ್ಲ ಎಂದು ಪಿ.ಸಿ.ರಾವ್ ಹೇಳಿದ್ದಾರೆ.

ಬೇರೆಲ್ಲಾ ರಾಜ್ಯಕ್ಕಿಂತ ನಮ್ಮಲ್ಲಿ ಬೆಲೆ ಕಡಿಮೆ

ಹಾಲಿನ ಬೆಲೆ ಏರಿಕೆಗೆ ಸಿಎಂ ಸಿದ್ದರಾಮಯ್ಯ ಸಮರ್ಥನೆ

ಬೆಂಗಳೂರು, ಮಾ.27– ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ನಂದಿನಿ ಹಾಲಿನ ಬೆಲೆಯಲ್ಲಿ ಬರೋಬ್ಬರಿ 9 ರೂಪಾಯಿ ಏರಿಕೆ ಮಾಡಿದ್ದಾರೆ. ಈ ಬಾರಿ ದಾಖಲೆ ಎನ್ನುವಂತೆ 4 ರೂಪಾಯಿ ಏರಿಕೆ ಮಾಡಿ ಸಾಮಾನ್ಯ ಜನರ ಮೇಲೆ ಬರೆ ಹಾಕಲಾಗಿದೆ. ಈ ಬಾರಿಯೂ ಬೆಲೆ ಏರಿಕೆ ಮಾಡಿದ್ದಕ್ಕೆ ಸಿಎಂ ಸಿದ್ಧರಾಮಯ್ಯ ಸಮರ್ಥನೆಗೆ ಇಳಿದಿದ್ದಾರೆ.



ಜನಾಕ್ರೋಶದ ನಡುವೆ ಟ್ವೀಟ್ ಮಾಡಿರುವ ಸಿಎಂ ಸಿದ್ದರಾಮಯ್ಯ, ಏಪ್ರಿಲ್ 1ರಿಂದ ರಾಜ್ಯದಲ್ಲಿ ನಂದಿನಿ ಹಾಲಿನ ದರವು ರೂ.4 ಹೆಚ್ಚಳವಾಗಲಿದ್ದು, ಇದರಲ್ಲಿ ಸರ್ಕಾರ ಅಥವಾ ಕೆಎಂಎಫ್ ಸಂಸ್ಥೆಗೆ ಲಾಭ ಗಳಿಕೆ ಮಾಡಿಕೊಡುವ ಯಾವುದೇ ಉದ್ದೇಶವಿಲ್ಲ. ಇಲ್ಲಿ ಏರಿಕೆಯಾಗುವ ದರದ ಲಾಭವು ರೈತರನ್ನು ತಲುಪಲಿದೆ. ದರ ಏರಿಕೆಯ ನಂತರವೂ ಒಂದು ಲೀಟರ್ ಹಾಲಿನ ಬೆಲೆ ರೂ.46 ಆಗಲಿದ್ದು, ಇದು ಬೇರೆಲ್ಲಾ ರಾಜ್ಯಗಳಿಗಿಂತಲೂ ಕಡಿಮೆಯಿರಲಿದೆ. ನಾಡಿನ ಲಕ್ಷಾಂತರ ಹೈನುಗಾರರ ಬದುಕಿಗೆ ಬಲ ತುಂಬುವ ಏಕೈಕ ಉದ್ದೇಶದ ಈ ಪ್ರಯತ್ನಕ್ಕೆ ಸಾರ್ವಜನಿಕರು ಬೆಂಬಲವಾಗಿ ನಿಲ್ಲುತ್ತೀರೆಂಬ ವಿಶ್ವಾಸ ನಮಗಿದೆ ಎಂದು ಭಾರವನ್ನು ಜನರ ಮೇಲೆ ಹೊರಿಸಿದ್ದಾರೆ.

ಹಾಲಿನ ದರ ಏರಿಕೆ ಹಿಂಪಡೆಯಲು ಆರ್.ಅಶೋಕ್ ಆಗ್ರಹ

ಬೆಂಗಳೂರು, ಮಾ.27–ಬಡ ಮತ್ತು ಮಧ್ಯಮ ವರ್ಗದ ಜನರ ಮೇಲೆ ಕಿಂಚಿತ್ತು ಕನಿಕರ ಇದ್ದರೆ, ಕೂಡಲೇ ಹಾಲಿನ ದರ ಏರಿಕೆ ಆದೇಶವನ್ನು ಹಿಂಪಡೆಯಬೇಕು ಎಂದು ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ್ ಒತ್ತಾಯಿಸಿದ್ದಾರೆ.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಕ್ಕೆ ಬಂದ ಮೇಲೆ 20 ತಿಂಗಳಲ್ಲಿ ಮೂರು ಬಾರಿ ಹಾಲಿನ ದರವನ್ನು ಏರಿಸಿದ್ದಾರೆ. ಇವರ ಅವಧಿಯಲ್ಲಿ ಒಟ್ಟು ರೂ.9 ಹೆಚ್ಚಿಸಿದಂತಾಗಿದೆ ಎಂದು 'ಎಕ್ಸ್'ನಲ್ಲಿ ಹೇಳಿದ್ದಾರೆ.

2023 ರ ಆಗಸ್ಟ್‌ನಲ್ಲಿ ರೂ.3 ಹೆಚ್ಚಳ ಮಾಡಲಾಗಿತ್ತು, 2024 ರ ಜೂನ್‌ನಲ್ಲಿ ರೂ.2, ಈಗ ರೂ.4 ಏರಿಕೆ ಮಾಡಲಾಗಿದೆ. ಈಗಾಗಲೇ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ, ಗಗನಕ್ಕೇರಿರುವ ದಿನ ಬಳಕೆ ವಸ್ತುಗಳ ಬೆಲೆ ಏರಿಕೆಯಿಂದ ಜನ ಕಂಗಾಲಾಗಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಹಾಲಿನ ದರ ಏರಿಸಿ ಮತ್ತೊಮ್ಮೆ ಬರೆ ಎಳೆದಿದ್ದಾರೆ ಎಂದು ಅವರು ಕಿಡಿಕಾರಿದ್ದಾರೆ. ಒಂದು ವೇಳೆ ಗ್ರಾಹಕರ ಮೇಲೆ ಹೊರೆ ಹೊರಿಸುವುದು ಅನಿವಾರ್ಯವಾದರೆ ಹೆಚ್ಚಳ ಮಾಡಿರುವ 4 ರೂಗಳನ್ನು ನೇರವಾಗಿ ಹಾಲು ಉತ್ಪಾದಕರ ಕೈ ಸೇರುವಂತೆ ನೋಡಿಕೊಳ್ಳಿ. ಆಡಳಿತ ವೆಚ್ಚ ಮತ್ತೊಂದು ವೆಚ್ಚ ಎಂದು ಅತ್ತ ರೈತರಿಗೂ ಲಾಭವಿಲ್ಲದೆ ಇತ್ತ ಗ್ರಾಹಕರ ಜೇಬಿಗೂ ಕತ್ತರಿ ಹಾಕಿದರೆ ಸರ್ಕಾರದ ವಿರುದ್ಧ ಬೀದಿಗಿಳಿದು ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಮೈಸೂರು-ಕುಶಾಲನಗರ ಹೆದ್ದಾರಿಯ ಪ್ಯಾಕೇಜ್ 3ರ ಹುಣಸೂರು–ಪಿರಿಯಾಪಟ್ಟಣ ನಡುವೆ ಕಾಮಗಾರಿಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಅನುಮೋದನೆ

- ಸಂಸದ ಯದುವೀರ ಒಡೆಯರ್ ಮಾಹಿತಿ
- ಏಪ್ರಿಲ್ 2ನೇ ವಾರದಲ್ಲಿ ಕಾಮಗಾರಿ ಪ್ರಾರಂಭ

ಮೈಸೂರು,ಮಾ.27(ಪಿಎಂ)– ಮೈಸೂರು–ಕುಶಾಲನಗರ ಹೆದ್ದಾರಿಯ ವ್ಯಾಪ್ತಿಯ ಪ್ಯಾಕೇಜ್ 3ರ ಹುಣಸೂರಿನಿಂದ ಪಿರಿಯಾಪಟ್ಟಣದವರೆಗಿನ ಕಾಮಗಾರಿ ಪ್ರಾರಂಭಿಸಲು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಕೇಂದ್ರ ಕಚೇರಿ ಅನುಮೋದನೆ ನೀಡಿದೆ. ಏಪ್ರಿಲ್ ಎರಡನೇ ವಾರದಲ್ಲಿ ಕಾಮಗಾರಿ ಪ್ರಾರಂಭಗೊಳ್ಳಲಿದೆ.

ಮೈಸೂರು–ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಈ ವಿಷಯ ತಿಳಿಸಿದ್ದು, ಈ ಯೋಜನೆ ಬಹಳ ಸಮಯದಿಂದ ಸ್ಥಗಿತಗೊಂಡಿತ್ತು ಎಂದು ಅವರು ತಿಳಿಸಿದ್ದಾರೆ. ಈ ಯೋಜನೆ ಸಂಬಂಧ ಅಂತಿಮ ಅನುಮೋದನೆ ಸಿಕ್ಕಿರುವುದು ನನ್ನ ಪರಿಶ್ರಮಕ್ಕೆ ಫಲ ಸಿಕ್ಕಂತಾಗಿದೆ. ಸದರಿ ಯೋಜನೆಯ ಅನುಮೋದನೆಗೆ ಕಾರಣಕರ್ತರಾದ ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರಿಗೆ ವಿಶೇಷ ಧನ್ಯವಾದ ಅರ್ಪಿಸುತ್ತೇನೆ ಎಂದು ತಿಳಿಸಿದ್ದಾರೆ.

ನಿತಿನ್ ಗಡ್ಕರಿ ಅವರೊಂದಿಗೆ ನನ್ನ ಇತ್ತೀಚೆಗಿನ ಭೇಟಿ ವೇಳೆ, ನಾನು ಯೋಜನೆಯ ವಿವರಗಳು ಮತ್ತು ಯೋಜನೆಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಚರ್ಚಿಸಿದ್ದೆ. ಈ ವೇಳೆ ಅವರು ಶೀಘ್ರದಲ್ಲಿ ಯೋಜನೆಗೆ ಸಂಬಂಧಿಸಿದ ಕಡತಗಳನ್ನು ವಿಲೇ ಮಾಡಿಸಿ ಕಾಮಗಾರಿಗೆ ಅಂತಿಮ ಅನುಮೋದನೆ ನೀಡುವ ಭರವಸೆ ನೀಡಿದ್ದರು.



ಇತ್ತೀಚೆಗೆ ಸಂಸದ ಯದುವೀರ್ ಒಡೆಯರ್ ಅವರು ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿ ಮಾಡಿ ಯೋಜನೆ ಬಗ್ಗೆ ಚರ್ಚಿಸಿದ್ದರು.

ಸದರಿ ಯೋಜನೆಯು ಸಂಬಂಧಿಸಿದ ಪ್ರದೇಶಕ್ಕೆ ಪ್ರವೇಶ ಕಲ್ಪಿಸುವಲ್ಲಿ ಸುಧಾರಣೆ ತರಲಿದ್ದು, ಒಟ್ಟಾರೆ ಅಭಿವೃದ್ಧಿಗೆ ಪೂರಕವಾಗಲಿದೆ. ನನ್ನ ಕ್ಷೇತ್ರದ ಅಭಿವೃದ್ಧಿಗೆ ನಾನು ಸದಾ ಬದ್ಧವಾಗಿದ್ದು, ಕ್ಷೇತ್ರದ ಜನರ ಜೀವನ ಮಟ್ಟ ಸುಧಾರಿಸಲು ಶ್ರಮಿಸಲಿದ್ದಾನೆ ಎಂದು ಅವರು ತಿಳಿಸಿದ್ದಾರೆ.

ಹಣ ಗುಳುಂ ಮಾಡಿದವರ ಪರ ಶಾಸಕ ಹರೀಶ್‌ಗೌಡರ ಹೋರಾಟ; ರೈತರ ಪರ ಅಲ್ಲ

ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್ ಪ್ರತಿಕ್ರಿಯೆ

ಮೈಸೂರು, ಮಾ.27(ಎಂಕೆ)– ಶಾಸಕ ಜಿ.ಡಿ.ಹರೀಶ್‌ಗೌಡ ನೇತೃತ್ವದಲ್ಲಿ ನಿನ್ನೆ ಎಂಡಿಸಿಸಿ ಬ್ಯಾಂಕ್ ಎದುರು ನಡೆದ ರೈತರ ಹೋರಾಟ ಕುರಿತು ಪ್ರತಿಕ್ರಿಯಿಸಿರುವ ಮಾಜಿ ಶಾಸಕ ಹೆಚ್.ಪಿ.ಮಂಜುನಾಥ್, ಸೊಸೈಟಿಯಲ್ಲಿ ಹಣಗುಳುಂ ಮಾಡಿದವರ ಪರವಾಗಿ ಶಾಸಕ ಹರೀಶ್ ಗೌಡರ ಹೋರಾಟವೇ ಹೊರತು ರೈತರ ಪರವಾಗಿ ಅಲ್ಲ ಎಂದು ಆರೋಪಿಸಿದರು.



ಮಂಜುನಾಥ್

> ಹನಗೋಡು ಸೊಸೈಟಿಯಲ್ಲಿ 4 ಕೋಟಿ ರೂ.ಅವ್ಯವಹಾರ ನಡೆದಿದೆ. ರೈತರು ಕಟ್ಟಿರುವ ಹಣವನ್ನು ಅಲ್ಲಿನ ಕಾರ್ಯದರ್ಶಿಯೇ ಕೊಂಡೊಯ್ದಿದ್ದಾನೆ. ಸತ್ತವರ ಹೆಸರಿನಲ್ಲೂ ಸಾಲ ಮಂಜೂರು ಮಾಡಿ ತಿಂದಿದ್ದು, ಇದೀಗ ಸತ್ತವರ ಮಕ್ಕಳು ಕುಟುಂಬದ ಸದಸ್ಯರಿಗೆ ನೋಟಿಸ್‌ಗಳು ಬಂದಿವೆ.
> – ಹೆಚ್.ಪಿ.ಮಂಜುನಾಥ್, ಮಾಜಿ ಶಾಸಕ

ಜಲದರ್ಶಿನಿ ಅತಿಥಿ ಗೃಹದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿದ ಅವರು, ಹುಣಸೂರಿನ ಹಾಲಿ ಶಾಸಕರು ಅನಗತ್ಯವಾಗಿ ನನ್ನನ್ನು ಎಳೆದು ತಂದಿದ್ದಾರೆ. ಅವರು ಎಲ್ಲಿಯೂ ನನ್ನ ಹೆಸರನ್ನು ಪ್ರಸ್ತಾಪ ಮಾಡಿಲ್ಲ. ಆದರೆ, ಹದಿನೈದು ವರ್ಷ ಅಧಿಕಾರ ನಡೆಸಿದವರು ಎಂದು ಹೇಳಿದ್ದಾರೆ. ನನ್ನ ಹದಿನೈದು ವರ್ಷಗಳ ಅವಧಿಯಲ್ಲಿ ಹಲವು ಜನಪರ ಕಾರ್ಯಗಳನ್ನು ಮಾಡಿದ್ದೇನೆ. 2008ರಲ್ಲಿ ಗೊಬ್ಬರಕ್ಕೆ ಅಭಾವ ಉಂಟಾದಾಗ ಹುಣಸೂರು ರೈತರಿಗೆ ವೈಯಕ್ತಿಕವಾಗಿ 36 ಲಕ್ಷ ರೂ. ವೆಚ್ಚದಲ್ಲಿ 27 ಸೊಸೈಟಿಗಳಿಗೆ ಗೊಬ್ಬರ ಪೂರೈಕೆ ಮಾಡಿರುವ ನಾನು ರೈತ ವಿರೋಧಿನಾ? ಎಂದು ಪ್ರಶ್ನಿಸಿದರು.

ದೇವರಾಜ ಅರಸು ಅವರ ಕಾಲಿನ ಧೂಳಿಗೂ ನಾವು ಸಮವಲ್ಲ. ಅರಸುರವರು ಕ್ಷೇತ್ರಕ್ಕೆ 4 ಏತ ನೀರಾವರಿ ಯೋಜನೆ ತಂದಿದ್ದರು. ನಾನು 11 ಏತ ನೀರಾವರಿ ಯೋಜನೆ ಮಾಡಿದ್ದೇನೆ. 21 ಸಾವಿರ ಹೆಕ್ಟೇರ್‌ಗೆ ನೀರು ಕೊಟ್ಟಿದ್ದೇನೆ. ನಾಲೆಗಳ ಆಧುನೀಕರಣದ ಮೂಲಕ 38 ಸಾವಿರ ಹೆಕ್ಟೇರ್ ಪ್ರದೇಶದ ರೈತರಿಗೆ ಅನುಕೂಲ ಮಾಡಿದ್ದೇನೆ. ಉಂಡುವಾಡಿ ಯೋಜನೆ ತಂದಿದ್ದೇ ನಾನು. ಕೆರೆಗಳಿಗೆ ನೀರು ತುಂಬುವ ಯೋಜನೆ ಜಾರಿಗೊಳಿಸಿದೆ. ಈಗಲೂ ತಾಲೂಕಿನ ಎಲ್ಲಾ ಕೆರೆಗಳಿಗೂ ನೀರು ಇದೆ. ರೈತರಿಗೆ ನಾನು ಇಷ್ಟೆಲ್ಲಾ ಮಾಡಿದ್ದೇನೆ ಎಂದು ವಿವರಿಸಿದರು.

ಹರೀಶ್‌ಗೌಡರು, ಧರ್ಮಾಪುರ ಮತ್ತು ಹೆಗ್ಗಂದೂರು ಸೊಸೈಟಿಗಳು ಹಾಗೂ ಕೇವಲ 91 ಜನರಿಗೋಸ್ಕರವೇ ಹೋರಾಟ ಮಾಡಿದ್ದಾರೆಯೇ ಹೊರತು ಕ್ಷೇತ್ರದಲ್ಲಿರುವ ಎಲ್ಲಾ ಸಹಕಾರಿ ಬ್ಯಾಂಕ್‌ಗಳ ಪರವಾಗಿ ಅಲ್ಲ. ರೈತ ಕಟ್ಟಿದ ಹಣವನ್ನು ಸೆಕ್ರೆಟರಿಗಳು ತಿಂದು ಕೊಳ್ಳುತ್ತಿದ್ದಾರೆ. ರೈತರು ಸಾಲ ತೀರಿಸಿದ್ದರೂ ಸಾಲ ಸಿಗುತ್ತಿಲ್ಲ. ಹಣ ಗುಳುಂ ಮಾಡಿರುವವರ ಪರವಾಗಿ ಇವರು ಹೋರಾಟ ಮಾಡಿದ್ದಾರೆ. ಸೊಸೈಟಿ ಸೆಕ್ರೆಟರಿಗಳ ರಕ್ಷಣೆ ಮಾಡಲು ಹೋರಾಟ ಮಾಡಿದ್ದಾರೆ. ಇವರ ಹೋರಾಟ ರೈತರಿಗಾಗಿ ನಡೆದಿಲ್ಲ. ಧರ್ಮಾಪುರ ಸೊಸೈಟಿಯಲ್ಲಿ ಆಡಿಟ್ ನಡೆದಿಲ್ಲ. ಆಡಿಟ್ ನಡೆಯದೇ ಸಾಲ ಹೇಗೆ ಕೊಡುತ್ತಾರೆ ಎಂದು ಪ್ರಶ್ನಿಸಿದರು.

ರಂಗಭೂಮಿ ಕಲಾವಿದರಲ್ಲಿ ಒಗ್ಗಟ್ಟಿನಿಂದ ಇರಬೇಕೆಂಬ ಧ್ಯೇಯ ಕಡಿಮೆ

- ಕರ್ನಾಟಕ ನಾಟಕ ಅಕಾಡೆಮಿ ಮಾಜಿ ಅಧ್ಯಕ್ಷೆ ಮಾಲತಿ ಸುಧೀರ್ ಬೇಸರ
- ವಿಶ್ವ ರಂಗಭೂಮಿ ದಿನಾಚರಣೆ
- ರಂಗಕರ್ಮಿಗಳಿಗೆ ರಂಗ ಗೌರವ ಪ್ರದಾನ



ಮೈಸೂರಿನ ರಂಗಾಯಣದ ಭೂಮಿಗೀತದಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿಶ್ವ ರಂಗಭೂಮಿ ದಿನಾಚರಣೆಯಲ್ಲಿ ರಂಗಕರ್ಮಿಗಳಿಗೆ ರಂಗ ಗೌರವ ಪುರಸ್ಕಾರ ನೀಡಲಾಯಿತು.

ಮೈಸೂರು,ಮಾ.27(ಪಿಎಂ)– ರಂಗಭೂಮಿ ಕಲಾವಿದರಲ್ಲಿ ಒಗ್ಗಟ್ಟಿನಿಂದ ಇರಬೇಕೆಂಬ ಧ್ಯೇಯ ಕಡಿಮೆಯಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ ಹಿರಿಯ ರಂಗ ಕಲಾವಿದರೂ ಆದ ಕರ್ನಾಟಕ ನಾಟಕ ಅಕಾಡೆಮಿ ಮಾಜಿ ಅಧ್ಯಕ್ಷೆ ಮಾಲತಿ ಸುಧೀರ್, ಎಲ್ಲರೂ ಒಂದಾಗಿ ಸಾಗಿದರೆ ಒಂದು ವಿಶ್ವವನ್ನೇ ನಾವು ಕಟ್ಟಬಹುದು ಎಂಬುದನ್ನು ರಂಗಭೂಮಿಯ ಇಂದಿನ ಪೀಳಿಗೆ ಅರಿತುಕೊಳ್ಳಬೇಕು ಎಂದು ಸಲಹೆ ನೀಡಿದರು.

ಮೈಸೂರಿನ ರಂಗಾಯಣದ ಭೂಮಿಗೀತದಲ್ಲಿ ಕರ್ನಾಟಕ ನಾಟಕ ಅಕಾಡೆಮಿ ಮತ್ತು ಮೈಸೂರು ಜಿಲ್ಲಾ ಹವ್ಯಾಸಿ ರಂಗಕರ್ಮಿಗಳ ವೇದಿಕೆ ಜಂಟಿ ಆಶ್ರಯದಲ್ಲಿ ಗುರುವಾರ ಹಮ್ಮಿಕೊಂಡಿದ್ದ ವಿಶ್ವ ರಂಗಭೂಮಿ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ವಿಶ್ವ ರಂಗಭೂಮಿ ದಿನಾಚರಣೆಯನ್ನು ನಾವೆಲ್ಲರೂ ಆಚರಿಸಬೇಕು. ಆದರೆ ಇಂದು ರಂಗಭೂಮಿ ಕಲಾವಿದರಲ್ಲಿ ಒಗ್ಗಟ್ಟು ಕಡಿಮೆ ಇರುವುದೇ ಹೆಚ್ಚಾಗಿದೆ. ಇಂತಹ ಸನ್ನಿವೇಶ ದೂರವಾಗಬೇಕು. ಎಲ್ಲರೂ ಒಂದಾಗಿ ರಂಗಭೂಮಿ ಕಟ್ಟಬೇಕು. ಪರಸ್ಪರ ಅರ್ಥ ಮಾಡಿಕೊಳ್ಳುವ ಮನೋಭಾವ ಬೆಳೆಸಿಕೊಳ್ಳಬೇಕು. ಇಲ್ಲವಾದರೆ ಮುಂದುವರೆಯಲು ಸಾಧ್ಯವಿಲ್ಲ ಎಂದು ಎಚ್ಚರಿಸಿದರು.

ರಂಗಭೂಮಿ ಅಂದರೆ ಕೇವಲ ನಮಗೆ–ನಿಮಗೆ ಮಾತ್ರವಲ್ಲ, ಅದು ವಿಶ್ವಕ್ಕೇ ಸಂಬಂಧಿಸಿದ್ದು. ರಂಗಭೂಮಿ, ಗಂಡು ಭೂಮಿ ಇಲ್ಲಿ ಯಾರೇ ಬರಲಿ ಅವರು ಗೆದ್ದು ಹೋಗಬೇಕೇ ಹೊರತು, ಸೋತು ಹೋಗಲು ಸಾಧ್ಯವಿಲ್ಲ. ಸಿನಿಮಾದಲ್ಲಿ ಒಬ್ಬ ನಿರ್ದೇಶಕನನ್ನು ತೃಪ್ತಿಪಡಿಸುವವರೆಗೆ ಪಾತ್ರಧಾರಿ ಅಭಿನಯಿಸಲು ಅವಕಾಶವಿರುತ್ತದೆ. ಒಂದು ಟೇಕ್ ಅಥವಾ ನೂರು ಟೇಕ್ ತೆಗೆದುಕೊಳ್ಳಬಹುದು. ಆದರೆ ರಂಗಭೂಮಿಯಲ್ಲಿ ಹಾಗಲ್ಲ. ಒಮ್ಮೆ ಬಂದರೆ ರಣರಂಗಕ್ಕೆ ಬಂದಂತೆ ಅವನು ಗೆದ್ದೇ ಹೋಗಬೇಕು. ಸೋತು ಹೋಗಲು ಅವಕಾಶವಿಲ್ಲ ಎಂದರು.

ರಂಗಭೂಮಿಯಲ್ಲಿ ಸೇವೆ ಮಾಡುತ್ತಿರುವ ನಾವೆಲ್ಲಾ ಪುಣ್ಯವಂತರು. ರಂಗದೇವತೆ ನಮಗೆಲ್ಲಾ ಒಲಿದಿದ್ದಾಳೆ. ಎಷ್ಟೇ ವಯಸ್ಸು ಆದರೂ ಅಭಿನಯಿಸಬೇಕೆಂಬ ಹಂಬಲ ಇಲ್ಲಿ ಹೋಗುವುದಿಲ್ಲ. ಅದೇ ರಂಗಭೂಮಿಯ ಸೆಳೆತ. ಅಂದರೆ ಬಣ್ಣ ಹಚ್ಚಬೇಕೆಂಬ ದುಗುಡ ಜೀವನಪೂರ್ತಿ ಇದ್ದೇ ಇರುತ್ತದೆ. ವಯಸ್ಸು ಹಾಗೂ ನಾಚಿಕೆಯನ್ನು ದೂರ ಮಾಡಿಬಿಡುತ್ತದೆ. ಪಾತ್ರ ಮಾಡಬೇಕು, ರಂಗಭೂಮಿಯಲ್ಲಿ ಮೆರೆಯಬೇಕೆಂಬ ಒಂದೇ ಧ್ಯೇಯ ಮುಖ್ಯವಾಗುತ್ತದೆ ಎಂದು ಹೇಳಿದರು.

ಸುಧೀರ್ ಅವರು ಕರ್ನಾಟಕ ಕಲಾ ವೈಭವ ಸಂಘ ಸ್ಥಾಪಿಸಿ ಎರಡು ವರ್ಷದಲ್ಲೇ ತೀರಿಕೊಂಡರು. ನಾನು ಮತ್ತೆ ರಂಗಭೂಮಿಗೆ ಹೋಗಬೇಕಾ? ಸಿನಿಮಾ ನಟನ ಹಂಡತಿ ಅನ್ನಿಸಿಕೊಂಡಿರುವಾಗ ಮನೆಯಲ್ಲಿದ್ದರೆ ಆರ್ಥಿಕ ಪರಿಸ್ಥಿತಿ ಹೇಗೆ ಎಂಬ ಯೋಚನೆ ಶುರುವಾಯಿತು. ಕೊನೆಗೆ ರಂಗಭೂಮಿಗೆ ಮರಳಿ, ಕಂಪನಿ ನಡೆಸುತ್ತಿದ್ದೆ. ಪ್ರಾರಂಭದಲ್ಲಿ ತುಂಬನೇ ತೊಂದರೆಗಳಾದವು. ತೇರದಾಳ ಎಂಬ ಊರಲ್ಲಿ ನಾಟಕ ಶಿಬಿರ ಆಯೋಜಿಸಿದ್ದೆ. 10ರಿಂದ 15 ಪ್ರೇಕ್ಷಕರು ಬಂದರೆ ಊಟಕ್ಕೆ ಹಾಗೂ ಬಣ್ಣ ಅಳಿಸಿಕೊಳ್ಳಲು ಕೊಬ್ಬರಿ ಎಣ್ಣೆಗೆ ಕಾಸು ಆದರೆ ಸಾಕೆಂಬ ಹಂಬಲ ಇರುತ್ತಿತ್ತು ಎಂದು ತಿಳಿಸಿದರು.

ಇದಕ್ಕೂ ಮುನ್ನ 10 ಮಂದಿ ರಂಗ ಕರ್ಮಿಗಳಿಗೆ ರಂಗ ಗೌರವ ಪುರಸ್ಕಾರ ನೀಡಲಾಯಿತು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಸರಸ್ವತಿ ಜುಲೇಖ ಬೇಗಂ, ಹೆಚ್. ಜನಾರ್ಧನ್ (ಜನ್ನಿ), ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ನೂರ್ ಅಹಮದ್ ಶೇಖ್, ಪ್ರಸಾದ್ ಕುಂದೂರು, ಚಂದ್ರಶೇಖರ್ ಆಚಾರ್, ಕುವೆಂಪು ಭಾಷಾ ಭಾರತಿ ಪ್ರಶಸ್ತಿ ಪುರಸ್ಕೃತ ಡಾ.ಹೆಚ್. ಎಂ.ಕುಮಾರ್‌ಸ್ವಾಮಿ, ಬಯಲಾಟ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ತಿಪ್ಪಣ್ಣ, ಸುವರ್ಣ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಮಾಲತಿಶ್ರೀ, ಗೌರವ ಡಾಕ್ಟರೇಟ್‌ಗೆ ಭಾಜನರಾದ ಡಾ.ಸಿ.ಬಸವಲಿಂಗಯ್ಯ, ಡಾ.ರಾಜಶೇಖರ ಕದಂಬ ಅವರಿಗೆ ರಂಗ ಗೌರವ ನೀಡಲಾಯಿತು. ಕರ್ನಾಟಕ ನಾಟಕ ಅಡಾಡೆಮಿ ಸದಸ್ಯ ಸಂಚಾಲಕಿ ಡಾ.ಎಂ.ಎ.ಜಾಹಿದಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಮೈಸೂರು ಜಿಲ್ಲಾ ಹವ್ಯಾಸಿ ರಂಗಕರ್ಮಿಗಳ ವೇದಿಕೆ ಅಧ್ಯಕ್ಷ ರಾಜೇಶ್ ಹೆಚ್. ತಲಕಾಡು, ಕಾರ್ಯದರ್ಶಿ ಎಂ.ಪಿ.ಹರಿದತ್ತ ಮತ್ತಿತರರು ಹಾಜರಿದ್ದರು.

ಮಗು ಮಡಿದ ದುಃಖದಲ್ಲೂ ಅಭಿಯನ

ನಾವು ತೇರದಾಳದಲ್ಲಿ ಹಮ್ಮಿಕೊಂಡಿದ್ದ ನಾಟಕ ಶಿಬಿರದಲ್ಲಿ ನಡೆದ ಘಟನೆಯೊಂದು ರಂಗಭೂಮಿ ಬಗೆಗೆ ಕಲಾವಿದರಿಗೆ ಇರುವ ಬದ್ಧತೆಯನ್ನು ಅನಾವರಣಗೊಳಿಸಿತು ಎಂದು ತಿಳಿಸಿದ ಮಾಲತಿ ಸುಧೀರ್, ಸದರಿ ಘಟನೆಯನ್ನು ವಿವರಿಸಿದರು. ಇಬ್ಬರು ಹಾಸ್ಯ ಪಾತ್ರಧಾರಿ ದಂಪತಿ ಜಾಂಡೀಸ್‌ನಿಂದ ಬಳಲುತ್ತಿದ್ದ ತಮ್ಮ 10 ವರ್ಷದ ಮಗನನ್ನು ಮನೆಯಲ್ಲಿ ಮಲಗಿಸಿ ಬಂದು ಪಾತ್ರ ಮಾಡುತ್ತಿದ್ದರು.

ಮನೆ ಮಾಲೀಕರು ಈ ಹುಡುಗ ಎಷ್ಟು ಹೊತ್ತಾದರೂ ನೀರು ಸಹ ಕೇಳಲಿಲ್ಲವಲ್ಲವೆಂದು ಹೋಗಿ ನೋಡಿದಾಗ ಆ ಬಾಲಕ ಸಾವನ್ನಪ್ಪಿರುವುದು ಗೊತ್ತಾಯಿತು. ಇಲ್ಲಿ ಆ ಹುಡುಗನ ತಂದೆ–ತಾಯಿ ಪಾರ್ಟ್ ಮಾಡುತ್ತಿದ್ದಾರೆ. ಅಲ್ಲಿ ಮಾಲತಿಯಮ್ಮ ಕಲೆಕ್ಷನ್ ಇಲ್ಲವೆಂದು ಒದ್ದಾಡುತ್ತಿದ್ದಾರೆ, ಹೇಗೆ ಹೇಳೋದು ಎಂದು ಮನೆ ಮಾಲೀಕ ಕೊನೆಗೂ ಧೈರ್ಯ ಮಾಡಿ ನನಗೆ ಹೇಳಿದ. ಆ ಹುಡುಗ ಸಾವನ್ನಪ್ಪಿರುವ ಬಗ್ಗೆ ದುಃಖ ಇದ್ದರೂ ನಾಟಕ ನಿಲ್ಲಿಸಬಾರದೆಂಬ ಕಾರಣ ವಿಷಯ ಹೇಳಲಿಲ್ಲ. ನಾಟಕ ಮುಗಿದ ತಕ್ಷಣ ಪೋಷಕರಿಗೆ ಹೇಳಿ, ಪ್ರದರ್ಶನದಿಂದ ಬಂದಿದ್ದ 800 ರೂ. ಪೈಕಿ 100 ರೂ. ನಾವಿಟ್ಟುಕೊಂಡು, 700 ರೂ. ಅವರಿಗೆ ಕೊಟ್ಟು ಊರಿಗೆ ಕಳುಹಿಸಲಾಯಿತು.

ಪಾಪ ಅವರು ಬಸ್‌ನಲ್ಲಿ ಕೊನೆ ಸೀಟಿನಲ್ಲಿ ಮಗು ಮಲಗಿದ್ದಾನೆ ಎನ್ನುವಂತೆ ಬೆಡ್‌ಶೀಟ್ ಹೊದಿಸಿ ತಮ್ಮ ಊರಿಗೆ ಹೋಗಿ ಸಂಸ್ಕಾರ ಮಾಡಿ, ಮತ್ತೆ ನನಗೆ ಫೋನ್ ಮಾಡಿ 'ಅಕ್ಕವರೇ ನಾವು ರಾತ್ರಿಗೆ ಬರುತ್ತೇವೆ, ನಾಟಕ ನಿಲ್ಲಿಸಬೇಡಿ' ಎಂದರು. ಇದು ಈ ರಂಗಭೂಮಿಯ ಗಟ್ಟಿತನ ಎಂದು ಮನಕಲುಕುವ ಘಟನೆಯೊಂದನ್ನು ವಿವರಿಸಿದರು.

ಮಂಡ್ಯ ನಗರಸಭೆ: 126 ಕೋಟಿ ಆಯವ್ಯಯ ಮಂಡನೆ

ಮಂಡ್ಯ: ನಗರಸಭೆಯ 2024–25 ನೇ ಸಾಲಿನ ಪರಿಷ್ಕೃತ ಹಾಗೂ 2025–26ನೇ ಸಾಲಿನ ಅಂದಾಜು 126 ಕೋಟಿ ರೂ. ಮೊತ್ತದ ಆಯವ್ಯಯವನ್ನು ನಗರಸಭಾ ಅಧ್ಯಕ್ಷ ಎಂ.ವಿ.ಪ್ರಕಾಶ್ (ನಾಗೇಶ್) ಮಂಡಿಸಿದರು.

ನಗರಸಭೆಯ ಧರಣಪ್ಪ ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ 2025–26ನೇ ಸಾಲಿನ ತಮ್ಮ ಚೊಚ್ಚಲ ಬಜೆಟ್ ಮಂಡಿಸಿದ ಪ್ರಕಾಶ್ ಅವರು, 2,88,50,190 ರೂ.ಗಳ ಉಳಿತಾಯ ಬಜೆಟ್ ಮಂಡಿಸಿದಾಗ ಸರ್ವ ಸದಸ್ಯರು ಪಕ್ಷಭೇದ ಮರೆತು ಸರ್ವಾನುಮತದ ಒಪ್ಪಿಗೆ ನೀಡಿದರು.

ಮಂಡ್ಯ ನಗರಸಭೆಯ 2024–25ನೇ ಸಾಲಿನ ಆರಂಭಿಕ ಶಿಲ್ಕು 21,61,22,190 ರೂ. ಹಾಗೂ 2025–26ನೇ ಸಾಲಿಗೆ ನಗರಸಭೆಯ ಸ್ವಂತ ಸಂಪನ್ಮೂಲಗಳಿಂದ ನಿರೀಕ್ಷಿತ ಆದಾಯ 25,17,76,000 ರೂ., ಸರ್ಕಾರಕ್ಕೆ ಪಾವತಿಸಬೇಕಾದ ತೆರಿಗೆಗಳು ಮತ್ತು ಕರಗಳ ಬಾಬ್ತು 9,01,15,000 ರೂ. ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ನಿರೀಕ್ಷಿತ ಅನುದಾನಗಳು 70.27, 42,000 ರೂ. ಸೇರಿ 126.07.55.190 ರೂ.ಗಳ ಬಜೆಟ್‌ನಲ್ಲಿ 2025–26ನೇ ಸಾಲಿಗೆ ನೌಕರರ ವೇತನ, ನಿರ್ವಹಣಾ ವೆಚ್ಚಗಳು, ಬಂಡವಾಳ ಕಾಮಗಾರಿಗಳು, ಕಲ್ಯಾಣ ಕಾರ್ಯಕ್ರಮಗಳು ಮತ್ತು ಸರ್ಕಾರಕ್ಕೆ ಪಾವತಿಸಬೇಕಾದ ಕರಗಳು ಹಾಗೂ ಶಾಸನಬದ್ಧ ತೆರಿಗೆಗಳು ಸೇರಿದಂತೆ ಒಟ್ಟಾರೆ ಖರ್ಚು ಕಳೆದು 2,88,50,190 ರೂ. ಗಳ ಉಳಿತಾಯ ಬಜೆಟ್ ಮಂಡಿಸಿದರು.

ಸರ್ಕಾರದ ಎಸ್‌ಎಫ್‌ಸಿ ವಿದ್ಯುತ್ ಅನುದಾನ 1286 ಲಕ್ಷರೂ. ವೇತನ ಅನುದಾನ 1309 ಲಕ್ಷರೂ. ಹಾಗೂ ಹಣಕಾಸು ಯೋಜನೆ ಅನುದಾನ 1192 ಲಕ್ಷ ರೂ. ನಿರೀಕ್ಷಿಸಲಾಗಿದೆ. ಇನ್ನುಳಿದಂತೆ ಆಸ್ತಿ ತೆರಿಗೆ, ದಂಡ, ಕರಗಳ ಸಂಗ್ರಹಣ ಶುಲ್ಕದಿಂದ 1850.50 ಲಕ್ಷ, ಅಭಿವೃದ್ಧಿ ಮತ್ತು ಬೆಟರ್‌ಮೆಂಟ್ ಶುಲ್ಕಗಳ ಸಂಗ್ರಹಣೆಯಿಂದ 112.00 ಲಕ್ಷ, ಘನ ತ್ಯಾಜ್ಯ ವಸ್ತು ನಿರ್ವಹಣೆ ಶುಲ್ಕ ಸಂಗ್ರಹಣೆಯಿಂದ 150 ಲಕ್ಷ, ಮಳಿಗೆಗಳ ಠೇವಣಿ, ಬಾಡಿಗೆ ಮತ್ತು ದಂಡ ವಸೂಲಿ ಸಂಗ್ರಹಣೆಯಿಂದ 110.25 ಲಕ್ಷ ರೂ., ಒಳಚರಂಡಿ ಸಂಪರ್ಕ ಮತ್ತು ಬಳಕೆದಾರರ ಶುಲ್ಕ ಸಂಗ್ರಹಣೆಯಿಂದ 41.50 ಲಕ್ಷ ರೂ., ಉದ್ದಿಮೆ ಪರವಾನಗಿ ಶುಲ್ಕ ಮತ್ತು ಉದ್ದಿಮೆ ಪರವಾನಗಿ ಮೇಲಿನ ದಂಡ ಸಂಗ್ರಹಣೆಯಿಂದ 52 ಲಕ್ಷ ರೂ., ಅನುಪಯುಕ್ತ ವಸ್ತುಗಳ ಮಾರಾಟದಿಂದ 26 ಲಕ್ಷರೂ. ಬರಬಹುದೆಂದು ಅಂದಾಜಿಸಲಾಗಿದೆ ಎಂದರು.

ಮಂಡ್ಯ ನಗರಸಭಾ ವ್ಯಾಪ್ತಿಯಲ್ಲಿರುವ ಉದ್ಯಾನಗಳನ್ನು ಅಭಿವೃದ್ಧಿಪಡಿಸಲು ಈ ಆಯವ್ಯಯದಲ್ಲಿ 200 ಲಕ್ಷ ರೂ., ಸುಸಜ್ಜಿತ ಕೌನ್ಸಿಲ್ ಸಭಾಂಗಣ ನಿರ್ಮಾಣ 300 ಲಕ್ಷ ರೂ., ಮಾದರಿ ಆಟೋ ನಿಲ್ದಾಣಗಳ ನಿರ್ಮಾಣ, ಬಸ್–ಬೇ ಮತ್ತು ಬಸ್ ನಿಲ್ದಾಣಗಳ ಅಭಿವೃದ್ಧಿ ಬೆಂಗಳೂರು–ಮೈಸೂರು ರಸ್ತೆಯ ರಸ್ತೆ ವಿಭಜಕ ನಿರ್ಮಾಣ, ಸುಸಜ್ಜಿತ ಮೀನು ಮಾರುಕಟ್ಟೆ ನಿರ್ಮಾಣಕ್ಕೆ 100 ಲಕ್ಷ, ಯತ್ತಗದಹಳ್ಳಿ ರಸ್ತೆಯಲ್ಲಿರುವ ಗುತ್ತಲು ಕೆರೆ ಅಭಿವೃದ್ಧಿಗೆ 400 ಲಕ್ಷ ಕಾರ್ಯನಿರತ ಪತ್ರಕರ್ತರುಗಳಿಗೆ ವೈದ್ಯಕೀಯ ಚಿಕಿತ್ಸಾ ವೆಚ್ಚದ ಸಹಾಯಧನಕ್ಕಾಗಿ 5 ಲಕ್ಷ ನಿಗದಿಪಡಿಸಲಾಗಿದೆ. ಕಾರ್ಯನಿರತ ಕಲಾವಿದರುಗಳಿಗೆ ಸಹಾಯಧನದ ಉದ್ದೇಶಕ್ಕಾಗಿ 3 ಲಕ್ಷ ರೂ., ಪೌರಕಾರ್ಮಿಕ ಬಂಧುಗಳಿಗೆ ಪೌರಕಾರ್ಮಿಕರ ಗೃಹಭಾಗ್ಯ ಯೋಜನೆಯಡಿ ಗೃಹ ನಿರ್ಮಾಣ, ಅನಿಲ/ವಿದ್ಯುತ್ ಚಿತಾಗಾರ ನಿರ್ಮಾಣ ಸ್ಟ್ರೀಟ್ ಸ್ವೀಪಿಂಗ್ ಯಂತ್ರಕ್ಕಾಗಿ ವಾಹನ ಖರೀದಿಗೆ ನಿಗದಿಗೊಳಿಸಲಾಗಿದೆ ಎಂದು ಅಧ್ಯಕ್ಷ ಪ್ರಕಾಶ್ ತಿಳಿಸಿದರು.

ಆಯವ್ಯಯ ಮಂಡನೆ ವೇಳೆ ಶಾಸಕ ಪಿ.ರವಿಕುಮಾರ್ ಗಣಿಗ, ನಗರಸಭೆ ಉಪಾಧ್ಯಕ್ಷ ಎಂ.ಪಿ.ಅರುಣ್‌ಕುಮಾರ್, ನಗರಸಭೆ ಆಯುಕ್ತೆ ಪಂಪಶ್ರೀ ಭಾಗವಹಿಸಿದ್ದರು.

ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ ರಸ್ತೆಗಳು, ಕಲ್ಲು ಹಾಸುಗಳು ಮತ್ತು ಪಾದಚಾರಿ ಮಾರ್ಗಗಳು, ಮಳೆ ನೀರು ಚರಂಡಿಗಳು, ಸೇತುವೆಗಳು ಮತ್ತು ಇತರೆ ಸ್ಥಿರಾಸ್ಥಿಗಳ ಕಾಮಗಾರಿಗಳಿಗಾಗಿ 2618.35 ಲಕ್ಷ, ಒಳಚರಂಡಿ ಮಾರ್ಗಗಳು ಹಾಗೂ ಮೆಷಿನ್ ಹೋಲ್‌ಗಳ ದುರಸ್ಥಿ, ನಿರ್ವಹಣೆ ಮತ್ತು ನಿರ್ಮಾಣ ಕಾಮಗಾರಿಗಳಿಗಾಗಿ 650 ಲಕ್ಷ ರೂ. ಮೀಸಲಿರಿಸಲಾಗಿದೆ. ವೃತ್ತಗಳು ಮತ್ತು ರಸ್ತೆಗಳಿಗೆ ನಾಮಫಲಕಗಳ ಅಳವಡಿಕೆ ಹಾಗೂ ಡಿಜಿಟಲ್ ಡಿಸ್ ಪ್ಲೇ ಬೋರ್ಡ್ ಅಳವಡಿಕೆಗಾಗಿ 145 ಲಕ್ಷ ರೂ. ಮಾರುಕಟ್ಟೆ ನಿರ್ಮಾಣ ಕಾಮಗಾರಿಯ ಬಾಕಿ ಬಿಲ್ಲು ಪಾವತಿಗಾಗಿ ಹಾಗೂ ಅವಶ್ಯವಿರುವ ಬಾಕಿ ಕಾಮಗಾರಿಗಳಿಗಾಗಿ 210 ಲಕ್ಷ ರೂ., ಕುಡಿಯುವ ನೀರು ಸರಬರಾಜು ವ್ಯವಸ್ಥೆ ಕಾಮಗಾರಿಗಳಿಗಾಗಿ ಹಾಗೂ ಕುಡಿಯುವ ನೀರಿನ ಯೋಜನೆಗಳ ನಗರಸಭೆ ವಂತಿಕೆಯ ಪಾವತಿಗಾಗಿ 405 ಲಕ್ಷ ರೂ. ಗಳನ್ನು ಕಾಯ್ದಿರಿಸಲಾಗಿದೆ. ಬೀದಿದೀಪಗಳ ನಿರ್ವಹಣೆ ಮತ್ತು ಹೊಸ ಬೀದಿದೀಪಗಳ ಅಳವಡಿಕೆಗಾಗಿ 245.25 ಲಕ್ಷ ಮೀಸಲಿರಿಸಲಾಗಿದೆ.



ಮಂಡ್ಯ ನಗರಸಭಾ ಅಧ್ಯಕ್ಷ ಎಂ.ವಿ.ಪ್ರಕಾಶ್ ಅವರು ಬಜೆಟ್ ಮಂಡಿಸಲು ಆಗಮಿಸುತ್ತಿರುವುದು.

ಕೆಪಿಸಿಸಿ ಸದಸ್ಯ ರೇವಣ್ಣನವರ ಹುಟ್ಟುಹಬ್ಬ ಆಚರಣೆ

ಮೈಸೂರು: ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಸಮಾಜಸೇವಕರು, ಮೈಸೂರು ಜಿಲ್ಲಾ ಲಾರಿ ಮಾಲೀಕರ ಸಂಘದ ಅಧ್ಯಕ್ಷ ಹಾಗೂ ಕೆಪಿಸಿಸಿ ಸದಸ್ಯ ಬಿ.ರೇವಣ್ಣ ಅವರ ಹುಟ್ಟುಹಬ್ಬವನ್ನು ಗುರುವಾರ ಕಾರ್ಯಕರ್ತರು, ಅಭಿಮಾನಿಗಳು ವಿಜೃಂಭಣೆಯಿಂದ ಆಚರಿಸಿದರು.

ಬೆಳಿಗ್ಗೆಯಿಂದಲೇ ಅಭಿಮಾನಿಗಳು, ಕಾರ್ಯಕರ್ತರು ಅವರ ನಿವಾಸಕ್ಕೆ ಆಗಮಿಸಿ ಕೇಕ್ ಕತ್ತರಿಸಿ ಪುಷ್ಪಮಾಲೆ ಹಾಕಿ ಅಭಿನಂದಿಸುವ ಮೂಲಕ ತಮ್ಮ ನಾಯಕರಿಗೆ ಶುಭ ಹಾರೈಸಿದರು.

ಕೆಪಿಸಿಸಿ ಸದಸ್ಯ ಬಿ.ರೇವಣ್ಣ ಮಾತನಾಡಿ, ನನ್ನ ಹುಟ್ಟುಹಬ್ಬದ ಅಂಗವಾಗಿ ಅಭಿಮಾನಿಗಳು, ಬೆಂಬಲಿಗರು, ಹಿತೈಶಿಗಳು, ಸ್ನೇಹಿತರು ಮಧ್ಯರಾತ್ರಿಯಿಂದಲೇ ಪ್ರೀತಿಯಿಂದ ಕೇಕ್ ಕತ್ತರಿಸಿ ಅಭಿನಂಧಿಸಿ ನನ್ನ ಹುಟ್ಟುಹಬ್ಬವನ್ನು ಆಚರಿಸಿ ಶುಭ ಹಾರೈಸಿದ್ದಾರೆ. ನಿಮ್ಮೆಲ್ಲರ ಪ್ರೀತಿ ಅಭಿಮಾನಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸುತ್ತೇನೆ. ನಿಮ್ಮೆಲ್ಲರ ಪ್ರೀತಿ, ಅಭಿಮಾನ, ವಿಶ್ವಾಸ ನನ್ನ ಹಾಗೂ ನನ್ನ ಕುಟುಂಬದ ಮೇಲೆ ಸದಾ ಹೀಗೆ ಇರಲೆಂದು ಮನವಿ ಮಾಡಿದರು.



ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಸಮಾಜಸೇವಕ, ಕೆಪಿಸಿಸಿ ಸದಸ್ಯ ಬಿ.ರೇವಣ್ಣ ಅವರ ಹುಟ್ಟಹಬ್ಬವನ್ನು ಅಭಿಮಾನಿಗಳು, ಬೆಂಬಲಿಗರು ಸಂಭ್ರಮದಿಂದ ಆಚರಿಸಿದರು.

ಮೇಲುಕೋಟೆ ಕ್ಷೇತ್ರದ ನನ್ನ ಹಿತೈಸಿ, ಬೆಂಬಲಿಗರು, ಜನತೆ ನನ್ನ ರಾಜಕೀಯ ಜನನಾಯಕರಾಗಬೇಕು ಎಂಬ ಭಯಕೆ ಅವರಲಿದೆ. ಆದರೆ, ಅದಕ್ಕೆ ಸೂಕ್ತವಾದ ಕಾಲ ಬಂದಿಲ್ಲ. ಸಮಯ, ಸಂದರ್ಭ, ಸೂಕ್ತಕಾಲಕಾಶ, ಸನ್ನಿವೇಶ ಬಂದಂತಹ ಸಂದರ್ಭದಲ್ಲಿ ಸೂಕ್ತ ತೀರ್ಮಾನವನ್ನು ತೆಗೆದುಕೊಳ್ಳುತ್ತೇನೆ. ನನಗೆ ರಾಜಕೀಯ ಅಧಿಕಾರ ಸಿಗಲಿ, ಸಿಗದರಿಲಿ ನಾನಂತು ಸದಾ ನನ್ನ ಮೇಲುಕೋಟೆ ಕ್ಷೇತ್ರದ ಜನತೆ ಕಷ್ಟಸುಖ, ನೋವು ನಲಿವಿಗೆ ಸ್ಪಂಧಿಸಿ ಅವರ ಪರವಾಗಿ ಕೆಲಸ ಮಾಡುತ್ತೇನೆ ಎಂದರು.

ಬಿ.ರೇವಣ್ಣ ಅಭಿಮಾನಿ ಬಳಗದ ಅಧ್ಯಕ್ಷ ಬಿ.ಟಿ.ಮಂಜುನಾಥ್ ಮಾತನಾಡಿ, ನಮ್ಮನಾಯಕರಾದ ಬಿ.ರೇವಣ್ಣ ಅವರು ಮೇಲುಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಹಲವಾರು ವರ್ಷಗಳಿಂದ ಸಮಾಜಮುಖಿ ಕೆಲಸಕಾರ್ಯಗಳ ಮೂಲಕ ತಮ್ಮದೆಯಾದ ಜನಸೇವೆ ಮಾಡಿಕೊಂಡು ಬರುವ ಮೂಲಕ ಜನರ ಮನಸ್ಸಿನಲ್ಲಿ ನೆಲೆಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಅಭಿಮಾನಿ ಬಳಗದ ಬಣ್ಣದ ಅಂಗಡಿ ಮಹದೇವು, ಲಯನ್ ಎಲ್.ಕೆ.ಜಯರಾಮು, ಶ್ರೀಧರ, ಶ್ರೀಕಂಠ, ಭರತ್ ಸೇರಿದಂತೆ ಹಲವರು ಇದ್ದರು.

ಜಪಾನ್‌ನ ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮಕ್ಕೆ ಮಂಡ್ಯದ ಏಳು ವಿದ್ಯಾರ್ಥಿಗಳು ಆಯ್ಕೆ

ಮಂಡ್ಯ,ಮಾ.27– ಜಪಾನ್ ದೇಶದಲ್ಲಿ ನಡೆಯಲಿರುವ ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮಕ್ಕೆ ಮಂಡ್ಯದ ರಿಪಬ್ಲಿಕ್ ಸೆಂಟ್ರಲ್ ಸ್ಕೂಲ್‌ನ ಏಳು ವಿದ್ಯಾರ್ಥಿಗಳು ಆಯ್ಕೆಯಾಗಿದ್ದು, ಏಪ್ರಿಲ್ 12ರಿಂದ 20ರವರೆಗೆ ನಡೆಯಲಿರುವ ಈ ಕಾರ್ಯಕ್ರಮಕ್ಕೆ ವಿದ್ಯಾರ್ಥಿಗಳು ತೆರಳಲಿದ್ದಾರೆ.

ಈ ಕುರಿತು ಮಾಹಿತಿ ನೀಡಿದ ಸಂಸ್ಥೆಯ ಅಧ್ಯಕ್ಷ ಎಸ್.ಮಂಜು, ಮಂಡ್ಯ ತಾಲೂಕಿನ ಸಿದ್ದಯ್ಯನ ಕೊಪ್ಪಲು ಬಳಿ ಇರುವ ರಿಪಬ್ಲಿಕ್ ಸೆಂಟ್ರಲ್ ಸ್ಕೂಲ್ ಎಲ್‌ಕೆಜಿಯಿಂದ ಎಸ್‌ಎಸ್‌ಎಲ್‌ಸಿವರೆಗೆ 503 ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿದ್ದು, ಆಧುನಿಕ ಜಗತ್ತಿಗೆ ಅಗತ್ಯವಾದ ಗುಣಮಟ್ಟದ ಶಿಕ್ಷಣ, ತಂತ್ರಜ್ಞಾನ ಹಾಗೂ ಬಾಂಧವ್ಯ ವೃದ್ಧಿಸುವ ಸದುದ್ದೇಶದಿಂದ ಜಪಾನ್ ದೇಶದಲ್ಲಿ ನಡೆಯುವ ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮದಲ್ಲಿ ಭಾರತ, ಆಸ್ಟ್ರೇಲಿಯಾ, ಫಿಲಿಪೈನ್ಸ್, ಇಂಡೋನೇಷಿಯಾ, ವಿಯೆಟ್ನಾಂ ದೇಶಗಳು ಸೇರಿದಂತೆ ಹತ್ತಾರು ದೇಶಗಳ ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ ಎಂದರು.

ಕಳೆದ ಮೂರು ವರ್ಷಗಳಿಂದ ನಮ್ಮ ಶಾಲೆಯ ಮಕ್ಕಳು ಸದರಿ ಕಾರ್ಯಕ್ರಮಕ್ಕೆ ತೆರಳುತ್ತಿದ್ದು, ಈ ಬಾರಿಯ ವಿಶೇಷವೆನೆಂದರೆ ಜಪಾನ್ ದೇಶದ ಒಸಾಕೋ ನಗರದಲ್ಲಿ ನಡೆಯಲಿರುವ ಎಕ್ಸ್‌ಪೋ–2025 ಕಾರ್ಯಕ್ರಮದಲ್ಲಿ ವಿಶ್ವದ ಹಲವು ರಾಷ್ಟ್ರಗಳ ಪ್ರತಿನಿಧಿಗಳು ಭಾಗವಹಿಸಲಿದ್ದು, ನಮ್ಮ ಮಕ್ಕಳ ಪಾಲ್ಗೊಳ್ಳುವಿಕೆ ಹೆಮ್ಮೆ ತರಲಿದೆ ಎಂದು ತಿಳಿಸಿದರು. ಏ.12ರಿಂದ 20ರವರೆಗೆ ನಡೆಯಲಿರುವ ಸದರಿ ಕಾರ್ಯಕ್ರಮದಲ್ಲಿ ರಿಪಬ್ಲಿಕ್ ಶಾಲೆಯ ರೇವತಿ.ಕೆ.ವಿ., ಮೋಹನ್ ಕುಮಾರ್. ಎಸ್, ಯಶಸ್ವಿ.ಕೆ.ಬಿ., ಸಾನಿಕ.ಪಿ, ಏಕಾಂತ್. ಹೆಚ್.ವೈ., ಧನುಷ್.ಕೆ.ಗೌಡ ಮತ್ತು ಅಪೂರ್ವ. ಎ ಸೇರಿದಂತೆ 7 ವಿದ್ಯಾರ್ಥಿಗಳು ಭಾಗಿಯಾಗಲಿದ್ದು, ಇದು ನಮ್ಮ ಸಂಸ್ಥೆಗೆ ಹೆಮ್ಮೆಯ ಸಂಗತಿ ಎಂದು ತಿಳಿಸಿದರು.

ಸಂಸ್ಥೆಯ ಪಾಂಶುಪಾಲೆ ಸುನೀತಾ ರಾಜನ್ ಉಪಸ್ಥಿತರಿದ್ದರು.



ಜಪಾನ್ ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮಕ್ಕೆ ಆಯ್ಕೆಯಾಗಿರುವ ವಿದ್ಯಾರ್ಥಿಗಳು.

ಡೀಸೆಲ್ ಹಾಕಿಸಿಕೊಂಡು ಹಣ ಪಾವತಿಸದೆ ಪರಾರಿ

ಹಲಗೂರು: ಸಮೀಪದ ಹೆಚ್.ಬಸಾಪುರ ಗೇಟ್ ಬಳಿ ಇರುವ ಶ್ರೀ ಕಾಳೇಶ್ವರ ಫ್ಯೂಯೆಲ್ ಸ್ಟೇಷನ್ ಪೆಟ್ರೋಲ್ ಬಂಕ್‌ನಲ್ಲಿ ಅಪರಿಚಿತರಿಬ್ಬರು 15,500 ರೂ. ಮೌಲ್ಯದ ಡೀಸೆಲ್ ಹಾಕಿಸಿಕೊಂಡು ಹಣ ಪಾವತಿಸದೆ ಪರಾರಿಯಾದ ಘಟನೆ ಮಂಗಳವಾರ ತಡರಾತ್ರಿ ನಡೆದಿದೆ.



ಸೋಮವಾರ ತಡರಾತ್ರಿ, ಎರಿಟಿಗ ಕಾರಿನಲ್ಲಿ ಬಂದ ಮಹಿಳೆ ಮತ್ತು ಪುರುಷ ಡೀಸೆಲ್ ತುಂಬಿಸಿಕೊಂಡು ಮೊಬೈಲ್‌ನಿಂದ ಫೋನ್‌ಪೇ ಮಾಡುವ ನೆಪ ಹೇಳಿ, ನೆಟ್ವರ್ಕ್ ಇಲ್ಲ, ಮುಂದೆ ಕಾರು ನಿಲ್ಲಿಸಿ ಪಾವತಿಸುತ್ತೇವೆ ಎಂದು ನಂಬಿಸಿ, ಕಾರು ಸ್ಟಾರ್ಟ್ ಮಾಡಿಕೊಂಡು ಸ್ಥಳದಿಂದ ಪರಾರಿಯಾಗಿದ್ದಾರೆ ಎಂದು ಪೆಟ್ರೋಲ್ ಬಂಕ್ ಮೇಲ್ವಿಚಾರಕ ಫಜಲ್ ಉಲ್ಲಾ ತಿಳಿಸಿದರು.

ಇಂದು ಮಂಡ್ಯದಲ್ಲಿ ಶ್ರೀ ಅಗ್ನಿಬನ್ನಿರಾಯ ಜಯಂತಿ

ಮಂಡ್ಯ, ಮಾ.27– ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಶ್ರೀ ಅಗ್ನಿಬನ್ನಿರಾಯ ಜಯಂತಿಯನ್ನು ಮಾರ್ಚ್ 28 ರಂದು ಮಧ್ಯಾಹ್ನ 2.30 ಗಂಟೆಗೆ ಕರ್ನಾಟಕ ಸಂಘದಲ್ಲಿ ಆಯೋಜಿಸಲಾಗಿದೆ.

ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದು, ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚಲುವರಾಯಸ್ವಾಮಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಶ್ರೀರಂಗಪಟ್ಟಣ ಶಾಸಕರು ಹಾಗೂ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರಾದ ಎ.ಬಿ.ರಮೇಶ್ ಬಂಡಿಸಿದ್ದೇಗೌಡ, ಮಳವಳ್ಳಿ ಶಾಸಕರು ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರಾದ ಪಿ.ಎಂ.ನರೇಂದ್ರಸ್ವಾಮಿ ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಮಂಡ್ಯ ಶಾಸಕ ಪಿ.ರವಿಕುಮಾರ್ ಅಧ್ಯಕ್ಷತೆ ವಹಿಸಲಿದ್ದು, ವಿಧಾನಪರಿಷತ್ ಸದಸ್ಯರುಗಳಾದ ಮಧು ಜಿ.ಮಾದೇಗೌಡ, ದಿನೇಶ್ ಗೂಳಿಗೌಡ, ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ.ಮಂಜು, ಕೆ.ಎಂ.ಉದಯ, ಕೆ. ವಿವೇಕಾನಂದ, ನಗರಸಭೆ ಅಧ್ಯಕ್ಷ ಎಂ.ವಿ ಪ್ರಕಾಶ್ (ನಾಗೇಶ್), ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರಾದ ನಯೀಮ್ ಆಗಮಿಸಲಿದ್ದಾರೆ.

ಮೂರನೇ ಪುಟದಿಂದ

ಒಳಮೀಸಲಾತಿಯ ಮಧ್ಯಂತರ ವರದಿ

ಸರ್ಕಾರ ಏನು ತೀರ್ಮಾನ ಮಾಡುತ್ತದೆ ಅದರ ಆಧಾರದಲ್ಲಿ ಅಂತಿಮ ವರದಿ ಸಲ್ಲಿಸುತ್ತೇನೆ. ಮಧ್ಯಂತರ ವರದಿ ನೀಡಿದ್ದೇನೆ, ಇದಕ್ಕೆ ಸರ್ಕಾರ ಉತ್ತರ ಕೊಟ್ಟಿಲ್ಲ. ಉತ್ತರದ ಬಳಿಕ ಮುಂದಿನ ತೀರ್ಮಾನ ಕೈಗೊಳ್ಳುತ್ತೇನೆ ಎಂದರು. ಮಧ್ಯಂತರ ವರದಿ ಮೀಸಲಾತಿ ಕೊಡಲು ವಿಳಂಬ ಧೋರಣೆ ಮಾಡೋಕೆ ಅಲ್ಲ. ಶಾಶ್ವತ ಪರಿಹಾರ ಕೊಡೋದು ನಮ್ಮ ಇಚ್ಛೆ. ಈ ನಿಟ್ಟಿನಲ್ಲಿ ವರದಿ ಕೊಡಲಾಗಿದೆ. ಮಧ್ಯಂತರ ವರದಿ ಕೊಟ್ಟಿದ್ದೇನೆ. ಸರ್ಕಾರ ಏನ್ ಕ್ರಮ ತೆಗೆದುಕೊಳ್ಳುತ್ತೋ ನೋಡೋಣ. ಮಧ್ಯಂತರ ವರದಿಯಲ್ಲಿ ಏನಿದೆ ಅಂತ ನಾನು ಹೇಳೋಕೆ ಆಗೊಲ್ಲ. ಸರ್ಕಾರ ಏನ್ ಮಾಡುತ್ತೆ ಅಂತ ಸರ್ಕಾರವನ್ನ ಕೇಳಿ ಎಂದರು.

ನ್ಯಾ.ನಾಗಮೋಹನ್ ದಾಸ್ ಆಯೋಗ ಮುಂದುವರಿಸಲು ತೀರ್ಮಾನ: ಒಳಮೀಸಲಾತಿ ವರ್ಗೀಕರಣಕ್ಕೆ ಸಂಬಂಧಿಸಿದಂತೆ ನೇಮಕ ಮಾಡಲಾಗಿದ್ದ ನ್ಯಾ.ನಾಗಮೋಹನ್ ದಾಸ್ ಅವರ ಏಕಸದಸ್ಯ ಆಯೋಗವು ಒಳಮೀಸಲಾತಿ ವರ್ಗೀಕರಣ ವಿಚಾರದಲ್ಲಿ ಮಧ್ಯಂತರ ವರದಿ ನೀಡಿದ್ದಾರೆ. ಮಧ್ಯಂತರ ವರದಿಯಲ್ಲಿ 4 ಶಿಫಾರಸು ಮಾಡಿದ್ದಾರೆ. ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿಯಲ್ಲಿರುವ ಉಪಜಾತಿಗಳ ವೈಜ್ಞಾನಿಕ ವರ್ಗೀಕರಣವನ್ನು ಹೊಸದಾದ ಸಮೀಕ್ಷೆ ನಡೆಸಿ ದತ್ತಾಂಶವನ್ನು ಸಂಗ್ರಹಿಸಬೇಕು. ನೂತನ ವಿಜ್ಞಾನ ತಂತ್ರಜ್ಞಾನದ ಸಾಧನೆಗಳನ್ನು ಬಳಸಿ 30 ರಿಂದ 40 ದಿನಗಳ ಒಳಗೆ ಹೊಸದಾದ ಸಮೀಕ್ಷೆಯನ್ನು ನಡೆಸಬಹುದು. ಹೊಸ ಸಮೀಕ್ಷೆ ನಡೆಸಲು ಅಗತ್ಯವಿರುವ ಪ್ರಶ್ನಾವಳಿ ಸಿದ್ಧಪಡಿಸಬೇಕು. ಇದಕ್ಕೆ ಉನ್ನತ ಮಟ್ಟದ ಸಮಿತಿ ರಚನೆ ಸೂಕ್ತ ಎಂದರು. ಹೊಸ ಸಮೀಕ್ಷೆಯ ದತ್ತಾಂಶದ ಆಧಾರದ ಮೇಲೆ ಆದ್ಯತೆಯ ಮೇರೆಗೆ ಒಳ ಮೀಸಲಾತಿ ಹಂಚಿಕೆ ಮಾಡಬೇಕು ಎಂದು ಶಿಫಾರಸು ಮಾಡಿದ್ದಾರೆ. ಅಲ್ಲದೇ ನಾಗಮೋಹನ್ ದಾಸ್ ಸಮಿತಿಯನ್ನೇ ಮುಂದುವರಿಸಲು ಕ್ಯಾಬಿನೆಟ್ ತೀರ್ಮಾನ ಮಾಡಿದ್ದು, 60 ದಿವಸಗಳ ಒಳಗೆ ಈ ಕಾರ್ಯವನ್ನು ಪೂರ್ಣಗೊಳಿಸಲು ತೀರ್ಮಾನ ಮಾಡಲಾಗಿದೆ ಎಂದು ತಿಳಿಸಿದರು. ಆಯೋಗದವರು 60 ದಿನದೊಳಗೆ ಸಮೀಕ್ಷೆ ಮಾಡುತ್ತೇವೆ ಅಂದಿದ್ದಾರೆ. ನಾವು ಅದಕ್ಕೆ ಅನುಮತಿ ಕೊಟ್ಟಿದ್ದೇವೆ. ಜನಗಣತಿಯಲ್ಲಿ ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಎಂದು ಇದೆ. ಆದರೆ ಇದರಲ್ಲಿ ಇರುವ ಗೊಂದಲ ಬಗೆಹರಿಸುವ ಉದ್ದೇಶ ಇದೆ ಎಂದು ಸಚಿವರು ಹೇಳಿದರು.

ಕುಟುಂಬ ರಾಜಕಾರಣದಲ್ಲಿ ಮುಳುಗಿದೆ

ಜನತಾ ಪಕ್ಷ ಈಗ ಕುಟುಂಬ ರಾಜ ಕಾರಣದಲ್ಲಿ ಮುಳುಗಿರುವುದು ವಿಷಾದನೀಯ ಎಂದಿದ್ದಾರೆ. ಕೆಲವು ರಾಜಕೀಯ ಪಟ್ಟಭದ್ರರು ಅಡ್ಜೆಸ್ಟ್‌ಮೆಂಟ್ ರಾಜಕಾರಣದ ಹರಿಕಾರರಿಂದ ಲೋಕಸಭಾ ಚುನಾವಣೆಯಲ್ಲಿ ಪಕ್ಷಕ್ಕೆ ತೀವ್ರ ಹಿನ್ನಡೆಯಾಯಿತು.

ಕಲಬುರಗಿ, ರಾಯಚೂರು, ಬಳ್ಳಾರಿ, ಚಿಕ್ಕೋಡಿಯಲ್ಲಿ ಆದ ಸೋಲಿನ ಪರಾಮರ್ಶೆಯನ್ನು ಹೈಕಮಾಂಡ್ ಮಾಡದೆ ಇರುವುದು ಕಲ್ಯಾಣ ಕರ್ನಾಟಕದಲ್ಲಿ ಪಕ್ಷದ ಅವನತಿಗೆ ಕಾರಣವಾಗಿದೆ.

ಈ ಭಾಗದಲ್ಲಿ ಸದೃಢವಾಗಿದ್ದ ಪಕ್ಷ ಲೋಕಸಭಾ ಚುನಾವಣೆಯಲ್ಲಿ ಮಕಾಡೆ ಮಲಗಿದ್ದು ಯಾವ ಅಡ್ಜೆಸ್ಟ್‌ಮೆಂಟ್ ರಾಜಕಾರಣದಿಂದ ಎಂದು ಪಕ್ಷದ ಪ್ರಮುಖರು ವಿಶ್ಲೇಷಿಸಲಿ. ಬಿ.ಬಿ.ಶಿವಪ್ಪ ಮಲ್ಲಿಕಾರ್ಜುನಯ್ಯ, ಡಾ.ವಿ.ಎಸ್.ಆಚಾರ್ಯ ಸೇರಿದಂತೆ ಅನೇಕ ಧುರೀಣರು, ಕಾರ್ಯಕರ್ತರು ಪಕ್ಷ ಸಂಘಟಿಸಿದ ಪರಿಣಾಮದಿಂದಲೇ ರಾಜ್ಯದಲ್ಲಿ ಬಿಜೆಪಿ ಅಧಿಕಾರ ಹಿಡಿಯಲು ಸಾಧ್ಯವಾಯಿತು. ಹಿಂದೂತ್ವದ ಬಗ್ಗೆ ರಾಜೀ ಮಾಡಿಕೊಳ್ಳದೆ, ಕುಟುಂಬ ರಾಜಕಾರಣದ ವಿರುದ್ಧ ಧ್ವನಿ ಎತ್ತಿದ್ದಕ್ಕಾಗಿ ಈಶ್ವರಪ್ಪ ಅವರನ್ನು ಹೊರಗಿಟ್ಟರು. ನಿಸ್ವಾರ್ಥ ಕಾರ್ಯಕರ್ತರು ತನು, ಮನ, ಧನ ಅರ್ಪಿಸಿದ ಮುಖಂಡರಿಂದ ಕರ್ನಾಟಕದಲ್ಲಿ ಪಕ್ಷ ಇಷ್ಟು ದೊಡ್ಡಮಟ್ಟಿಗೆ ಬೆಳೆಯಲು ಕಾರಣವಾಯಿತೇ ಹೊರತು ಸ್ವಯಂ ಘೋಷಿತ ಪೂಜ್ಯರಿಂದಲ್ಲ. ಮುಂದಾದರೂ ಅಡ್ಜೆಸ್ಟ್‌ಮೆಂಟ್ ರಾಜಕಾರಣ ನಿಲ್ಲದಿದ್ದರೆ, ಪಕ್ಷ ಮಕಾಡೆ ಮಲಗುವುದು ಖಚಿತ.

ಕುಟುಂಬ ರಾಜಕಾರಣಕ್ಕೆ ಕಡಿವಾಣ ಹಾಕಿ ನಿಜವಾದ ಜನಪರ ಕಾಳಜಿ ಇರುವ ನಾಯಕರಿಗೆ ಪಕ್ಷ ಅವಕಾಶ ನೀಡಬೇಕು. ಕಾಟಾಚಾರಕ್ಕೆ ಸರ್ಕಾರದ ನೀತಿಗಳನ್ನು ಖಂಡಿಸಿ ಸಂಜೆ ವೇಳೆ ಅವರ ಮನೆಯ ಭೋಜನಕೂಟದಲ್ಲಿ ಭಾಗವಹಿಸುವ ನಾಯಕರ ಅವಶ್ಯಕತೆ ಪಕ್ಷಕ್ಕಿಲ್ಲ ಎಂದಿದ್ದಾರೆ.

ಯತ್ನಾಳ್ ಪರ ಇಂದು ಆಪ್ತರ ಸಭೆ

ಮಾಹಿತಿ ನೀಡಿ, ನಾವೆಲ್ಲರೂ ಯತ್ನಾಳ್ ಜೊತೆಗಿದ್ದೇವೆ ಅವರನ್ನು ಒಂಟಿಯಾಗಲು ಬಿಡುವುದಿಲ್ಲ ಎಂದಿದ್ದಾರೆ. ಯತ್ನಾಳ್ ವಿರುದ್ಧದ ಕ್ರಮ ನಿರೀಕ್ಷಿತ. ಇದು ನಮ್ಮ ವಿರೋಧಿ ಬಣಕ್ಕೂ ಎಚ್ಚರಿಕೆ, ನಮಗೆ ಹಿಂದೆಯೇ ಇದರ ವಾಸನೆ ಬಡಿದಿತ್ತು. ಯತ್ನಾಳ್ ಒಂದು ದೊಡ್ಡ ಸಮಾಜವನ್ನು ಪ್ರತಿನಿಧಿಸುವ ಮುಖಂಡ ಹಾಗೂ ನಮ್ಮ ಪಕ್ಷದ ಮುಂಚೂಣಿಯಲ್ಲಿರುವ ನಾಯಕರ ಸಾಲಿನಲ್ಲಿರುವವರು. ವರಿಷ್ಠರ ನಿರ್ಧಾರವನ್ನು ನಾವು ಪ್ರಶ್ನೆ ಮಾಡುವುದಿಲ್ಲ. ಆದರೆ, ಅವರ ಮೇಲೆ ಕೈಗೊಂಡಿರುವ ಉಚ್ಚಾಟನೆ ಕ್ರಮವನ್ನು ಮರುಪರಿಶೀಲಿಸುವಂತೆ ಮನವಿ ಮಾಡಿಕೊಳ್ಳುತ್ತೇವೆ ನಾನು ಕೂಡ ಪಕ್ಷದ ವೇದಿಕೆ ಮೇಲೆ ನಾಯಕರ ವಿರುದ್ಧ ಹರಿಹಾಯ್ದಿದ್ದೇನೆ. ಯತ್ನಾಳ್ ಮೇಲೆ ಹೆಚ್ಚು ಪ್ರೀತಿ ಇದ್ದಿದ್ದರಿಂದ ಅವರನ್ನು ಉಚ್ಚಾಟಿಸಲಾಗಿದೆ. ಮುಂದಿನ ದಿನಗಳಲ್ಲಿ ಎಲ್ಲವೂ ಸರಿಹೋಗುತ್ತದೆ ಎಂಬುದು ನಮ್ಮ ಭಾವನೆ ಎಂದರು. ಯತ್ನಾಳ್ ಸೇರಿದಂತೆ ನಾವೆಲ್ಲರೂ ಬಿಜೆಪಿಯಲ್ಲಿಯೇ ಇರುತ್ತೇವೆ, ಪಕ್ಷ ಬಿಡುವ ಪ್ರಶ್ನೆಯೇ ಇಲ್ಲ. ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರಲು ಶ್ರಮಿಸುತ್ತೇವೆ ಎಂದರು.

ನಟಿ ರನ್ಯಾಗೆ ಜೈಲೇ ಗತಿ

ಜಾಮೀನು ನಿರಾಕರಿಸಿದೆ. ರನ್ಯಾ ರಾವ್ ಈಗ ಜಾಮೀನು ಕೋರಿ ಹೈಕೋರ್ಟ್ ಮೆಟ್ಟಿಲೇರುವ ಸಾಧ್ಯತೆ ಇದೆ.

ರನ್ಯಾರಾವ್ ಪರವಾಗಿ ಹಿರಿಯ ವಕೀಲ ಕಿರಣ್ ಜವಳಿ ಅವರು ವಾದ ಮಂಡಿಸಿದರೆ, ಕಂದಾಯ ಗುಪ್ತಚರ ನಿರ್ದೇಶನಾಲಯದ(ಡಿಆರ್‌ಐ) ಪರವಾಗಿ ವಕೀಲ ಮಧು ರಾವ್ ವಾದ ಮಂಡಿಸಿದ್ದರು. ವಾದ–ಪ್ರತಿವಾದಗಳನ್ನು ಆಲಿಸಿದ್ದ ಕೋರ್ಟ್, ತೀರ್ಪನ್ನು ಇಂದಿಗೆ ಕಾಯ್ದಿರಿಸಿತ್ತು. ಅದರಂತೆ ಕೋರ್ಟ್ ಇಂದು ರನ್ಯಾ ಜಾಮೀನು ಅರ್ಜಿ ವಜಾಗೊಳಿಸಿ ಆದೇಶ ಹೊರಡಿಸಿದೆ. ಮಾರ್ಚ್ 3ರ ರಾತ್ರಿ ದುಬೈನಿಂದ ಎಮಿರೇಟ್ಸ್ ಏರ್‌ಲೈನ್ಸ್ ವಿಮಾನದಲ್ಲಿ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದ ನಟಿಯನ್ನು ಅಧಿಕಾರಿಗಳು ತಪಾಸಣೆಗೆ ಒಳಪಡಿಸಿದ್ದು, ಈ ವೇಳೆ ನಟಿ ಬಳಿ 14.80 ಕೆಜಿ ಚಿನ್ನ ಪತ್ತೆಯಾಗಿತ್ತು. ತಕ್ಷಣ ನಟಿಯನ್ನು ಬಂಧಿಸಲಾಗಿತ್ತು.

ಮತ್ತೊಬ್ಬ ಆರೋಪಿ ಬಂಧನ

ಬೆಂಗಳೂರು, ಮಾ.27– ನಟಿ ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕಂದಾಯ ಗುಪ್ತಚರ ನಿರ್ದೇಶನಾಲಯ (ಡಿಆರ್‌ಐ) ಬುಧವಾರ ಮತ್ತೊಬ್ಬ ಆರೋಪಿಯನ್ನು ಬಂಧನಕ್ಕೊಳಪಡಿಸಿದೆ.

ಬಂಧಿತನನ್ನು ಬಳ್ಳಾರಿ ಮೂಲದ ಚಿನ್ನದ ವ್ಯಾಪಾರಿ ಸಾಹಿಲ್ ಸಕಾರಿಯಾ ಜೈನ್ ಎಂದು ಗುರ್ತಿಸಲಾಗಿದೆ. ಇದರೊಂದಿಗೆ ಈ ಪ್ರಕರಣದಲ್ಲಿ ಮೂರನೇ ಆರೋಪಿ ಬಂಧನವಾಗಿದೆ. ಈತ ಭಾರತದಲ್ಲಿ ಕಳ್ಳಸಾಗಣೆ ಮಾಡಿದ ಚಿನ್ನವನ್ನು ಮಾರಾಟ ಮಾಡುವ ಮತ್ತು ಹವಾಲಾ ವಹಿವಾಟುಗಳಿಗೆ ಅನುಕೂಲ ಮಾಡಿಕೊಡುವ ಕೆಲಸದಲ್ಲಿ ಭಾಗಿಯಾಗಿದ್ದಾನೆ ಎಂದು ಆರೋಪಿಸಲಾಗಿದೆ. ವಿದೇಶದಿಂದ ಕಳ್ಳ ಸಾಗಣೆ ಮೂಲಕ ಚಿನ್ನ ಮಾರಾಟದಲ್ಲಿ ರನ್ಯಾರವರಿಗೆ ಈತ ನೆರವು ನೀಡಿದ್ದ ಎಂದು ಹೇಳಲಾಗುತ್ತಿದ್ದು, ಈ ಸಂಬಂಧ ಡಿಜಿಟಲ್ ದಾಖಲೆಗಳು ಕೂಡ ಪೊಲೀಸರಿಗೆ ಲಭ್ಯವಾಗಿದೆ ಎಂದು ಮೂಲಗಳು ತಿಳಿಸಿವೆ.

323.05 ಕೋಟಿ ಉಳಿತಾಯ ಬಜೆಟ್

ಹಾಗೂ ಇನ್ನಿತರ ಬಾಬ್ತುಗಳಿಗೆ 54,849.59 ಲಕ್ಷ ರೂ.ಗಳನ್ನು ವೆಚ್ಚ ಮಾಡಲು ಉದ್ದೇಶಿಸಿ ಪ್ರಸಕ್ತ ಸಾಲಿಗೆ 323.05 ಕೋಟಿ ರೂ. ಉಳಿತಾಯ ಪ್ರಸ್ತಾಪಿಸಲಾಗಿದೆ.

ಆದಾಯಗಳು: ಬಡಾವಣೆ ನಕ್ಷೆ ಶುಲ್ಕ, ಕಾರ್ಮಿಕರ ಕಲ್ಯಾಣ ನಿಧಿ, ಕುಡಿಯುವ ನೀರು ಮತ್ತು ಮಲಿನ ನೀರು ಹೊರ ಸೂಸುವ ಮಾರ್ಗ, ಜಲಸಂಗ್ರಹ ಶುಲ್ಕ, ಹಸಿರು ಶುಲ್ಕ ಸೇರಿ ಒಟ್ಟಾರೆ 16,340.12 ಲಕ್ಷ ರೂ., ಕೆರೆ ಪುನಶ್ಚೇತನ ಶುಲ್ಕ 4.658.12 ಲಕ್ಷ ರೂ., ಉದ್ಯಾನವನ ಮತ್ತು ತೆರೆದ ಪ್ರದೇಶಗಳ ಅಭಿವೃದ್ಧಿ ಶುಲ್ಕ, ಕೊಳಚೆ ಪ್ರದೇಶಗಳ ಅಭಿವೃದ್ಧಿ ಶುಲ್ಕದಲ್ಲಿ 149.06 ಲಕ್ಷ ರೂ., ತುಂಡು ಜಾಗ ಹಂಚಿಕೆಯಿಂದ 2500 ಲಕ್ಷ ರೂ., ಮೂಲೆ ಮತ್ತು ಮಧ್ಯಂತರ ನಿವೇಶನಗಳ ಹರಾಜಿನಿಂದ 20 ಸಾವಿರ ಲಕ್ಷ ರೂ., ಸಿಎ ನಿವೇಶನಗಳ ಹಂಚಿಕೆಯಿಂದ 2319 ಲಕ್ಷ ರೂ., ನಿವೇಶನ ಹಂಚಿಕೆ ನಿಯಮ ಉಲ್ಲಂಘನೆ ದಂಡ ಶುಲ್ಕದಿಂದ 985.50 ಲಕ್ಷ ರೂ., ವಾಣಿಜ್ಯ ಸಂಕೀರ್ಣಗಳ ಬಾಡಿಗೆಯಿಂದ 8445.50 ಲಕ್ಷ ರೂ., ನಿಶ್ಚಿತ ಠೇವಣಿ ಮತ್ತು ಬಡ್ಡಿ 24,640 ಲಕ್ಷ ರೂ. ಸೇರಿದಂತೆ ಒಟ್ಟು ಪ್ರಾಧಿಕಾರಕ್ಕೆ 87,154.30 ಲಕ್ಷ ರೂ. ಆದಾಯವನ್ನು ನಿರೀಕ್ಷಿಸಲಾಗಿದೆ.

ಖರ್ಚಿನ ಬಾಬ್ತು: ಪ್ರಾಧಿಕಾರದಲ್ಲಿ ಪ್ರಸಕ್ತ ಸಾಲಿಗೆ ಬಡಾವಣೆಗಳಲ್ಲಿನ ಅಭಿವೃದ್ಧಿ ಕಾರ್ಯ, ಆಡಳಿತ ಹಾಗೂ ಇನ್ನಿತರ ಕಾಮಗಾರಿಗಳಿಗಾಗಿ ಒಟ್ಟು 54,849.59 ಲಕ್ಷ ರೂ.ಗಳನ್ನು ಖರ್ಚು ಮಾಡಲು ನಿರ್ಧರಿಸಲಾಗಿದೆ. ಮಹಾ ಯೋಜನೆಯ ರಸ್ತೆ ಅಭಿವೃದ್ಧಿಗಳಿಗಾಗಿ 2500 ಲಕ್ಷ ರೂ., ಸಾಮಾನ್ಯ ಆಡಳಿತ, ಸಾದಿಲ್ವಾರು ವೆಚ್ಚ, ಅಧಿಕಾರಿ ಮತ್ತು ಸಿಬ್ಬಂದಿ ವೇತನ, ಕಾನೂನು ವೆಚ್ಚ, ಲೆಕ್ಕ ಪರಿಶೋಧನಾ ಶುಲ್ಕ ಹಾಗೂ ಹೊರ ಗುತ್ತಿಗೆ ನೌಕರರ ವೆಚ್ಚಕ್ಕಾಗಿ 5,438.38 ಲಕ್ಷ ರೂ.ಗಳು ವ್ಯಯವಾಗಲಿದೆ ಎಂದು ಅಂದಾಜಿಸಲಾಗಿದೆ. ಮಹಾ ಯೋಜನೆ ಪರಿಷ್ಕರಣೆಗಾಗಿ 400 ಲಕ್ಷ ರೂ., ಪ್ರಾಧಿಕಾರದ ಕಟ್ಟಡಗಳ ನಿರ್ವಹಣೆ ಮತ್ತು ಆಸ್ತಿ ಸಂರಕ್ಷಣೆಗಾಗಿ 972.96 ಲಕ್ಷ ರೂ., ಸಾಮಾನ್ಯ ಆಡಳಿತ ಮತ್ತು ಮಹಾ ಯೋಜನೆಯ ನಿಧಿಯಡಿ 14,291.36 ಲಕ್ಷ ರೂ., ಕೆರೆಗಳ ಅಭಿವೃದ್ಧಿಗೆ 4,000 ಲಕ್ಷ ರೂ., ಕೊಳಚೆ ಪ್ರದೇಶಗಳ ಅಭಿವೃದ್ಧಿಗೆ 136.75 ಲಕ್ಷ ರೂ., ಪ್ರಾಧಿಕಾರದ ಬಡಾವಣೆಗಳಿಗೆ ಭೂ ಸ್ವಾಧೀನ ವೆಚ್ಚ, ಉದ್ಯಾನವನಗಳ ಅಭಿವೃದ್ಧಿ, ಗುಂಪು ವಸತಿ ಮನೆಗಳ ನಿರ್ಮಾಣಕ್ಕಾಗಿ 32,221.05 ಲಕ್ಷ ರೂ. ಹಾಗೂ ಮುಡಾ ಬಡಾವಣೆಗಳ ನಿರ್ವಹಣೆಗಾಗಿ 4,200 ಲಕ್ಷ ರೂ. ಗಳನ್ನು ವೆಚ್ಚ ಮಾಡಲು ಅಂದಾಜಿಸಲಾಗಿದೆ.

ಪ್ರಸಕ್ತ ಸಾಲಿನಲ್ಲಿ ವಿವಿಧ ಮೂಲಗಳಿಂದ ಆರ್ಥಿಕ ಸಂಪನ್ಮೂಲ ಕ್ರೋಢೀಕರಣಕ್ಕೆ ಹೆಚ್ಚು ಒತ್ತು ನೀಡಿದ್ದು, ಮೈಸೂರು ನಗರ ಮತ್ತು ಸುತ್ತಮುತ್ತಲಿನ ಪ್ರಾಧಿಕಾರದ ವ್ಯಾಪ್ತಿ ಪ್ರದೇಶದಲ್ಲಿ ಜನಸಾಮಾನ್ಯರಿಗೆ ಮೂಲಸೌಕರ್ಯ ಒದಗಿಸಲು ಯೋಜನೆಗಳನ್ನು ರೂಪಿಸಿದ್ದು, ಸರ್ಕಾರದ ಅನುಮೋದನೆ ಪಡೆದು, ಅನುಷ್ಠಾನಗೊಳಿಸುವ ಬಗ್ಗೆ ಪ್ರಸಕ್ತ ಸಾಲಿನ ಆಯ–ವ್ಯಯದಲ್ಲಿ ಪ್ರಾಧಿಕಾರವು ಪ್ರಸ್ತಾಪಿಸಿದೆ.

ನಿರ್ಮಾಣ ಉದ್ದೇಶ

ರಸ್ತೆಯಲ್ಲಿ ವಾಹನ ದಟ್ಟಣೆ ದಿನೇ ದಿನೆ ಹೆಚ್ಚಾಗುತ್ತಿದೆ. ಸಾಂಸ್ಕೃತಿಕ ನಗರಿಗೆ ಮತ್ತೊಂದು ಪೆರಿಫೆರಲ್ ರಿಂಗ್ ರಸ್ತೆ ಅಗತ್ಯವಿದೆ ಎಂದು ನಿರ್ಧರಿಸಿ, ಈ ಯೋಜನೆ ರೂಪಿಸಲಾಗಿದೆ. ವಿಜಯನಗರ 4ನೇ ಹಂತ, 2ನೇ ಘಟ್ಟ ಬಡಾವಣೆಯ ಬಸವನಹಳ್ಳಿ ಸರ್ವೆ ನಂ.5 ಮತ್ತು 6ರ 9 ಎಕರೆ ವಿಸ್ತೀರ್ಣದಲ್ಲಿ ಕ್ರೀಡಾ ಸಂಕೀರ್ಣ ಅಭಿವೃದ್ಧಿಪಡಿಸಲು ಉದ್ದೇಶಿಸಿದ್ದು, ಅದಕ್ಕಾಗಿ ಪ್ರಸಕ್ತ ಸಾಲಿನಲ್ಲಿ 10 ಕೋಟಿ ರೂ.ಗಳನ್ನು ಕಾಯ್ದಿರಿಸಲಾಗಿದೆ. ಮೈಸೂರು ನಗರದ ಹೃದಯ ಭಾಗದಲ್ಲಿ ನಿರ್ಮಾಣ ಹಂತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಭವನ ಕಟ್ಟಡದ ಉಳಿದ ಕಾಮಗಾರಿಗಳಾದ ಶೌಚಾಲಯ, ಒಳಾಂಗಣ ವಿನ್ಯಾಸ, ವಾಲ್ ಪ್ಯಾನಲಿಂಗ್, ಫಾಲ್ಸ್ ಸೀಲಿಂಗ್, ಯುಜಿಡಿ, ಮಳೆ ನೀರು ಕೊಯ್ಲು, ಒಳಾಂಗಣ ವಿದ್ಯುದ್ದೀಕರಣ, ಹವಾನಿಯಂತ್ರಿತ ವ್ಯವಸ್ಥೆ, ಧ್ವನಿವರ್ಧಕ, ಆಸನಗಳ ವ್ಯವಸ್ಥೆ ಹಾಗೂ ಲಿಫ್ಟ್ ಅಳವಡಿಗೆ ಅಗತ್ಯವಿರುವ 23.84 ಕೋಟಿ ರೂ.ಗಳನ್ನು ಮುಡಾದಿಂದ ಭರಿಸಲು ಆಯ–ವ್ಯಯದಲ್ಲಿ ಪ್ರಸ್ತಾಪಿಸಲಾಗಿದೆ.

ಕುಕ್ಕರಹಳ್ಳಿ ಕೆರೆ ಬಳಿ ಲಾಲ್‌ಬಾಗ್ ಮಾದರಿ ಉದ್ಯಾನವನ ಅಭಿವೃದ್ಧಿಪಡಿಸಲು 2 ಕೋಟಿ ರೂ., ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ಸೇರಿದ ವಿಜಯಶ್ರೀಪುರ ಗ್ರಾಮದ ಸರ್ವೆ ನಂ. 1ರಲ್ಲಿನ 5 ಎಕರೆ ಜಾಗದಲ್ಲಿ ಸಾರ್ವಜನಿಕ–ಖಾಸಗಿ ಸಹಭಾಗಿತ್ವದಲ್ಲಿ ಪಂಚತಾರಾ ಹೋಟೆಲ್ ನಿರ್ಮಿಸಲು ಉದ್ದೇಶಿಲಾಗಿದೆ. ಅದೇರೀತಿ ಅಲ್ಲಿನ 3 ಎಕರೆ ಪ್ರದೇಶದಲ್ಲಿ ವಾಣಿಜ್ಯ ಸಂಕೀರ್ಣ ನಿರ್ಮಿಸುವ ಬಗ್ಗೆ ಆಯ–ವ್ಯಯದಲ್ಲಿ ಪ್ರಸ್ತಾಪಿಸಲಾಗಿದೆ. ಉಳಿದಂತೆ ಅಜಯ್ಯನಹುಂಡಿ ಮತ್ತು ಕೇರ್ಗಳ್ಳಿ ಕೆರೆಗಳಿಗೆ ತ್ಯಾಜ್ಯ ನೀರು ಸೇರದಂತೆ ತಡೆಯಲು ಸಂಸ್ಕರಣಾ ಘಟಕ ಸ್ಥಾಪಿಸಲು 24.80 ಕೋಟಿ ರೂ., ಕೊಳಚೆ ಪ್ರದೇಶದ ಅಭಿವೃದ್ಧಿಗಾಗಿ 75 ಲಕ್ಷ ರೂ., ಹಿನಕಲ್ ಗ್ರಾಮದ ಸರ್ವೆ ನಂ. 64ರಲ್ಲಿ ವಸತಿ ಮತ್ತು ವಾಣಿಜ್ಯ ಬಡಾವಣೆ ನಿರ್ಮಿಸಲು 3.50 ಕೋಟಿ ರೂ., ಉದ್ಯಾನವನಗಳ ಅಭಿವೃದ್ಧಿಗೆ 15 ಕೋಟಿ ರೂ. ಸೇರಿದಂತೆ ವಿವಿಧ ಯೋಜನೆಗಳಿಗೆ ಇಂದು ಮಂಡಿಸಿದ ಬಜೆಟ್‌ನಲ್ಲಿ ಪ್ರಾಧಿಕಾರವು ಅಗತ್ಯ ಅನುದಾನವನ್ನು ಮೀಸಲಿರಿಸಿದೆ.

ಡಿಜಿಗೆ ದೂರು

ತೀರ್ಮಾನ ಕೈಗೊಳ್ಳಲಿದ್ದಾರೆ. ರಾಜೇಂದ್ರ ನೀಡಿರುವ ಕೊಲೆಯತ್ನದ ಆರೋಪ ಮತ್ತು ಹನಿಟ್ರ್ಯಾಪ್‌ಗೂ ಸಂಬಂಧವಿದೆಯೇ ಎಂಬ ಕುರಿತು ಸಿಐಡಿ ಇದೇ ವೇಳೆ ತನಿಖೆ ನಡೆಸಿದೆ. ಸಚಿವರ ಪುತ್ರ ರಾಜೇಂದ್ರ ಪೊಲೀಸ್ ಮಹಾನಿರ್ದೇಶಕರನ್ನು ಭೇಟಿ ಮಾಡಿ ತಮ್ಮ ಮೇಲೆ ಕೊಲೆ ಯತ್ನ ನಡೆದಿರುವ ಮಾಹಿತಿಯನ್ನು ನೀಡಿದ್ದಾರೆ. ರಾಜೇಂದ್ರ ಅವರ ದೂರನ್ನು ಆಲಿಸಿದ ಪೊಲೀಸ್ ಮಹಾನಿರ್ದೇಶಕರು, ತುಮಕೂರು ಪೊಲೀಸ್ ವರಿಷ್ಠಾಧಿಕಾರಿಗೆ ದೂರು ನೀಡುವಂತೆ ಸಲಹೆ ಮಾಡುವ ಜೊತೆಗೆ ಹನಿಟ್ರ್ಯಾಪ್ ಮತ್ತು ಕೊಲೆ ಯತ್ನ ಘಟನೆಗಳಿಗೆ ಸಂಬಂಧವಿದೆಯೇ ಎಂಬ ಬಗ್ಗೆ ಸಿಐಡಿ ತನಿಖೆಗೂ ಆದೇಶಿಸಿದರು.

ಕೊಲೆ ಯತ್ನ ನಡೆದಿದೆ

ರೂಪಿಸಲಾಗಿದೆ. ಕೊಲೆಗಾರನಿಗೆ ಐದು ಲಕ್ಷ ರೂಪಾಯಿ ಸಂದಾಯವಾಗಿದೆ ಎಂಬ ಮಾಹಿತಿ ನೀಡಿದ. ಜೊತೆಗೆ ಕೆಲವರ ಹೆಸರನ್ನೂ ತಿಳಿಸಿದ. ಆ ಆಡಿಯೊವನ್ನು ಡಿಜಿಗೆ ಕೊಟ್ಟೆ, ಅವರು ಎಸ್‌ಪಿ ಅವರಿಗೆ ಕೊಡಿ ಎಂದು ಹೇಳಿದ್ದಾರೆ. ನಾಳೆ ತುಮಕೂರು ಎಸ್‌ಪಿ ಅವರನ್ನು ಭೇಟಿ ಮಾಡಿ, ದೂರು ಕೊಡುತ್ತೇನೆ. ನನ್ನ ಫೋನ್‌ಗೆ ಕರೆಗಳು ಬರುತ್ತಿರುವ ಹಿನ್ನೆಲೆಯಲ್ಲಿ, ಹತ್ಯೆ ಯತ್ನದ ದೂರು ನೀಡಿದ್ದೇನೆ. ನನ್ನ ಕೊಲೆಗೆ ಸೋಮ, ಭರತ್ ಎಂಬುವವರು ಯತ್ನಿಸುತ್ತಿದ್ದಾರೆ ಎಂಬ ಮಾಹಿತಿ ಬಂದಿದೆ. ಜನವರಿಯಲ್ಲಿ ನನಗೆ ಮಾಹಿತಿ ಬಂದಾಗ ಅದು ತಮಾಷೆ ಎಂದುಕೊಂಡಿದ್ದೆ. ಆದರೆ, ಅದು ಈಗ ಗಂಭೀರವಾಗಿದೆ. ನನ್ನ ಮನೆಯಲ್ಲಿ ಸಿಸಿಟಿವಿ ಇದೆ. ಅದನ್ನು ತನಿಖಾಧಿಕಾರಿಗಳು ಪರಿಶೀಲಿಸಬೇಕು, ಇಬ್ಬರು ಬಂದಿದ್ದರು ಎಂಬುದು ಆಡಿಯೊದಲ್ಲಿದೆ ಎಂದರು.

ಯತ್ನಾಳ್ ಉಚ್ಚಾಟನೆಗೆ ಯಡಿಯೂರಪ್ಪ ಕಾರಣ

ಎಲ್ಲಾ ಲಿಂಗಾಯತ ಶಾಸಕರು ಬಿಜೆಪಿ ಬಿಟ್ಟು ಹೊರಬನ್ನಿ

ಧಾರವಾಡ, ಮಾ.27– ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಬಿಜೆಪಿಯಿಂದ ಉಚ್ಚಾಟನೆ ಮಾಡಿದ ಬೆನ್ನಲ್ಲೇ ಎಲ್ಲಾ ಲಿಂಗಾಯತ ಶಾಸಕರು ಬಿಜೆಪಿ ಬಿಟ್ಟು ಹೊರಬನ್ನಿ ಎಂದು ಕೂಡಲ ಸಂಗಮದ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ಕರೆ ನೀಡಿದ್ದಾರೆ.



ಧಾರವಾಡದಲ್ಲಿ ಮಾತನಾಡಿದ ಅವರು, ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆಗೆ ಬಿಎಸ್ ಯಡಿಯೂರಪ್ಪ ಮತ್ತು ಅವರ ಕುಟುಂಬವೇ ಕಾರಣ. ಇದನ್ನು ನಾನು ನೇರವಾಗಿ ಆರೋಪ ಮಾಡುತ್ತೇನೆ. ಬಿಜೆಪಿಯಲ್ಲಿರುವ ಪಂಚಮಸಾಲಿಗಳು ರಾಜೀನಾಮೆ ನೀಡಬೇಕು. ಪಕ್ಷದಲ್ಲಿರುವ ಪಂಚಮಸಾಲಿಗಳು ಹೊರಗೆ ಬರಬೇಕು. ಯತ್ನಾಳ್ ಉಚ್ಚಾಟನೆ ವಾಪಸ್ ಪಡೆಯಬೇಕು. ಇಲ್ಲದಿದ್ದರೆ ಪಂಚಮಸಾಲಿಗಳು ಬಿಜೆಪಿಯಿಂದ ಹೊರ ಬರಬೇಕು ಎಂದು ಕರೆ ನೀಡಿದ್ದಾರೆ.

ಯತ್ನಾಳ್ ಎಂದಿಗೂ ಪಕ್ಷ ವಿರೋಧಿ ಚಟುವಟಿಕೆ ನಡೆಸಿಲ್ಲ. ಕಾಣದ ಕೈಗಳು ಅವರನ್ನು ಉಚ್ಚಾಟನೆ ಮಾಡುವಂತೆ ಮಾಡಿವೆ. ಕುಟುಂಬ ರಾಜಕಾರಣ ಬೇಡ ಎನ್ನುವುದು ತಪ್ಪೇ. ಯತ್ನಾಳ್ ಏನೇ ಮಾತನಾಡಿದರೂ ಅವರು ಉತ್ತರ ಕರ್ನಾಟಕ, ಹಿಂದುತ್ವದ ಬಗ್ಗೆಯೇ ಮಾತನಾಡಿದ್ದಾರೆ ಎಂದರು. ಯತ್ನಾಳ್ ಅವರನ್ನು ಉಚ್ಚಾಟನೆ ಮಾಡಿ ಬಿಜೆಪಿ ತನ್ನ ಕಾಲ ಮೇಲೆ ತಾನೇ ಕಲ್ಲು ಹಾಕಿಕೊಂಡಿದೆ. ಇದರಿಂದ ಬಿಜೆಪಿ ಪಕ್ಷಕ್ಕೆ ಹಿನ್ನಡೆಯಾಗಲಿದೆ. ಈಗ ಬಿಜೆಪಿಗೆ 60 ಸ್ಥಾನ ಬಂದಿವೆ. ಮುಂದೆ ಮೂವತ್ತು ಸೀಟು ಕೂಡ ಬರುವುದಿಲ್ಲ. ಮೋದಿ ಹಾಗೂ ಅಮಿತ್ ಶಾ ಅವರಿಗೆ ಗೊತ್ತಿರದೇ ಇರುವ ಅಂಶಗಳು ಇಲ್ಲಿವೆ ಎಂದು ಹೇಳಿದರು.

ನಾವು ಉಗ್ರ ಹೋರಾಟ ಮಾಡುತ್ತೇವೆ. ಈ ಹೋರಾಟ ಪ್ರಧಾನಿ ಮೋದಿ, ಸಚಿವ ಅಮಿತ್ ಶಾ ವಿರುದ್ಧ ಅಲ್ಲ. ಪಂಚಮಸಾಲಿಗಳ ನಾಯಕತ್ವ ತುಳಿದವರ ವಿರುದ್ಧ ಪ್ರತಿಭಟನೆ ಮಾಡುತ್ತೇವೆ. ಅಂದು, ಕಿತ್ತೂರು ರಾಣಿ ಚನ್ನಮ್ಮಳಿಗೆ ಮೋಸ ಮಾಡಿದ ಶಕ್ತಿಗಳೇ ಈಗ ಹೀಗೆ ಮಾಡುತ್ತಿವೆ. 21ನೇ ಶತಮಾನದಲ್ಲಿ ಅದೇ ಶಕ್ತಿಗಳು ಅಟ್ಟಹಾಸ ಮೆರೆಯುತ್ತಿವೆ. ಉಚ್ಚಾಟನೆ ವಾಪಸ್ ಪಡೆಯಲೇಬೇಕು. ಇಲ್ಲದೇ ಹೋದಲ್ಲಿ ಬಿಜೆಪಿಗೆ ತಕ್ಕ ಪಾಠ ಕಲಿಸುತ್ತೇವೆ ಎಂದು ಎಚ್ಚರಿಕೆ ನೀಡಿದರು. ಬೆಳಗಾವಿಯಲ್ಲಿ ನಾಳೆ ಸಭೆ ಕರೆಯುತ್ತೇನೆ. ಮುಂದೆ ಒಂದು ದಿನ ರಾಜ್ಯಾದ್ಯಂತ ಪ್ರತಿಭಟನೆ ಮಾಡುತ್ತೇವೆ. ವೀರೇಂದ್ರ ಪಾಟೀಲ, ಜೆ.ಎಚ್.ಪಟೇಲರಂತೆ ಯತ್ನಾಳ್‌ರಿಗೂ ಮಾಡುತ್ತಿದ್ದಾರೆ. ಹೈಕಮಾಂಡ್ ನಮಗೆ ಕುಟುಂಬ ರಾಜಕಾರಣ ಬೇಕು ಎಂದು ನೇರವಾಗಿ ಹೇಳಲಿ. ನಾಳೆ ಎಲ್ಲವನ್ನೂ ಸಭೆಯಲ್ಲಿ ನಿರ್ಧಾರ ಮಾಡುತ್ತೇವೆ ಎಂದು ಗುಡುಗಿದರು.

ಆರ್‌ಟಿಐ ಕಾರ್ಯಕರ್ತನಿಂದ ಲಂಚ ಸ್ವೀಕಾರ: ಮಾಹಿತಿ ಹಕ್ಕು ಆಯೋಗದ ಆಯುಕ್ತ ಲೋಕಾಯುಕ್ತ ಬಲೆಗೆ

ಕಲಬುರಗಿ, ಮಾ.27– ಕಪ್ಪು ಪಟ್ಟಿಯಲ್ಲಿರುವ ಆರ್‌ಟಿಐ ಕಾರ್ಯಕರ್ತನ ಹೆಸರು ತೆಗೆಯಲು 1 ಲಕ್ಷ ಲಂಚ ಪಡೆಯುವಾಗ ರಾಜ್ಯ ಮಾಹಿತಿ ಆಯೋಗ ಕಲಬುರಗಿ ಪೀಠದ ಆಯುಕ್ತ ರವೀಂದ್ರ ಗುರುನಾಥ ಡಾಕಪ್ಪ ಅವರು ಗುರುವಾರ ರೆಡ್ ಹ್ಯಾಂಡ್ ಆಗಿ ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಕಪ್ಪು ಪಟ್ಟಿಯಿಂದ ಆರ್‌ಟಿಐ ಕಾರ್ಯಕರ್ತ ಸಾಯಿಬಣ್ಣ ಅವರ ಹೆಸರು ತೆಗೆಯಲು ಡಾಕಪ್ಪ ಅವರು ರೂ. 3 ಲಕ್ಷಕ್ಕೆ ಬೇಡಿಕೆ ಇಟ್ಟಿದ್ದರು ಎನ್ನಲಾಗಿದೆ. ಗುರುವಾರ 1 ಲಕ್ಷ ಹಣವನ್ನು ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಿಸಿಕೊಂಡ ಬಳಿಕ ಅವರನ್ನು ಲೋಕಾಯುಕ್ತ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಲೋಕಾಯುಕ್ತ ಡಿವೈಎಸ್ ಪಿ ಗೀತಾ ಬೇನಾಳ್ ನೇತೃತ್ವದಲ್ಲಿ ಈ ದಾಳಿ ನಡೆಸಲಾಗಿದ್ದು, ಆರೋಪಿಯ ವಿಚಾರಣೆ ನಡೆಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

ಮುಡಾ ಬಜೆಟ್‌ಗೆ ಸದಸ್ಯರ ಮಿಶ್ರ ಪ್ರತಿಕ್ರಿಯೆ

ಅಗತ್ಯ ಯೋಜನೆಗಳ ಬಗ್ಗೆ ಮನವರಿಕೆ

ಮೈಸೂರು,ಮಾ.27(ಆರ್‌ಕೆ)–ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಮಂಡಿಸಿದ ಪ್ರಸಕ್ತ ಸಾಲಿನ ಆಯ–ವ್ಯಯಕ್ಕೆ ಪ್ರಾಧಿಕಾರದ ಸದಸ್ಯರು ಮಿಶ್ರ ಪ್ರತಿಕ್ರಿಯೆ ನೀಡಿದ್ದಾರೆ.

ಪ್ರಗತಿದಾಯಕವಲ್ಲ: 2025–26ನೇ ಸಾಲಿಗೆ ಮಂಡಿಸಿರುವ ಮುಡಾ ಬಜೆಟ್ ದೂರದೃಷ್ಟಿಯಿಲ್ಲದ ಹಾಗೂ ಸಮಗ್ರ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು



ರೂಪಿಸಿರುವುದಲ್ಲ ಎಂದು ಶಾಸಕ ತನ್ವೀರ್ ಸೇಠ್ ಅಸಮಾಧಾನ ವ್ಯಕ್ತಪಡಿಸಿದರು. ಮೈಸೂರು ಮಹಾ ಯೋಜನೆ ವ್ಯಾಪ್ತಿಯಲ್ಲಿರುವ ರಸ್ತೆಗಳ ಅಗಲೀಕರಣ, ಒಳಚರಂಡಿ, ಕುಡಿಯುವ ನೀರು ಹಾಗೂ ಮುಡಾ ಆಸ್ತಿಗಳ ಸಂರಕ್ಷಣೆ ಬಗ್ಗೆ ಆಯ–ವ್ಯಯದಲ್ಲಿ ಪ್ರಸ್ತಾಪಿಸಿಲ್ಲ. ನೀವು ಈಗ ಇರುವ ಆಸ್ತಿಗಳನ್ನು ಸಮಂಜಸವಾಗಿ ಬಳಸಿಕೊಳ್ಳದೆ ಕೆಲವೊಂದು ಕಟ್ಟಡಗಳು ಶಿಥಿಲಾವಸ್ಥೆಯಲ್ಲಿರುವಾಗ ಅನಗತ್ಯವಾಗಿ ವಾಣಿಜ್ಯ ಸಂಕೀರ್ಣ ನಿರ್ಮಾಣ ಮಾಡುತ್ತೇವೆಂದು ಹೇಳಿರುವುದು ಹಾಸ್ಯಾಸ್ಪದ ಎಂದು ಛೇಡಿಸಿದರು.

ಮೈಸೂರು ನಗರಾದ್ಯಂತ ಅನಧಿಕೃತ ಬಡಾವಣೆಗಳು ತಲೆಯೆತ್ತುತ್ತಿವೆ. ಮುಡಾ ಆಸ್ತಿಗಳು ಎಲ್ಲಿವೆ, ಎಷ್ಟಿವೆ ಎಂಬುದೇ ಖಚಿತವಾಗಿ ನಿಮಗೆ ಗೊತ್ತಿಲ್ಲ. ಅವುಗಳ ರಕ್ಷಣೆಗೆ ಈ ಹಿಂದೆ ಎಸ್ಟೇಟ್ ಆಫೀಸರ್ ನೇಮಿಸಿ, ಪ್ರತ್ಯೇಕ ಟಾಸ್ಕ್‌ಫೋರ್ಸ್ ರಚಿಸುವ ಬಗ್ಗೆ ಚರ್ಚೆಯಾಗಿತ್ತು. ಆದರೆ ಇಂದು ಬಜೆಟ್‌ನಲ್ಲಿ ಇದರ ಕುರಿತು ಯಾವುದೇ ಪ್ರಸ್ತಾಪ ಮಾಡದಿರುವುದು ವಿಪರ್ಯಾಸ ಎಂದು ಅಸಮಾಧಾನ ವ್ಯಕ್ತಪಡಿಸಿದರು.



ಅವೈಜ್ಞಾನಿಕ: ಇಂದು ಮಂಡಿಸಿರುವ ಪ್ರಾಧಿಕಾರದ ಬಜೆಟ್ ಅವೈಜ್ಞಾನಿಕ ವಾಗಿದ್ದು, ವಿಜಯಶ್ರೀಪುರದ ಹಲವು ವರ್ಷಗಳ ವಿವಾದವನ್ನು ಬಗೆಹರಿಸದೆ ಅಲ್ಲಿ ಅಭಿವೃದ್ಧಿ ಕಾರ್ಯ ಮಾಡುತ್ತೇವೆಂದು ಹೇಳಿರುವುದು ಸರಿಯಲ್ಲ. ಮುಡಾದಲ್ಲಿ ಈಗಾಗಲೇ ಎಲ್ಲಾ ನಿವೇಶನಗಳನ್ನು ಕೊಳ್ಳೆ ಹೊಡೆಯಲಾಗಿದೆ. ಶೇ 50:50ರ ಅನುಪಾತದಲ್ಲಿ ಅನುಮೋದನೆಯನ್ನೇ ಪಡೆಯದೆ ರಚಿಸಿದ್ದ ಬಡಾವಣೆಗಳಲ್ಲಿ ಈ ಹಿಂದಿನ ಆಯುಕ್ತರು ನಿವೇಶನಗಳನ್ನು ಹಂಚಿಕೆ ಮಾಡಿದ್ದಾರೆ. ಅವುಗಳನ್ನು ವಾಪಸ್ ಪಡೆಯುವ ಬಗ್ಗೆ ಯಾವುದೇ ಯೋಜನೆ ರೂಪಿಸಿಲ್ಲ ಎಂದು ಶಾಸಕ ಕೆ.ಹರೀಶ್‌ಗೌಡ ಕಿಡಿಕಾರಿದರು.

ಸಿಡಿಪಿ ಪ್ರಕಾರ ರಸ್ತೆಗಳಾಗಿಲ್ಲ: ಮೈಸೂರಿನ ಸಮಗ್ರ ಅಭಿವೃದ್ಧಿ (ಸಿಡಿಪಿ) ಪ್ರಕಾರ



ರಸ್ತೆಗಳು ನಿರ್ಮಾಣವಾಗಿಲ್ಲ. ಈ ಹಿಂದೆ ರಾಜ ಮಹಾ ರಾಜರ ಕಾಲದಲ್ಲಿ ಆಗಿರುವ ಅಭಿವೃದ್ಧಿಯನ್ನೇ ಈಗಲೂ ಚರ್ಚಿಸಲಾಗುತ್ತಿದೆಯೇ ಹೊರತು ಅಂದಿನ ಜನಸಂಖ್ಯೆ ಗನುಗುಣವಾಗಿ ಯುಜಿಡಿಗೆ ಅಳವಡಿಸಿದ್ದ ಪೈಪ್‌ಗಳೇ ಈಗಲು ಇವೆ. ಇಂದಿನ ಜನಸಂಖ್ಯೆಗನುಗುಣವಾಗಿ ಸಾರ್ವಜನಿಕರಿಗೆ ಮೂಲಸೌಲಭ್ಯ ಕಲ್ಪಿಸಲು ಸಾಧ್ಯವಾಗುತ್ತಿಲ್ಲ ಎಂದು ಹಿರಿಯ ಶಾಸಕ ಜಿ.ಟಿ.ದೇವೇಗೌಡ ತಿಳಿಸಿದರು. ಒಳಚರಂಡಿ ವ್ಯವಸ್ಥೆಯನ್ನು ಸೆಪ್ಟಿಕ್ ಟ್ಯಾಂಕ್ ಅಳವಡಿಸಿ ಸರಿಪಡಿಸದಿದ್ದರೆ ಮುಂದಿನ ದಿನಗಳಲ್ಲಿ ಮೈಸೂರು ನಗರ ಹಲವು ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಒಳಚರಂಡಿ ನೀರು, ಕುಡಿಯುವ ನೀರಿನ ಮಾರ್ಗಕ್ಕೆ ಸೇರುವುದು ಅಥವಾ ವಸತಿ ಪ್ರದೇಶ ಮತ್ತು ಕೈಗಾರಿಕೆಗಳ ತ್ಯಾಜ್ಯ ನೀರು ಕೆರೆಗಳಿಗೆ ತಲುಪುವುದನ್ನು ತಡೆಗಟ್ಟಬೇಕಾಗಿದೆ. ಈ ಬಗ್ಗೆ ಬಜೆಟ್‌ನಲ್ಲಿ ಪ್ರಸ್ತಾವನೆಯಾಗಿಲ್ಲ. ಬೃಹತ್ ಮಹಾನಗರಪಾಲಿಕೆ ಯೋಜನೆಯನ್ನು ಜಾರಿಗೊಳಿಸಿ ಅಗತ್ಯಕ್ಕೆ ತಕ್ಕಂತೆ ಮೂಲ ಸೌಕರ್ಯಗಳನ್ನು ಒದಗಿಸಿದರೆ ಮಾತ್ರ ಮುಂದಿನ ದಿನಗಳಲ್ಲಿ ಜನಸಾಮಾನ್ಯರಿಗೆ ಒಂದಷ್ಟು ಸಹಾಯ ಮಾಡಿದಂತಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಪೂರ್ವಭಾವಿ ಸಭೆ ಮಾಡಬೇಕಿತ್ತು: ಪ್ರತಿವರ್ಷ ಬಜೆಟ್ ಮಂಡಿಸುವಾಗ ಆಯ–ವ್ಯಯದಲ್ಲಿ ಏನೇನು ಸೇರಬೇಕು ಎಂಬುದರ ಬಗ್ಗೆ ಪೂರ್ವಭಾವಿಯಾಗಿ ಸಭೆ ಕರೆದು ಚರ್ಚಿಸ ಬೇಕಾಗಿತ್ತು. ಶಿಕ್ಷಣ, ಆರೋಗ್ಯ ಹಾಗೂ ಮೂಲ ಸೌಲಭ್ಯಗಳಿಗೆ ಹೆಚ್ಚು ಒತ್ತು ನೀಡುವ ದೃಷ್ಟಿಯಿಂದ ಇನ್ನಷ್ಟು ಯೋಜನೆಗಳನ್ನು ಇಲ್ಲಿ ಸೇರಿಸಬಹುದಾಗಿತ್ತು. ಇನ್ನು ಮುಂದಾದರೂ ಮುಂಚಿತವಾಗಿ ಸಭೆ ಕರೆದು, ಸಲಹೆ, ಮಾರ್ಗದರ್ಶನಗಳನ್ನು ಪಡೆಯುವಂತೆ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಅಧಿಕಾರಿಗಳಿಗೆ ಸಲಹೆ ನೀಡಿದರು.



ತರಕಾರಿ ಮಾರುಕಟ್ಟೆಗಳನ್ನು ಹಸ್ತಾಂತರಿಸಿ: ಮೈಸೂರು ನಗರಾದ್ಯಂತ



ಮುಡಾದಿಂದ ಹಲವೆಡೆ ನಿರ್ಮಿಸಿರುವ ತರಕಾರಿ ಮಾರುಕಟ್ಟೆಗಳು ಹಲವು ವರ್ಷಗಳಿಂದ ಕಾರ್ಯನಿರ್ವಹಿಸದೆ ಸ್ಥಗಿತವಾಗಿರುವುದರಿಂದ ಅಲ್ಲಿ ಅನೈತಿಕ ಚಟುವಟಿಕೆಗಳು ನಡೆಯುತ್ತಿರುವುದರಿಂದ ಕಟ್ಟಡಗಳು ಶಿಥಿಲಗೊಳ್ಳುತ್ತಿವೆಯಾದ್ದರಿಂದ ಅವುಗಳನ್ನು ಮೈಸೂರು ಮಹಾನಗರಪಾಲಿಕೆಗೆ ಹಸ್ತಾಂತರಿಸುವಂತೆ ಶಾಸಕ ಟಿ.ಎಸ್.ಶ್ರೀವತ್ಸ ತಿಳಿಸಿದರು.

ಕೊಳಚೆ ಪ್ರದೇಶಗಳ ಅಭಿವೃದ್ಧಿ, ವೈಟ್ ಟಾಪಿಂಗ್ ಮತ್ತು ನಿರ್ವಹಣೆಗೆ ಹೆಚ್ಚು ಒತ್ತು ಕೊಡಬೇಕಿತ್ತು. ಸಂಪೂರ್ಣವಾಗಿ ಅಭಿವೃದ್ಧಿ ಮಾಡದೆ ಬಡಾವಣೆಗಳನ್ನು ಸ್ಥಳೀಯ ಸಂಸ್ಥೆಗಳಿಗೆ ವಹಿಸಲಾಗಿದೆ. ಆದರೆ ಉಳಿದ ಕಾಮಗಾರಿ ಪೂರ್ಣಗೊಳಿಸಿ ನಿರ್ವಹಣೆ ಮಾಡಲು ಒಂದಷ್ಟು ಅನುದಾನ ಕೊಡಬೇಕಿತ್ತು. ಜೆಪಿನಗರದಲ್ಲಿ ನಿರ್ಮಿಸಿರುವ ಪುಟ್ಟರಾಜ ಗವಾಯಿ ಕ್ರೀಡಾಂಗಣ ಅಭಿವೃದ್ಧಿಗೆ ಅನುದಾನ ಕೊಡಿ. ಜನರಿಗೆ ನಿವೇಶನ ಒದಗಿಸುವ ಬಗ್ಗೆ ಹೆಚ್ಚು ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಬಸ್ ಶೆಲ್ಟರ್ ನಿರ್ಮಾಣ: ನಂಜನಗೂಡು ಮುಡಾ ವ್ಯಾಪ್ತಿಗೆ ಸೇರಿರುವುದರಿಂದ ಅಲ್ಲಿನ ಕೆಲ ಬಸ್ ತಂಗುದಾಣಗಳಿಗೆ ಅನುದಾನ ಅಗತ್ಯವಿದೆ. ಮೈಸೂರಿನ ಡಾ.ಬಿ.ಆರ್.ಅಂಬೇಡ್ಕರ್ ಭವನ ಕಾಮಗಾರಿ ಪೂರ್ಣಗೊಳಿಸಲು ಅನುದಾನ ನೀಡಿರು ವುದು ಸ್ವಾಗತಾರ್ಹ ಎಂದು ಶಾಸಕ ದರ್ಶನ್ ತಿಳಿಸಿದರು.





ಶಾಲೆಗಳಿಗೆ ಅನುದಾನ: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿರುವ ಸರ್ಕಾರಿ ಶಾಲಾ ಕಟ್ಟಡಗಳು ಹಾಗೂ ಅಗತ್ಯ ಮೂಲಸೌಕರ್ಯ ಕಲ್ಪಿಸುವ ಸಲುವಾಗಿ ಪ್ರಾಧಿಕಾರವು ಅನುದಾನ ಮೀಸಲಿರಿಸಿ ಕಾಮಗಾರಿ ಯನ್ನು ಕೈಗೆತ್ತಿಕೊಳ್ಳಬೇಕು ಎಂದು ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ, ಮುಡಾ ಬಜೆಟ್ ಸಭೆಯಲ್ಲಿ ತಿಳಿಸಿದರು.

ನಾಳೆ ಶನಿ ಮಹಾಶಾಂತಿ ಹೋಮ

ಮೈಸೂರು, ಮಾ.27– ಮೈಸೂರು ದಿವಾನ್ಸ್ ರಸ್ತೆಯಲ್ಲಿರುವ ಶ್ರೀ ಅಮೃತೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಮಾ.29ರ ಶನಿವಾರ ಮಹಾಶಾಂತಿ ಹೋಮ ಏರ್ಪಡಿಸಲಾಗಿದೆ. ಕುಂಭ ರಾಶಿಯಿಂದ ಶನಿಯು ಮೀನ ರಾಶಿಗೆ ಪ್ರವೇಶಿಸುವ ಪ್ರಯುಕ್ತ (ಸಿಂಹ, ಕನ್ಯಾ, ವೃಶ್ಚಿಕ, ಕುಂಭ, ಮೀನ, ಮೇಷ, ಕರ್ಕಾಟಕ, ತುಲಾ, ಮಕರ ರಾಶಿಯವರಿಗೆ) ಶಾಂತಿ ಹೋಮವನ್ನು ಏರ್ಪಡಿಸಲಾಗಿದೆ. ಬೆಳಗ್ಗೆ 10 ಗಂಟೆಗೆ ಪ್ರಾರಂಭವಾಗಿ ಮಧ್ಯಾಹ್ನ 12 ಗಂಟೆಗೆ ಪೂರ್ಣಾಹುತಿಯೊಂದಿಗೆ ಮುಕ್ತಾಯವಾಗಲಿದೆ. ಹೆಚ್ಚಿನ ಮಾಹಿತಿಗೆ ಪ್ರಧಾನ ಅರ್ಚಕರಾದ ಸೋಮಶೇಖರ್ ಇಲ್ಲವೆ ಶಂಕರ್ ಅವರನ್ನು ಮೊ.9535413361, 9886678091 ಸಂಪರ್ಕಿಸಬಹುದು.

ಸತೀಶ್ ಜಾರಕಿಹೊಳಿ ಸಿಎಂ ಆಗಲು ಹೆಚ್‌ಡಿಕೆ ಭೇಟಿಯಾಗಿರಬಹುದು

ಮೈಸೂರು, ಮಾ.27(ಆರ್‌ಕೆ)– ಸಚಿವ ಸತೀಶ್ ಜಾರಕಿಹೊಳಿ ಮುಖ್ಯಮಂತ್ರಿ ಆಗಲು ದೆಹಲಿಯಲ್ಲಿ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿರಬಹುದು ಎಂದು ಶಾಸಕ ಜಿ.ಟಿ. ದೇವೇಗೌಡ ಅಚ್ಚರಿ ಹೇಳಿಕೆ ನೀಡಿದ್ದಾರೆ.

ಮುಡಾ ಕಚೇರಿ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಆಗುವ ಅವಕಾಶ ಬಂದರೆ ಜೆಡಿಎಸ್‌ನ 18 ಶಾಸಕರ ಬೆಂಬಲ ಕೇಳಿರಬಹುದು. ರಾಜಕಾರಣದಲ್ಲಿ ಏನು ಬೇಕಾದರೂ ಆಗಬಹುದು. ಸದ್ಯದ ಪರಿಸ್ಥಿತಿ ನೋಡಿದರೆ ಸತೀಶ್ ಜಾರಕಿಹೊಳಿ ಬೇರೆ ಕಾರಣಕ್ಕೆ ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿಲ್ಲ. ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಮತ್ತು ಕೇಂದ್ರ ಸಚಿವರನ್ನು ಭೇಟಿ ಮಾಡಿದ್ದಾರೆ ಎಂದರೆ ಅದಕ್ಕೆ ಇದೇ ಕಾರಣ ಇರಬಹುದು. ಒಂದು ವೇಳೆ ಜೆಡಿಎಸ್ ಶಾಸಕರು ಸತೀಶ್ ಜಾರಕಿಹೊಳಿಗೆ ಬೆಂಬಲ ನೀಡಿದರೂ ನಾನು ತಟಸ್ಥನಾಗಿರುತ್ತೇನೆ. ಏಕೆಂದರೆ ಈಗ ನಾನು ತಟಸ್ಥನಾಗಿದ್ದೇನೆ ಎಂದಷ್ಟೇ ಅವರು ತಿಳಿಸಿದರು.



ಶಾಸಕ ಜಿಟಿಡಿ ಅಚ್ಚರಿ ಹೇಳಿಕೆ

ಬಸನಗೌಡ ಪಾಟೀಲ್ ಯತ್ನಾಳ್ ಉಚ್ಚಾಟನೆ ಸಂಬಂಧಪಟ್ಟಂತೆ ಪ್ರತಿಕ್ರಿಯಿಸಿದ ಅವರು, ಅದು ಬಿಜೆಪಿ ಆಂತರಿಕ ವಿಚಾರ. ಅದರ ಬಗ್ಗೆ ನಾನು ಪ್ರತಿಕ್ರಿಯಿಸಲ್ಲ. ಈ ಹಿಂದೆ ನಾನು ಅವರ ಬಗ್ಗೆ ಮಾತನಾಡಿದ್ದೆ. ಆಗ ಅವರೇ ಫೋನ್ ಮಾಡಿ, ಸರಿಪಡಿಸಿಕೊಂಡಿದ್ದರು. ಈಗ ನಮ್ಮ ಮಧ್ಯೆ ಏನೂ ಇಲ್ಲ. ಮೇಲಾಗಿ ಅದು ಬಿಜೆಪಿ ಆಂತರಿಕ ವಿಚಾರ. ಮುಂದೆ ಏನೇನು ಬೆಳವಣಿಗೆ ಆಗುತ್ತದೆಯೋ ಕಾದುನೋಡೋಣ.


ಹನಿಟ್ರ್ಯಾಪ್ ಕುರಿತಂತೆ ಮಾತನಾಡಿದ ಅವರು, ಸದನದಲ್ಲಿ ರಾಜಣ್ಣ, ಸುನಿಲ್‌ಕುಮಾರ್ ಹನಿಟ್ರ್ಯಾಪ್ ಬಗ್ಗೆ ಮಾತನಾಡಿದ್ದಾರೆ. ಕರ್ನಾಟಕ ರಾಜಕಾರಣ ಮತ್ತು ವಿಧಾನಸಭೆಗೆ ಇತಿಹಾಸವಿದೆ. ಇತ್ತೀಚಿನ ಘಟನಾವಳಿಗಳನ್ನು ಗಮನಿಸಿದರೆ ಪ್ರಜಾಪ್ರಭುತ್ವ ವೇಗವಾಗಿ ಬೆಳೆಯುತ್ತಿದೆ ಎಂದು ವ್ಯಂಗ್ಯ ಮಾಡಿದರು. ಸದನದಲ್ಲಿ ರಾಜ್ಯದ ಅಭಿವೃದ್ಧಿ ಚರ್ಚೆಯಾಗಬೇಕಿತ್ತು. ಕೇವಲ ಗಲಾಟೆ, ಗದ್ದಲದಲ್ಲೇ ಸದನ ಮುಗಿದಿದೆ. ಸಿದ್ದರಾಮಯ್ಯ ಅವರು ಏನು ಬಜೆಟ್ ಮಂಡನೆ ಮಾಡಿದರು ಎಂಬುದೇ ಜನಕ್ಕೆ ಗೊತ್ತಾಗಿಲ್ಲ. ಅಭಿವೃದ್ಧಿ ವಿಚಾರ ಚರ್ಚೆ ಆಗಿದ್ದರೆ ಜನರು ಖುಷಿ ಪಡುತ್ತಿದ್ದರು ಎಂದೂ ಅವರು ಇದೇ ಸಂದರ್ಭ ನುಡಿದರು.

ಬೇಸರ ತಂದಿದೆ: ಹನಿಟ್ರ್ಯಾಪ್ ವಿಚಾರ ಯಾಕೆ ಚರ್ಚೆಗೆ ಬಂತು ಅಂತ ನಾನು ಹೇಳಲ್ಲ, ಅದರ ಬಗ್ಗೆ ತನಿಖೆಯಾಗಬೇಕು. ಯಾವ ಉದ್ದೇಶದಿಂದ ಚುನಾಯಿತ ಪ್ರತಿನಿಧಿಗಳು ಈ ರೀತಿ ಮಾಡುತ್ತಿದ್ದಾರೆಂಬುದು ತಿಳಿಯಲಿ. ಆದರೆ ಈ ಬೆಳವಣಿಗೆ ಬೇಸರ ತಂದಿದೆ ಎಂದು ಶಾಸಕ ತನ್ವೀರ್ ಸೇಠ್ ತಿಳಿಸಿದರು. ಸ್ಪಷ್ಟ ಬಹುಮತದಿಂದ ಆಯ್ಕೆಯಾದ ಸರ್ಕಾರ ಒಂದಷ್ಟು ಒಳ್ಳೆಯ ಆಡಳಿತ ಕೊಡಬೇಕು. ವೈಯಕ್ತಿಕ ವಿಚಾರಗಳನ್ನು ರಾಜಕೀಯದಲ್ಲಿ ತಂದಿದ್ದು ದುರಂತ. ಜಾತಿ, ಪ್ರಾಂತ್ಯ ಇಲ್ಲಿ ನುಸುಳಬಾರದಿತ್ತು ಎಂದ ಅವರು, ಸತೀಶ್ ಜಾರಕಿಹೊಳಿ, ಹೆಚ್‌ಡಿಕೆ ಭೇಟಿ ಕುರಿತಂತೆ ರಾಜಕಾರಣದಲ್ಲಿ ಯಾರೂ ಯಾರನ್ನಾದರೂ ಭೇಟಿಯಾಗಬಹುದು. ಕೆಲವೊಮ್ಮೆ ರಾಜ್ಯ ಸಚಿವರು, ಕೇಂದ್ರ ಸಚಿವರನ್ನು ಭೇಟಿ ಮಾಡುವ ಅನಿವಾರ್ಯತೆ ಇರುತ್ತದೆ ಎಂದರು.

ಎಸಿ ಕೋರ್ಟ್‌ನಲ್ಲಿ ತಕರಾರು ಅರ್ಜಿ ಬಾಕಿ

ಇತ್ಯರ್ಥಕ್ಕೆ ಮೇ 20ರ ಡೆಡ್‌ಲೈನ್ ಕೊಟ್ಟ ಸಚಿವ ಕೃಷ್ಣ ಬೈರೇಗೌಡ

ಬೆಂಗಳೂರು, ಮಾ.27– ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೇ 20ಕ್ಕೆ ಎರಡು ವರ್ಷವಾಗಲಿದೆ. ಅಷ್ಟರೊಳಗೆ ಉಪ ವಿಭಾಗಾಧಿಕಾರಿಗಳ (ಎಸಿ) ನ್ಯಾಯಾಲಯದಲ್ಲಿ ಬಾಕಿ ಇರುವ ತಕರಾರು ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಅಧಿಕಾರಿಗಳಿಗೆ ಗಡುವು ನೀಡಿದರು.



ಗುರುವಾರ ವಿಕಾಸಸೌಧ'ದಿಂದ ವಿಡಿಯೋ ಕಾನ್ಫರೆನ್ಸ್ ಮೂಲಕ ರಾಜ್ಯದ ಎಲ್ಲಾ ಉಪ ವಿಭಾಗಾಧಿಕಾರಿಗಳ ಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿ ಐದು ವರ್ಷಕ್ಕೆ ಮೇಲ್ಪಟ್ಟ 32,787 ಪ್ರಕರಣಗಳು ಬಾಕಿ ಇದ್ದವು. ಈ ಪೈಕಿ ಶೇ.82ರಷ್ಟು ಸರಾಸರಿಯಲ್ಲಿ 26,961 ಪ್ರಕರಣಗಳಿಗೆ ಇದೀಗ ಮುಕ್ತಿ ನೀಡಲಾಗಿದೆ. ಇದೇ ಸಮಯದಲ್ಲಿ ಒಂದು ವರ್ಷಕ್ಕೆ ಮೇಲ್ಪಟ್ಟ 59,339 ಪ್ರಕರಣಗಳ ಪೈಕಿ 40,394 ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ ಎಂದು ಅಧಿಕಾರಿಗಳ ಕೆಲಸಕ್ಕೆ ಮೆಚ್ಚುಗೆ ಸೂಚಿಸಿದರು.

ಕಳೆದ ಎರಡು ವರ್ಷಗಳಿಂದ ಅಧಿಕಾರಿಗಳು ಉತ್ತಮವಾಗಿ ಕೆಲಸ ನಿರ್ವಹಿಸುತ್ತಿದ್ದೀರಿ. ಎಸಿ ನ್ಯಾಯಾಲಯಗಳಲ್ಲಿನ ಪ್ರಕರಣಗಳ ವಿಲೇವಾರಿ ವೇಗ ಪಡೆಯುತ್ತಿದೆ. ಆದರೂ, ಎರಡು ವರ್ಷದಲ್ಲಿ ಎಲ್ಲಾ ಬಾಕಿ ಪ್ರಕರಣಗಳನ್ನೂ ಇತ್ಯರ್ಥಗೊಳಿಸಬೇಕು ಎಂಬ ಇಲಾಖೆಯ ಗುರಿಯನ್ನು ಮುಟ್ಟಲು ಸಾಧ್ಯವಾಗಿಲ್ಲ. ಪರಿಣಾಮ ಇನ್ನೂ 22,967 ಪ್ರಕರಣಗಳು ಬಾಕಿ ಇವೆ. ಮುಂದಿನ ಮೇ 20ಕ್ಕೆ ಸರ್ಕಾರಕ್ಕೂ ಎರಡು ವರ್ಷ ತುಂಬುತ್ತಿದ್ದು, ಅಷ್ಟರೊಳಗೆ ಈ ಪೈಕಿ ಕನಿಷ್ಟ 10 ರಿಂದ 12 ಸಾವಿರ ಪ್ರಕರಣಗಳನ್ನು ಇತ್ಯರ್ಥಗೊಳಿಸಿ ಎಂದರು.

ಅಲ್ಲದೆ, ಸರ್ಕಾರದ ಕಾನೂನಿನಂತೆ ಎಸಿ ನ್ಯಾಯಾಲಯದ ಪ್ರಕಣಗಳನ್ನು ಆರು ತಿಂಗಳ ಒಳಗೆ ಮುಗಿಸಬೇಕು ಎಂಬ ನಿಯಮ ಇದೆ. ಆದರೂ, ನಿಮಯ ಮೀರಿ ಐದು ವರ್ಷಕ್ಕೂ ಮೇಲ್ಪಟ್ಟ 5,826 ಪ್ರಕರಣಗಳು ಬಾಕಿ ಇದ್ದು, ಈ ಪ್ರಕರಣಗಳನ್ನು ಆದ್ಯತೆ ಮೇರೆ ಶೀಘ್ರ ವಿಲೇವಾರಿಗೊಳಿಸಬೇಕು. ಜೊತೆಗೆ ಉಪ ವಿಭಾಗಾಧಿಕಾರಿಗಳು ತಿಂಗಳಿಗೆ 300 ಹಾಗೂ ವಿಶೇಷ ಉಪ ವಿಭಾಗಾಧಿಕಾರಿಗಳು ತಿಂಗಳಿಗೆ ಕನಿಷ್ಟ 150 ಪ್ರಕರಣಗಳನ್ನು ವಿಲೇವಾರಿ ಮಾಡಬೇಕು ಎಂದು ಸೂಚಿಸಿದರು.

ಉಪ ವಿಭಾಗಾಧಿಕಾರಿಗಳ ನ್ಯಾಯಾಲಯಗಳಲ್ಲಿನ ಪ್ರಕರಣಗಳನ್ನು ಅಭಿಯಾನ ಮಾದರಿಯಲ್ಲಿ ಇತ್ಯರ್ಥ ಗೊಳಿಸಲಾಗುತ್ತಿದೆ. ಬಾಕಿ ಪ್ರಕರಣಗಳ ಇತ್ಯರ್ಥ ಹಿಂದೆಂದಿಗಿಂತಲೂ ಭಾರೀ ಮಟ್ಟದಲ್ಲಿ ಸುಧಾರಣೆಯಾಗಿದೆ. ಈ ನಡುವೆ ಪ್ರಕರಣಗಳ ಗುಣಮಟ್ಟದ ವಿಲೇವಾರಿಗೂ ಅಧಿಕಾರಿಗಳು ಹೆಚ್ಚಿನ ಒತ್ತು ನೀಡಿರುವುದು ಉತ್ತಮ ಬೆಳವಣಿಗೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಮೆಚ್ಚುಗೆ ಸೂಚಿಸಿದರು.

ಎಸಿ ನ್ಯಾಯಾಲಯಗಳಲ್ಲಿ ಐದು ವರ್ಷಕ್ಕೆ ಮೇಲ್ಪಟ್ಟ ಪ್ರಕರಣಗಳ ಪೈಕಿ ಶೇ.80ರಷ್ಟು ಹಾಗೂ ಒಂದು ವರ್ಷಕ್ಕೆ ಮೇಲ್ಪಟ್ಟ ಶೇ.70ರಷ್ಟು ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ. ಆದರೆ, ಡಿಸಿ ನ್ಯಾಯಾಲಯಕ್ಕೆ ಬಂದಿರುವ ಮೇಲ್ಮನವಿಗಳ ಸಂಖ್ಯೆ ಕೇವಲ ಶೇ.6ರಷ್ಟು ಮಾತ್ರ. ಈ ಸಂಖ್ಯೆ ಎಸಿ ನ್ಯಾಯಾಲಯಗಳಲ್ಲಿನ ಪ್ರಕರಣಗಳ ಗುಣಮಟ್ಟದ ಇತ್ಯರ್ಥಕ್ಕೆ ಸಾಕ್ಷಿಯಾಗಿದೆ. ಆದರೆ, ಮುಂದಿನ ದಿನಗಳಲ್ಲಿ ಗುಣಮಟ್ಟದ ಬಗ್ಗೆ ಪ್ರಶ್ನೆ ಏಳಬಹುದು. ಹೀಗಾಗಿ ಅಧಿಕಾರಿಗಳು ಎಂದಿನಂತೆ ಎಚ್ಚರ ವಹಿಸಬೇಕಿದೆ ಎಂದು ತಿಳಿಸಿದರು.

ಸಭೆಯಲ್ಲಿ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ ಹಾಗೂ ಕಂದಾಯ ಆಯುಕ್ತರಾದ ಸುನೀಲ್ ಕುಮಾರ್ ಉಪಸ್ಥಿತರಿದ್ದರು.

ದೇಣಿಗೆ ವಿತರಣೆ...



ಮೈಸೂರು ಹಾಗೂ ಚಾಮರಾಜನಗರ ಜಿಲ್ಲಾ ಒಕ್ಕಲಿಗರ ಸಂಘದ ಸಮುದಾಯ ಭವನದ ನವೀಕರಣಕ್ಕಾಗಿ ಕಾವೇರಿ ಆಸ್ಪತ್ರೆ ಹಾಗೂ ಸಮೂಹ ಶಿಕ್ಷಣ ಸಂಸ್ಥೆ ಮುಖ್ಯಸ್ಥ ಡಾ.ಚಂದ್ರಶೇಖರ್ ಅವರು 3 ಲಕ್ಷ ದೇಣಿಗೆ ನೀಡಿದರು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಸಿ.ಮರಿಸ್ವಾಮಿ, ಪ್ರಧಾನ ಕಾರ್ಯದರ್ಶಿ ಚೇತನ್, ಖಜಾಂಚಿ ಆರ್.ಲೋಕೇಶ್, ಬೀಡನಹಳ್ಳಿ ಸತೀಶ್‌ಗೌಡ, ಶಂಕಿಗೌಡ, ನಿರ್ದೇಶಕರಾದ ಕುಮಾರ್‌ಗೌಡ, ಒಂಟಿಕೊಪ್ಪಲ್ ಗುರುರಾಜ್, ಯಳಂದೂರು ಕುಮಾರ್ ಉಪಸ್ಥಿತರಿದ್ದರು.

ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ, ವಿದ್ಯಾರ್ಥಿಗಳ ಭವಿಷ್ಯದ ಭದ್ರತೆಗಾಗಿ ಎನ್‌ಎಸ್‌ಯುಐನಿಂದ ನ್ಯಾಯಯಾತ್ರೆ

ಬೆಂಗಳೂರಿಂದ ಯಾತ್ರೆ ಆರಂಭ, ಏ.17ಕ್ಕೆ ತುಮಕೂರಲ್ಲಿ ಅಂತ್ಯ

ಮೈಸೂರು, ಮಾ.27(ಜಿಎ)– ಶಿಕ್ಷಣ ವ್ಯವಸ್ಥೆಯಲ್ಲಿ ಸುಧಾರಣೆ ಮತ್ತು ವಿದ್ಯಾರ್ಥಿಗಳ ಭವಿಷ್ಯದ ಭದ್ರತೆಗಾಗಿ ಎನ್‌ಎಸ್ ಯುಐ ವತಿಯಿಂದ ವಿದ್ಯಾರ್ಥಿ ನ್ಯಾಯ ಯಾತ್ರೆ ನಡೆಸಲಾಗುತ್ತಿದೆ ಎಂದು ಎನ್‌ಎಸ್‌ಯುಐ ರಾಜ್ಯ ಪ್ರಧಾನ ಕಾರ್ಯದರ್ಶಿ ಮನೀಶ್ ಜಿ.ರಾಜ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾತ್ರೆ ಮೂಲಕ ರಾಜ್ಯದ ಎಲ್ಲಾ ವಿಶ್ವವಿದ್ಯಾನಿಲಯಗಳಿಗೂ ಭೇಟಿ ನೀಡಿ ಅಲ್ಲಿನ ಕುಲಪತಿಗಳಿಂದ ವಿಶ್ವವಿದ್ಯಾನಿಲಯ ಎದುರಿಸುತ್ತಿರುವ ಸಮಸ್ಯೆಗಳು ಹಾಗೂ ಕ್ಯಾಂಪಸ್‌ಗಳಲ್ಲಿ ವಿದ್ಯಾರ್ಥಿಗಳನ್ನು ಭೇಟಿ ಮಾಡಿ ಅವರು ಎದುರಿಸುತ್ತಿರುವ ಸಮಸ್ಯೆಗಳನ್ನು ಪಟ್ಟಿ ಮಾಡಿಕೊಂಡು ಸರ್ಕಾರಕ್ಕೆ ವರದಿ ಸಲ್ಲಿಸಿ, ಪರಿಹಾರಕ್ಕೆ ಯತ್ನಿಸಲಾಗುವುದು ಎಂದರು.

ಮಾ.17ರಂದು ಬೆಂಗಳೂರಿನಿಂದ ಈ ನ್ಯಾಯಯಾತ್ರೆ ಆರಂಭವಾಗಿದ್ದು, ರಾಜ್ಯದ 35 ವಿವಿಗಳಿಗೂ ಭೇಟಿ ನೀಡಿ, ಏ.17ರಂದು ತುಮಕೂರು ವಿವಿಯಲ್ಲಿ ಯಾತ್ರೆ ಅಂತ್ಯಗೊಳಿಸಲಾಗುವುದು. ಬೆಂಗಳೂರಿನಲ್ಲಿ ನ್ಯಾಯಯಾತ್ರೆಯ ಬೃಹತ್ ಸಮಾರೋಪ ಸಮಾವೇಶ ಆಯೋಜಿಸುವ ಚಿಂತನೆ ಇದೆ ಎಂದರು.

ಪಠ್ಯಕ್ರಮ ನವೀಕರಣ, ಡಿಜಿಟಲ್ ಮೌಲ್ಯಮಾಪನ, ವಿದ್ಯಾರ್ಥಿವೇತನ ತ್ವರಿತ ಬಿಡುಗಡೆಗೆ ಒತ್ತಾಯ, ವಿದ್ಯಾರ್ಥಿಗಳ ಸುರಕ್ಷತೆ, ಶುದ್ಧ ಆಹಾರ ಮತ್ತು ಉತ್ತಮ ವಸತಿ ನೀಡಿಕೆ ಮೂಲಕ ಹಾಸ್ಟೆಲ್‌ಗಳಲ್ಲಿ ಸುಧಾರಣೆ, ಉನ್ನತ ಶಿಕ್ಷಣ ಪಡೆದು ವಿವಿಗಳಿಂದ ಹೊರಬಂದವರಿಗೆ ಉದ್ಯೋಗಕ್ಕೆ ಅಗತ್ಯವಾದ ಕೌಶಲ ತರಬೇತಿ ಜತೆಗೆ ಉದ್ಯೋಗ ಭರವಸೆ ಒದಗಿಸುವುದು, ಮಹಿಳಾ ಸುರಕ್ಷತೆ ಮತ್ತು ವಿದ್ಯಾರ್ಥಿ ಸಂಘಟನೆ ಮೂಲಕ ವಿದ್ಯಾರ್ಥಿಗಳ ಹಕ್ಕುಗಳಿಗಾಗಿ ಹೋರಾ ಡುತ್ತಿರುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಅನ್ವಿತ್ ಕಟೀಲ್, ರಾಷ್ಟ್ರೀಯ ಸಂಯೋಜಕ ಹೃತಿಕ್ ರವಿ, ಯಶವಂತ್, ಮೋಹಿತ್ ಉಪಸ್ಥಿತರಿದ್ದರು.

ಮೌಲ್ಯಮಾಪಕರ ಕುಂದು ಕೊರತೆ ಆಲಿಸಿದ ಎಂಎಲ್‌ಸಿ ವಿವೇಕಾನಂದ



ಮೈಸೂರು ನಗರದ ವಿದ್ಯಾವರ್ಧಕ ಕಾಲೇಜು, ಶಾರದಾ ವಿಲಾಸ್ ಕಾಲೇಜು, ಮರಿಮಲ್ಲಪ್ಪ ಕಾಲೇಜು ಹಾಗೂ ಮಹಾರಾಣಿ ಕಾಲೇಜಿನಲ್ಲಿ ನಡೆಯುತ್ತಿರುವ ದ್ವಿತೀಯ ಪಿಯುಸಿ ಪರೀಕ್ಷೆಯ ಮೌಲ್ಯಮಾಪನ ಕೇಂದ್ರಗಳಿಗೆ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಅವರು ಭೇಟಿ ನೀಡಿ, ಮೌಲ್ಯಮಾಪಕರ ಕುಂದುಕೊರತೆ ಆಲಿಸಿದರು. ಈ ವೇಳೆ ಉಪನ್ಯಾಸಕರಾದ ಮಹದೇವ್, ರಾಮಕೃಷ್ಣೇಗೌಡ, ಹರೀಶ್, ಗಿರೀಶ್, ಜಯರಾಮ್, ಚಂದ್ರಶೇಖರ್, ನಾಜಿಯಾ, ಭಗೀರಥ, ಶಿವಕುಮಾರ, ಸತ್ಯನಾರಾಯಣ, ತಿಮ್ಮೇಗೌಡ, ಕಾಳಿ ಪ್ರಸಾದ್ ಹಾಗೂ ಇತರರು ಉಪಸ್ಥಿತರಿದ್ದರು.

ಯಶೋಧರಮ್ಮ ದಾಸಪ್ಪ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮೈಸೂರು, ಮಾ.27–ರಾಜ್ಯ ಒಕ್ಕಲಿಗರ ವಿಕಾಸ ವೇದಿಕೆ ವಾರ್ಷಿಕೋತ್ಸವ ಅಂಗವಾಗಿ ಸಾಧಕರಿಗೆ ಯಶೋಧರಮ್ಮ ದಾಸಪ್ಪ ಹಾಗೂ ಸೇವಾ ಭೂಷಣ ಪ್ರಶಸ್ತಿ ನೀಡಲಾಗುವುದು ಎಂದು ಸಂಸ್ಥಾಪಕ ಅಧ್ಯಕ್ಷೆ ಹೆಚ್.ಎಲ್.ಯಮುನಾ ತಿಳಿಸಿದ್ದಾರೆ. ಏ.25ರಂದು ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದ್ದು, ಪ್ರಶಸ್ತಿಗೆ ಏ.2ರೊಳಗೆ ವೇದಿಕೆಯ ಕಚೇರಿಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ವಿವರಗಳಿಗೆ ಮೊ. 9902698623 ಸಂಪರ್ಕಿಸಬಹುದು.

ಹೇಮಾವತಿಯಿಂದ ನಾಲೆಗಳಿಗೆ ನೀರು ಹರಿಸುವಂತೆ ಆಗ್ರಹಿಸಿ ರೈತರ ಪ್ರತಿಭಟನೆ

ಮೈಸೂರು, ಮಾ.27(ಜಿಎ)–ಹೇಮಾವತಿ ಅಚ್ಚುಕಟ್ಟು ನಾಲೆಗಳಿಗೆ ನೀರು ಹರಿಸಿ, ಕಾವೇರಿ ಕೊಳ್ಳದ ಎಲ್ಲಾ ಕೆರೆಗಳನ್ನು ತುಂಬಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘದಿಂದ ಪ್ರಾದೇಶಿಕ ಆಯುಕ್ತರ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.



ಹೇಮಾವತಿ ಅಚ್ಚುಕಟ್ಟು ನಾಲೆಗಳಿಗೆ ನೀರು ಹರಿಸುವಂತೆ ಒತ್ತಾಯಿಸಿ ರೈತರು ಪ್ರತಿಭಟನೆ ನಡೆಸಿದರು.

ಹೇಮಾವತಿ ಜಲಾಶಯ ಭಾಗದ ಕೆ.ಆರ್.ಪೇಟೆ, ನಾಗಮಂಗಲ, ಪಾಂಡವಪುರ, ಮಂಡ್ಯ ತಾಲೂಕಿನ ಅಚ್ಚುಕಟ್ಟು ಪ್ರದೇಶದಲ್ಲಿ ಬೆಳೆದು ನಿಂತಿರುವ ಬೆಳೆಗಳು ಬೇಸಿಗೆಯ ಸುಡು ಬಿಸಿಲಿನಿಂದ ನೀರಿಲ್ಲದೆ ಒಣಗುತ್ತಿವೆ. ಹೀಗಾಗಿ ಕೂಡಲೇ ನಾಲೆಗಳಿಗೆ ನೀರು ಹರಿಸಿ ಬೆಳೆಗಳನ್ನು ಉಳಿಸಬೇಕು. ಹೇಮಾವತಿ ಜಲಾಶಯ ವ್ಯಾಪ್ತಿಯ ಎಲ್ಲಾ ಕೆರೆ ಕಟ್ಟೆಗಳಿಗೆ ನೀರು ತುಂಬಿಸಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಅನುಕೂಲ ಮಾಡಿಕೊಡಬೇಕು. ಕಾವೇರಿ ಕೊಳ್ಳದ ಎಲ್ಲಾ ಕೆರೆಗಳಿಗೆ ನೀರು ಹರಿಸಬೇಕು ಎಂದು ಆಗ್ರಹಿಸಿದರು.


ಮೈಸೂರು ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ವೇಳೆ ಕನಿಷ್ಠ 7 ಗಂಟೆಗಳ ಕಾಲ ಗುಣಮಟ್ಟದ ತ್ರಿ ಪೇಸ್ ವಿದ್ಯುತ್ ಪೂರೈಕೆ ಮಾಡುವಂತೆ ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಅಧ್ಯಕ್ಷ ಬಡಗಲಪುರ ನಾಗೇಂದ್ರ, ಎಂ.ಎಲ್.ಕೆಂಪುಗೌಡ, ಹೊಸಕೋಟೆ ಬಸವರಾಜು, ಜಿ.ಎಸ್. ಲಿಂಗರಾಜು, ಕೆ.ಆರ್.ಜಯರಾಂ, ಪಿ.ಮರಂಕಯ್ಯ ಇನ್ನಿತರರು ಭಾಗವಹಿಸಿದ್ದರು.

ಗ್ರಾಮೀಣ ಪ್ರದೇಶಗಳ ನೀರಿನ ಸಮಸ್ಯೆಗೆ ಸಹಾಯವಾಣಿ ಸ್ಥಾಪನೆ

ಮೈಸೂರು, ಮಾ.27– ಬೇಸಿಗೆಯಲ್ಲಿ ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ, ಮೈಸೂರು ತಾಲೂಕು ಪಂಚಾಯಿತಿ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಿಗೆ ಸಂಬಂಧಿಸಿದಂತೆ, ಮೈಸೂರು ತಾಲೂಕು ಕೇಂದ್ರದಲ್ಲಿ ಜಲಸೇವಾ ನಿಯಂತ್ರಣ ಕೊಠಡಿ ತೆರೆದು, ಸಹಾಯವಾಣಿ ಸಂಖ್ಯೆಯನ್ನು ಸಾರ್ವಜನಿಕರಿಗೆ ಪ್ರಚಾರ ಪಡಿಸಲು ಸೂಚಿಸಲಾಗಿದೆ. ಅದರಂತೆ ಮೈಸೂರು ತಾಲೂಕು ಪಂಚಾಯತ್ ಕಚೇರಿಯಲ್ಲಿ ಜಲಸೇವಾ ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದ್ದು, ಸಹಾಯವಾಣಿ ಸ್ಥಿರ ದೂ.ಸಂ: 0821–2414433 ಅನ್ನು ಸಂಪರ್ಕಿಸಬಹುದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇಶ - ವಿದೇಶ

ಪಾಕ್ ಜೈಲಿನಲ್ಲಿದ್ದ ಭಾರತೀಯ ಮೀನುಗಾರ ಆತ್ಮಹತ್ಯೆ




ಕರಾಚಿ: ಕರಾಚಿಯ ಮಾಲಿರ್ ಜೈಲಿನಲ್ಲಿ ಭಾರತೀಯ ಮೀನುಗಾರ ಗೌರವ್ ರಾಮ್ ಆನಂದ್(52) ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಡಾನ್.ಕಾಮ್ ವರದಿ ಮಾಡಿದೆ. ಅಕ್ರಮವಾಗಿ ಪಾಕಿಸ್ತಾನದ ಜಲಗಡಿ ಪ್ರವೇಶಿಸಿದ ಆರೋಪದ ಮೇಲೆ ಫೆಬ್ರವರಿ 2022ರಲ್ಲಿ ಬಂಧಿಸಲ್ಪಟ್ಟ ಆನಂದ್ ಶವ, ಜೈಲಿನ ಶೌಚಾಲಯದಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ ಎಂದು ಜೈಲು ಅಧಿಕಾರಿಗಳು ತಿಳಿಸಿರುವುದಾಗಿ ಡಾನ್ ವರದಿ ಮಾಡಿದೆ. ಮಾಲಿರ್ ಜೈಲಿನ ಸೂಪರಿಂಟೆಂಡೆಂಟ್ ಅರ್ಷದ್ ಹುಸೇನ್, ಇದನ್ನು ದೃಢಪಡಿಸಿದ್ದು, ಕೈದಿ ಶೌಚಾಲಯಕ್ಕೆ ಹೋಗಿದ್ದ ವೇಳೆ ಹಗ್ಗದಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಜೈಲಿನ ಕರ್ತವ್ಯನಿರತ ವೈದ್ಯರು ಬೆಳಗಿನ ಜಾವ 2.20ಕ್ಕೆ ಆನಂದ್ ಸಾವನ್ನಪ್ಪಿದ್ದಾರೆ. ಮುಂದಿನ ಕಾನೂನು ಕ್ರಮಗಳು ಮುಗಿಯುವವರೆಗೆ ಅವರ ದೇಹವನ್ನು ಸೊಹ್ರಾಬ್ ಗೋತ್‌ನಲ್ಲಿರುವ ಈಧಿ ಫೌಂಡೇಶನ್‌ನ ಕೋಲ್ಡ್ ಸ್ಟೋರೇಜ್‌ಗೆ ಸ್ಥಳಾಂತರಿಸಲು ಮ್ಯಾಜಿಸ್ಟ್ರೇಟ್ ಆದೇಶಿಸಿದ್ದಾರೆ. ಸರ್ಕಾರಿ ಮೂಲಗಳ ಪ್ರಕಾರ ಡಿ.31, 2024ರ ಹೊತ್ತಿಗೆ, 144 ಭಾರತೀಯ ಮೀನುಗಾರರು ಮತ್ತು 1,173 ದೋಣಿಗಳು ಪಾಕಿಸ್ತಾನದ ವಶದಲ್ಲಿದ್ದಾರೆ.

ಕಥುವಾದಲ್ಲಿ ಎನ್‌ಕೌಂಟರ್: ಪೊಲೀಸ್ ಅಧಿಕಾರಿಗೆ ಗಾಯ

ಕಾಶ್ಮೀರ: ಜಮ್ಮು–ಕಾಶ್ಮೀರದ ಕಥುವಾ ಜಿಲ್ಲೆಯಲ್ಲಿ ಭಯೋತ್ಪಾದಕರೊಂದಿಗೆ ನಡೆದ ಮತ್ತೊಂದು ಗುಂಡಿನ ಚಕಮಕಿಯಲ್ಲಿ ಪೊಲೀಸ್ ಸಿಬ್ಬಂದಿಯೊಬ್ಬರು ಗಾಯಗೊಂಡಿದ್ದಾರೆ. ಕಳೆದ 4 ದಿನಗಳಿಂದ ಇಲ್ಲಿ ಬೃಹತ್ ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಹಿರಾನಗರ ವಲಯದಲ್ಲಿ ಭಾನುವಾರ ನಡೆದಿದ್ದ ಎನ್‌ಕೌಂಟರ್ ಸ್ಥಳದಿಂದ ಸುಮಾರು 30 ಕಿ.ಮೀ ದೂರದಲ್ಲಿರುವ ರಾಜ್‌ಬಾಗ್‌ನ ಘಾಟಿ ಜುಥಾನಾ ಪ್ರದೇಶದ ಜಖೋಲೆ ಗ್ರಾಮದ ಬಳಿ ಭದ್ರತಾ ಪಡೆಗಳು ಇಂದು ಬೆಳಗ್ಗೆ ಭಯೋತ್ಪಾದಕರು ಕಾಣಿಸಿಕೊಂಡಾಗ ಗುಂಡಿನ ಚಕಮಕಿ ಪ್ರಾರಂಭವಾಯಿತು. ಪೊಲೀಸರು, ಸೇನೆ, ಎನ್‌ಎಸ್‌ಜಿ, ಬಿಎಸ್‌ಎಫ್ ಮತ್ತು ಸಿಆರ್‌ಪಿಎಫ್ ಒಳಗೊಂಡ ಬೃಹತ್ ಶೋಧ ಕಾರ್ಯಾಚರಣೆಯು ತಾಂತ್ರಿಕ ಮತ್ತು ಕಣ್ಗಾವಲು ಉಪಕರಣಗಳೊಂದಿಗೆ ಶಸ್ತ್ರಸಜ್ಜಿತವಾಗಿದ್ದು, ಹೆಲಿಕಾಪ್ಟರ್, ಯುಎವಿಗಳು, ಡ್ರೋನ್‌ಗಳು, ಗುಂಡು ನಿರೋಧಕ ವಾಹನಗಳು ಮತ್ತು ಶ್ವಾನಗಳ ಸಹಾಯದಿಂದ ಭಯೋತ್ಪಾದಕರನ್ನು ಪತ್ತೆಹಚ್ಚುವ ಕಾರ್ಯ ಮುಂದುವರೆಸಿದೆ. ಕಂದರ ಮಾರ್ಗ ಅಥವಾ ಗಡಿಯಾಚೆಯಿಂದ ಹೊಸದಾಗಿ ರಚಿಸಲಾದ ಸುರಂಗದ ಮೂಲಕ ಭಯೋತ್ಪಾದಕರು ನುಸುಳಿದ್ದಾರೆನ್ನಲಾಗಿದೆ.

ಆಮದಾಗುವ ಕಾರುಗಳ ಮೇಲೆ ಶೇ.25ರಷ್ಟು ಸುಂಕ




ವಾಷಿಂಗ್ಟನ್: ಅಮೆರಿಕಕ್ಕೆ ಆಮದು ಮಾಡಿಕೊಳ್ಳುವ ಎಲ್ಲಾ ವಿದೇಶಿ ಕಾರು ಹಾಗೂ ಇತರೇ ವಾಹನಗಳ ಮೇಲೆ ಶೇ.25ರಷ್ಟು ಸುಂಕ ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಣೆ ಮಾಡಿದ್ದಾರೆ.

ಕಾರುಗಳನ್ನು ಅಮೆರಿಕದಲ್ಲೇ ನಿರ್ಮಿಸಿದರೆ ಯಾವುದೇ ರೀತಿಯ ಸುಂಕ ವಿಧಿಸುವುದಿಲ್ಲ ಎಂದು ಟ್ರಂಪ್ ಸ್ಪಷ್ಟಪಡಿಸಿದ್ದಾರೆ. ಡೊನಾಲ್ಡ್ ಟ್ರಂಪ್ 2ನೇ ಬಾರಿ ಅಮೆರಿಕದ ಅಧ್ಯಕ್ಷರಾದ ಬಳಿಕ ಭಾರತ ಸೇರಿದಂತೆ ಕೆಲ ದೇಶಗಳ ಸುಂಕ ನೀತಿ ವಿರುದ್ಧ ಸಮರ ಸಾರಿದ್ದಾರೆ. ಏ.2ರಿಂದ ಸುಂಕ ನೀತಿ ಜಾರಿಯಾಗಲಿದ್ದು, ಏಪ್ರಿಲ್ 3ರಿಂದ ಸಂಗ್ರಹ ಪ್ರಾರಂಭವಾಗಲಿದೆ. ಅಮೆರಿಕದ ಈ ನೀತಿಯು ದೇಶಿಯ ಉತ್ಪಾದನೆಯನ್ನು ಉತ್ತೇಜಿಸುತ್ತದೆ. ಜೊತೆಗೆ ವಾಹನ ತಯಾರಕರ ಪೂರೈಕೆ ಸರಪಳಿ ಅಭಿವೃದ್ಧಿಗೂ ಪೂರಕವಾಗಲಿದೆ. ಆದರೆ ಟ್ರಂಪ್ ಅವರ ಈ ನಿರ್ಧಾರದಿಂದ ಅಮೆರಿಕದ ಗ್ರಾಹಕರು ಹಣದುಬ್ಬರ ಎದುರಿಸಬೇಕಾಗುತ್ತದೆ ಎಂದು ಆರ್ಥಿಕ ತಜ್ಞರು ಅಭಿಪ್ರಾಯ ಪಟ್ಟಿದ್ದಾರೆ. ಈ ಹಿಂದೆ ಉತ್ತರ ಅಮೆರಿಕದ ಮೇಲೆ ಪರಿಣಾಮ ಬೀರುವ ಸುಂಕಗಳಿಂದ ವಾಹನ ತಯಾರಕರಿಗೆ ತಾತ್ಕಾಲಿಕ ವಿನಾಯಿತಿ ನೀಡಿದರು. ಟ್ರಂಪ್‌ರ ವ್ಯಾಪಾರ ಯೋಜನೆಗಳ ಮೇಲಿನ ಅನಿಶ್ಚಿತತೆಯಿಂದ ಆರ್ಥಿಕ ಹಿಂಜರಿತ ಉಂಟು ಮಾಡಬಹುದೆಂಬ ಆತಂಕ ಹಣಕಾಸು ಮಾರುಕಟ್ಟೆಗಳನ್ನು ಅಲುಗಾಡಿಸಿವೆ.

ಕೇಂದ್ರದ ವಕ್ಫ್ ತಿದ್ದುಪಡಿ ಮಸೂದೆ ವಿರೋಧಿಸಿ ತಮಿಳುನಾಡು ನಿರ್ಣಯ


ಚೆನ್ನೈ: ಕೇಂದ್ರ ಸರ್ಕಾರ 2024ರ ವಕ್ಫ್(ತಿದ್ದುಪಡಿ) ಮಸೂದೆಯನ್ನು ಸಂಪೂರ್ಣವಾಗಿ ಹಿಂಪಡೆಯಬೇಕು ಎಂದು ಒತ್ತಾಯಿಸಿ ತಮಿಳುನಾಡು ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಮಂಡಿಸಿದ ನಿರ್ಣಯವನ್ನು ಅಂಗೀಕರಿಸಲಾಗಿದೆ.



ಪ್ರಮುಖ ವಿರೋಧ ಪಕ್ಷ ಎಐಎಡಿಎಂಕೆ ಸೇರಿದಂತೆ ಎಲ್ಲಾ ರಾಜಕೀಯ ಪಕ್ಷಗಳು ಈ ನಿರ್ಣಯವನ್ನು ಬೆಂಬಲಿಸಿದವು. ಆದರೆ ಬಿಜೆಪಿ ಶಾಸಕಿ ವನತಿ ಶ್ರೀನಿವಾಸನ್, ತಮ್ಮ ಪಕ್ಷದ ಶಾಸಕರ ನೇತೃತ್ವದಲ್ಲಿ ನಿರ್ಣಯ ವಿರೋಧಿಸಿ ಸಭಾತ್ಯಾಗ ಮಾಡಿದರು. ಭಾರತದಲ್ಲಿ ಎಲ್ಲಾ ಧರ್ಮಗಳ ಜನರು ಸಾಮರಸ್ಯದಿಂದ ಬದುಕುತ್ತಿದ್ದಾರೆ ಮತ್ತು ಸಂವಿಧಾನವು ಜನರಿಗೆ ತಮ್ಮ ಧರ್ಮಗಳನ್ನು ಆಚರಿಸುವ ಹಕ್ಕುಗಳನ್ನು ನೀಡಿದೆ. ಜನಪ್ರಿಯ ಸರ್ಕಾರಗಳು ಈ ಹಕ್ಕನ್ನು ಉಳಿಸಿಕೊಳ್ಳುವ ಕರ್ತವ್ಯ ಹೊಂದಿವೆ. ಆದಾಗ್ಯೂ, ಇದಕ್ಕೆ ವಿರುದ್ಧವಾಗಿ ಕೇಂದ್ರ ಸರ್ಕಾರವು ಕಳೆದ ಆಗಸ್ಟ್‌ನಲ್ಲಿ 2024ರ ವಕ್ಫ್ (ತಿದ್ದುಪಡಿ) ಮಸೂದೆ ಪರಿಚಯಿಸಿತು. ಇದು ಮುಸ್ಲಿಂ ಸಮುದಾಯದ ಮೇಲೆ ತೀವ್ರ ಪರಿಣಾಮ ಬೀರುತ್ತದೆ ಹೀಗಾಗಿ, ಈ ಮಸೂದೆಯನ್ನು ಸಂಪೂರ್ಣವಾಗಿ ಹಿಂಪಡೆಯುವಂತೆ ಈ ಸದನವು ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತದೆ ಎಂದು ಸಿಎಂ ಮಂಡಿಸಿದ ನಿರ್ಣಯದಲ್ಲಿ ಹೇಳಲಾಗಿದೆ.

ಬಡ ದೇಶಗಳ ಲಸಿಕೆಗಾಗಿ ನೀಡಲಾಗುವ ಹಣಕ್ಕೆ ಕತ್ತರಿ ಹಾಕಿದ ಡೊನಾಲ್ಡ್ ಟ್ರಂಪ್

ವಾಷಿಂಗ್ಟನ್: ಡೊನಾಲ್ಡ್ ಟ್ರಂಪ್ ಸರ್ಕಾರವು ವ್ಯಾಕ್ಸಿನ್‌ಗಾಗಿ ಮೀಸಲಾಗಿಟ್ಟಿರುವ GAVI ಹಣವನ್ನು ಕಡಿತಗೊಳಿಸಲು ನಿರ್ಧರಿಸಿದೆ. ಇದೊಂದು ಜಾಗತಿಕ ಆರೋಗ್ಯ ಸಂಸ್ಥೆಯಾಗಿದ್ದು, ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಲಸಿಕೆಗಳನ್ನು ನೀಡುತ್ತದೆ.



USAID ಸಂಸ್ಥೆಯು ಅಮೆರಿಕಾ ಕಾಂಗ್ರೆಸ್‌ಗೆ ಕಳುಹಿಸಿದ 281 ಪುಟಗಳ ವರದಿಯಲ್ಲಿ ಈ ನಿರ್ಧಾರವನ್ನು ಸೇರಿಸಲಾಗಿದೆ. ಅಮೆರಿಕದ ಈ ನಿರ್ಧಾರದಿಂದ ಲಸಿಕೆಗಳನ್ನು ಪಡೆಯುವ ಬಡ ರಾಷ್ಟ್ರಗಳಿಗೆ ತೊಂದರೆಯಾಗಲಿದೆ. ಯಾವ ಅನುದಾನವನ್ನು ಮುಂದುವರಿಸಬೇಕು ಮತ್ತು ಯಾವುದನ್ನು ರದ್ದುಗೊಳಿಸಬೇಕು ಎನ್ನುವುದನ್ನು ಈ ಸಂಸ್ಥೆ ನಿರ್ಧರಿಸುತ್ತದೆ.

ಅಮೆರಿಕಾವು ಮಲೇರಿಯಾಗೆ ಸಂಬಂಧಪಟ್ಟಂತೆ ಆರೋಗ್ಯ ವಲಯದಲ್ಲಿ ನೀಡಲಾಗುವ ಬೆಂಬಲವನ್ನು ಕಡಿಮೆ ಮಾಡಲಿದೆ. ಆದರೆ, HIV, ಕ್ಷಯರೋಗ ಮತ್ತು ಆಹಾರ ಭದ್ರತೆಗೆ ನೀಡಲಾಗುತ್ತಿರುವ ಸಹಾಯವನ್ನು ಮುಂದುವರಿಸಲಿದೆ. ಈ ಸಹಾಯವು ವಿವಿಧ ಆಂತರಿಕ ಸಂಘರ್ಷಗಳನ್ನು ಮತ್ತು ನೈಸರ್ಗಿಕ ವಿಕೋಪಗಳನ್ನು ಎದುರಿಸುತ್ತಿರುವ ದೇಶಗಳಿಗೆ ಮಾತ್ರ ಸಿಗುತ್ತಿದೆ.

ಲಾರಿ ಚಕ್ರ ಹರಿದು ಬೈಕ್ ಸವಾರ ಸಾವು

ಮಡಿಕೇರಿ,ಮಾ.27– ಲಾರಿ ಮತ್ತು ಬೈಕ್



ನಡುವೆ ಸಂಭವಿಸಿದ ಅಪಘಾತದಲ್ಲಿ ಬೈಕ್ ಸವಾರ ಲಾರಿ ಅಡಿಗೆ ಸಿಲುಕಿ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಕಾಟಕೇರಿ ಬಳಿ ನಡೆದಿದೆ. ಮೂಲತಃ ನಾಪೋಕ್ಲು ಬಳಿಯ ಕಕ್ಕಬ್ಬೆ ನಿವಾಸಿ ನಗರದ ಅಶೋಕ್‌ಪುರದಲ್ಲಿ ವಾಸವಿರುವ ಶರತ್(28) ಎಂಬಾತನೇ ಮೃತ ಯುವಕನಾಗಿದ್ದಾನೆ. ಮಡಿಕೇರಿ ಮಂಗಳೂರು ಮುಖ್ಯರಸ್ತೆಯಲ್ಲಿ ಕಾರನ್ನು ಹಿಂದಿಕ್ಕುವ ಭರದಲ್ಲಿ ಎದುರಿನಿಂದ ಬರುತ್ತಿದ್ದ ಲಾರಿಗೆ ಡಿಕ್ಕಿ ಹೊಡೆದಿದ್ದಾರೆ ಕೆಳಕ್ಕೆ ಬಿದ್ದ ಯುವಕನ ತಲೆಯ ಮೇಲೆ ಲಾರಿ ಚಕ್ರ ಹರಿದು ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಘಟನಾ ಸ್ಥಳಕ್ಕೆ ಮಡಿಕೇರಿ ಗ್ರಾಮಾಂತರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಂಡಿದ್ದಾರೆ.

ಅರ್ಥಪೂರ್ಣ ಜಗಜೀವನ್ ರಾಂ, ಅಂಬೇಡ್ಕರ್ ಜನ್ಮ ದಿನಾಚರಣೆ

ಮಡಿಕೇರಿ ಮಾ.27–ಇದೇ ಏಪ್ರಿಲ್ 5 ರಂದು ಹಸಿರುಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನ್ ರಾಂ ಅವರ 118ನೇ ಮತ್ತು ಏಪ್ರಿಲ್ 14 ರಂದು ಸಂವಿಧಾನ ಶಿಲ್ಪಿ ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 134ನೇ ಜನ್ಮ ದಿನವನ್ನು ನಗರದ ಗಾಂಧಿ ಭವನದಲ್ಲಿ ಆಚರಿಸಲು ನಿರ್ಧರಿಸಲಾಯಿತು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ವೆಂಕಟ್ ರಾಜಾ, ಅಂಬೇಡ್ಕರ್ ಮತ್ತು ಜಗಜೀವನ್ ರಾಂ ಅವರು ಒಂದು ಸಮಾಜ ಅಥವಾ ಸಮುದಾಯಕ್ಕೆ ಸೀಮಿತವಲ್ಲ. ಅವರು ರಾಷ್ಟ್ರಕ್ಕೆ ನೀಡಿರುವ ಕೊಡುಗೆಯನ್ನು ಸದಾ ಸ್ಮರಿಸುವಂತಾಗಬೇಕು. ಆ ನಿಟ್ಟಿನಲ್ಲಿ ಎಲ್ಲರೂ ಪಾಲ್ಗೊಳ್ಳುವಂತಾಗಬೇಕು ಎಂದು ತಿಳಿಸಿದರು.

ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿಯಲ್ಲಿ ಅತೀ ಹೆಚ್ಚು



ಅಂಬೇಡ್ಕರ್ ಮತ್ತು ಜಗಜೀವನ್ ರಾಂ ಜನ್ಮ ದಿನಾಚರಣೆ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ವೆಂಕಟ್‌ರಾಜಾ ಮಾತನಾಡಿದರು.

ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸುವುದು. ನೀಟ್, ಸಿಇಟಿ ಹಾಗೆಯೇ ನಾಗರಿಕ ಸೇವೆ ಜೊತೆಗೆ ಕ್ರೀಡಾ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಸನ್ಮಾನಿಸುವಂತಾಗಬೇಕು. ಇದರಿಂದ ಇತರರಿಗೂ ಪ್ರೇರಣೆಯಾಗಲಿದೆ ಎಂದು ಅವರು ಸಲಹೆ ಮಾಡಿದರು.

ನಗರಸಭೆ ಸದಸ್ಯ ಎಸ್.ಸಿ.ಸತೀಶ್ ಪ್ರಮುಖರಾದ ಮೋಹನ್, ಮೌರ್ಯ ಸಮಿತಿ ಸದಸ್ಯ ಪಿ.ಪಿ.ಸುಕುಮಾರ್, ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ದಿವಾಕರ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಶೇಖರ್ ಮಾತನಾಡಿದರು.

ಉಪ ವಿಭಾಗಾಧಿಕಾರಿ ವಿನಾಯಕ ನರ್ವಡೆ, ಸಮಿತಿ ಸದಸ್ಯರಾದ ನಾಗರಾಜ ಶೆಟ್ಟಿ, ಗಣೇಶ್, ಪ್ರೇಮಕುಮಾರ್, ವೇಣುಕುಮಾರ್, ಪೌರಾಯುಕ್ತ ಎಚ್.ಆರ್.ರಮೇಶ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಮಂಜುಳ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿ.ಟಿ.ವಿಸ್ಮಯಿ, ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಪಿ.ಪಿ.ಕವಿತ, ಜಿಲ್ಲಾ ವಿಕಲಚೇತನರ ಅಧಿಕಾರಿ ವಿಮಲ, ಜಿಲ್ಲಾ ದೈಹಿಕ ಶಿಕ್ಷಣಾಧಿಕಾರಿ ಗಾಯತ್ರಿ, ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿ ಬಾಲಕೃಷ್ಣ ರೈ, ಐಟಿಡಿಪಿ ಇಲಾಖೆಯ ವ್ಯವಸ್ಥಾಪಕರಾದ ದೇವರಾಜ್, ಕಾರ್ಮಿಕ ಇಲಾಖೆಯ ಶೀರಜ್ ಇತರರು ಇದ್ದರು.

ನಾಳೆಯಿಂದ ಶ್ರೀ ಭದ್ರಕಾಳಿ ದೇವಿಯ ವಾರ್ಷಿಕ ಉತ್ಸವ

ಮಡಿಕೇರಿ,ಮಾ.27– ಇಬ್ನಿವಳವಾಡಿ



ಗ್ರಾಮದ ಶ್ರೀ ಭದ್ರಕಾಳಿ ದೇವಿಯ ವಾರ್ಷಿಕ ಉತ್ಸವವು ಮಾ.29 ಮತ್ತು 30ರಂದು ವಿವಿಧ ಧಾರ್ಮಿಕ ಪೂಜಾ ಕೈಂಕರ್ಯಗಳೊಂದಿಗೆ ಜರುಗಲಿದೆ. ಮಾ.29 ರಂದು ಮಧ್ಯಾಹ್ನ 1.30 ಗಂಟೆಗೆ ಕೊಡಿಆಟ್, 2 ಗಂಟೆಗೆ ಆಂಗೋಲ, ಪೊಂಗೋಲ, 2.30 ಗಂಟೆಗೆ ಪೀಲಿ ಆಟ್, 3 ಗಂಟೆಗೆ ಕೊಂಬಾಟ್ ಜರುಗಲಿದೆ. ನಂತರ ದೇವಿಯ ದರ್ಶನ ಹಾಗೂ ತೆಂಗಿನಕಾಯಿಗೆ ಗುಂಡು ಹೊಡೆಯುವ ಕಾರ್ಯಕ್ರಮ ನಡೆಯಲಿದೆ. ಮಾ.30 ರಂದು ಸಂಜೆ 5 ಗಂಟೆಗೆ ಕೊಂಬಾಟ್, ದೇವಿಯ ದರ್ಶನ, ದೇವರ ಜಳಕ ಜರುಗಲಿದ್ದು, ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ಗ್ರಾಮಸ್ಥರು ಮನವಿ ಮಾಡಿದ್ದಾರೆ.

ಅಕ್ರಮ ಶೆಡ್ ತೆರವಿಗೆ ರೈತ ಸಂಘ ಆಗ್ರಹ



ರೈತ ಸಂಘದ ಸದಸ್ಯ ಚೆಟ್ರುಮಾಡ ಎಂ.ಬಾಲಕೃಷ್ಣ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮಡಿಕೇರಿ,ಮಾ.27– ಹೊದ್ದೂರು ಗ್ರಾಮದಲ್ಲಿ ರೈತರ ಪಿತ್ರಾರ್ಜಿತ ಆಸ್ತಿ ಮತ್ತು ಸರಕಾರಿ ಜಾಗದಲ್ಲಿ ಕೆಲವರು ಅಕ್ರಮವಾಗಿ ನಿರ್ಮಿಸಿಕೊಂಡಿರುವ ಶೆಡ್‌ಗಳನ್ನು ತೆರವುಗೊಳಿಸಲು ಜಿಲ್ಲಾಡಳಿತ ತಕ್ಷಣ ಕ್ರಮ ಕೈಗೊಳ್ಳದಿದ್ದಲ್ಲಿ ಹೊದ್ದೂರಿನಿಂದ ಮಡಿಕೇರಿಯವರೆಗೆ ಬೃಹತ್ ಪ್ರತಿಭಟನಾ ಜಾಥಾ ನಡೆಸುವುದಾಗಿ ಕರ್ನಾಟಕ ರಾಜ್ಯ ರೈತ ಸಂಘ ಎಚ್ಚರಿಕೆ ನೀಡಿದೆ.

ಗ್ರಾಮದಲ್ಲಿ ಕಳೆದ ಹಲವಾರು ವರ್ಷಗಳಿಂದ ಕೃಷಿ ಮಾಡಿಕೊಂಡು ಬರುತ್ತಿರುವ ರೈತರ ಪಿತ್ರಾರ್ಜಿತ ಆಸ್ತಿ ಮತ್ತು ಸರಕಾರಿ ಜಾಗದಲ್ಲಿ ಗ್ರಾ.ಪಂ ಸದಸ್ಯರೊಬ್ಬರು ಅಕ್ರಮ ಶೆಡ್ ನಿರ್ಮಿಸಿ ಕಿರುಕುಳ ನೀಡುತ್ತಿದ್ದಾರೆ. ಈ ಬಗ್ಗೆ ಸಂಬಂಧಪಟ್ಟ ಇಲಾಖೆಗಳಿಗೆ ದೂರು ಸಲ್ಲಿಸಿದರೂ ಇದುವರೆಗೂ ಯಾವುದೇ ಕಾನೂನು ರೀತ್ಯಾ ಕ್ರಮ ಕೈಗೊಂಡಿಲ್ಲ ಎಂದು ರೈತ ಸಂಘದ ಸದಸ್ಯ ಚೆಟ್ರುಮಾಡ ಎಂ.ಬಾಲಕೃಷ್ಣ, ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು. ಕಳೆದ ಹಲವು ವರ್ಷಗಳಿಂದ ಈ ಪ್ರದೇಶದಲ್ಲಿ ನ್ಯಾಯಯುತವಾಗಿ ಜೀವನ ಸಾಗಿಸುತ್ತಿರುವವರನ್ನು ಒಕ್ಕಲೆಬ್ಬಿಸಲು ನಡೆಸುತ್ತಿರುವ ಪ್ರಯತ್ನಗಳು ಖಂಡನೀಯ ಮತ್ತು ಈ ಪ್ರಕರಣವನ್ನು ಆಡಳಿತ ವ್ಯವಸ್ಥೆ ಗಂಭೀರವಾಗಿ ಪರಿಗಣಿಸಬೇಕು. ಅಕ್ರಮ ಶೆಡ್‌ಗಳನ್ನು ತೆರವುಗೊಳಿಸಿ ಅದೇ ಜಾಗವನ್ನು ರೈತರಿಗೆ ಮರು ಹಸ್ತಾಂತರ ಮಾಡಬೇಕು ಎಂದು ಆಗ್ರಹಿಸಿದರು.

ಗ್ರಾಮದಲ್ಲಿ ಒಟ್ಟು 9 ಕಾಲೋನಿಗಳಿದ್ದು, 1500 ಕ್ಕಿಂತಲೂ ಹೆಚ್ಚಿನ ಮನೆ ನಿರ್ಮಾಣವಾಗಿದೆ. ಮುಂದಿನ ದಿನಗಳಲ್ಲಿ ಹೊದ್ದೂರು ಗ್ರಾಮದಲ್ಲಿ ವಸತಿ ರಹಿತರಿಗೆ ನಿವೇಶನ ಕೊಡುವುದನ್ನು ಸ್ಥಗಿತಗೊಳಿಸಬೇಕು ಎಂದು ಒತ್ತಾಯಿಸಿದರು. ತಹಶೀಲ್ದಾರರು ನೀಡಿರುವ ಭರವಸೆಯಂತೆ ನಿಗದಿತ ಸಮಯದೊಳಗೆ ತೆರವುಗೊಳಿಸದೆ ಇದ್ದಲ್ಲಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ರಸ್ತೆ ನಿರ್ಮಾಣಕ್ಕೆ ಬಿಟ್ಟು ಕೊಟ್ಟಂತಹ ಪಿತ್ರಾರ್ಜಿತ ಆಸ್ತಿಗೆ ರೈತ ಸಂಘದ ವತಿಯಿಂದ ಬೇಲಿ ನಿರ್ಮಿಸಿ ವಶಕ್ಕೆ ಪಡೆದು ಕೃಷಿ ಕಾರ್ಯ ಮಾಡಲಾಗುವುದು ಎಂದು ಸಂಘದ ಕಾರ್ಯಾಧ್ಯಕ್ಷ ಪಿ.ಎಂ.ವಾಸುದೇವ ಎಚ್ಚರಿಕೆ ನೀಡಿದರು.

ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚೆಟ್ರುಮಾಡ ಸುಜಯ್ ಬೋಪಯ್ಯ, ರೈತ ಸಂಘದ ಸದಸ್ಯ ಚೆಟ್ಟಿಮಾಡ ಲೋಕೇಶ್ ಮಾತನಾಡಿ, ಜಿಲ್ಲಾಡಳಿತ ಸೂಕ್ತ ಕ್ರಮ ಕೈಗೊಳ್ಳದೆ ಇದ್ದಲ್ಲಿ ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳನ್ನು ಒಗ್ಗೂಡಿಸಿಕೊಂಡು ಹೊದ್ದೂರಿನಿಂದ ಮಡಿಕೇರಿಯ ಜಿಲ್ಲಾಡಳಿತದ ಕಚೇರಿವರೆಗೆ ಬೃಹತ್ ಜಾಥಾ ನಡೆಸಲಾಗುವುದು. ಎಂದರು.

ಸುದ್ದಿಗೋಷ್ಠಿಯಲ್ಲಿ ರೈತ ಸಂಘದ ಜಿಲ್ಲಾ ಸಂಚಾಲಕ ಪುಚ್ಚಿಮಾಡ ಸುಭಾಷ್ ಸುಬ್ಬಯ್ಯ ಹಾಗೂ ಹೊದ್ದೂರು ಘಟಕದ ಬಡುವಂಡ ಸುಬ್ರಮಣಿ ಉಪಸ್ಥಿತರಿದ್ದರು.

ಇಂದು ಶ್ರೀ ಅಗ್ನಿಬನ್ನಿರಾಯ ಸ್ವಾಮಿ ಜಯಂತಿ

ಮಡಿಕೇರಿ, ಮಾ.27–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದೊಂದಿಗೆ ಶ್ರೀ ಅಗ್ನಿಬನ್ನಿರಾಯ ಸ್ವಾಮಿ ಜಯಂತಿ ಕಾರ್ಯಕ್ರಮವು ಇದೇ 28 ರಂದು ಬೆಳಗ್ಗೆ 11 ಗಂಟೆಗೆ ನಗರದ ಗಾಂಧಿ ಭವನದಲ್ಲಿ ನಡೆಯಲಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಎಸ್.ಭೋಸರಾಜು, ಶಾಸಕರಾದ ಡಾ.ಮಂತರ್ ಗೌಡ, ಎ.ಎಸ್.ಪೊನ್ನಣ್ಣ, ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ವಿಧಾನ ಪರಿಷತ್ ಸದಸ್ಯರಾದ ಎಂ.ಪಿ.ಸುಜಾ ಕುಶಾಲಪ್ಪ, ಎಸ್.ಎಲ್.ಭೋಜೇಗೌಡ, ಡಾ.ಧನಂಜಯ ಸರ್ಜಿ, ಸಂಪಾಜೆ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಶಿಕ್ಷಕರಾದ ಎಚ್.ಜಿ.ಕುಮಾರ್, ಜಿಲ್ಲಾಧಿಕಾರಿ ವೆಂಕಟ್ ರಾಜಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ರಾಮರಾಜನ್, ಜಿ.ಪಂ.ಸಿಇಒ ಆನಂದ್ ಪ್ರಕಾಶ್ ಮೀನಾ ಇತರರು ಪಾಲ್ಗೊಳ್ಳಲಿದ್ದಾರೆ.

ಭಗತ್‌ಸಿಂಗ್, ರಾಜಗುರು, ಸುಖದೇವ್ ಗೌರವ ನಮನ



ಭಗತ್ ಸಿಂಗ್, ರಾಜಗುರು, ಸುಖದೇವ್ ಅವರ ಬಲಿದಾನ ದಿನದ ಅಂಗವಾಗಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಪುಷ್ಪ ನಮನ ಕಾರ್ಯಕ್ರಮವನ್ನು ಆಯೋಜಿಸಿತ್ತು

ಮಡಿಕೇರಿ, ಮಾ.27– ಮಹಾನ್ ಕ್ರಾಂತಿಕಾರಿಗಳಾದ ಭಗತ್‌ಸಿಂಗ್, ರಾಜಗುರು, ಸುಖದೇವ್ ಅವರ ಬಲಿದಾನ ದಿನದ ಅಂಗವಾಗಿ ನಗರದ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರ ವಸತಿ ನಿಲಯಗಳಲ್ಲಿ ಮೌನಾಚರಣೆ ಮತ್ತು ಪುಷ್ಪ ನಮನ ಕಾರ್ಯಕ್ರಮವನ್ನು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಆಯೋಜಿಸಿತ್ತು.

ವಿದ್ಯಾರ್ಥಿಗಳು ಮಹಾನ್ ಕ್ರಾಂತಿಕಾರಿಗಳ ಭಾವ ಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸಿ ಗೌರವ ಸೂಚಿಸಿದರು. ನಂತರ, ನಗರದ ಯುದ್ಧ ಸ್ಮಾರಕಕ್ಕೆ ಭೇಟಿ ನೀಡಿ, ಅಲ್ಲಿಯೂ ಪುಷ್ಪ ನಮನ ಸಲ್ಲಿಸುವ ಮೂಲಕ ಹುತಾತ್ಮರಿಗೆ ಗೌರವ ಸಲ್ಲಿಸಿದರು. ಭಗತ್‌ಸಿಂಗ್, ರಾಜಗುರು, ಸುಖದೇವ್ ಅವರ ಜೀವನ ಮತ್ತು ಹೋರಾಟದ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಅವರ ತ್ಯಾಗ ಮತ್ತು ಬಲಿದಾನಗಳನ್ನು ಸ್ಮರಿಸುವ ಮೂಲಕ ದೇಶಭಕ್ತಿಯನ್ನು ಎಬಿವಿಪಿ ಸದಸ್ಯ ಪ್ರಮೋದ್ ವಿದ್ಯಾರ್ಥಿಗಳಲ್ಲಿ ಮೂಡಿಸಿದರು.

ತಾಲೂಕು ಸಂಚಾಲಕ ಮಂಜು, ಕಾರ್ಯದರ್ಶಿ ಸಂತೋಷ್, ಸಹ ಕಾರ್ಯದರ್ಶಿ ಸೌಜನ್ಯ ಮತ್ತು ಎಬಿವಿಪಿ ಸದಸ್ಯರು ಉಪಸ್ಥಿತರಿದ್ದರು.

ಇಂದಿನಿಂದ ಮುದ್ದಂಡ ಕಪ್ ಹಾಕಿ ನಮ್ಮೆ



'ಮುದ್ದಂಡ ಕಪ್ ಹಾಕಿ ನಮ್ಮೆ' ಪಂದ್ಯಾವಳಿಗೆ ಸಜ್ಜುಗೊಂಡಿರುವ ಮೈದಾನ.

ಮಡಿಕೇರಿ,ಮಾ.27– ಕೊಡವ ಕುಟುಂಬಗಳ ನಡುವೆ ನಗರದಲ್ಲಿ ಆಯೋಜಿತ ಜಗತ್ತಿನ ಅತೀ ದೊಡ್ಡ 25ನೇ ವರ್ಷದ ಪ್ರತಿಷ್ಠಿತ ಬೆಳ್ಳಿ ಮಹೋತ್ಸವದ 'ಮುದ್ದಂಡ ಕಪ್ ಹಾಕಿ ನಮ್ಮೆ' ಹಲವು ದಾಖಲೆಗಳಿಗೆ ಸಾಕ್ಷಿಯಾಗಲಿದೆ. ಸಹಸ್ರಾರು ಕ್ರೀಡಾಭಿಮಾನಿಗಳ ಹರ್ಷೋದ್ಗಾರದ ನಡುವೆ ಇದೇ ಶುಕ್ರವಾರ ನಗರದ ಫೀಲ್ಡ್ ಮಾರ್ಷಲ್ ಕಾರ್ಯಪ್ಪ ಕಾಲೇಜು ಮೈದಾನದಲ್ಲಿ ಪಂದ್ಯಾಟ ಆರಂಭ ಕಾಣಲಿದೆ. ಈ ಬಾರಿಯ ಪಂದ್ಯಾಟದಲ್ಲಿ ದಾಖಲೆಯ ಒಟ್ಟು 396 ಕುಟುಂಬ ತಂಡಗಳು ಹೆಸರು ನೋಂದಾಯಿಸಿಕೊಂಡಿದ್ದು, ಏಪ್ರಿಲ್ 27ರಂದು ಮುದ್ದಂಡ ಕಪ್ ಹಾಕಿ ನಮ್ಮೆಯ ರಣ ರೋಚಕ ಫೈನಲ್ ಪಂದ್ಯಾಟ ನಡೆಯಲಿದೆ.

ಮಾ.28ರಂದು ಬೆಳಿಗ್ಗೆ 9 ಗಂಟೆಗೆ ಮಡಿಕೇರಿಯ ಜನರಲ್ ತಿಮ್ಮಯ್ಯ ವೃತ್ತದಿಂದ ಫೀ.ಮಾ. ಕೆ.ಎಂ. ಕಾರ್ಯಪ್ಪ ಕಾಲೇಜು ಮೈದಾನದವರೆಗೆ ಬೃಹತ್ ಮೆರವಣಿಗೆಯ ಮೂಲಕ ಹಾಕಿ ನಮ್ಮೆಯ ಕ್ರೀಡಾ ಜ್ಯೋತಿ ಸಾಗಲಿದೆ. ಬಳಿಕ ಹಾಕಿ ಅಕಾಡೆಮಿ ಮತ್ತು ಮುದ್ದಂಡ ಕುಟುಂಬದ ಧ್ವಜಾರೋಹಣ ಕಾರ್ಯಕ್ರಮ 11.30 ಗಂಟೆಗೆ ಗಣ್ಯರ ಸಮ್ಮುಖದಲ್ಲಿ ನಡೆಯಲಿದೆ. ಇದೇ ಸಂದರ್ಭ ಕೊಡವ ಜಾನಪದ ಸಾಂಸ್ಕೃತಿಕ ಕಾರ್ಯಕ್ರಮಗಳು ಆಯೋಜಿತವಾಗಿವೆ. ಉದ್ಘಾಟನಾ ಸಮಾರಂಭದ ಪ್ರಯುಕ್ತ ಪ್ರದರ್ಶನ ಪಂದ್ಯಾಟ ಮಧ್ಯಾಹ್ನ 12.30 ಗಂಟೆಗೆ 'ಕೊಡಗು ಜಿಲ್ಲಾಡಳಿತ' ಹಾಗೂ 'ಮುದ್ದಂಡ ಕುಟುಂಬ' ತಂಡ ಮತ್ತು 1.15 ಗಂಟೆಗೆ 'ಕೊಡವ ಹಾಕಿ ಅಕಾಡೆಮಿ ಇಲೆವೆನ್' ಹಾಗೂ 'ಕರ್ನಾಟಕ ಇಲೆವೆನ್' ತಂಡದ ನಡುವೆ ನಡೆಯಲಿದೆ.

ಗಣ್ಯರ ಉಪಸ್ಥಿತಿ: ಹಾಕಿ ನಮ್ಮೆಯನ್ನು ಪಾಂಡಂಡ ಕೆ.ಬೋಪಣ್ಣ, ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಉದ್ಘಾಟಿಸಲಿದ್ದಾರೆ. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಜಿಲ್ಲಾ ಉಸ್ತುವಾರಿ ಸಚಿವ ಎನ್.ಎಸ್.ಬೋಸರಾಜು, ಶಾಸಕ ಡಾ.ಮಂತರ್ ಗೌಡ, ವಿಧಾನಪರಿಷತ್ ಸದಸ್ಯ ಮಂಡೇಪಂಡ ಸುಜಾ ಕುಶಾಲಪ್ಪ, ಒಲಂಪಿಯನ್ ಅಂಜಪರವಂಡ ಬಿ.ಸುಬ್ಬಯ್ಯ, ಅಖಿಲ ಕೊಡವ ಸಮಾಜ ಅಧ್ಯಕ್ಷ ಪರದಂಡ ಸುಬ್ರಮಣಿ ಕಾವೇರಪ್ಪ, ಮಡಿಕೇರಿ ಕೊಡವ ಸಮಾಜ ಅಧ್ಯಕ್ಷ ಮಂಡುವಂಡ ಪಿ.ಮುತ್ತಪ್ಪ, ಜಿಲ್ಲಾಧಿಕಾರಿ ವೆಂಕಟ್‌ರಾಜಾ, ಪೊಲೀಸ್ ಎಸ್.ಪಿ ರಾಮರಾಜನ್, ಕೊಡಗು ವಿವಿ ಉಪಕುಲಪತಿ ಅಶೋಕ್ ಸಂಗಪ್ಪ ಅಲೂರು, ಮಾಜಿ ಸಚಿವ ಮಂಡೇಪಂಡ ಅಪ್ಪಚ್ಚು ರಂಜನ್, ಮಾಜೀ ಸ್ಪೀಕರ್ ಕೆ.ಜಿ.ಬೋಪಯ್ಯ, ಮಾಜಿ ವಿಧಾನ ಪರಿಷತ್ ಸದಸ್ಯರಾದ ಶಾಂತೆಯಂಡ ವೀಣಾ ಅಚ್ಚಯ್ಯ, ಮಂಡೇಪಂಡ ಸುನಿಲ್ ಸುಬ್ರಮಣಿ, ಚೆಪ್ಪುಡಿರ ಅರುಣ್ ಮಾಚಯ್ಯ, ಮದ್ದಂಡ ಕುಟುಂಬ ಪಟ್ಟೆದಾರ ಡಾಲಿ ತಿಮ್ಮಯ್ಯ, ಮುದ್ದಂಡ ಕುಟುಂಬದ ಅಧ್ಯಕ್ಷ ಬಿ.ದೇವಯ್ಯ ಮತ್ತಿತ್ತರರ ಉಪಸ್ಥಿತಿಯಲ್ಲಿ ಹಾಕಿ ನಮ್ಮೆ ಉದ್ಘಾಟನೆಯಾಗಲಿದೆ.

ಮತಾಂತರ ಗುಲ್ಲು–ಪೊಲೀಸ್ ತನಿಖೆಗೆ ಜಿಲ್ಲಾಡಳಿತ ನಿರ್ಧಾರ

ಚಾಮರಾಜನಗರ, ಮಾ.27– ನಗರದ



ಶಿಲ್ಪಾನಾಗ್

ಖಾಸಗಿ ಶಾಲೆಯೊಂದರಲ್ಲಿ ಬುರ್ಖಾಧಾರಣೆ ಕುರಿತು ವಿದ್ಯಾರ್ಥಿನಿಯ ವಿವಾದಾತ್ಮಕ ವೀಡಿಯೋ ಪ್ರಕರಣವನ್ನು ಪೊಲೀಸ್ ತನಿಖೆಗೆ ಮಿಸಲು ಜಿಲ್ಲಾಡಳಿತ ನಿರ್ಧಾರ ಮಾಡಿದೆ.

ಜಿಲ್ಲಾಧಿಕಾರಿ ಸಿ ಟಿ ಶಿಲ್ಪಾನಾಗ್ ತಮ್ಮ ಕಚೇರಿಯಲ್ಲಿ ಇಂದು ಅಧಿಕಾರಿಗಳೊಂದಿಗೆ ಸಭೆ ನಡೆಸಿ ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆ ಎರಡು ಬಾರಿ ಖಾಸಗಿ ಶಾಲೆಗೆ ಶೋಕಾಸ್ ನೋಟೀಸ್ ಜಾರಿ ಮಾಡಿದ್ದರೂ ಶಾಲೆಯ ಆಡಳಿತ ಮಂಡಳಿ ನಿರ್ಲಕ್ಷ್ಯ ತಾಳಿರುವುದನ್ನು ಕಂಡು ಈ ಸಂಬಂಧ ಪೊಲೀಸ್ ತನಿಖೆಗೆ ಒಪ್ಪಿಸಲು ನಿರ್ಧರಿಸಿದರೆಂದು ಮೂಲಗಳು ತಿಳಿಸಿವೆ.

ಬುರ್ಖಾ ಧರಿಸಿದರೆ ಸತ್ತ ಮೇಲೆ ಶವಕ್ಕೆ ಏನು ಆಗಲ್ಲ. ತುಂಡು ಉಡುಗೆ ತೊಟ್ಟರೆ ನರಕಕ್ಕೆ ಹೋಗುವುದರ ಜೊತೆಗೆ ನಮ್ಮ ದೇಹವನ್ನು ಹಾವು ಚೇಳು ತಿನ್ನುತ್ತವೆ ಎಂದು ನಗರದ ಖಾಸಗಿ ಶಾಲೆಯೊಂದರ ವಿದ್ಯಾರ್ಥಿನಿ ಇತ್ತೀಚೆಗೆ ಆಯೋಜಿಸಿದ್ದ ವಿಜ್ಞಾನ ವಸ್ತು ಪ್ರದರ್ಶನದಲ್ಲಿ ವೀಕ್ಷಕರಿಗೆ ತಿಳಿಯಪಡಿಸಿದ್ದಳು.

ಆ ವಿದ್ಯಾರ್ಥಿ ಎರಡು ಗೊಂಬೆಗಳನ್ನು ಶವದ ರೀತಿಯಲ್ಲಿ ಮಲಗಿಸಿದ್ದು, ಒಂದು ಗೊಂಬೆಯನ್ನು ಕಪ್ಪು ಬಟ್ಟೆಯಿಂದ ಮುಚ್ಚಿದ್ದಳು. ಮತ್ತೊಂದು ಗೊಂಬೆಗೆ ಚೇಳಿನ ಚಿತ್ರವಿರುವ ಬಟ್ಟೆಯಿಂದ ಮುಚ್ಚಿ ವಸ್ತುಪ್ರದರ್ಶನದಲ್ಲಿ ವಿವರಣೆ ನೀಡಿದ್ದಳು ಎನ್ನಲಾಗಿದೆ. ಈ ವಿವರಣೆಯ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದ್ದು ಸಾಕಷ್ಟು ಗೊಂದಲಗಳಿಗೆ ಎಡೆಮಾಡಿಕೊಟ್ಟಿತ್ತು.

ಈ ಸಂಗತಿ ಗಮನಕ್ಕೆ ಬಂದ ಕೂಡಲೇ ಶಿಕ್ಷಣ ಇಲಾಖೆಯಿಂದ ತನಿಖಾ ತಂಡ ನೇಮಿಸಿದ್ದು, ಬಿಇಒ ನೇತೃತ್ವದ ಅಧಿಕಾರಿಗಳ ತಂಡ ರಚಿಸಿ ಈ ಬಗ್ಗೆ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಆದೇಶಿಸಿದ್ದಾಗಿ ಡಿಡಿಪಿಐ ರಾಮಚಂದ್ರ ರಾಜೇ ಅರಸ್ 'ಮೈಸೂರು ಮಿತ್ರ'ನಿಗೆ ತಿಳಿಸಿದರು. ತಂಡವು ಈಗಾಗಲೇ ಸಂಬಂಧಿಸಿದ ಖಾಸಗಿ ಶಾಲೆಗೆ ನೀಡಿ ವಿವರಣೆ ಕಲೆ ಹಾಕಿದೆ. ವೀಡಿಯೋದಲ್ಲಿರುವ ವಿದ್ಯಾರ್ಥಿನಿ ಆ ಶಾಲೆಯ ವಿದ್ಯಾರ್ಥಿನಿಯೇ ಆಗಿದ್ದು ಎಲ್ಲಿ ವೀಡಿಯೋ ಮಾಡಲಾಗಿದೆ ಎಂಬುದು ತಮಗೆ ಗೊತ್ತಿಲ್ಲವೆಂದು ಶಾಲಾ ಆಡಳಿತ ಮಂಡಳಿಯವರು ವಿಚಾರಣೆ ವೇಳೆ ಹೇಳಿಕೆ ನೀಡಿದ್ದಾರೆ. ಹಾಗಾಗಿ ವೀಡಿಯೋ ಎಲ್ಲಿ ಮಾಡಲಾಗಿದೆ, ಯಾರು ಮಾಡಿದರು ಎಂಬುದನ್ನು ತಿಳಿಯಲು ಹೆಚ್ಚಿನ ತನಿಖೆ ನಡೆಸುವುದು ಅಗತ್ಯವಾಗಿದೆ ಎಂದು ತನಿಖಾ ತಂಡ ವರದಿ ಸಲ್ಲಿಸಿದೆ ಎಂದು ತಿಳಿದುಬಂದಿದೆ.

ಈ ಖಾಸಗಿ ಶಾಲೆಗೆ ಜಾರಿ ಮಾಡಿರುವ ಶೋಕಾಸ್ ನೋಟೀಸ್‌ಗೆ ಎರಡು ದಿನ ಕಳೆದರೂ ಶಾಲೆಯ ಆಡಳಿತ ಮಂಡಳಿ ಇದಕ್ಕೆ ಉತ್ತರಿಸಿಲ್ಲ. ಹಾಗಾಗಿ ಮತ್ತೊಂದು ಶೋಕಾಸ್ ನೋಟಿಸ್ ಜಾರಿ ಮಾಡಲಾಗಿದೆ. ಇದಕ್ಕೂ ಉತ್ತರಿಸದಿದ್ದರೆ ಶಿಕ್ಷಣ ಶಾಲೆ ಮೇಲೆ ಸೂಕ್ತ ಕ್ರಮ ಜರುಗಿಸಲು ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆ ನಿರ್ಧರಿಸಿದೆ ಎಂದರು.

ಮಾದಪ್ಪನ ಬೆಟ್ಟದಲ್ಲಿ ಯುಗಾದಿ ಜಾತ್ರೆ ಆರಂಭ



ಶ್ರೀ ಮಲೆ ಮಹದೇಶ್ವರ ಬೆಟ್ಟದ ಮಹದೇಶ್ವರಸ್ವಾಮಿ ದೇವಾಲಯದಲ್ಲಿ ಯುಗಾದಿ ಜಾತ್ರಾ ಮಹೋತ್ಸವ ಇಂದಿನಿಂದ ಆರಂಭಗೊಂಡಿತು.

ಹನೂರು,ಮಾ27– ತಾಲೂಕಿನ ಪ್ರಸಿದ್ಧ ಧಾರ್ಮಿಕ ಸ್ಥಳವಾದ ಶ್ರೀ ಮಲೆ ಮಹದೇಶ್ವರ ಬೆಟ್ಟದ ಮಹದೇಶ್ವರಸ್ವಾಮಿ ದೇವಾಲಯದಲ್ಲಿ ಯುಗಾದಿ ಜಾತ್ರಾ ಮಹೋತ್ಸವ ಇಂದಿನಿಂದ ಆರಂಭವಾಗಿದೆ.

ಮಹದೇಶ್ವರಸ್ವಾಮಿಗೆ ವಿಶೇಷ ಪೂಜೆಯನ್ನು ಸಲ್ಲಿಸುವ ಮೂಲಕ ಜಾತ್ರೆಗೆ ಚಾಲನೆ ನೀಡಲಾಗಿದ್ದು, ಯುಗಾದಿ ಜಾತ್ರೆಯಲ್ಲಿ ಭಾಗಿಯಾಗಲು ಮಾದಪ್ಪನ ಸನ್ನಿಧಿಗೆ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಕಾಲ್ನಡಿಗೆಯಲ್ಲಿ ಬರುತ್ತಿದ್ದಾರೆ. ಈಗಾಗಲೇ ಬೆಟ್ಟಕ್ಕೆ ತಲುಪಿರುವ ಭಕ್ತರು ರಂಗಮಂದಿರದ ಆವರಣ ಹಾಗೂ ಅಕ್ಕಪಕ್ಕದಲ್ಲಿ ನೆರಳಿಗಾಗಿ ವ್ಯವಸ್ಥೆಯನ್ನು ಕಲ್ಪಿಸಿರುವ ಸ್ಥಳಗಳಲ್ಲಿ ಬೀಡು ಬಿಟ್ಟಿದ್ದಾರೆ.

ರಥೋತ್ಸವ: ಮಾ.28ರ ಶುಕ್ರವಾರ ಸ್ವಾಮಿಗೆ ಎಣ್ಣೆ ಮಜ್ಜನ ಸೇವೆ ನಡೆಯಲಿದೆ. ಮಾ.29ರ ಶನಿವಾರ ಯುಗಾದಿ ಅಮಾವಾಸ್ಯೆಯ ಪ್ರಯುಕ್ತ ವಿಶೇಷ ಪೂಜಾ ಕೈಂಕರ್ಯಗಳು ಜರುಗಲಿವೆ. ಮಾ.30ರ ಭಾನುವಾರ ಚಂದ್ರಮಾನ ಯುಗಾದಿ ಪ್ರಯುಕ್ತವಾಗಿ ಬೆಳಗ್ಗೆ 8 ಗಂಟೆಯಿಂದ 9 ಗಂಟೆಯವರೆಗೆ ನಡೆಯುವ ಶುಭ ಮುಹೂರ್ತದಲ್ಲಿ ಮಹದೇಶ್ವರ ಸ್ವಾಮಿಯ ಮಹಾ ರಥೋತ್ಸವ ನಡೆಯಲಿದೆ.

ಪ್ರಾಧಿಕಾರದಿಂದ ಸಿದ್ಧತೆ: ಐದು ದಿನಗಳ ಕಾಲ ನಡೆಯುವ ಯುಗಾದಿ ಜಾತ್ರೆಯನ್ನು ಅಚ್ಚುಕಟ್ಟಾಗಿ ಮಾಡಲು ಶ್ರೀ ಮಲೆ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿದೆ. ಭಕ್ತರಿಗೆ ವಿಶೇಷ ದಾಸೋಹ ವ್ಯವಸ್ಥೆ, ರಾಜಗೋಪುರದ ಮುಂಭಾಗ ಹಾಗೂ ಸರದಿ ಸಾಲಿನ ಕಡೆ ನೆರಳಿನ ವ್ಯವಸ್ಥೆ ಮಾಡಲಾಗಿದೆ. ದರ್ಶನ ಮಾಡುವ ವೇಳೆ ನೂಕ ನುಗ್ಗಲು ತಡೆಗಟ್ಟಲು ಹೆಚ್ಚುವರಿ ಸರತಿ ಸಾಲುಗಳನ್ನು ನಿರ್ಮಾಣ ಮಾಡಿ ಪ್ರಸಾದ ವಿನಿಯೋಗಕ್ಕೆ ಹೆಚ್ಚುವರಿ ಲಾಡು ಕೌಂಟರ್‌ಗಳನ್ನು ತೆರೆಯಲಾಗಿದೆ. ವಿವಿಧ ಕಡೆಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ಶೌಚಗೃಹ ಮತ್ತು ಅಗತ್ಯ ಸೌಕರ್ಯ ಒದಗಿಸಲಾಗಿದೆ.

ಸಹಕಾರ ಸಂಘದ ಚುನಾವಣೆ: ಬಿಜೆಪಿಗೆ ಮುಖಭಂಗ



ಸಹಕಾರ ಸಂಘದ ಚುನಾವಣೆಯಲ್ಲಿ ಜಯಶಾಲಿಯಾಗಿರುವ ನಿರ್ದೇಶಕರು.

ಬೇಗೂರು,ಮಾ27– ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಚುನಾವಣೆಯಲ್ಲಿ ಸಂಘದ ಮಾಜಿ ಅಧ್ಯಕ್ಷ ತಗ್ಗಲೂರು ತಮ್ಮಯ್ಯಪ್ಪ ಬಣ ಮೇಲುಗೈ ಸಾಧಿಸಿದ್ದು, ಬಿಜೆಪಿಯ ಏಳು ಮಂದಿ ಸೋಲುವ ಮೂಲಕ ತೀವ್ರ ಮುಖಭಂಗ ಅನುಭವಿಸಿದೆ.

ಸಂಘದ ಮಾಜಿ ಅಧ್ಯಕ್ಷ ತಗ್ಗಲೂರು ತಮ್ಮಯ್ಯಪ್ಪ ಬಣದಲ್ಲಿ ತಮ್ಮಯ್ಯಪ್ಪ, ರಾಜಣ್ಣ ಜೈನ್, ಶಂಕರಪ್ಪ ಬಿಳಿಗಿರಿನಾಯಕ, ಪಿ.ಚಂದ್ರು, ರತ್ನಮ್ಮ, ನಿರ್ಮಲ, ಕೆ.ನಂದೀಶ್,ತಾಪಂ ಮಾಜಿ ಸದಸ್ಯ ಮಲ್ಲಿದಾಸ್ ಗೆಲುವು ಸಾಧಿಸಿದ್ದಾರೆ. ಹಿಂದುಳಿದ ವರ್ಗದ ಎ ಕ್ಷೇತ್ರದಿಂದ ನಾರಾಯಣ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಭರ್ಜರಿ ಗೆಲುವು: ಸಾಲಗಾರರಲ್ಲದ ಕ್ಷೇತ್ರದಿಂದ ಸ್ಪರ್ಧಿಸಿದ್ದ ತಮ್ಮಯ್ಯಪ್ಪ ಬಣದ ಸದಾಶಿವಮೂರ್ತಿ.ಟಿ 115 ಮತಗಳಿಂದ ಗೆಲುವು ಸಾಧಿಸಿದ್ದಾರೆ. ನೂತನ ನಿರ್ದೇಶಕರನ್ನು ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಎಚ್.ಎಸ್.ನಂಜುಂಡ ಪ್ರಸಾದ್ ಅಭಿನಂದಿಸಿದರು. ಈ ಸಮಯದಲ್ಲಿ ತಾಪಂ ಮಾಜಿ ಸದಸ್ಯ ನೀಲಕಂಠಪ್ಪ, ಯಜಮಾನ ಶಿವಮೂರ್ತಿ, ಗ್ರಾಮಪಂಚಾಯಿತಿ ಅಧ್ಯಕ್ಷ ಎ. ರವಿ ಮಾಜಿ ಉಪಾಧ್ಯಕ್ಷ ಕೆ.ಮಹದೇವ ಶೆಟ್ಟಿ, ಸದಸ್ಯ ಪುನೀತ್, ಡೇರಿ ಮಾಜಿ ಅಧ್ಯಕ್ಷ ಬಿ.ಸಿ.ಮಹದೇವಸ್ವಾಮಿ, ಮುಖಂಡರಾದ ಬಡ್ಡಿನಾಗಪ್ಪ, ಭಾಸ್ಕರ್, ಬಸವನಾಯಕ, ಆಟೋ ಮಹೇಶ್, ಕಬ್ಬೇಪುರ ಮಧುಸೂದನ್, ಮಂಜುನಾಥ್ ಸೇರಿದಂತೆ ಹಲವರಿದ್ದರು.

ಮದ್ದೂರು ರಂಗಯ್ಯ ನಿಧನ



ಯಳಂದೂರು, ಮಾ.27– ತಾಲೂಕಿನ ಮದ್ದೂರು ಗ್ರಾಮದ ಮದ್ದೂರು ರಂಗಯ್ಯ (80) ರಾತ್ರಿ ನಿಧನರಾದರು. ಮೃತರಿಗೆ ಪತ್ನಿ, ಪತ್ರಕರ್ತ ಮದ್ದೂರು ಮಂಜುನಾಥ್ ಸೇರಿದಂತೆ ಮೂವರು ಪುತ್ರರು, ಇಬ್ಬರು ಪುತ್ರಿಯರು ಇದ್ದಾರೆ. ಇವರ ಅಂತ್ಯಕ್ರಿಯೆಯು ನಿನ್ನೆ ಸ್ವಗ್ರಾಮದಲ್ಲಿ ನೆರವೇರಿತು.

ಬಿಳಿಗಿರಿರಂಗನ ಹುಂಡಿಯಲ್ಲಿ 9.74 ಲಕ್ಷ ಸಂಗ್ರಹ

ಯಳಂದೂರು, ಮಾ.27– ಬಿಳಿಗಿರಿರಂಗನಬೆಟ್ಟದಲ್ಲಿ ಶ್ರೀ ಬಿಳಿಗಿರಿರಂಗನಾಥಸ್ವಾಮಿ ದೇಗುಲದ ಹುಂಡಿಯ ಹಣವನ್ನು ಬುಧವಾರ ಎಣಿಕೆ ಮಾಡಲಾಯಿತು.

ನಾಣ್ಯಗಳ ರೂಪದಲ್ಲಿ 49,520 ರೂ., ನೋಟುಗಳ ರೂಪದಲ್ಲಿ 9,25,302 ರೂ.ಗಳು ಸೇರಿದಂತೆ ಒಟ್ಟು 9,74,822 ರೂ.ಗಳು ಸಂಗ್ರಹವಾಗಿದೆ. ಫೆ.06 ರಂದು ಹುಂಡಿಯನ್ನು ಎಣಿಕೆ ಮಾಡಲಾಯಿತು. ಇದರೊಂದಿಗೆ 10 ಯುರೋನ ಒಂದು ನೋಟು ಕೂಡ ಹುಂಡಿಯಲ್ಲಿದೆ. ಇದರೊಂದಿಗೆ ಚಿನ್ನದ ತಾಳಿಬೊಟ್ಟು ಕೂಡ ಹುಂಡಿಯಲ್ಲಿದೆ ಎಂದು ದೇಗುಲದ ಕಾರ್ಯನಿರ್ವಾಹಕ ಅಧಿಕಾರಿ ಮೋಹನ್‌ಕುಮಾರ್ ಮಾಹಿತಿ ನೀಡಿದರು.

ಭಕ್ತರ ಬಾಯಿಬೀಗ ; ಭಕ್ತಿಯ ಪರಾಕಾಷ್ಠೆ

ಹನೂರು,ಮಾ.27– ಪಟ್ಟಣದ ಆದಿಪರ ಶಕ್ತಿ ಗ್ರಾಮ ದೇವತೆ ಶ್ರೀ ಬೆಟ್ಟಳ್ಳಿ ಮಾರಮ್ಮ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ನಿನ್ನೆ 3 ಸಾವಿರಕ್ಕೂ ಹೆಚ್ಚು ಭಕ್ತಾದಿಗಳು ಸಣ್ಣ ಬಾಯಿ ಬೀಗ ಹಾಕಿಕೊಂಡು ಮಾರಮ್ಮನಿಗೆ ಹರಕೆ ತೀರಿಸಿದರು.

ದೊಡ್ಡ ಬಾಯಿ ಬೀಗ ವಿಶೇಷ : ಪಟ್ಟಣದ ಆಂಜನೇಯಸ್ವಾಮಿ ದೇವಾಲಯದ ಮುಂಭಾಗದಲ್ಲಿರುವ ಆವರಣದಲ್ಲಿ ಬುಧವಾರ 78 ಪುರುಷರು, 25 ಮಹಿಳೆಯರು ಬಾಯಿಗೆ 18ರಿಂದ 20 ಅಡಿ ಉದ್ದದ ಸರಳನ್ನು ಚುಚ್ಚಿಕೊಂಡು, ಬೀಗ ಹಾಕಿಕೊಂಡು ಕಿಮೀಗಟ್ಟಲೆ ಮೆರವಣಿಗೆ ನಡೆಸಿ ಮಾರಮ್ಮನಿಗೆ ಭಕ್ತಿ ಸಮರ್ಪಿಸಿದರು.

ನೆತ್ತಿ ಸುಡುವ ಬಿಸಿಲಿನಲ್ಲಿ ಭಾರಿ ಜನಸ್ತೋಮ : ವಿವಿಧ ತಾಲೂಕುಗಳಿಂದಲ್ಲದೆ, ರಾಜ್ಯದ ನಾನಾ ಭಾಗಗಳಿಂದ ಭಕ್ತಾದಿಗಳು ಭಕ್ತಿಯ ಪರಾಕಾಷ್ಠೆಯನ್ನು ಕಣ್ತುಂಬಿಕೊಂಡರು. ಆಯಕಟ್ಟಿನ ಸ್ಥಳಗಳಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರನ್ನು ನಿಯೋಜಿಸುವ ಮೂಲಕ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಿದ್ದರು.

ಶಾಸಕರಿಂದ ಪೂಜೆ : ಶಾಸಕ ಎಂಆರ್ ಮಂಜುನಾಥ್, ಬಿಜೆಪಿ ಮುಖಂಡ ನಿಶಾಂತ್ ಮಾರಮ್ಮನ ದೇವಾಲಯಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.



ಭಕ್ತಾದಿಗಳು ಬಾಯಿ ಬೀಗ ಹಾಕಿಕೊಂಡು ಮಾರಮ್ಮನಿಗೆ ಹರಕೆ ತೀರಿಸಿದರು.

ಪಡಗೂರಲ್ಲಿ ಹುಲಿ ದಾಳಿ; ಹಸು ಬಲಿ

ಗುಂಡ್ಲುಪೇಟೆ,ಮಾ27–ತಾಲೂಕಿನ ಪಡಗೂರು ಗ್ರಾಮದಲ್ಲಿ ಹುಲಿ ದಾಳಿಗೆ ಹಸು ಬಲಿಯಾಗಿದೆ.

ಗ್ರಾಮದ ಮಹೇಶ್ ಎಂಬುವರ ಜಮೀನಿನಲ್ಲಿ ಮೇಯುತ್ತಿದ್ದ ಹಸುವಿನ ಮೇಲೆ ಇಂದು ಸಂಜೆ ಏಕಾಏಕಿ ಹುಲಿ ದಾಳಿ ನಡೆಸಿದೆ. ಈ ವೇಳೆ ಜಮೀನಿನಲ್ಲಿ ಇದ್ದವರು ಜೋರಾಗಿ ಕೂಗಿಕೊಳ್ಳುತ್ತಿದ್ದಂತೆ ಹುಲಿ ಪರಾರಿಯಾಗಿದೆ.

ವಿಷಯ ತಿಳಿದ ಬಫರ್ ವಲಯದ ಪ್ರಭಾರ ಅರಣ್ಯಾಧಿಕಾರಿ ಶಿವಕುಮಾರ್ ಸ್ಥಳಕ್ಕೆ ಆಗಮಿಸಿದರು. ಕಳೆದ ವರ್ಷದಿಂದ ಹುಲಿ ಚಿರತೆ ದಾಳಿಗೆ ಸುಮಾರು ಐವತ್ತಕ್ಕೂ ಹೆಚ್ಚಿನ ಜಾನುವಾರುಗಳು ಸಾವಿಗೀಡಾದರೂ ಅರಣ್ಯ ಇಲಾಖೆ ವನ್ಯಜೀವಿಗಳ ಸೆರೆಹಿಡಿಯುತ್ತಿಲ್ಲ. ಇದರಿಂದಾಗಿ ರೈತರು ತಮ್ಮ ಜಮೀನುಗಳಿಗೆ ಹೋಗಲಾಗುತ್ತಿಲ್ಲ. ಕೆಲಸ ಕಾರ್ಯಗಳಿಗೆ ಕಾರ್ಮಿಕರು ಬರುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕೂಡಲೇ ಸ್ಥಳಕ್ಕೆ ಹಿರಿಯ ಅಧಿಕಾರಿಗಳು ಭೇಟಿ ನೀಡಿ ಸ್ಥಳದಲ್ಲಿ ಜಾನುವಾರು ನಷ್ಟಕ್ಕೆ ಪರಿಹಾರ ಕೊಡಬೇಕು. ತಪ್ಪಿದಲ್ಲಿ



ಗುಂಡ್ಲುಪೇಟೆ ತಾಲೂಕಿನ ಪಡಗೂರು ಗ್ರಾಮದಲ್ಲಿ ಹುಲಿ ದಾಳಿಗೆ ಹಸು ಬಲಿಯಾಗಿದೆ.

ಹಸುವಿನ ಮೃತದೇಹವನ್ನು ಅರಣ್ಯ ಇಲಾಖೆಯ ಕಚೇರಿಗೆ ಕೊಂಡೊಯ್ದು ಪ್ರತಿಭಟನೆ ನಡೆಸಬೇಕಾಗುತ್ತದೆ ಎಂದು ಪಟ್ಟುಹಿಡಿದರು. ಸ್ಥಳಕ್ಕೆ ಆಗಮಿಸಿದ ಎಸಿಎಫ್ ಸುರೇಶ್ ರೈತರ ಆಕ್ರೋಶ ಎದುರಿಸಬೇಕಾಯಿತು. ಕೂಡಲೇ ಬೋನು ಅಳವಡಿಸಿ ಹುಲಿ ಸೆರೆಗೆ ಕ್ರಮಕೈಗೊಳ್ಳುವ ಭರವಸೆ ನೀಡಿದರು.

ತೆರಕಣಾಂಬಿ ಪೊಲೀಸರು ರೈತರು ಹಾಗೂ ಅರಣ್ಯಾಧಿಕಾರಿಗಳು ಮಾತುಕತೆ ನಡೆಸಿ ಸಮಸ್ಯೆ ಪರಿಹರಿಸುವಂತೆ ಮನವೊಲಿಸುತ್ತಿದ್ದಾರೆ.

ಮುಂದಿನ ವರ್ಷ ಮಾರ್ಚ್ 19ಕ್ಕೆ



ರಾಕಿಂಗ್‌ಸ್ಟಾರ್ ಯಶ್ ಅಭಿನಯದ, ದೇಶಾದ್ಯಂತ ದೊಡ್ಡಮಟ್ಟದ ನಿರೀಕ್ಷೆ ಹುಟ್ಟಿಸಿರುವ ಟಾಕ್ಸಿಕ್ ಚಿತ್ರ ಪ್ರಪಂಚದಾದ್ಯಂತ ದಿ.19-03-2026ರಂದು ಬಿಡುಗಡೆಯಾಗಲಿದೆ. ಮಲಯಾಳಂನ ಗೀತು ಮೋಹನದಾಸ್ ಅವರ ನಿರ್ದೇಶನದ ಟಾಕ್ಸಿಕ್ ಚಿತ್ರ ಕನ್ನಡ ಹಾಗೂ ಇಂಗ್ಲಿಷ್ ಸೇರಿ ಎರಡೂ ಭಾಷೆಗಳಲ್ಲಿ ಶೂಟಿಂಗ್ ಆಗುತ್ತಿದ್ದು, ಇತರೆ ಭಾಷೆಗಳಿಗೆ ಡಬ್ ಆಗಲಿದೆ, ಭಾರತೀಯ ಹಾಗೂ ಗ್ಲೋಬಲ್ ಆಡಿಯನ್ಸ್‌ಗೆ ಕನೆಕ್ಟ್ ಆಗುವ ರೀತಿ ಈ ಚಿತ್ರದ ನಿರೂಪಣೆ ಮಾಡಲಾಗಿದೆ ಎಂದು ಟಾಕ್ಸಿಕ್ ಚಿತ್ರಕ್ಕೆ ಆ್ಯಕ್ಷನ್ ಕಟ್ ಹೇಳುತ್ತಿರುವ ಗೀತು ಮೋಹನ್‌ದಾಸ್ ತಿಳಿಸಿದ್ದಾರೆ. ಮನರಂಜನೆ ಒದಗಿಸುವುದು ಮಾತ್ರವಲ್ಲದೆ ಪ್ರಪಂಚದಾದ್ಯಂತ ಇರುವ ಪ್ರೇಕ್ಷಕರೊಂದಿಗೆ ಸಂಪರ್ಕ ಸಾಧಿಸುವ ಕಥೆಯನ್ನು ಹೆಣೆದಿರುವುದಾಗಿ ನಿರ್ದೇಶಕಿ ತಿಳಿಸಿದ್ದಾರೆ.

ನಾವು ಈಗಾಗಲೇ ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಕಥೆಯನ್ನು ಕಟ್ಟಿಕೊಡುವ ಸೂಕ್ಷ್ಮತೆಗಳ ಬಗ್ಗೆ ಶ್ರಮಿಸುತ್ತಿದ್ದೇವೆ. ಸಿನಿಮಾ ನೋಡಿದವರಿಗೆ ಎಲ್ಲಾ ಭಾಷೆಗಳಲ್ಲೂ ನೈಜತೆಯ ಅನುಭವ ನೀಡಬೇಕು, ಆ ನಿಟ್ಟಿನಲ್ಲಿ ಕಥೆಯನ್ನು ಹೆಣೆಯುತ್ತಿದ್ದೇವೆ. ವಿಭಿನ್ನ ಭಾಷೆ ಹಾಗೂ ಸಾಂಸ್ಕೃತಿಕ ಹಿನ್ನೆಲೆಯಿರುವ ಪ್ರೇಕ್ಷಕರು ಕೂಡ ನಮ್ಮ ಚಿತ್ರವನ್ನು ಮೆಚ್ಚಬೇಕು ಎಂಬುದು ನಮ್ಮ ಗುರಿಯಾಗಿದೆ. ಕಲಾತ್ಮಕ ದೃಷ್ಟಿಕೋನದ ಜೊತೆಗೆ ಕಮರ್ಷಿಯಲ್ ಆಗಿಯೂ ಕಥೆ ಹೇಳುವ ಮೂಲಕ ಪ್ರೇಕ್ಷಕರನ್ನು ಸೆಳೆಯುವ ಉದ್ದೇಶ ಚಿತ್ರತಂಡಕ್ಕಿದೆ ಎಂದು ಅವರು ಹೇಳಿದ್ದಾರೆ. ಇದು ಭಾಷೆ, ಗಡಿ, ಸಂಸ್ಕೃತಿ, ಈ ಎಲ್ಲಾ ಮಿತಿಗಳನ್ನು ಮೀರಿ ಹೊರಹೊಮ್ಮುವಂಥ ಚಿತ್ರವಾಗಬೇಕು ಎಂದು ಗೀತು ಮೋಹನದಾಸ್ ಹೇಳಿದ್ದಾರೆ. ಮಾನ್ಸಟರ್ ಮೈಂಡ್ ಕ್ರಿಯೇಷನ್ಸ್ ಅಡಿ ರಾಕಿಂಗ್‌ಸ್ಟಾರ್ ಯಶ್ ಹಾಗೂ ವೆಂಕಟ್ ಕೆ.ನಾರಾಯಣ್ ಅವರ ಕೆವಿಎನ್ ಪ್ರೊಡಕ್ಷನ್ಸ್ ಸೇರಿ ನಿರ್ಮಿಸುತ್ತಿರುವ ಟಾಕ್ಸಿಕ್ ಚಿತ್ರ ಬಿಗ್ ಬಜೆಟ್‌ನಲ್ಲಿ ತಯಾರಾಗುತ್ತಿದೆ. ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ಏಕಕಾಲದಲ್ಲಿ ತಯಾರಾಗುತ್ತಿರುವ ಕನ್ನಡದ ಮೊದಲ ಬಿಗ್ ಬಜೆಟ್ ಚಿತ್ರ ಎಂಬ ದಾಖಲೆಗೂ ಟಾಕ್ಸಿಕ್ ಪಾತ್ರವಾಗಿದೆ.



ಇಂದು ತೆರೆಗೆ ಯೋಗರಾಜ ಭಟ್ಟರ

ಮನದ ಕಡಲು



ಇ.ಕೆ.ಎಂಟರ್‌ಟೈನರ್ಸ್ ಲಾಂಛನದಲ್ಲಿ ಇ.ಕೃಷ್ಣಪ್ಪ ಅವರು ನಿರ್ಮಿಸಿ, ಯೋಗರಾಜ್‌ಭಟ್ ಅವರ ನಿರ್ದೇಶನದ "ಮುಂಗಾರು ಮಳೆ" ಚಿತ್ರದ ನಂತರ ಇದೇ ಕಾಂಬಿನೇಷನ್‌ನಲ್ಲಿ ಮೂಡಿಬಂದಿರುವ ಎರಡನೇ ಚಿತ್ರ "ಮನದ ಕಡಲು" ಈ ಶುಕ್ರವಾರ ರಾಜ್ಯಾದ್ಯಂತ ಬಿಡುಗಡೆಯಾಗುತ್ತಿದೆ. ಜಿ.ಗಂಗಾಧರ್ ಅವರ ಸಹ ನಿರ್ಮಾಣ ಹಾಗೂ ಪ್ರತಾಪ್ ಕಾರ್ಯಕಾರಿ ನಿರ್ಮಾಪಕರಾಗಿ ಕಾರ್ಯನಿರ್ವಹಿಸಿರುವ ಈ ಚಿತ್ರ ಈಗಾಗಲೇ ಟೀಸರ್, ಟ್ರೇಲರ್ ಹಾಗೂ ಹಾಡುಗಳ ಮೂಲಕ ಪ್ರೇಕ್ಷಕರ ಮನ ಗೆದ್ದಿದೆ. ಚಿತ್ರದ ನಾಯಕನಾಗಿ ಯುವನಟ ಸುಮುಖ, ನಾಯಕಿಯರಾಗಿ ರಾಶಿಕಾ ಶೆಟ್ಟಿ ಹಾಗೂ ಅಂಜಲಿ ಅನೀಶ್ ನಟಿಸಿದ್ದಾರೆ. ರಂಗಾಯಣ ರಘು, ದತ್ತಣ್ಣ, ಶಿವಧ್ವಜ್ ಪ್ರಮುಖ ತಾರಾಬಳಗದಲ್ಲಿದ್ದಾರೆ. ಯೋಗರಾಜ ಭಟ್ಟರ ನಿರ್ದೇಶನದ ಹದಿನಾರನೇ ಚಿತ್ರ ಇದಾಗಿದೆ,

ಮಹಾರಾಷ್ಟ್ರದ ರಾಯಘಡ ಸಮೀಪದಲ್ಲಿ, ಸಮುದ್ರದ ನಡುವೆ ಇರುವ ಮರೂಡ ಕೋಟೆ ಎಂಬ ದ್ವೀಪದಲ್ಲಿ ಮನದ ಕಡಲು ಚಿತ್ರದ ಪ್ರಮುಖ ಭಾಗದ ಚಿತ್ರೀಕರಣ ನಡೆಸಲಾಗಿದೆ, ಕಡಲು ಸುಂದರವೂ ಹೌದು, ರೌದ್ರವೂ ಹೌದು. ಇದನ್ನೇ ಚಿತ್ರದ ಕಥೆಯಲ್ಲಿ ತರಲಾಗಿದೆ, ಇದೊಂದು ತ್ರಿಕೋನ ಪ್ರೇಮಕಥೆಯಾಗಿದ್ದು, ವೈದ್ಯನೊಬ್ಬನ ಜೀವನದಲ್ಲಿ ನಡೆಯುವ ಪ್ರೇಮ್ ಕಹಾನಿಯನ್ನು ಈ ಚಿತ್ರದ ಮೂಲಕ ನಿರ್ದೇಶಕ ಯೋಗರಾಜ ಭಟ್ಟರು ಬಿಚ್ಚಿಡಲಿದ್ದಾರೆ.

ವಿ.ಹರಿಕೃಷ್ಣ ಅವರ ಸಂಗೀತ ಸಂಯೋಜನೆಯ ಹಾಡುಗಳನ್ನು ಜಯಂತ ಕಾಯ್ಕಿಣಿ, ಯೋಗರಾಜ್ ಭಟ್ ಬರೆದಿದ್ದಾರೆ. ಸಂತೋಷ್ ರೈ ಪಾತಾಜೆ ಅವರ ಛಾಯಾಗ್ರಹಣ, ಕೆ.ಎಂ. ಪ್ರಕಾಶ್ ಅವರ ಸಂಕಲನ, ಶಿವಕುಮಾರ್ ಅವರ ಕಲಾ ನಿರ್ದೇಶನ, ವಿನೋದ್ ಹಾಗೂ ಕೌರವ ವೆಂಕಟೇಶ್ ಅವರ ಸಾಹಸ ನಿರ್ದೇಶನ ಮತ್ತು ಮುರಳಿ, ಕಂಬಿರಾಜು, ಗೀತಾ ಸಾಯಿ ಅವರ ನೃತ್ಯ ನಿರ್ದೇಶನವಿರುವ "ಮನದ ಕಡಲು" ಚಿತ್ರಕ್ಕೆ ಯೋಗರಾಜ್ ಭಟ್, ಗಡ್ಡವಿಜಿ ಹಾಗೂ ಅಮೋಲ್ ಪಾಟೀಲ್ ಚಿತ್ರಕಥೆ ಬರೆದಿದ್ದಾರೆ.



ಕಬಡ್ಡಿ ಹಾಡಿಗೆ ಚಂದನ್‌ಶೆಟ್ಟಿ ಸಂಗೀತ



ನಿರ್ಮಾಪಕ, ನಿರ್ದೇಶಕ, ನಟ ಹಾಗೂ ಈಗಲ್ ಮೀಡಿಯಾ ಕ್ರಿಯೇಷನ್ಸ್ ಸಂಸ್ಥಾಪಕರೂ ಆದ ನವರಸನ್ ಅವರು ಸೆಲೆಬ್ರಿಟಿ ವುಮೆನ್ಸ್ ಕಬಡ್ಡಿ ಲೀಗ್ ಆಯೋಜಿಸುವ ಮೂಲಕ ಕ್ರೀಡಾಲೋಕಕ್ಕೂ ಪಾದಾರ್ಪಣೆ ಮಾಡಿದ್ದಾರೆ. ಗಾಯಕ ಹಾಗೂ ಸಂಗೀತ ನಿರ್ದೇಶಕ ಚಂದನ್ ಶೆಟ್ಟಿ ಅವರು ಈ ಕಬಡ್ಡಿ ಲೀಗ್‌ಗಾಗಿ "ಕಬಡ್ಡಿ ಕಬಡ್ಡಿ" ಎಂಬ ಸುಂದರ ಥೀಮ್ ಹಾಡನ್ನು ಬರೆದು ಸಂಗೀತ ಸಂಯೋಜಿಸಿದ್ದಾರೆ. ಇದೇ ಸಂದರ್ಭದಲ್ಲಿ ಪಂದ್ಯಗಳು ನಡೆಯುವ ದಿನಾಂಕಗಳನ್ನು ವಿಧಾನ ಪರಿಷತ್ ಸದಸ್ಯರಾದ ಶರವಣ ಅವರು ಪ್ರಕಟಿಸಿದರು. ಏ.5 ಹಾಗೂ 6ಕ್ಕೆ ಈ ಪಂದ್ಯಗಳು ನಡೆಯಲಿದ್ದು, ಥೀಮ್ ಸಾಂಗನ್ನು ಪಿ.ಆರ್.ಓ. ಸುಧೀಂದ್ರ ವೆಂಕಟೇಶ್ ಅವರು ಬಿಡುಗಡೆ ಮಾಡಿ ಚಿತ್ರತಂಡಕ್ಕೆ ಶುಭ ಹಾರೈಸಿದರು. ಶರವಣ, "ವಾಮನ" ನಿರ್ಮಾಪಕ ಚೇತನ್‌ಗೌಡ, ಸುರೇಶ್‌ಗೌಡ, ರಾಜೇಶ್‌ಗೌಡ, ಗೋವಿಂದರಾಜು ಹಾಗೂ ಗಜೇಂದ್ರ ಅವರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಕೆಲ ದಿನಗಳ ಹಿಂದಷ್ಟೇ ಈ ಕಬಡ್ಡಿ ಲೀಗ್‌ನ ಲೋಗೊ ಬಿಡುಗಡೆ ಮಾಡಲಾಗಿತ್ತು, ಇದೀಗ ಇದರ ಥೀಮ್‌ಸಾಂಗ್ ಹೊರಬಂದಿದೆ. ನಾನು ಇತ್ತೀಚೆಗೆ ಬೇರೆ ಭಾಷೆ ಸಿನಿಮಾ ಇವೆಂಟ್‌ಗಳಿಗೆ ಹೋದಾಗಲೂ ಅಲ್ಲಿನ ಸೆಲೆಬ್ರಿಟಿಗಳು ಹಾಗೂ ನಮ್ಮ ಕನ್ನಡದ ಸೆಲೆಬ್ರಿಟಿಗಳು ಈ ಮಹಿಳಾ ಕಬಡ್ಡಿ ಬಗ್ಗೆ ಮಾತನಾಡಿ ಮೆಚ್ಚುಗೆ ಸೂಚಿಸಿದ್ದು, ನನಗೆ ಬಹಳ ಖುಷಿಯಾಗಿದೆ. ಈ ಲೀಗ್‌ಗಾಗಿ ಒಂದು ಹಾಡು ಬರೆದುಕೊಡಿ ಎಂದು ಚಂದನ್ ಶೆಟ್ಟಿ ಅವರನ್ನು ಕೇಳಿದಾಗ ಅದ್ಭುತವಾದ ಥೀಮ್ ಸಾಂಗ್ ಮಾಡಿಕೊಟ್ಟಿದ್ದಾರೆ. ಚಂದನ್ ಶೆಟ್ಟಿ ಅವರು ಈಗಿನ ಎಐ ತಂತ್ರಜ್ಞಾನದ ಮೂಲಕ ಪುನೀತ್‌ರನ್ನಿಟ್ಟುಕೊಂಡು ಈ ಹಾಡನ್ನು ಸಿದ್ಧಪಡಿಸಿದ್ದಾರೆ. ನಮ್ಮ ಮುಂದಿನ ಎಲ್ಲಾ ಕಾರ್ಯಕ್ರಮಗಳಲ್ಲೂ ಈ ಥೀಮ್‌ಸಾಂಗ್ ಬಳಸಿಕೊಳ್ಳಲಾಗುವುದು ಎಂದು ಆಯೋಜಕ ನವರಸನ್ ಮಾಹಿತಿ ನೀಡಿದರು. ಎಲ್ಲಾ ತಂಡಗಳ ಮಾಲೀಕರು ಹಾಗೂ ನಾಯಕಿಯರು ಕಬಡ್ಡಿ ಕುರಿತು ಮಾತನಾಡಿದರು.

ಏಳನೇ ತರಗತಿಯ ಭಾರತಿ ಟೀಚರ್ ಆದ ಕಥೆ



ಸಚಿವ ಸಂತೋಷ್ ಲಾಡ್ ಒಬ್ಬ ಜಿಲ್ಲಾಧಿಕಾರಿಯಾಗಿ ವಿಶೇಷ ಪಾತ್ರ ನಿರ್ವಹಿಸಿರುವ ಸಿನಿಮಾ 'ಭಾರತಿ ಟೀಚರ್ ಏಳನೇ ತರಗತಿ'. ಉದ್ಯಮಿ ರಾಘವೇಂದ್ರರೆಡ್ಡಿ ಅವರ ನಿರ್ಮಾಣದ ಈ ಚಿತ್ರಕ್ಕೆ ಎಂ.ಎಲ್. ಪ್ರಸನ್ನ ಕಥೆ, ಚಿತ್ರಕಥೆ, ಸಾಹಿತ್ಯ ಬರೆದು ಆ್ಯಕ್ಷನ್ ಕಟ್ ಹೇಳಿದ್ದಾರೆ. ವೆಂಕಟ್‌ಗೌಡ ಚಿತ್ರದ ಕ್ರಿಯೇಟಿವ್ ಹೆಡ್ ಆಗಿ ಕೆಲಸ ಮಾಡಿದ್ದಾರೆ. ಇತ್ತೀಚೆಗೆ ಸಂತೋಷ್‌ಲಾಡ್ ಅವರೇ ಚಿತ್ರದ ಟೀಸರ್ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ಪ್ರಸನ್ನ, ನಮ್ಮ ಚಿತ್ರದಲ್ಲಿ ಒಂದು ಆಶಯವಿದೆ, ಈ ತಲೆಮಾರಿನ ಮಕ್ಕಳಲ್ಲಿ ಕಲಿಯುವ ಮತ್ತು ಕಲಿಸುವ ಕಿಚ್ಚನ್ನು ಹುಟ್ಟುಹಾಕಬೇಕು. ಇಂತಹ ಸಾತ್ವಿಕ ಆಶಯಕ್ಕೆ ಸಾರ್ವಜನಿಕರ ಬೆಂಬಲ ಬೇಕು. ಸರ್ಕಾರ ಮನಸ್ಸು ಮಾಡಿದರೆ ಏನು ಬೇಕಾದರೂ ಸಾಧ್ಯವಾಗುತ್ತೆ. ಭಾರತಿ ಎಂಬ ಏಳನೇ ತರಗತಿಯ ವಿದ್ಯಾರ್ಥಿನಿ ಮುಂದೆ ಹೇಗೆ ಭಾರತಿ ಟೀಚರ್ ಆಗಿ ಬದಲಾಗುತ್ತಾಳೆ, ತನ್ನೂರಿನ ಪ್ರತಿಯೊಬ್ಬರೂ ಓದು ಬರಹ ಕಲಿಯಬೇಕು ಎಂಬ ಕನಸನ್ನು ನನಸಾಗಿಸುವಲ್ಲಿ ಆಕೆ ಏನೆಲ್ಲ ನೋವು, ನಲಿವನ್ನು ಕಂಡಳು, ಒಬ್ಬ ಜಿಲ್ಲಾಧಿಕಾರಿ ಆಕೆಗೆ ಹೇಗೆ ಬೆನ್ನೆಲುಬಾಗಿ ನಿಲ್ಲುತ್ತಾರೆ ಎನ್ನುವುದೇ ಚಿತ್ರದ ಕಥೆ ಎಂದು ಮಾಹಿತಿ ನೀಡಿದರು.

ನಂತರ ಮಾತನಾಡಿದ ಸಚಿವರು, ಈ ಚಿತ್ರದ ಕಾನ್ಸೆಪ್ಟ್ ನನಗೆ ತುಂಬಾ ಇಷ್ಟವಾಯಿತು. ನಾನು ಈವರೆಗೆ ಬಣ್ಣ ಹಚ್ಚಿದವನಲ್ಲ, ಡಿಸಿ ಪಾತ್ರಕ್ಕೆ ನ್ಯಾಯ ಒದಗಿಸುತ್ತೇನೆ. ಇದೊಂದು ಉತ್ತಮ ಸಂದೇಶ ಇರುವ ಚಿತ್ರ. ಈಗ ಕನ್ನಡ ಚಿತ್ರಗಳ ಸಕ್ಸಸ್ ರೇಟ್ 8% ಮಾತ್ರ ಇದೆ, ಸಿನಿಮಾಗಳು ಗೆಲ್ಲುವುದು ಬಹಳ ಕಷ್ಟಕರವಾಗಿದೆ. ಇಂಥ ಉತ್ತಮ ಸದಭಿರುಚಿಯ ಸಿನಿಮಾಗಳು ಗೆಲ್ಲಬೇಕು, ನಮ್ಮ ಚಿತ್ರರಂಗಕ್ಕೆ ಒಳ್ಳೆಯ ಇತಿಹಾಸವಿದೆ. ಇಲ್ಲಿ ಡಾ.ರಾಜಕುಮಾರ್, ಡಾ.ವಿಷ್ಣುವರ್ಧನ್, ಪುಟ್ಟಣ್ಣ ಕಣಗಾಲ್‌ರಂಥ ದಿಗ್ಗಜರು ಕೆಲಸ ಮಾಡಿದ್ದಾರೆ. ಇವತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ನಮ್ಮ ಚಿತ್ರಗಳು ಗುರುತಿಸಿಕೊಳ್ಳುತ್ತಿವೆ ಎಂದು ಹೇಳಿದರು.


ಈ ಚಿತ್ರದಲ್ಲಿ ಭಾರತಿ ಟೀಚರ್ ಆಗಿ ಕು.ಯಶಿಕಾ, ಆಕೆಯ ಶಿಕ್ಷಕರಾಗಿ ಸಿಹಿಕಹಿ ಚಂದ್ರು ಕಾಣಿಸಿಕೊಂಡಿದ್ದಾರೆ, ಡಾ.ವಿ.ನಾಗೇಂದ್ರಪ್ರಸಾದ್, ರಾಜೇಶ್ ರಾಮನಾಥ್, ವೀರಕಪುತ್ರ ಶ್ರೀನಿವಾಸ್, ನಿರ್ಮಾಪಕ ವೆಂಕಟ್‌ಗೌಡ ಹಾಗೂ ರಾಘವೇಂದ್ರ ರೆಡ್ಡಿ ಸಿನಿಮಾ ಕುರಿತಂತೆ ಮಾತನಾಡಿದರು. ಎಂ.ಬಿ.ಹಳ್ಳಿಕಟ್ಟಿ ಅವರ ಛಾಯಾಗ್ರಹಣ, ಕೆ.ಎಂ.ಇಂದ್ರ ಅವರ ವಾದ್ಯಸಂಯೋಜನೆ, ಕಂಬಿರಾಜ್ ಅವರ ನೃತ್ಯ ಈ ಚಿತ್ರಕ್ಕಿದ್ದು, ರಾಘವ್ ಸೂರ್ಯ ಹಾಗೂ ದರ್ಶನ್‌ಗೌಡ ಚಿತ್ರದ ಕಾರ್ಯಕಾರಿ ನಿರ್ಮಾಪಕರಾಗಿ ಕೆಲಸ ಮಾಡಿದ್ದಾರೆ. ಗೋವಿಂದೇಗೌಡ, ಅಶ್ವಿನ್ ಹಾಸನ, ಕಾಮಿಡಿ ಕಿಲಾಡಿಗಳು ದಿವ್ಯಾ ಅಂಚನ್, ಬೆನಕ ನಂಜಪ್ಪ, ರೋಹಿತ್ ರಾಘವೇಂದ್ರ, ಸೌಜನ್ಯ ಸುನಿಲ್, ಎಂ.ಜಿ. ರಂಗಸ್ವಾಮಿ ಚಿತ್ರದಲ್ಲಿ ನಟಿಸಿದ್ದಾರೆ.

ಸಿನಿಪದಬಂಧ-570

ಉಮ್ಮತ್ತೂರು ಇಂದುಶೇಖರ್



ಮೊ.9880820462



ಹೆಸರು ________

ವಿಳಾಸ ________

ದೂರವಾಣಿ ಸಂಖ್ಯೆ ________

ಎಡದಿಂದ ಬಲಕ್ಕೆ

1. ವಿಶ್ವಾವಸು ನಾಮ ಸಂವತ್ಸರದ ದಿನ ಮರಳಿ ಬರುತಿದೆ 3
2. ಶಿವಣ್ಣನ ಒಂದು ಬಗೆಯ ಇಸ್ಪೀಟ್ ಆಟ ! 6
5. ದುನಿಯಾ ವಿಜಯ್ ನ ಸಮಯದ ಅವಧಿ 2
6. ವಿಷ್ಣುವರ್ಧನ್ ಹಾಡಿದ "ಜೋಗುಳ" 2
7. ಉಡುಗೊರೆ ನೀಡಿದ ತಾಯಿಯ ಗೃಹ 5
8. ಧ್ರುವ ಸರ್ಜಾ ಅಭಿನಯದ "ವಿಜೃಂಭಣೆ" 3
9. ಕಡಲು ಇಲ್ಲಿ ಅಸ್ತವ್ಯಸ್ತ 3
11. ಕುಬೇರ ಚಿತ್ರದ ನಾಯಕಿ 3
12. ವಿಷ್ಣುವರ್ಧನ್ "ಶ್ರೀಮಂತ" 4
14. ರಾಮ್ ಕುಮಾರ್ ಅಭಿನಯದ ತಾಯಿಯ ಮನೆಯ ಬಳುವಳಿ 7
15. 'ಎಕ್ಕಾ ರಾಜ ರಾಣಿ ನನ್ನ ಕೈಯೊಳಗೆ ಹಿಡಿ ಮಣ್ಣು ನಿನ್ನ ಬಾಯೊಳಗೆ...' ಗೀತೆಯ ಚಿತ್ರ 2
16. ಬಲೆ ಬೀಸಿದ ಹೆಂಗಸು 3
17. ಗಣೇಶ್ - ವೇದಿಕಾ ಮಿಲನಗೊಂಡಿದ್ದಾರೆ 3
18. ಅನಿಶ್ ತೇಜೇಶ್ವರ್ - ಅಧಿತಿ ರಾವ್ ಅಭಿನಯದ ಚಿತ್ರ 3

ಮೇಲಿನಿಂದ ಕೆಳಕ್ಕೆ

1. ಹೃದಯ ಗೀತೆ ಚಿತ್ರದ ಹಾಡಿನ ಆರಂಭ ಚಿತ್ರವೂ ಹೌದು ! 9
2. ಕುಮಾರ್ ಬಂಗಾರಪ್ಪನ ಕರತಲದಲ್ಲಿರುವ ಸ್ವರ್ಗ ಚೆಲುವೆ ! 6
3. ಹಬ್ಬದ ದಿನಗಳಲ್ಲಿ ಕಟ್ಟಿದ ಕನ್ನಡದ ಲೀಫ್ ಬಂಟಿಂಗ್ 6
4. ಮಾವನ ಗೃಹದಲ್ಲೇ ಮಗಳ ಗಂಡ ಠಿಕಾಣಿ ಹೂಡಿದ್ದಾನೆ 5
7. ಮೂರು ಕರಿ ಕುರಿ ಮರಿ ಮೆಯ್ದ ಸ್ಥಳ 8
10. ನವಕೋಟಿ ನಾರಾಯಣ ಚಿತ್ರದ ನಟಿ ಹೆಸರಿನ ಆರಂಭ ಶ್ರೀಮಂತೆಯಾಗಿದ್ದಾಳೆ 7
13. " _ _ _ _ _ ಮುಂದೆ ಹೋಗಲಿ ದೂರ ತೀರವ ಸೇರಲಿ..... ", 5

ಸಿನಿ ಪದಬಂಧ 569ರ ಉತ್ತರ

ಬಾ	ರೋ	ನ	ನ್ನ	ಮು	ದ್ದಿ	ನ	ಕೃ	ಷ್ಣ		
ಳೊಂ		ಡ		ದ್ದು		ಯ			ತೇ	
ದು	ನಿ	ಯಾ		ರಾ	ಜ	ನ	ನ್ನ	ರಾ	ಜ	
ಭಾ				ಜ್		ತಾ				ಗು
ವ		ಮ				ರಾ	ಧಾ	ರ	ಮ	ಣ
ಗೀ	ಜ	ಗ	ನ	ಗೂ	ಡು			ತಿ		ವಂ
ತೆ		ಮೊ			ಹಾ		ಸ	ವಿ		ತ
		ಮ್ಮ		ಚಂ	ದ	ನ		ಜ್ಞಾ		
ಮ	ದ	ಗ	ಜ		ಯ		ಜ	ನ	ಬ	ಲ
ತ್ಸ					ರೆ					ಗೋ
ರ	ಕ್ಷಿ	ತಾ		ಪ್ರೇ	ಮ	ದ	ಕಾ	ದಂ	ಬ	ರಿ

ವಿಜೇತರು: ಪ್ರದ್ಯುಮ್ನ, ನಂ.208, ದಿವಾನ್ಸ್ ರಸ್ತೆ, ಚಾಮರಾಜ ಮೊಹಲ್ಲಾ, ಮೈಸೂರು

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಮಾತೊಂದ ಹೇಳುವೆ ಚಿತ್ರದಲ್ಲಿ ಸಿಂಗಲ್ ಮಿಂಗಲ್ ಹಾಡು



ಮಯೂರ್ ಕಡಿ ಅವರು ಕಥೆ, ಚಿತ್ರಕಥೆ ಬರೆದು ನಿರ್ದೇಶಿಸಿರುವ ಅಪರೂಪದ ಪ್ರೇಮಕಥೆ 'ಮಾತೊಂದ ಹೇಳುವೆ'. ಕಳೆದ ತಿಂಗಳು ಚಿತ್ರಮಂದಿರಗಳು ಮಾತನಾಡುವ ವೀಡಿಯೋವೊಂದರ ಮೂಲಕ ತಮ್ಮ ಸಿನಿಮಾದ ಟೈಟಲನ್ನು ಬಿಡುಗಡೆಗೊಳಿಸಿ, ಸದ್ದು ಮಾಡಿದ್ದ ಚಿತ್ರತಂಡ, ಈಗ ಇನ್ನೂ ಒಂದು ಹೆಜ್ಜೆ ಮುಂದಕ್ಕೆ ಹೋಗಿ 'ಸಿಂಗಲ್ ಮಿಂಗಲ್' ಹಾಡನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಯಬಿಟ್ಟಿದೆ, ಆ ಹಾಡೀಗ ಅತಿಹೆಚ್ಚು ವೀಕ್ಷಣೆಯಾಗುವ ಮೂಲಕ ಟ್ರೆಂಡ್ ಸೆಟ್ ಮಾಡಿದೆ, ಈ ಯಶಸ್ಸು ಚಿತ್ರತಂಡಕ್ಕೆ ಹೊಸ ಹುರುಪು ತಂದುಕೊಟ್ಟಿದೆ.

ಮಹೇಶ್ವರ ಮೋಷನ್ ಪಿಕ್ಚರ್ಸ್ ಈ ಚಿತ್ರವನ್ನು ನಿರ್ಮಿಸಿದ್ದು, ಪ್ರಭು ಸವಣೂರ್ ಮತ್ತು ಅವಿನಾಶ್ ಚಿತ್ರದ ಸಹ ನಿರ್ಮಾಪಕರಾಗಿ ಕೆಲಸ ಮಾಡಿದ್ದಾರೆ. ಎಫ್.ಎಂ.ವಾಹಿನಿಯಲ್ಲಿ ರೇಡಿಯೋ ಜಾಕಿಯಾಗಿ ಪಟಪಟ ಮಾತನಾಡುತ್ತ, ಕೇಳುಗರಿಗೆ ಪರಿಚಿತರಾಗಿದ್ದ ಕಲಾವಿದ ಮಯೂರ್ ಕಡಿ ಅವರು ಇದೇ ಮೊದಲ ಬಾರಿಗೆ ಈ ಚಿತ್ರಕ್ಕೆ ಆಕ್ಷನ್‌ಕಟ್ ಹೇಳಿದ್ದಾರೆ, ಜತೆಗೆ ಅವರೇ ಚಿತ್ರದ ನಾಯಕನ ಪಾತ್ರವನ್ನು ಸಹ ನಿಭಾಯಿಸಿದ್ದಾರೆ. ಮಾತೊಂದ ಹೇಳುವೆ ಒಂದು ಅಪ್ಪಟ ಪ್ರೇಮಕಥಾನಕವನ್ನು ಒಳಗೊಂಡ ಚಿತ್ರವಾಗಿದ್ದು, ಹುಬ್ಬಳ್ಳಿ-ಧಾರವಾಡ ಮೂಲದ ಹುಡುಗ ಮತ್ತು ಮೈಸೂರು ಮೂಲದ ಹುಡುಗಿಯ ಮಧ್ಯ ನಡೆಯುವ ಪ್ರೇಮಪ್ರಕರಣ ಈ ಚಿತ್ರದಲ್ಲಿದ್ದು, ಇಬ್ಬರ ನಡುವಿನ ವಿಶಿಷ್ಟ ಸನ್ನಿವೇಶಗಳು ಚಿತ್ರದಲ್ಲಿ ಗಮನ ಸೆಳೆಯುತ್ತವೆ.

ಮಾತೊಂದ ಹೇಳುವೆ ಚಿತ್ರದಲ್ಲಿ ಮಯೂರ್ ಕಡಿ. ರಾಧ್ಯ ನಾಯಕ, ನಾಯಕಿಯಾಗಿ ಕಾಣಿಸಿಕೊಂಡಿದ್ದು, ಉಳಿದ ತಾರಾಗಣದಲ್ಲಿ ಗಿರೀಶ್ ಶಿವಣ್ಣ, ಪಿ.ಡಿ.ಸತೀಶ್, ಚೇತನ್ ಮರಂಬೀಡ್, ಕಾರ್ತಿಕ್ ಪತ್ತಾರ್, ಪ್ರತೀಕ್ ರಡ್ಡೇರ್, ವಿದ್ಯಾಸಾಗರ ದೀಕ್ಷಿತ, ಸುನಿಲ್ ಪತ್ರಿ ಮುಂತಾದವರು ಅಭಿನಯಿಸಿದ್ದಾರೆ. ಉಲ್ಲಾಸ್ ಕುಲಕರ್ಣಿ ಅವರ ಸಂಗೀತ ಸಂಯೋಜನೆ, ಪರ್ವತೇಶ್ ಪೋಳ ಅವರ ಛಾಯಾಗ್ರಹಣ, ಅಭಯ್ ಕಡಿ ಅವರ ಸಂಕಲನ, ಪ್ರಸನ್ನಕುಮಾರ್.ಎಂ.ಎಸ್. ಅವರ ಹಿನ್ನೆಲೆ ಸಂಗೀತ ಈ ಚಿತ್ರಕ್ಕಿದೆ. ಬೆಂಗಳೂರು, ಹುಬ್ಬಳ್ಳಿ, ಧಾರವಾಡ. ಮೈಸೂರು, ಚಿಕ್ಕಮಗಳೂರು, ಮಂಗಳೂರು ಸುತ್ತಮುತ್ತಲ ಸುಂದರ ತಾಣಗಳಲ್ಲಿ ಈ ಚಿತ್ರಕ್ಕೆ 43 ದಿನಗಳ ಕಾಲ ಚಿತ್ರೀಕರಣ ನಡೆಸಲಾಗಿದೆ. ಈಗಾಗಲೇ ಸೆನ್ಸಾರ್ ಮಂಡಳಿಯಿಂದ ಪ್ರಮಾಣ ಪತ್ರ ಪಡೆದುಕೊಂಡಿರುವ ಈ ಚಿತ್ರವು ಮುಂದಿನ ತಿಂಗಳು ರಾಜ್ಯಾದ್ಯಂತ ತೆರೆಗೆ ಬರುವ ಸಾಧ್ಯತೆಯಿದೆ.

ಏ.9ಕ್ಕೆ ಶ್ರೀಕಂಠೇಶ್ವರ ಸ್ವಾಮಿಯವರ ದೊಡ್ಡ ಜಾತ್ರೆ

ಭಕ್ತರಿಗೆ ಅಗತ್ಯ ಮೂಲ ಸೌಕರ್ಯ ಒದಗಿಸಿ

ಜಾತ್ರೆ ಸಿದ್ಧತಾ ಪರಿಶೀಲನಾ ಸಭೆಯಲ್ಲಿ ಶಾಸಕ ದರ್ಶನ್ ಸೂಚನೆ

ನಂಜನಗೂಡು, ಮಾ.27– ಮುಂಬರುವ ಏ.9ರ ಶ್ರೀಕಂಠೇಶ್ವರಸ್ವಾಮಿ ದೊಡ್ಡ ಜಾತ್ರೆಗೆ ಆಗಮಿಸುವ ಭಕ್ತರಿಗೆ ಅಗತ್ಯ ಮೂಲ ಸೌಕರ್ಯ ಒದಗಿಸುವಂತೆ ಶಾಸಕ ದರ್ಶನ್ ಸೂಚಿಸಿದರು.

ನಗರದ ಶ್ರೀಕಂಠೇಶ್ವರ ದಾಸೋಹ ಭವನದಲ್ಲಿ ನಡೆದ ದೊಡ್ಡ ಜಾತ್ರೆ ಸಿದ್ಧತಾ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಶ್ರೀಕಂಠೇಶ್ವರಸ್ವಾಮಿಯವರ ದೊಡ್ಡ ಜಾತ್ರೆಗೆ ರಾಜ್ಯದ ವಿವಿಧೆಡೆಗಳಿಂದ ಸಾವಿರಾರು ಭಕ್ತರು ಆಗಮಿಸುತ್ತಾರೆ. ಅವರಿಗೆ ಯಾವುದೇ ತೊಂದರೆಯಾಗದಂತೆ ಅಗತ್ಯ ಮೂಲ ಸೌಕರ್ಯ ಒದಗಿಸಬೇಕು. ಕಪಿಲಾ ನದಿ ಜೋಂಡನ್ನು ತೆಗೆದು, ಸೋಪಾನಕಟ್ಟೆ ಸ್ವಚ್ಛಗೊಳಿಸಬೇಕು. ಶುದ್ಧ ಕುಡಿಯುವ ನೀರು, ತಾತ್ಕಾಲಿಕ ಶೌಚಾಲಯ, ಬಟ್ಟೆ ಬದಲಿಸಲು ತಾತ್ಕಾಲಿಕ ಕೊಠಡಿ ನಿರ್ಮಿಸಬೇಕು. ರಾಷ್ಟ್ರೀಯ ಹೆದ್ದಾರಿ, ಚಾಮರಾಜನಗರ ಬೈಪಾಸ್‌ನ ಚತುಷ್ಪಥ ರಸ್ತೆಗಳಲ್ಲಿ ವಿದ್ಯುತ್ ಅಲಂಕಾರ ಮಾಡಬೇಕು. ರಥ ಚಲಿಸುವಾಗ ರಥ ಬೀದಿಯ ಇಕ್ಕೆಲಗಳಲ್ಲಿ ಸೂಕ್ತ ಬಂದೋಬಸ್ತ್ ಮಾಡಬೇಕು. 110 ಟನ್ ತೂಗುವ ಸ್ವಾಮಿಯ ಗೌತಮ ರಥದ ಚಕ್ರಗಳ ಬಳಿ ಭಕ್ತರು ಸುಳಿಯದಂತೆ ಪೊಲೀಸರು ನೋಡಿಕೊಳ್ಳಬೇಕು ಎಂದ ಶಾಸಕರು ಶಿಥಿಲಗೊಂಡ ರಥಗಳ ಚಕ್ರ ಬದಲಾಯಿಸಲು ಸೂಚಿಸಲಾಗಿತ್ತು. ಈ ಬಗ್ಗೆ ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ನೀಡುವಂತೆ ತಿಳಿಸಿದರು.



ಶ್ರೀಕಂಠೇಶ್ವರ ದಾಸೋಹ ಭವನದಲ್ಲಿ ಶಾಸಕ ದರ್ಶನ್ ಅಧ್ಯಕ್ಷತೆಯಲ್ಲಿ ದೊಡ್ಡ ಜಾತ್ರೆ ಸಿದ್ಧತೆ ಪರಿಶೀಲನಾ ಸಭೆ ನಡೆಯಿತು.

> “ಜಾತ್ರೆ ದಿನ ಸ್ವಯಂ ಸೇವಾ ಸಂಸ್ಥೆಗಳು ಹಂಚುವ ಪ್ರಸಾದದ ಆಹಾರ ಸುರಕ್ಷತೆ ನಿಯಮ ಪಾಲಿಸಿರುವ ಬಗ್ಗೆ ಪರಿಶೀಲಿಸಬೇಕು. ಜಾತ್ರೆ ದಿನ ಸರ್ಕಾರಿ ಕಚೇರಿಗಳು, ರಥ ಬೀದಿಯ ಕಟ್ಟಡಗಳಿಗೆ ವಿದ್ಯುತ್ ಅಲಂಕಾರ ಮಾಡಬೇಕು. ರಥ ಬದಿ ಹಾಗೂ ದೇವಾಲಯದ ಬಳಿ ಆರೋಗ್ಯ ಇಲಾಖೆ ಭಕ್ತರ ಆರೋಗ್ಯದ ಹಿತದೃಷ್ಟಿಯಿಂದ ತಾತ್ಕಾಲಿಕ ಚಿಕಿತ್ಸಾಲಯ ತೆರೆಯಬೇಕು. ತಾಪಂ, ನಗರಸಭೆ, ದೇವಾಲಯದ ಆಡಳಿತ, ತಾಲೂಕು ಆಡಳಿತಗಳ ನಡುವೆ ಸಮನ್ವಯತೆ ಸಾಧಿಸಿ ಜಾತ್ರೆಗೆ ಬರುವ ಭಕ್ತರಿಗೆ ಅನುಕೂಲ ಕಲ್ಪಿಸಬೇಕು. ದೇವಾಲಯದ ಆವರಣದ ಶ್ರೀಕಂಠೇಶ್ವರ ಕಲಾ ಮಂದಿರ, ಕೈಸಾಲೆಗಳಲ್ಲಿ ರಾತ್ರಿ ತಂಗುವ ಭಕ್ತರಿಗೆ ವ್ಯವಸ್ಥೆ ಮಾಡಬೇಕು. ಜೇಬು, ಸರಗಳ್ಳರ ಬಗ್ಗೆ ಪೊಲೀಸ್ ಇಲಾಖೆ ಧ್ವನಿವರ್ಧಕಗಳ ಮೂಲಕ ಮಾಹಿತಿ ನೀಡಬೇಕು.
> – ಶಿವರಾಜ್, ಅಪರ ಜಿಲ್ಲಾಧಿಕಾರಿ.

ಲೋಕೋಪಯೋಗಿ ಇಲಾಖೆ ಎಇಇ ಬಸವರಾಜ್ ಮಾತನಾಡಿ, ಗಣಪತಿ ರಥದ ಚಕ್ರಗಳು ಶಿಥಿಲವಾಗಿತ್ತು. ಚಕ್ರಗಳನ್ನು ಬದಲಿಸಿ ಹೊಸ ಚಕ್ರಗಳನ್ನು ಅಳವಡಿಸಲಾಗಿದೆ. ಅಲ್ಲದೇ ಅಮ್ಮನವರ ರಥದ ಮುಂಭಾಗದ 2 ಚಕ್ರಗಳನ್ನು ಬದಲಿಸಲಾಗಿದೆ ಜಾತ್ರೆಯ ದಿನ ರಥ ಬೀದಿಯಲ್ಲಿ ಮರಳು ಚೆಲ್ಲಿಸಿ ರಥದ ಚಕ್ರಗಳು ಸುಗಮವಾಗಿ ಸಾಗಲು ವ್ಯವಸ್ಥೆ ಮಾಡಲಾಗುವುದು. ಭಕ್ತರು ರಥ ಚಲಿಸುವಾಗ ಅಡ್ಡಿಯಾಗದಂತೆ ಎಚ್ಚರಿಕೆ ವಹಿಸಲಾಗುವುದು ಎಂದರು.

ಡಿವೈಎಸ್‌ಪಿ ರಘು ಮಾತನಾಡಿ, ರಥಗಳು ಚಲಿಸುವ ಹಾಗೂ ನಿಲ್ಲುವ ಬಗ್ಗೆ ಹಸಿರು ಹಾಗೂ ಕೆಂಪು ಬಾವುಟಗಳನ್ನು ತೋರಿಸಿ ಸೂಚನೆ ನೀಡುವ ವ್ಯವಸ್ಥೆ ಮಾಡಲಾಗಿದೆ. ಐಪಿಎಲ್ ನಡೆಯುತ್ತಿರುವುರಿಂದ ಫ್ರಾಂಚೈಸಿಗಳು ತಮ್ಮ ತಂಡಗಳ ಪರ ಯಾವುದೇ ಬಾವುಟ ಪ್ರದರ್ಶಿಸಲು ಅವಕಾಶವಿಲ್ಲ. ಅಭಿಮಾನಿಗಳು ಚಿತ್ರನಟರ ಫ್ಲೆಕ್ಸ್ ಪ್ರದರ್ಶಿಸುವುದನ್ನು ನಿಷೇಧಿಸಲಾಗಿದೆ. ಜಾತ್ರೆಗೆ ಶುಭ ಕೋರುವ ಫ್ಲೆಕ್ಸ್‌ಗಳನ್ನು ಹಾಕುವಂತಿಲ್ಲ ಎಂದರು.

ಆಹಾರ ಸುರಕ್ಷತಾ ಅಧಿಕಾರಿ ಸಂದೀಪ್ ಮಾತನಾಡಿ, ಭಕ್ತರ ಆರೋಗ್ಯದ ದೃಷ್ಟಿಯಿಂದ ದೇವಾಲಯದ ಪ್ರಸಾದ ತಯಾರಿಸುವ ಉಗ್ರಾಣ, ದಾಸೋಹ ಭವನ ಹಾಗೂ ಲಾಡು ತಯಾರಿಸುವ ಸ್ಥಳಗಳನ್ನು ಪರಿಶೀಲಿಸಲಾಗಿದೆ. ತಯಾರಿಸಲಾದ ಆಹಾರದ ಸ್ಯಾಂಪಲ್‌ಗಳನ್ನು ಮೈಸೂರಿನ ವಿಭಾಗೀಯ ಆಹಾರ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಆಹಾರ ತಯಾರಿಸುವ ಬಾಣಸಿಗರಿಗೆ ಆಹಾರ ರಕ್ಷಣೆಯ ತರಬೇತಿ ನೀಡಲಾಗಿದೆ ಎಂದು ಹೇಳಿದರು.

ಸಭೆಯಲ್ಲಿ ತಹಸೀಲ್ದಾರ್ ಶಿವಕುಮಾರ್ ಕಾಸ್ನೂರ್, ತಾಪಂ ಇಓ ಜೆರಾಲ್ಡ್ ರಾಜೇಶ್, ಎಎಸ್‌ಪಿ ಮಲ್ಲಿಕ್, ಟಿಹೆಚ್‌ಓ ಈಶ್ವರ್, ದೇವಾಲಯದ ಇಓ ಜಗದೀಶ್ ಕುಮಾರ್, ಮಾಜಿ ಶಾಸಕ ಕೇಶವಮೂರ್ತಿ, ನಗರಸಭೆ ಅಧ್ಯಕ್ಷ ಶ್ರೀಕಂಠಸ್ವಾಮಿ, ನಗರಸಭಾ ಆಯುಕ್ತ ವಿಜಯ್, ದೇವಾಲಯದ ಆಗಮಿಕ ನಾಗಚಂದ್ರ ದೀಕ್ಷಿತ್ ಉಪಸ್ಥಿತರಿದ್ದರು.

ಶ್ರೀಚಿಕ್ಕದೇವಮ್ಮನವರ ದೇವಾಲಯ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ



ದೇವಾಲಯ ನಿರ್ಮಾಣ ಕಾಮಗಾರಿಗೆ ಶಾಸಕ ಅನಿಲ್ ಚಾಲನೆ ನೀಡಿದರು.

ಸರಗೂರು, ಮಾ.27– ತಾಲೂಕಿನ ಗ್ರಾಮಗಳ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುವುದು ಎಂದು ಶಾಸಕ ಅನಿಲ್ ತಿಳಿಸಿದರು.

ತಾಲೂಕಿನ ಗೊಂತಗಾಲಹುಂಡಿ ಗ್ರಾಮದಲ್ಲಿ ಶ್ರೀಚಿಕ್ಕದೇವಮ್ಮನವರ ದೇವಾಲಯ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಗ್ರಾಮದ ಉಪ್ಪಾರ ಸಮಾಜದ ಸಮುದಾಯ ಭವನ ನಿರ್ಮಾಣಕ್ಕೆ 25 ಲಕ್ಷ ಹಾಗೂ ಸಿಸಿ ರಸ್ತೆ ಕಾಮಗಾರಿಗೆ 20 ಲಕ್ಷ ನೀಡಲಾಗಿದೆ. 12 ಲಕ್ಷ ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ ದೇವಾಲಯಕ್ಕೆ 6 ಲಕ್ಷ ರೂ. ಅನುದಾನ ನೀಡಿ ದೇವಾಲಯ ನಿರ್ಮಾಣಕ್ಕೆ ಚಾಲನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಉಳಿದ ಅನುದಾನ ನೀಡಿ ಕಾಮಗಾರಿ ಪೂರ್ಣಗೊಳಿಸಿ ದೇವಾಲಯ ಉದ್ಘಾಟಿಸಲಾಗುವುದು ಎಂದರು.

ಜಿಪಂ ಮಾಜಿ ಸದಸ್ಯ ರವಿ ಮಾತನಾಡಿ, ಗ್ರಾಮಗಳ ಅಭಿವೃದ್ಧಿಗೆ ಶಾಸಕರು ಶ್ರಮಿಸುತ್ತಿದ್ದಾರೆ. ಅಭಿವೃದ್ಧಿಯಾಗಬೇಕಾದ ಗ್ರಾಮಗಳ ಪಟ್ಟಿ ಮಾಡಿ ಮೂಲ ಸೌಕರ್ಯ ಕಲ್ಪಿಸಲು ಮುಂದಾಗಬೇಕು ಎಂದರು.

ಈ ವೇಳೆ ಜಿಪಂ ಮಾಜಿ ಸದಸ್ಯೆ ಭಾಗ್ಯ ಲಕ್ಷ್ಮಿ, ಯೂತ್ ಕಾಂಗ್ರೆಸ್ ಅಧ್ಯಕ್ಷ ಶಿವರಾಜ್, ಮಹಿಳಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷೆ ಸೌಮ್ಯ, ಗುತ್ತಿಗೆದಾರ ಚಿಕ್ಕಣ್ಣ, ಅಂಕನಾಯಕ, ವಕ್ತಾರ ಅಶೋಕ್, ಬಸವರಾಜ್, ಅಜರ್, ನವೀನ, ಉಮೇಶ್ ಇತರರಿದ್ದರು.

ಭಾರತ ಬಹು ಭಾಷೆ, ಸಂಸ್ಕೃತಿ, ಧರ್ಮಗಳ ದೇಶ

ಜಾನಪದ ಉತ್ಸವದಲ್ಲಿ ಕಸಾಪ ಅಧ್ಯಕ್ಷ ಮಹದೇವ

ಹುಣಸೂರು, ಮಾ.27– ಭಾರತ ಬಹು ಭಾಷೆ, ಸಂಸ್ಕೃತಿ ಹಾಗೂ ಧರ್ಮಗಳ ದೇಶವಾಗಿದೆ ಎಂದು ತಾಲೂಕು ಕಸಾಪ ಅಧ್ಯಕ್ಷ ಮಹದೇವ ತಿಳಿಸಿದರು.

ಇಲ್ಲಿನ ಸರ್ಕಾರಿ ಮಹಿಳಾ ಕಾಲೇಜಿನಲ್ಲಿ ಸಾಂಸ್ಕೃತಿಕ ವೇದಿಕೆ ಮತ್ತು ಕನ್ನಡ ವಿಭಾಗದಿಂದ ನಡೆದ ಜಾನಪದ ಉತ್ಸವ –2025 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಭಾರತ ಕಲೆ ಹಾಗೂ ಜಾನಪದ ಕ್ಷೇತ್ರದಲ್ಲಿ ತನ್ನದೇ ಆದ ಶ್ರೀಮಂತಿಕೆ ಹೊಂದಿದೆ. ಕಾಶ್ಮೀರದಿಂದ ಕನ್ಯಾಕುಮಾರಿವರೆಗೆ ವೈಶಿಷ್ಟ್ಯ ಪೂರ್ಣವಾದ ಜಾನಪದ ಕಲೆಯನ್ನು ಭಾರತ ದೇಶ ಹೊಂದಿದೆ ಎಂದರು.

ಇಂದಿಗೂ ಹಳ್ಳಿಗಳಲ್ಲಿ ದುಡಿಯುವ ಹೆಂಗಸರು, ಜಾನಪದ ವೃತ್ತಿ ಗಾಯಕರು, ಜಾನಪದ ಕಲೆಯನ್ನು ಉಳಿಸಿ ಬೆಳೆಸುತ್ತಿದ್ದಾರೆ. ಆಧುನಿಕತೆ ಪ್ರಭಾವದಿಂದ ಅಳಿವಿನಂಚಿಗೆ ಹೋಗುತ್ತಿರುವ ಜಾನಪದವನ್ನು ಉಳಿಸಿ ಬೆಳೆಸುವ ಜವಾಬ್ದಾರಿ ಇಂದಿನ ಯುವ ಪೀಳಿಗೆ ಹೊಣೆಯಾಗಿದೆ ಎಂದರು.

ಹಿಂದೆ ಮದುವೆಗಳು ಜಾನಪದ ಶೈಲಿಯಲ್ಲಿ ನಡೆಯುತ್ತಿತ್ತು. ಇಂದು ಕಲ್ಯಾಣ ಮಂಟಪದಲ್ಲಿ ಆಧುನಿಕ ಶೈಲಿಯೊಂದಿಗೆ ನಡೆಯುತ್ತಿದೆ. ಹಳ್ಳಿಯ ಹಬ್ಬಗಳಲ್ಲಿ ಇಂದಿಗೂ ಕಂಸಾಳೆ, ವಾದ್ಯ, ಸತ್ತಿಗೆ, ಡೋಲು, ತಂಬೂರಿ ಹಿಡಿದು ಹಾಡುವವರು ಸಿಗುತ್ತಾರೆ. ಜಾನಪದ ಉತ್ಸವ ನಮ್ಮೆಲ್ಲರ ಜೀವನಾಡಿ. ನಾಡಿನ ಸಂಸ್ಕೃತಿ ವೊಳಕೆ ಹೊಡೆದಿದ್ದು ಜಾನಪದದಿಂದಲೇ ಎಂದರು.



ಸರ್ಕಾರಿ ಮಹಿಳಾ ಕಾಲೇಜಿನಲ್ಲಿ ಜಾನಪದ ಉತ್ಸವ ಕಾರ್ಯಕ್ರಮ ನಡೆಯಿತು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಂಶುಪಾಲ ಎಸ್.ಮಂಜು, ಇಂದಿನ ಕಾಲೇಜಿನ ಜಾನಪದ ಉತ್ಸವ ನೋಡುತ್ತಿದ್ದರೆ ಇದೊಂದು ಕಾಲೇಜಿನ ಹಬ್ಬವಾಗಿದೆ ಎಂದರು.

ಇದಕ್ಕೂ ಮುನ್ನಾ ವಿದ್ಯಾರ್ಥಿನಿಯರು ಕಾಲೇಜು ಆವರಣ ಮತ್ತು ಒಳಾಂಗಣದಲ್ಲಿ ರಂಗೋಲಿ ಬಿಟ್ಟು ಅದರ ಮೇಲೆ ಮಡಿಕೆಗಳನ್ನು ಜೋಡಿಸಿ ಅದರ ಮೇಲೆ ದೀಪ ಇಟ್ಟು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು. ಅಲ್ಲದೇ ಚಿಕ್ಕ ಮಡಿಕೆಗಳಲ್ಲಿ ದವಸ ಧಾನ್ಯಗಳನ್ನು ತುಂಬಿ ಬೀಸುವ ಕಲ್ಲು, ಜನಪದ ಆಟದ ಸಲಕರಣೆಗಳನ್ನು ತಂದು ವಿಶೇಷವಾಗಿ ಜಾನಪದ ಉತ್ಸವ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ವಿಭಾಗದ ಮುಖ್ಯಸ್ಥ ರಾಜಶೇಖರನ್, ಬಸವಲಿಂಗಸ್ವಾಮಿ, ಡಾ.ಹೆಚ್.ಆರ್.ವಿಶ್ವನಾಥ್ ಕುಮಾರ್, ಲಕ್ಷ್ಮಯ್ಯ, ರಜಿಯಾ ಸುಲ್ತಾನ, ಡಾ.ಕರುಣಾಕರ್, ಸಾಂಸ್ಕೃತಿಕ ಸಮಿತಿ ಸಂಚಾಲಕ ಹನುಮಂತಪ್ಪ, ಕಾವ್ಯ, ಡಾ.ಕಲಾಶ್ರೀ, ವಿದ್ಯಾರ್ಥಿ ಪ್ರತಿನಿಧಿ ಪೂಜಾ, ಡಾ.ನಂಜುಂಡಸ್ವಾಮಿ ಇತರರಿದ್ದರು.

ಬನ್ನೂರು ಪುರಸಭೆಗೆ 89.99 ಲಕ್ಷ ಉಳಿತಾಯ ಬಜೆಟ್

ತಿ.ನರಸೀಪುರ, ಮಾ.27– ತಾಲೂಕಿನ ಬನ್ನೂರು ಅಭಿವೃದ್ಧಿಗಾಗಿ ಪುರಸಭೆಯಿಂದ ಸಿದ್ಧಪಡಿಸಿರುವ 2025–26ನೇ ಸಾಲಿನ ಆಯವ್ಯಯ ಅಂದಾಜು ಪಟ್ಟಿಯ 89,99,198 ರೂ.ಗಳ ಉಳಿತಾಯ ಬಜೆಟ್ ಅನ್ನು ಅಧ್ಯಕ್ಷ ಕೃಷ್ಣೇಗೌಡ ಮಂಡಿಸಿದರು.

ಬನ್ನೂರು ಪುರಸಭೆ ಸಿಡಿಎಸ್ ಭವನದಲ್ಲಿ ನಡೆದ ಆಯ ವ್ಯಯ ಮಂಡನೆ ಸಭೆಯಲ್ಲಿ ಅಂದಾಜು ಪಟ್ಟಿ ವಿವರ ಮಂಡಿಸಿದ ಅಧ್ಯಕ್ಷರು ಆರಂಭ ಶಿಲ್ಕು 4,87,77,198 ರೂ.ಗಳಿಗೆ ರಾಜಸ್ವ, ಬಂಡವಾಳ ಅಸಾಧಾರಣ ಹಣ 33,16,84,213 ಸೇರಿಸಿ, ಒಟ್ಟು 38,04,61,411 ರೂ.ಗಳಲ್ಲಿ ಪಾವತಿಗಳು –ರಾಜಸ್ವ, ಬಂಡವಾಳ ಅಸಾಧಾರಣ ಖರ್ಚು 37,14,62,213 ರೂ.ಗಳನ್ನು ಕಳೆದಲ್ಲಿ ಅಂತಿಮ ಶಿಲ್ಕು 89,99,198 ರೂ. ಉಳಿತಾಯವಾಗಿದೆ ಎಂದರು.

ಪ್ರಮುಖ ಆದಾಯಗಳಲ್ಲಿ ಆಸ್ತಿ ತೆರಿಗೆ ಮತ್ತು ದಂಡ 113 ಲಕ್ಷ, ಮಳಿಗೆಗಳ ಬಾಡಿಗೆ ಮತ್ತು ಶೌಚಾಲಯ ಹರಾಜು ಬಾಡಿಗೆ 7ಲಕ್ಷ, ಕಟ್ಟಡ ಪರವಾನಗಿ ಶುಲ್ಕಗಳು 17.50 ಲಕ್ಷ, ಅಭಿವೃದ್ಧಿ, ಸುಧಾರಣೆ ಶುಲ್ಕಗಳು ಹಾಗೂ ದಂಡ 6 ಲಕ್ಷ, ಉದ್ದಿಮೆ ಪರವಾನಿಗೆ ಶುಲ್ಕಗಳು ಮತ್ತು ಇತರೆ ಪರವಾನಿಗೆ ಶುಲ್ಕಗಳು 5 ಲಕ್ಷ, ನೀರಿನ ಶುಲ್ಕಗಳು, ನೀರು ಸರಬರಾಜು ಸಂಪರ್ಕ ಶುಲ್ಕಗಳು, ಒಳಚರಂಡಿ ಸಂಪರ್ಕ ಶುಲ್ಕಗಳು 41 ಲಕ್ಷ, ಘನತ್ಯಾಜ್ಯ ನಿರ್ವಹಣಾ ಶುಲ್ಕಗಳು 22 ಲಕ್ಷ, ಖಾತೆ ಬದಲಾಬಣೆ ಶುಲ್ಕ/ಖಾತ ಪತ್ರಿಗಳ ಶುಲ್ಕಗಳು 11 ಲಕ್ಷ, ನೆಲಬಾಡಿಗೆ ಶುದ್ಧ ಕುಡಿಯುವ ನೀರಿನ ಘಟಕ, ಮಾರುಕಟ್ಟೆ ಹರಾಜು 9 ಲಕ್ಷ, ಬ್ಯಾಂಕ್ ಖಾತೆಗಳಿಂದ ಬಂದ ಬಡ್ಡಿ 15 ಲಕ್ಷ, ಇತರೆ ಶುಲ್ಕಗಳು 31.15 ಲಕ್ಷ ರೂ. ನಿರೀಕ್ಷಿಸಲಾಗಿದೆ ಎಂದರು.



ಬನ್ನೂರು ಪುರಸಭೆ ಸಿಡಿಎಸ್ ಭವನದಲ್ಲಿ ಅಧ್ಯಕ್ಷ ಕೃಷ್ಣೇಗೌಡ ಆಯವ್ಯಯ ಮಂಡಿಸಿದರು.

> **2025–26ನೇ ಸಾಲಿಗೆ ಎಲ್ಲಾ ಮೂಲಗಳಿಂದ ಗಳಿಸಬಹುದಾದ ಆದಾಯದಲ್ಲಿ ವೆಚ್ಚ ಮಾಡಬಹುದಾದ ಮೊತ್ತಗಳನ್ನು ಕಳೆದು 89 ಲಕ್ಷದ 99 ಸಾವಿರದ 198 ರೂ.ಗಳನ್ನು ಉಳಿತಾಯ ಮಾಡಲಾಗಿದೆ.**
> –ಆರ್.ಹೇಮಂತರಾಜ್, ಮುಖ್ಯಾಧಿಕಾರಿ.

ಕೇಂದ್ರ ಮತ್ತು ರಾಜ್ಯ ಸರ್ಕಾರದ ಸ್ವೀಕೃತಿ ಅನುದಾನಗಳಲ್ಲಿ ಎಸ್‌ಎಫ್‌ಸಿ ವೇತನ ಅನುದಾನ 5 ಕೋಟಿ, ಎಸ್‌ಎಫ್‌ಸಿ ವಿದ್ಯುತ್ ಅನುದಾನ ನೀರು ಸರಬರಾಜು 1.74 ಕೋಟಿ, ಎಸ್‌ಎಫ್‌ಸಿ ವಿದ್ಯುತ್ ಅನುದಾನ ಬೀದಿ ದೀಪ 76 ಲಕ್ಷ, ಎಸ್‌ಎಫ್‌ಸಿ ಮುಕ್ತನಿಧಿ ಅನುದಾನ 19 ಲಕ್ಷ, ನಲ್ಮ್ ಅನುದಾನ 15 ಲಕ್ಷ, ಸ್ವಚ್ಛ ಭಾರತ್ ಮಿಷನ್ ಅನುದಾನ 65 ಲಕ್ಷ, 15ನೇ ಹಣಕಾಸು ಅನುದಾನ 1.22 ಕೋಟಿ, ಕುಡಿಯುವ ನೀರು ಅನುದಾನ 10 ಲಕ್ಷ, ಶಾಸಕರ ಪ್ರದೇಶಾಭಿವೃದ್ಧಿ ಅನುದಾನ 5 ಲಕ್ಷ, ಪೌರಕಾರ್ಮಿಕ ಗೃಹಭಾಗ್ಯ ಅನುದಾನ 15 ಲಕ್ಷ ಹಾಗೂ ಎಸ್‌ಎಫ್‌ಸಿ ವಿಶೇಷ ಅನುದಾನ 6.50 ಕೋಟಿ ಬಂದಿದೆ ಎಂದು ಮಾಹಿತಿ ನೀಡಿದರು.

ಈ ವೇಳೆ ಬನ್ನೂರು ಪುರಸಭೆಗೆ ಸರ್ಕಾರದಿಂದ ನಾಮ ನಿರ್ದೇಶನಗೊಂಡ ನೂತನ ಸದಸ್ಯರಾದ ಆರ್.ಶಿವಣ್ಣ ಬಿ.ಎಂ.ಮಹೇಶ್, ಎನ್.ನಾಗರಾಜ ಚಾರ್ ಹಾಗೂ ಅಸದ್ ಅಲಿ ಅವರನ್ನು ಸನ್ಮಾನಿಸಲಾಯಿತು.

ಸಭೆಯಲ್ಲಿ ಉಪಾಧ್ಯಕ್ಷೆ ನಾಗರತ್ನ, ಸದಸ್ಯರಾದ ಮೂರ್ತಿ, ಶಿವಣ್ಣ, ಚೆಲುವರಾಜು, ಸಿ.ಎಸ್.ವಿಜಯ ಕುಮಾರ್, ಸಿ.ಸಿ.ಸುರೇಶ, ಎಸ್.ಭಾಗ್ಯ, ಎಂ.ಕೆ.ಮಹೇಶ್, ಬಿ.ಕೆ.ಆನಂದ್, ಎಂ.ಆರ್. ಸೌಮ್ಯರಾಣಿ, ನಂಜುಂಡಸ್ವಾಮಿ, ಬಿ.ಆರ್.ಶ್ರೀನಿವಾಸ್, ಅನಂತಮೂರ್ತಿ, ಶೋಭಾ, ದಿವ್ಯ ಪೈಲ್ವಾನ್ ಚಂದ್ರು ಪೀರ್ದೋಸ್, ಬಿ.ಎಸ್.ಲೋಕಂಬಿಕ ಶಿವಮೂರ್ತಿ, ಪುಷ್ಪವತಿ, ಪುರಸಭಾ ಸಿಬ್ಬಂದಿಗಳಾದ ಹರಿಪ್ರಸಾದ್, ನಸೀಮ, ಸೋಮಪ್ರಭ ಪುಷ್ಪಲತಾ, ಬಸವರಾಜು, ಲತಾ, ಪುಟ್ಟರಾಜು, ವಿನುತಾ, ಕುಮಾರ್ ಇತರರಿದ್ದರು.

ನೇಮಕ



ತಿ.ನರಸೀಪುರ, ಮಾ.27– ಬನ್ನೂರು ಪಟ್ಟಣದ ಕಾಂಗ್ರೆಸ್ ಹಿಂದುಳಿದ ವರ್ಗಗಳ ಅಧ್ಯಕ್ಷ ನಾಗರಾಜ್ ಆಚಾರ್ ಅವರನ್ನು ಬನ್ನೂರು ಪುರಸಭೆ ನಾಮ ನಿರ್ದೇಶನ ಸದಸ್ಯನಾಗಿ ನೇಮಕ ಮಾಡಲಾಗಿದೆ ಎಂದು ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಟಿ.ಮಂಜುನಾಥ್ ತಿಳಿಸಿದ್ದಾರೆ.

ಕಾರ್ಯಾಧ್ಯಕ್ಷರಾಗಿ ನೇಮಕ



ಪಿರಿಯಾಪಟ್ಟಣ, ಮಾ.27– ತಾಲೂಕು ಜೆಡಿಎಸ್ ಯುವ ಘಟಕದ ಕಾರ್ಯಾಧ್ಯಕ್ಷರಾಗಿ ಪಿ.ಎನ್. ವಿನೋದ್ ನೇಮಕಗೊಂಡಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಸ್ವಸಹಾಯ ಸಂಘಗಳು ಹಳ್ಳಿ ಜನರಿಗೆ ಅಕ್ಷಯ ಪಾತ್ರೆ

ಕಂಪಲಾಪುರ, ಮಾ.27– ಗ್ರಾಮೀಣ ಜನರ ಬದುಕು ಬವಣೆ ಹಸನಾಗಿಸಲು ಧರ್ಮಾಧಿಕಾರಿ ಡಾ.ಡಿ.ವೀರೇಂದ್ರಹೆಗ್ಗಡೆಯವರು ಹುಟ್ಟು ಹಾಕಿದ ಸ್ವಸಹಾಯ ಸಂಘಗಳು ಹಳ್ಳಿಗಾಡಿನ ಜನರ ಪಾಲಿಗೆ ಅಕ್ಷಯ ಪಾತ್ರೆಯಾಗಿದೆ ಎಂದು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕೊಡಗು ಜಿಲ್ಲೆ ಬಿ.ಸಿ ಟ್ರಸ್ಟ್ ನಿರ್ದೇಶಕಿ ಲೀಲಾವತಿ ತಿಳಿಸಿದರು.

ಇಲ್ಲಿನ ಶ್ರೀಕರಕಂಠೇಶ್ವರ ದೇವಾಲಯದ ಆವರಣದಲ್ಲಿ ತಾಲೂಕು ಜ್ಞಾನ ವಿಕಾಸ ಕೇಂದ್ರಗಳ ಸಹಯೋಗದಲ್ಲಿ ಆಯೋಜಿಸಿದ್ದ ಗ್ರಾಮ ಸುಭಿಕ್ಷಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮನುಷ್ಯನ ನೋವುಗಳನ್ನು ಮರೆಸಲು ಇಂತಹ ಧಾರ್ಮಿಕ ಸ್ಥಳಗಳಲ್ಲಿ ನಡೆಯುವ ಕಾರ್ಯಕ್ರಮ ಪೂರಕ ಎಂದ ಅವರು ವೀರೇಂದ್ರ ಹೆಗ್ಗಡೆಯವರು 1982ರಲ್ಲಿ ರೈತರನ್ನು ಸಂಘಟಿಸುವ ಉದ್ದೇಶದಿಂದ ಪ್ರಥಮ ಬಾರಿಗೆ ಪುರುಷರಿಗೆ ಸಾಲ ಸೌಲಭ್ಯ ನೀಡಲಾರಂಭಿಸಿದರು. ದಶಕಗಳ ನಂತರ ಮಹಿಳಾ ಸ್ವಸಹಾಯ ಸಂಘಗಳನ್ನು ಹುಟ್ಟು ಹಾಕಲಾಯಿತು ಎಂದರು.



ಕಾರ್ಯಕ್ರಮದಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕೊಡಗು ಜಿಲ್ಲೆ ಬಿಸಿ ಟ್ರಸ್ಟ್ ನಿರ್ದೇಶಕಿ ಲೀಲಾವತಿ ಮಾತನಾಡಿದರು.

ಧರ್ಮಸ್ಥಳ ಸಂಸ್ಥೆ ಬ್ಯಾಂಕ್ ಮತ್ತು ಸಂಘಗಳಿಗೆ ಸೇತುವೆಯಾಗಿ ಕೆಲಸ ಮಾಡುತ್ತಿದೆ. ಬಜೆಟ್‌ನಲ್ಲಿ ಘೋಷಣೆಯಾದಂತೆ ಯಾವುದೇ ಸಂಘಗಳಿಗೆ ಸಾಲ ನೀಡಬೇಕಾದರೆ ಆ ಸದಸ್ಯರ ಸಿಬಿಲ್ ರಿಪೋರ್ಟ್ ಪಡೆದು ನೀಡಬೇಕಾಗುತ್ತದೆ. ಗ್ರಾಮೀಣ ಭಾಗದಲ್ಲಿ ಸ್ವಸಹಾಯ ಸಂಘದ ಮಹಿಳೆಯರು ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಹಾಲಿನ ಡೇರಿಗಳ ಸ್ಥಾಪನೆ, ಹೈನುಗಾರಿಕೆ, ದೇವಸ್ಥಾನಗಳ ಅಭಿವೃದ್ಧಿ, ಕೆರೆಗಳ ಹೂಳೆತ್ತುವುದು, ಶಾಲಾ ಕಟ್ಟಡ ನಿರ್ಮಾಣ, ವಿದ್ಯಾರ್ಥಿ ವೇತನ, ಪಿಂಚಣಿ ಹೀಗೆ ಹಲವು ಜನೋಪಯೋಗಿ ಕೆಲಸಗಳನ್ನು ಧರ್ಮಸ್ಥಳ ಸಂಸ್ಥೆ ಮಾಡುತ್ತಿದೆ. ಯಾವುದೇ ಬಡ್ಡಿ ಆಸೆಗೆ ನಮ್ಮ ಸಂಸ್ಥೆ ಇಲ್ಲ ಎಂದರು.

ಸಾಹಿತಿ ಕಂ.ರಾ.ಗೋಪಾಲ್, ಪುರಸಭಾ ಸದಸ್ಯೆ ಮಂಜುಳಾನಿವೃತ್ತ ಮುಖ್ಯ ಶಿಕ್ಷಕ ಎಂ.ನಾಗಪ್ಪ, ಸಹಕಾರ ಸಂಘದ ಮಾಜಿ ಅಧ್ಯಕ್ಷ ಕಟ್ಟೆ ಜಯಣ್ಣ, ಪುರಸಭ ಮಾಜಿ ಸದಸ್ಯ ರಾಜು ಮಾತನಾಡಿದರು.

ಕಾರ್ಯಕ್ರಮಕ್ಕೂ ಮುನ್ನ ಕರಕಂಠೇಶ್ವರ ದೇವಸ್ಥಾನದಲ್ಲಿ ಪೂಜೆ ನೆರವೇರಿಸಲಾಯಿತು. ಈ ವೇಳೆ ಸಂಘದ ಮೇಲ್ವಿಚಾರಕಿ ರವಿಕಲಾಶೆಟ್ಟಿ, ದೇವಸ್ಥಾನ ಸಮಿತಿ ಸಿ.ಎಲ್.ರಾಜೇಗೌಡ, ಕೆ.ಪಿ.ಮಹ ದೇವ್, ಪತ್ರಕರ್ತ ಸದಾಶಿವ ಸೇರಿದಂತೆ ಜ್ಞಾನವಿಕಾಸ ಕೇಂದ್ರದ ತಾಲೂಕು ಪದಾಧಿಕಾರಿಗಳು, ಸೇವಾಪ್ರತಿನಿಧಿಗಳು, ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಹಾಜರಿದ್ದರು.

ವಿಜೃಂಭಣೆಯ ಶ್ರೀಕೆಂಡದ ಬಸವೇಶ್ವರ ರಥೋತ್ಸವ

ಮಲ್ಕುಂಡಿ, ಮಾ.27– ಗ್ರಾಮದಲ್ಲಿ ಶ್ರೀಕೆಂಡದ ಬಸವೇಶ್ವರಸ್ವಾಮಿ ರಥೋತ್ಸವ ಗುರುವಾರ ವಿಜೃಂಭಣೆಯಿಂದ ನಡೆಯಿತು.



ಶ್ರೀಕೆಂಡದ ಬಸವೇಶ್ವರಸ್ವಾಮಿ ರಥೋತ್ಸವ ನಡೆಯಿತು.

ಮುಂಜಾನೆಯಿಂದಲೇ ದೇವಾಲಯದಲ್ಲಿ ಪೂಜಾ ಕೈಂಕರ್ಯಗಳು ನಡೆದವು. ಬಳಿಕ ರಥಕ್ಕೆ ಪೂಜೆ ಸಲ್ಲಿಸಿ ಗ್ರಾಮದ ಹೊರವಲಯದಲ್ಲಿರುವ ಶ್ರೀಎತ್ತಿನಮ್ಮ ದೇವಸ್ಥಾನದವರೆಗೆ ರಥವನ್ನು ಎಳೆದೊಯ್ಯಲಾಯಿತು. ನಂತರ ಶ್ರೀಕೆಂಡದ ಬಸವೇಶ್ವರ ದೇವಸ್ಥಾನ ಮುಂಭಾಗ ನಡೆದ ಕೊಂಡೋತ್ಸವದಲ್ಲಿ ಭಕ್ತರು ಈಡುಗಾಯಿ ಒಡೆದು ಕೊಂಡ ಹಾಯುವ ಮೂಲಕ ಭಕ್ತಿ ಸಮರ್ಪಿಸಿದರು. ನಂತರ ಬಗೆ ಬಗೆಯ ಹೂಗಳು ಹಾಗೂ ಬಣ್ಣ ಬಣ್ಣದ ಬಟ್ಟೆಗಳಿಂದ ಅಲಂಕರಿಸಿದ ರಥದಲ್ಲಿ ಶ್ರೀಕೆಂಡದ ಬಸವೇಶ್ವರ ಸ್ವಾಮಿ ಉತ್ಸವಮೂರ್ತಿ ಪ್ರತಿಷ್ಠಾಪಿಸಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು. ಈ ವೇಳೆ ನಂದಿ ಕಂಬ ಕುಣಿತ, ಮಂಗಳವಾದ್ಯದೊಂದಿಗೆ ನೂರಾರು ಭಕ್ತರು ರಥ ಎಳೆದು ಧನ್ಯತಾಭಾವ ಮೆರೆದರು.

ವಚನ ಸಾಹಿತ್ಯದ ಮೂಲಕ ಪರಿವರ್ತನೆ ಬಯಸಿದ ಶರಣರು

ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ



ಸಮಾರಂಭವನ್ನು ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಸಿದ್ದಪ್ಪ ಉದ್ಘಾಟಿಸಿದರು.

ತಿ.ನರಸೀಪುರ, ಮಾ.27– ಬದುಕಿನ ಎಲ್ಲಾ ಆಯಾಮಗಳನ್ನು ಸ್ಪರ್ಶಿಸುವ ವಚನ ಸಾಹಿತ್ಯದ ಮೂಲಕ ಶರಣರು ಸಮಗ್ರ ಸಾಮಾಜಿಕ ಪರಿವರ್ತನೆ ಬಯಸಿದರು ಎಂದು ಶರಣ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಹೆಳವರಹುಂಡಿ ಸಿದ್ದಪ್ಪ ತಿಳಿಸಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್, ತಾಲೂಕು ಶರಣ ಸಾಹಿತ್ಯ ಪರಿಷತ್, ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಭೈರಾಪುರ ಸಹಯೋಗದೊಂದಿಗೆ ತಾಲೂಕು ಮಟ್ಟದ ದತ್ತಿ ಉಪನ್ಯಾಸ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು ಅರಿವಿನ ಬೆಳಕನ್ನು ಹಂಚಲು ಅರಿವಿನ ಹರಿಕಾರರಾಗಿ ಶರಣರು ಹಾಗೂ ದಾಸವರೇಣ್ಯರು ಪ್ರಯತ್ನಿಸಿದರು. ಜೀವನದ ಮೌಲ್ಯಗಳನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವ ಮೂಲಕ ಕಾಯಕಕ್ಕೆ ಹೆಚ್ಚು ಮಹತ್ವ ನೀಡಿದರು. ಸತ್ಯ, ಶಿವ, ಸುಂದರ ಸಮಾಜವನ್ನು ಅವರು ಬಯಸಿದರು. ಶರಣರ ವಚನಗಳಲ್ಲಿ ತಾರ್ಕಿಕ, ಸಾಮಾಜಿಕ, ಚಿಂತನೆ, ಮಮಕಾರ, ಕಳ ಕಳಿ, ಭಕ್ತಿ, ಮಾನವೀಯ ಮೌಲ್ಯಗಳನ್ನು ನಾವು ಕಾಣುತ್ತೇವೆ. 12ನೇ ಶತಮಾನದ ಶರಣರು ನುಡಿದಂತೆ ನಡೆದು ಆದರ್ಶ ಮೆರೆದರು. ಸಾಮಾಜಿಕ ಹಾಗೂ ಮಾನವೀಯ ಮೌಲ್ಯಗಳನ್ನು ಆಧಾರವಾಗಿಟ್ಟುಕೊಂಡು ರಚಿಸಿದ ವಚನಗಳು ಎಲ್ಲರಿಗೂ ದಾರಿದೀಪಗಳಾಗಿವೆ ಎಂದರು.

ಕನ್ನಡ ಸಾಹಿತ್ಯದಲ್ಲಿ 12ನೇ ಶತಮಾನದ ಶರಣರ ವಚನ ಸಾಹಿತ್ಯ ಕಾಲಘಟ್ಟದ ಸಮಾಜವು ಧಾರ್ಮಿಕ, ಸಾಂಸ್ಕೃತಿಕ, ಆರ್ಥಿಕ ಅನೇಕ ಅಸಮಾನತೆಗಳಿಂದ ಕೂಡಿದ ಸಮಾಜವಾಗಿತ್ತು. ಎಲ್ಲರಲ್ಲಿಯೂ ಸಮಾನತೆಯ ಬೀಜ ಬಿತ್ತಲು ಶರಣರು ವಚನಗಳ ಮೂಲಕ ಶ್ರಮಿಸಿದರು. ಜೀವಪರವಾದ ಸ್ಪಷ್ಟ ನಿಲುವಿನ ಸಮಕಾಲೀನ ಸಾಮಾಜಿಕ ಅನಿಷ್ಟಗಳಿಗೆ ತೀವ್ರವಾಗಿ ಸ್ಪಂದಿಸಿದ ಶರಣರು ಅವುಗಳ ಕುರಿತಾಗಿ ಚಿಂತನ ಮಂಥನ ನಡೆಸಿ ಅವುಗಳಿಗೆ ವಚನಗಳ ಮೂಲಕ ಉತ್ತರಿಸಿದರು ಎಂದರು.

ಪ್ರಾದೇಶಿಕ ಕಚೇರಿ ಜಂಟಿ ನಿರ್ದೇಶಕ ಬಿ.ಚಂದ್ರಶೇಖರ್ ಮಾತನಾಡಿ, ವಚನ ಸಾಹಿತ್ಯ ಲಿಂಗಾಯತ ಪರಂಪರೆ ಹುಟ್ಟುಹಾಕಿತು. ಸಮಾಜದ ಎಲ್ಲಾ ಜಾತಿಯವರು ವಚನವನ್ನು ಮುಖ್ಯ ಮಾಧ್ಯಮವನ್ನಾಗಿ ಮಾಡಿಕೊಂಡು ತಮ್ಮ ಅನುಭವಗಳನ್ನು ಹೇಳಿಕೊಳ್ಳ ತೊಡಗಿದ್ದರಿಂದ ವಚನ ಸಾಹಿತ್ಯ ಒಂದು ಚಳವಳಿಯೂ ಆಯಿತು. ಬಂಡಾಯ ಸಾಹಿತ್ಯಕ್ಕಿಂತ ಮೊದಲು ಕನ್ನಡ ನಾಡಿನಲ್ಲಿ ವಚನ ಒಂದು ಚಳವಳಿಯ ಮುಖವಾಣಿಯಾಗಿತ್ತು. ವಚನಗಳು ಅತ್ಯಂತ ಸರಳ ಹಾಗೂ ನೇರವಾಗಿವೆ. ಹಲವು ಕವಿಗಳು, ಜನಸಾಮಾನ್ಯರು ಸಾಹಿತ್ಯ ರಚಿಸಿದ್ದರೂ ಇಡೀ ಲಿಂಗಾಯತ ಸಾಹಿತ್ಯದಲ್ಲಿ ಮುಖ್ಯ ಮತ್ತು ಅಪರೂಪದ ಅಭಿವ್ಯಕ್ತಿಯೆಂದರೆ ವಚನ ಸಾಹಿತ್ಯ ಎಂದರು.

ವಾಟಾಳು ಮಠದ ಡಾ.ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಮಾನವೀಯ ಮೌಲ್ಯಗಳು ಎಂಬ ವಿಷಯದ ಬಗ್ಗೆ ಕೆ.ಆರ್.ನಗರ ಸರ್ಕಾರಿ ಪದವಿ ಕಾಲೇಜು ಕನ್ನಡ ಉಪನ್ಯಾಸಕ ಮತ್ತು ಗಾಯಕ ಪ್ರೊ.ಕೃಷ್ಣಮೂರ್ತಿ ಮಾತನಾಡಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ನಿಕಟಪೂರ್ವ ಅಧ್ಯಕ್ಷ ಎಂ.ಚಂದ್ರಶೇಖರ್, ತಾಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಸೋಮಶೇಖರಪ್ಪ, ಖಜಾಂಚಿ ಮೂರ್ತಿ, ಪ್ರಾಂಶುಪಾಲೆ ಡಾ.ಬಿ.ಪಿ.ಇಂದಿರಾ, ಕನ್ನಡ ಉಪನ್ಯಾಸಕ ಡಾ.ಡಿ.ಪುರುಷೋತ್ತಮ್, ಆಂಗ್ಲ ಉಪನ್ಯಾಸಕಿ ಡಾ.ಎಂ.ನೇತ್ರಾವತಿ, ಡಾ.ಜಯಪ್ರದ, ತಾಲೂಕು ಶರಣ ಸಾಹಿತ್ಯ ಪರಿಷತ್ ಉಪಾಧ್ಯಕ್ಷ ಮಹದೇವಸ್ವಾಮಿ, ರಾಜಶೇಖರ್, ಆಡಿಟರ್ ಮಂಜುನಾಥ್, ನಿಂಗಪ್ಪ, ಪಿ. ಚಿನ್ನಬುದ್ದಿ, ಪ್ರಭುಸ್ವಾಮಿ, ಪುಟ್ಟಪ್ಪ, ಗುರುಪಾದಪ್ಪ ಮತ್ತಿತರರು ಇದ್ದರು.

ಇಂದಿಗೂ ಜಾತಿ ವ್ಯವಸ್ಥೆ ಗಟ್ಟಿಯಾಗಿ ಉಳಿದಿದೆ

ಪ್ರಾಧ್ಯಾಪಕ ಜೆ.ಸೋಮಶೇಖರ್ ಬೇಸರ



ಕಾರ್ಯಕ್ರಮವನ್ನು ರಾಜ್ಯ ಪ್ರಧಾನ ಸಂಚಾಲಕ ಮಾವಳ್ಳಿ ಶಂಕರ್ ಉದ್ಘಾಟಿಸಿದರು.


ಹೆಚ್.ಡಿ.ಕೋಟೆ, ಮಾ.27– ಡಾ.ಬಿ.ಆರ್.ಅಂಬೇಡ್ಕರ್ ಜಾತಿ ವಿನಾಶದ ಬಗ್ಗೆ ಮಾತನಾಡಿದರು. ಆದರೆ ದೇಶಕ್ಕೆ ಸ್ವಾತಂತ್ರ್ಯ ಬಂದು 78 ವರ್ಷ ಕಳೆದು ಆಧುನಿಕ ತಂತ್ರಜ್ಞಾನ ಬೆಳೆದರೂ ಸಮಾಜದಲ್ಲಿ ಇಂದಿಗೂ ಜಾತಿ ವ್ಯವಸ್ಥೆ ಗಟ್ಟಿಯಾಗಿ ಉಳಿದಿದೆ ಎಂದು ಅಂಬೇಡ್ಕರ್ ಅಧ್ಯಯನ ಸಂಸ್ಥೆ ಪ್ರಾಧ್ಯಾಪಕ ಜೆ.ಸೋಮಶೇಖರ್ ಬೇಸರ ವ್ಯಕ್ತಪಡಿಸಿದರು.

ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ಸಮುದಾಯ ಭವನದಲ್ಲಿ ದಸಂಸ ಅಂಬೇಡ್ಕರ್ ವಾದ ಸಂಘಟನೆ ವತಿಯಿಂದ ಆಯೋಜಿಸಿದ್ದ ಭಾರತದ ಅಸ್ಪೃಶ್ಯರ ಪ್ರತಿರೋಧ ಚಳವಳಿ, ಮಹಾಡ್ ಸತ್ಯಾಗ್ರಹದ ನೆನಪಿನಲ್ಲಿ ಶೋಷಿತರ ಸಂಘರ್ಷ ದಿನಾಚರಣೆಯಲ್ಲಿ ಮಾತನಾಡಿದ ಅವರು, ಅಂಬೇಡ್ಕರ್ ಎಂದರೆ ಜ್ಞಾನ ಮತ್ತು ಪ್ರಜ್ಞೆ. 1923ರಲ್ಲಿ ಮುಂಬಯಿಯಲ್ಲಿ ಅಲ್ಲಿನ ಪುರಸಭೆ ಕೆರೆ ಕಟ್ಟೆಗಳನ್ನು ಸಾರ್ವಜನಿಕ ಸ್ಥಳ ಎಂದು ಘೋಷಿಸಿತ್ತು. ಆದರೆ ಅಂಬೇಡ್ಕರ್ 1927ರಲ್ಲಿ ಚೌಧರ್ ಕೆರೆ ನೀರನ್ನು ಮುಟ್ಟುವ ಮೂಲಕ ನವ ಭಾರತದ ಹೊಸ ಚರಿತ್ರೆ ಸೃಷ್ಟಿಸಿದರು ಎಂದರು.

ಸಂವಿಧಾನದ ಮೂಲಕ ಶಿಕ್ಷಣದ ಹಕ್ಕು, ಮಾತನಾಡುವ ಹಕ್ಕು ಸಿಕ್ಕಿದೆ. ದೌರ್ಜನ್ಯದ ವಿರುದ್ಧ ಕಾಯ್ದೆ ಇದ್ದರೂ ಸಮಾಜದಲ್ಲಿ ಶೋಷಣೆ ನಡೆಯುತ್ತಿದೆ. ಶೋಷಿತರನ್ನು ವಿಶ್ವಾಸದಿಂದ ಜೊತೆಯಲ್ಲಿ ಕರೆದುಕೊಂಡು ಹೋಗುವ ಮನಸ್ಥಿತಿ ಎಲ್ಲರಲ್ಲೂ ಬರಬೇಕು. ದೇಶಕ್ಕೆ ರಾಜಕೀಯ ಸ್ವಾತಂತ್ರ್ಯಕಿಂತಲೂ, ಸಾಮಾಜಿಕ ಸ್ವಾತಂತ್ರ್ಯ ಮುಖ್ಯ ಎಂಬುದು ಅಂಬೇಡ್ಕರ್ ಆಶಯವಾಗಿತ್ತು ಎಂದರು.

ಕಾರ್ಯಕ್ರಮ ಉದ್ಘಾಟಿಸಿ ದಸಂಸ ಅಂಬೇಡ್ಕರ್ ಸಂಘಟನೆ ರಾಜ್ಯ ಪ್ರಧಾನ ಸಂಚಾಲಕ ಮಾವಳ್ಳಿ ಶಂಕರ್ ಮಾತನಾಡಿದರು. ಈ ವೇಳೆ ರಾಜ್ಯ ರೈತ ಸಂಘದ ರಾಜ್ಯ ಅಧ್ಯಕ್ಷ ಬಡಗಲಪುರ ನಾಗೇಂದ್ರ, ದಸಂಸ ಜಿಲ್ಲಾ ಸಂಚಾಲಕ ನಾರಾಯಣ್, ಸಂಘಟನಾ ಸಂಚಾಲಕ ದೊಡ್ಡಸಿದ್ದು, ವಿಭಾಗೀಯ ಸಂಚಾಲಕ ಸೋಮಣ್ಣ, ರಾಜ್ಯ ಸಮಿತಿ ಸದಸ್ಯ ಅಂಬುಗ ಮಲ್ಲೇಶ್, ವಿಭಾಗೀಯ ಸಂಚಾಲಕ ಹಾಲೇಶಪ್ಪ, ಜಿಲ್ಲಾ ದಲಿತ ವಿದ್ಯಾರ್ಥಿ ಒಕ್ಕೂಟ ಸಂಚಾಲಕ ಧಮ್ಮ ಅಶೋಕ್, ಕಾಳಪ್ಪಾಜಿ, ಜಿಲ್ಲಾ ಸಂಚಾಲಕಿ ಅನುಷಾ, ಕುಮಾರ್, ಚಂದ್ರ, ನಾಗರಾಜು, ಕುಮಾರ್, ಬಸವರಾಜು, ತಾಲೂಕು ಸಂಚಾಲಕ ಸಣ್ಣ ಕುಮಾರ್, ಗೋವಿಂದರಾಜು, ಸಂಘಟನಾ ಸಂಚಾಲಕರು ರಾಚಪ್ಪ, ಆನಂದ, ಉದಯ್, ಶಮಿವುಲ್ಲಾ, ಚೆಲುವರಾಜು, ಕುಮಾರ್, ಚಂದ್ರ, ಮಹದೇವಸ್ವಾಮಿ, ನಾಗೇಂದ್ರ ಇತರರಿದ್ದರು.

ಎನ್.ಪುಟ್ಟಮಲ್ಲು ನಿಧನ



ಹೆಚ್.ಡಿ.ಕೋಟೆ, ಮಾ.27– ದಿ. ಮಾಜಿ ಶಾಸಕ ಎನ್.ನಾಗರಾಜ್ ಅವರ ಸಹೋದರ ಎನ್.ಪುಟ್ಟಮಲ್ಲು (85) ಗುರುವಾರ ನಿಧನರಾದರು.

ಮೃತರು ಪತ್ನಿ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಮೃತರ ಜಮೀನಿನಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಐಪಿಎಲ್ ಹಂಗಾಮ

ಪೂರನ್ ಅಬ್ಬರ: ಲಕ್ನೋ ವಿರುದ್ಧ ಹೈದರಾಬಾದ್ ತತ್ತರ



ಹೈದರಾಬಾದ್, ಮಾ.27– ನಿಕೋಲಸ್ ಪೂರನ್, ಮಿಚೆಲ್ ಮಾರ್ಷ್ ಅವರ ಆಕರ್ಷಕ ಅರ್ಧಶತಕ ಹಾಗೂ ಶಾರ್ದೂಲ್ ಠಾಕೂರ್ ಅವರ ಮಾರಕ ಬೌಲಿಂಗ್ ದಾಳಿ ನೆರವಿನಿಂದ ಲಕ್ನೋ ಸೂಪರ್ ಜೈಂಟ್ಸ್, ಸನ್‌ರೈಸರ್ಸ್ ಹೈದರಾಬಾದ್ ವಿರುದ್ಧ 5 ವಿಕೆಟ್‌ಗಳ ದಿಗ್ವಿಜಯ ಸಾಧಿಸಿದೆ.

ಇಲ್ಲಿನ ರಾಜೀವ್ ಗಾಂಧಿ ಅಂತರ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಸನ್‌ರೈಸರ್ಸ್ ಹೈದರಾಬಾದ್ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 190 ರನ್ ಗಳಿಸಿತು. ತಂಡದ ಆರಂಭ ಉತ್ತಮವಾಗಿರಲಿಲ್ಲ. ಕೇವಲ 15 ರನ್ ಗಳಿಸುವುದರೊಳಗೆ ಹೈದರಾಬಾದ್ ಪ್ರಮುಖ 2 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ಈ ವೇಳೆ ಜೊತೆಯಾದ ಟ್ರಾವಿಸ್ ಹೆಡ್ ಹಾಗೂ ನಿತೀಶ್ ರೆಡ್ಡಿ 3ನೇ ವಿಕೆಟ್‌ಗೆ 61 ರನ್‌ಗಳ ಜೊತೆಯಾಟವಾಡುವ ಮೂಲಕ ತಂಡಕ್ಕೆ ಚೇತರಿಕೆ ನೀಡಿದರು. ಈ ವೇಳೆ ಅರ್ಧಶತಕದ ಅಂಚಿನಲ್ಲಿದ್ದ ಹೆಡ್ 47 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ನಂತರ ಬಂದ ಹೆನ್ರಿಚ್ ಕ್ಲಾಸೆನ್ 26 ರನ್ ಗಳಿಸಿ ಔಟಾದರೇ, ನಿತೀಶ್ ರೆಡ್ಡಿ 32 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಈ ವೇಳೆ ಕ್ರೀಸ್‌ಗೆ ಆಗಮಿಸಿದ ಅನಿಕೇತ್ ವರ್ಮಾ 5 ಸಿಕ್ಸರ್ ಒಳಗೊಂಡ ಬಿರುಸಿನ 36 ರನ್ ಗಳಿಸಿ ಔಟಾದರು. ಉಳಿದಂತೆ ನಾಯಕ ಪ್ಯಾಟ್ ಕಮ್ಮಿನ್ಸ್ 18, ಹರ್ಷಲ್ ಪಟೇಲ್ 12 ರನ್ ಗಳಿಸಿದರು. ಲಕ್ನೋ ಪರ ಹೈದರಾಬಾದ್ ಬ್ಯಾಟಿಂಗ್ ಆರ್ಭಟಕ್ಕೆ ಕಡಿವಾಣ ಹಾಕಿದ ಶಾರ್ದೂಲ್ ಠಾಕೂರ್ 4, ಆವೇಶ್ ಖಾನ್, ಪ್ರಿನ್ಸ್ ಯಾದವ್, ರವಿ ಬಿಷ್ಣೋಯಿ ಹಾಗೂ ದಿಗ್ವೇಶ್ ರಥಿ ತಲಾ ಒಂದೊಂದು ವಿಕೆಟ್ ಉರುಳಿಸಿದರು.

ಹೈದರಾಬಾದ್ ನೀಡಿದ 191 ರನ್‌ಗಳ ಗೆಲುವಿನ ಗುರಿ ಬೆನ್ನತ್ತಿದ ಲಕ್ನೋ ಸೂಪರ್ ಜೈಂಟ್ಸ್ ಆರಂಭದಲ್ಲೇ ಐಡನ್ ಮಾರ್ಕ್ರಾಮ್ ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತು. ಈ ವೇಳೆ 2ನೇ ವಿಕೆಟ್‌ಗೆ ಜೊತೆಯಾದ ಮಿಚೆಲ್ ಮಾರ್ಷ್ ಹಾಗೂ ನಿಕೋಲಸ್ ಪೂರನ್ ಬಿರುಸಿನ 116 ರನ್‌ಗಳ ಜೊತೆಯಾಟವಾಡಿ ತಂಡವನ್ನು ಗೆಲುವಿನ ಹಾದಿಗೆ ತಂದರು. ಪಂದ್ಯದಲ್ಲಿ ಮಿಂಚಿನ ಬ್ಯಾಟಿಂಗ್ ನಡೆಸಿದ ನಿಕೋಲಸ್ ಪೂರನ್ ಸಿಕ್ಸರ್, ಬೌಂಡರಿಗಳ ಸುರಿಮಳೆಗೈದರು. ಹೈದರಾಬಾದ್ ಬೌಲರ್‌ಗಳ ದಂಡಿಸಿದ ಪೂರನ್ 26 ಎಸೆತಗಳಲ್ಲಿ ತಲಾ 6 ಸಿಕ್ಸರ್, ಬೌಂಡರಿ ಒಳಗೊಂಡ 70 ರನ್ ಗಳಿಸಿ ನಿರ್ಗಮಿಸಿದರು. ಇವರಿಗೆ ಉತ್ತಮ ಸಾಥ್ ನೀಡಿದ ಮಿಚೆಲ್ ಮಾರ್ಷ್ 31 ಎಸೆತಗಳಲ್ಲಿ 2 ಸಿಕ್ಸರ್, 7 ಬೌಂಡರಿ ಒಳಗೊಂಡ 51 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ನಂತರ ಕ್ರೀಸ್‌ಗೆ ಆಗಮಿಸಿದ ನಾಯಕ ರಿಷಬ್ ಪಂತ್ 1 ಸಿಕ್ಸರ್ ಒಳಗೊಂಡ 15 ರನ್ ಗಳಿಸುವ ಮೂಲಕ ಈ ಪಂದ್ಯದಲ್ಲೂ ದೊಡ್ಡ ಮೊತ್ತ ದಾಖಲಿಸಲು ಸಾಧ್ಯವಾಗಲಿಲ್ಲ. ಉಳಿದಂತೆ ಆಯುಷ್ ಬದೋನಿ 6, ಡೇವಿಡ್ ಮಿಲ್ಲರ್ 13, ಅಬ್ದುಲ್ ಸಮ್ಮದ್ 22 ರನ್ ಗಳಿಸಿ ತಂಡಕ್ಕೆ ಜಯ ತಂದುಕೊಟ್ಟರು. ಅಂತಿಮವಾಗಿ ಲಕ್ನೋ 16.1 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 193 ರನ್ ಗಳಿಸಿ ಜಯ ಗಳಿಸಿತು. ಹೈದರಾಬಾದ್ ಪರ ಪ್ಯಾಟ್ ಕಮ್ಮಿನ್ಸ್ 2, ಮೊಹಮ್ಮದ್ ಶಮಿ, ಆಡಂ ಜಂಪಾ ಹಾಗೂ ಹರ್ಷಲ್ ಪಟೇಲ್ ತಲಾ ಒಂದೊಂದು ವಿಕೆಟ್ ಪಡೆದರು. ಶಾರ್ದೂಲ್ ಠಾಕೂರ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ತಂಡದ ಅಂಕಪಟ್ಟಿ ವಿವರ

ತಂಡ	ಪಂದ್ಯಗಳು	ಗೆಲುವು	ಸೋಲು	ಡ್ರಾ	ಅಂಕ
ಬೆಂಗಳೂರು	1	1	0	0	2
ಲಕ್ನೋ	2	1	1	0	2
ಪಂಜಾಬ್	1	1	0	0	2
ಚೆನ್ನೈ	1	1	0	0	2
ಡೆಲ್ಲಿ	1	1	0	0	2
ಹೈದರಾಬಾದ್	2	1	1	0	2
ಕೋಲ್ಕತ್ತಾ	2	1	1	0	2
ಮುಂಬೈ	1	0	1	0	0
ಗುಜರಾತ್	1	0	1	0	0
ರಾಜಸ್ಥಾನ್	2	0	2	0	0

ಇಂದಿನ ಪಂದ್ಯ
ಚೆನ್ನೈ ಸೂಪರ್ ಕಿಂಗ್ಸ್
V/S
ರಾಯಲ್ ಚಾಲೆಂಜರ್ಸ್ ಬೆಂಗಳೂರು
ಸಮಯ: ಸಂಜೆ 7.30
ಸ್ಥಳ : ಎಂ.ಎ ಚಿದಂಬರಂ ಕ್ರೀಡಾಂಗಣ, ಚೆನ್ನೈ

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ವೀರ ಧೀರ ಶೂರನ್–2 (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮನದ ಕಡಲು (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಬಡಾಸ್ ರವಿಕುಮಾರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಮಯೂರ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಅಪ್ಪು (ಕ)	4 ಪ್ರದರ್ಶನಗಳು
ರಾಜಕಮಲ್	
L2 ಎಂಪುರಾನ್ (ತ)	4 ಪ್ರದರ್ಶನಗಳು
ಸಂಗಂ	
ಬರ್ಗೆಟ್ ಬಸ್ಯಾ (ಕ)	4 ಪ್ರದರ್ಶನಗಳು
ಲಿಡೋ	
ಫಾರೆಸ್ಟ್(ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಭಗೀರಥ (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1 ಡಿಸ್ನಿ ಸ್ನೋ ವೈಟ್ (ಇಂ): ಬೆ.9.55ಕ್ಕೆ, ಮ.12.20ಕ್ಕೆ, ಮ.2.40ಕ್ಕೆ, ಸಂ.5ಕ್ಕೆ, ದಿ ಡಿಪ್ಲೊಮೆಟ್ (ಹಿಂ): ರಾ.7.20ಕ್ಕೆ, ಯಾರಿಯನ್ (ಹಿಂ): ರಾ.10.10ಕ್ಕೆ.

ಸ್ಕ್ರೀನ್ 2 ಬರ್ಗೆಟ್ ಬಸ್ಯಾ (ಕ): ಬೆ.10.20ಕ್ಕೆ, ಅಸ್ತ್ರಂ (ತ): ಮ.1.10ಕ್ಕೆ, ಕೋರ್ಟ್ ಸ್ಟೇಟ್ V/s ಎ ನೋಬಡಿ (ತೆ): ಮ.3.55ಕ್ಕೆ, ತುಮ್ಕೊ ಮೇರಿ ಕಸಮ್ (ಹಿಂ): ರಾ.7ಕ್ಕೆ, ರಾ.10.20ಕ್ಕೆ.

ಸ್ಕ್ರೀನ್ 3 ಬಳ್ಳಾರಿ ಜಿಲ್ಲೆ ಬಳ್ಳಾರಿ ತಾಲೂಕು ಗ್ರಾಮ ಯಾಳ್ಪಿ (ಕ): ಬೆ.10.35ಕ್ಕೆ, ಡ್ರ್ಯಾಗನ್ (ತ): ಮ.1.05ಕ್ಕೆ, ಪಿಂಟು ಕಿ ಪಪ್ಪಿ (ಹಿಂ): ಸಂ.4.15ಕ್ಕೆ, ಛಾವಾ (ಹಿಂ): ರಾ.7ಕ್ಕೆ, ಘಾತಕ್ (ಹಿಂ): ಬೆ.10.15ಕ್ಕೆ.

ಸ್ಕ್ರೀನ್ 4 ಡ್ರ್ಯಾಗನ್ (ತ): ಬೆ.10.20ಕ್ಕೆ, ಅಪ್ಪು (ಕ): ಮ.1.30ಕ್ಕೆ, ಷಣ್ಮುಖ (ತೆ): ಸಂ.4.15ಕ್ಕೆ, ರಾ.9.45ಕ್ಕೆ, ಡಿಸ್ನಿ ಸ್ನೋ ವೈಟ್ (ಇಂ): ರಾ.7.05ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1 ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.

ಸ್ಕ್ರೀನ್ 2 ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.

ಸ್ಕ್ರೀನ್ 3 ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.

ಸ್ಕ್ರೀನ್ 4 ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1 ಫಾರೆಸ್ಟ್ (ಕ): ಮ.1.45ಕ್ಕೆ, ಬಳ್ಳಾರಿ ಜಿಲ್ಲೆ ಬಳ್ಳಾರಿ ತಾಲೂಕು ಗ್ರಾಮ ಯಾಳ್ಪಿ (ಕ): ಸಂ.6.35ಕ್ಕೆ ಅಸ್ತ್ರಂ (ತ): ರಾ.7ಕ್ಕೆ, ಷಣ್ಮುಖ (ತೆ): ರಾ.9.15ಕ್ಕೆ.

ಸ್ಕ್ರೀನ್ 2 ಪಿಂಟು ಕಿ ಪಪ್ಪಿ (ಹಿಂ): ಮ.1.15ಕ್ಕೆ, ಮ.3.55ಕ್ಕೆ, ಛಾವಾ (ಹಿಂ): ಸಂ.6.30ಕ್ಕೆ, ತುಮ್ಕೊ ಮೇರಿ ಕಸಮ್ (ಹಿಂ): ರಾ.9.30ಕ್ಕೆ.

ಸ್ಕ್ರೀನ್ 3 ಡಿಸ್ನಿ ಸ್ನೋ ವೈಟ್ (ಇಂ): ಮ.1.30ಕ್ಕೆ, ಸಂ.4.05ಕ್ಕೆ, ರಾ.9.20ಕ್ಕೆ, ತುಮ್ಕೊ ಮೇರಿ ಕಸಮ್ (ಹಿಂ): ಸಂ.6.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಫುಟ್‌ಪಾತ್ ವ್ಯಾಪಾರಿಗಳ ತೆರವುಗೊಳಿಸಿ ಇಲ್ಲವೆ ಅವರಿಗೆ ಸೂಕ್ತ ಸ್ಥಳ ನಿಗದಿಪಡಿಸಿ

● ಪಾಲಿಕೆ ಅಧಿಕಾರಿಗಳಿಗೆ ಹೋಟೆಲ್ ಮಾಲೀಕರ ಆಗ್ರಹ ● ಪರವಾನಗಿ ಇಲ್ಲದ ಫುಟ್‌ಪಾತ್ ವ್ಯಾಪಾರಿಗಳ ತೆರವು: ಪಾಲಿಕೆ ಆರೋಗ್ಯಾಧಿಕಾರಿ ಭರವಸೆ

ಮೈಸೂರು, ಮಾ.27(ಎಂಕೆ)– ಹೋಟೆಲ್ ಉದ್ಯಮಕ್ಕೆ ತಲೆ ನೋವಾಗಿರುವ ಫುಟ್‌ಪಾತ್ ವ್ಯಾಪಾರಿಗಳನ್ನು ತೆರವುಗೊಳಿಸಬೇಕು. ಇಲ್ಲವೆ ಅವರಿಗೆ ಸೂಕ್ತ ಸ್ಥಳ ನಿಗದಿಪಡಿಸಬೇಕು ಎಂದು ಮೈಸೂರು ಹೋಟೆಲ್ ಮಾಲೀಕರು, ಪಾಲಿಕೆ ಆರೋಗ್ಯಾಧಿಕಾರಿಗಳನ್ನು ಒತ್ತಾಯಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಗುರುವಾರ ನಗರಪಾಲಿಕೆ ಆರೋಗ್ಯಾಧಿಕಾರಿ ಡಾ.ವೆಂಕಟೇಶ್, ಆಹಾರ ಸುರಕ್ಷಾ ಅಧಿಕಾರಿ ಡಾ.ಎಸ್.ಎಲ್.ರವೀಂದ್ರ ಅವರೊಂದಿಗೆ ನಡೆದ 'ಆಹಾರ ಸುರಕ್ಷತೆ ಹಾಗೂ ಉದ್ಯಮ ನವೀಕರಣ' ಕುರಿತ ಸಂವಾದ ಕಾರ್ಯಕ್ರಮದಲ್ಲಿ ಫುಟ್‌ಪಾತ್ ವ್ಯಾಪಾರವೆಂಬುದು ದೊಡ್ಡ ಮಾಫಿಯಾ ಆಗಿ ಬೆಳೆದಿದೆ. ಪಾಲಿಕೆ ಅಧಿಕಾರಿಗಳು ಫುಟ್‌ಪಾತ್ ವ್ಯಾಪಾರಿಗಳನ್ನು ಟಚ್ ಮಾಡಲು ಸಾಧ್ಯವಿಲ್ಲ. ಫುಟ್‌ಪಾತ್ ವ್ಯಾಪಾರಿಗಳಿಂದ ಸರ್ಕಾರಕ್ಕೆ ಲಕ್ಷ ಲಕ್ಷ ತೆರಿಗೆ ಕಟ್ಟುವ ಹೋಟೆಲ್ ಉದ್ಯಮ ನಷ್ಟದತ್ತ ಸಾಗುಮತಾಗಿದೆ ಆದ್ದರಿಂದ ಕೂಡಲೇ ಎಲ್ಲೆಂದರಲ್ಲಿ ವ್ಯಾಪಾರ ನಡೆಸುವ ಫುಟ್‌ಪಾತ್ ವ್ಯಾಪಾರಿಗಳನ್ನು ತೆರವುಗೊಳಿಸಿ, ಇಲ್ಲವೆ ಅವರಿಗೆ ಸೂಕ್ತ ಸ್ಥಳ ನೀಡಿ ಎಂದು ಮನವಿ ಮಾಡಲಾಯಿತು.

ಹೋಟೆಲ್ ಮಾಲೀಕರ ಒತ್ತಾಯಕ್ಕೆ ಪ್ರತಿಕ್ರಿಯಿಸಿದ ನಗರಪಾಲಿಕೆ ಆರೋಗ್ಯಾಧಿಕಾರಿ ಡಾ.ವೆಂಕಟೇಶ್, ಫುಟ್‌ಪಾತ್ ವ್ಯಾಪಾರಿಗಳ ಸರ್ವೆ ಕಾರ್ಯ ನಡೆಯುತ್ತಿದೆ. ಸ್ವಚ್ಛ ಸರ್ವೇಕ್ಷಣೆ ಮುಗಿದ ಕೂಡಲೇ ಪರವಾನಗಿ ಇಲ್ಲದ ಫುಟ್‌ಪಾತ್ ವ್ಯಾಪಾರಿಗಳನ್ನು ಪೊಲೀಸ್ ಭದ್ರತೆಯೊಂದಿಗೆ ತೆರವುಗೊಳಿಸುವ ಹಾಗೂ ಅವರಿಗೆ ಸೂಕ್ತ ಸ್ಥಳ ಸೂಚಿಸುವ ಅಭಿಯಾನ ನಡೆಸಲಾಗುವುದು ಎಂದು ಭರವಸೆ ನೀಡಿದರು.

ಹಾಗೆಯೇ ಹೋಟೆಲ್‌ಗಳಲ್ಲಿ ಪ್ಲಾಸ್ಟಿಕ್ ಬಳಕೆ ಕಡಿಮೆ. ಸಾಧ್ಯವಾದಷ್ಟು ನಿಮ್ಮ ಹೋಟೆಲ್ ಲೋಗೋ ಇರುವ ಬಟ್ಟೆ ಬ್ಯಾಗ್‌ಗಳನ್ನು ಬಳಸಿ, ಹಂದಿ ಸಾಕಾಣಿಕೆದಾರರಿಗೆ ಹಾಗೂ ಪೌರಕಾರ್ಮಿಕರಿಗೆ ನೀಡುವ ಆಹಾರ ತ್ಯಾಜ್ಯವನ್ನು ಪ್ಲಾಸ್ಟಿಕ್‌ನಿಂದ ಬೇರ್ಪಡಿಸಿ ನೀಡಿ. ಎಲ್ಲೆಂದರಲ್ಲಿ ಆಹಾರ ತ್ಯಾಜ್ಯ ಹಾಗೂ ಪ್ಲಾಸ್ಟಿಕ್ ಬಿಸಾಡಿದ್ದರೆ ಕೂಡಲೇ ಮಾಹಿತಿ ನೀಡಿ. ಮುಂದಿನ ತಿಂಗಳು ಉದ್ಯಮ ಪರವಾನಗಿ ನವೀಕರಣ ಇನ್ನಿತರೆ ಲೈಸೆನ್ಸ್‌ಗಳ ಅಭಿಯಾನವನ್ನು ನಡೆಸಲಿದ್ದು, ಹೋಟೆಲ್ ಮಾಲೀಕರು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದರು.

ಶುಚಿತ್ವ ಕಾಪಾಡಿ: ಆಹಾರ ಸುರಕ್ಷತಾ ಅಧಿಕಾರಿ ಡಾ.ಎಸ್.ಎಲ್.ರವೀಂದ್ರ ಮಾತನಾಡಿ, ಹೋಟೆಲ್‌ಗಳಲ್ಲಿ ಶುಚಿತ್ವ ಕಾಪಾಡುವುದರ ಜೊತೆಗೆ ಆಹಾರ ಪದಾರ್ಥಗಳನ್ನು ಕಡ್ಡಾಯವಾಗಿ ತೊಳೆದು ಬಳಸಬೇಕು. ಅದರಲ್ಲೂ ಮುಖ್ಯವಾಗಿ ಅಡುಗೆ ತಯಾರಕರು ಕೈ ತೊಳೆದು, ಆಹಾರ ಪದಾರ್ಥಗಳನ್ನು ಕಟ್ ಮಾಡಬೇಕು. ಕಟಿಂಗ್ ನಂತರವೂ ಕೈ ತೊಳೆಯಬೇಕು. ಆಹಾರಕ್ಕೆ ತಲೆ ಕೂದಲೂ ಬೀಳದಂತೆ ಮುನ್ನೆಚ್ಚರಿಕೆ ವಹಿಸಬೇಕು. ಹಾಗೆಯೇ ಆಹಾರ ಭದ್ರತಾ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಪರವಾನಗಿಗಳು ಗ್ರಾಹಕರಿಗೆ ಕಾಣುವಂತೆ ಇರಿಸಬೇಕು ಎಂದು ಸಲಹೆ ನೀಡಿದರು. ಹಾಗೆಯೇ ಆನ್‌ಲೈನ್ ಮೂಲಕ ಉದ್ಯಮ ಪರವಾನಗಿ, ತೆರಿಗೆ ಕುರಿತು ಮಾಹಿತಿ ನೀಡಲಾಯಿತು. ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ, ಕಾರ್ಯದರ್ಶಿ ಎ.ಆರ್.ರವೀಂದ್ರ ಭಟ್, ಹೋಟೆಲ್ ಮಾಲೀಕರ ಸಂಘದ ಧರ್ಮದತ್ತಿ ಅಧ್ಯಕ್ಷ ರವಿಶಾಸ್ತ್ರಿ, ಉಪಾಧ್ಯಕ್ಷ ಸುರೇಶ್(ಉಗ್ರಯ್ಯ), ಕಾರ್ಯದರ್ಶಿ ಸುಬ್ರಹ್ಮಣ್ಯ ತಂತ್ರಿ ಮತ್ತಿತರರಿದ್ದರು.



ನಗರದ ಖಾಸಗಿ ಹೋಟೆಲ್‌ನಲ್ಲಿ ಗುರುವಾರ ನಡೆದ 'ಆಹಾರ ಸುರಕ್ಷತೆ ಹಾಗೂ ಉದ್ಯಮ ನವೀಕರಣ' ಕುರಿತ ಸಂವಾದ ಕಾರ್ಯಕ್ರಮದಲ್ಲಿ ಮೈಸೂರು ಹೋಟೆಲ್ ಮಾಲೀಕರ ಸಂಘ ಹಾಗೂ ಸಂಘದ ಧರ್ಮದತ್ತಿ ವತಿಯಿಂದ ನಗರಪಾಲಿಕೆ ಆರೋಗ್ಯಾಧಿಕಾರಿ ಡಾ.ವೆಂಕಟೇಶ್, ಆಹಾರ ಸುರಕ್ಷತಾ ಅಧಿಕಾರಿ ಡಾ.ಎಸ್.ಎಲ್.ರವೀಂದ್ರ ಅವರನ್ನು ಸನ್ಮಾನಿಸಲಾಯಿತು.

ಗ್ಯಾರಂಟಿ ಉಚಿತ, ಬೆಲೆ ಏರಿಕೆ ಖಚಿತ...

ಮಾಜಿ ಸಚಿವ ಸುರೇಶ್ ಕುಮಾರ್ ಆಕ್ರೋಶ



ಬೆಂಗಳೂರು, ಮಾ.27– ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಾಲಿನ ದರವನ್ನು 9 ರೂ. ಏರಿಕೆ ಮಾಡಿದೆ ಈಗ ಹಾಲಿನ ದು, ಮುಂದೆ ನೀರಿನ ದರ, ಬಹುಶಃ ಸೇವಿಸುವ ಗಾಳಿಗೂ ಬೆಲೆ ನಿಗದಿ ಪಡಿಸುವ ದಿನ ಬಹಳ ದೂರ ಇಲ್ಲ ಎಂದು ಬಿಜೆಪಿ ಶಾಸಕ, ಮಾಜಿ ಸಚಿವ ಸುರೇಶ್ ಕುಮಾರ್ ಆಕ್ರೋಶ ಹೊರ ಹಾಕಿದ್ದಾರೆ.

ಹಾಲಿನ ದರ ಹೆಚ್ಚಿಸಿ ರೈತರಿಗೆ ಪ್ರೋತ್ಸಾಹ ಧನ ನೀಡಬೇಕೆಂಬುದು ಒಪ್ಪಿತ ಮಾತು. ಹಾಗೆಂದ ಮಾತ್ರಕ್ಕೆ ಗ್ರಾಹಕರ ಜೇಬಿನಿಂದ ಕಿತ್ತು ಕೊಡುವುದು ಕಾಂಗ್ರೆಸ್ ಸರ್ಕಾರ ಹೇಳಿಕೊಳ್ಳುವ ಸಾಮಾಜಿಕ ನ್ಯಾಯದ ಪರಿಕಲ್ಪನೆಯೇ ಎಂದು ಪ್ರಶ್ನಿಸಿದ್ದಾರೆ.

ಪೋಸ್ಟ್‌ನಲ್ಲಿ ಏನಿದೆ: ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕೂಡಲೇ, ಆಗಸ್ಟ್ 2023ರಲ್ಲಿ, ಹಾಲಿನ ಬೆಲೆ ಲೀಟರ್‌ಗೆ 3 ರೂ.ಗಳಷ್ಟು ಏರಿಕೆಯಾಯಿತು. ಅದಾದ ಬಳಿಕ 2024ರ ಜೂನ್ 26ಕ್ಕೆ ನಂದಿನಿಯ ಎಲ್ಲಾ ಹಾಲಿನ ಬೆಲೆಯನ್ನು 2 ರೂಪಾಯಿ ಏರಿಕೆ ಮಾಡಿತು. ಈಗ ಮತ್ತೊಂದು ಸುತ್ತಿನ ಹಾಲಿನ ಬೆಲೆ ಏರಿಕೆಯಾಗಿದೆ. ಏಪ್ರಿಲ್ 1 ರಿಂದ ಹಾಲಿನ ದರ ಲೀಟರ್‌ಗೆ 4 ರೂಪಾಯಿ ಏರಿಕೆ ಘೋಷಣೆ ಮಾಡಿದೆ.

ಎಲ್ಲಾ ಪೋಷಕಾಂಶಗಳನ್ನು ಹೊಂದಿದ ಸಂಪೂರ್ಣ ಆಹಾರದಲ್ಲಿ ಮೊಟ್ಟೆಯನ್ನು ಹೊರತುಪಡಿಸಿದರೆ ಹಾಲಿಗೆ ಮೊದಲ ಅಗ್ರಸ್ಥಾನ. ಬಹುಶಃ ನಗರ ಪ್ರದೇಶದಲ್ಲಿ ಶ್ರೀಮಂತರು ಮಾತ್ರ ಹಾಲನ್ನು ಬಳಸಬೇಕೇ? ಬಡ–ಮಧ್ಯಮ ವರ್ಗ ಹಾಲನ್ನು ಬಳಸಬಾರದೇ? ಹಾಲು ಹಾಲಾಹಲವಾಗುವ ಪರಿಸ್ಥಿತಿಗೆ ತಂದು ನಿಲ್ಲಿಸಿದೆ ಈ ಸರ್ಕಾರ.

'ಗ್ಯಾರಂಟಿ ಉಚಿತ, ಬೆಲೆ ಏರಿಕೆ ಖಚಿತ' ಈ ನಿಲುವು ರಾಜ್ಯದ ಆರ್ಥಿಕ ವ್ಯವಸ್ಥೆ ದಿಕ್ಕೆಟ್ಟಿರುವ ದ್ಯೋತಕವಾಗಿದೆ. ಈಗ ಹಾಲಿನ ದರ, ಮುಂದೆ ನೀರಿನ ದರ, ಬಹುಶಃ ಸೇವಿಸುವ ಗಾಳಿಗೂ ಬೆಲೆ ನಿಗದಿ ಪಡಿಸುವ ದಿನ ಬಹಳ ದೂರ ಇಲ್ಲ ಎಂದು ಸುರೇಶ್ ಕುಮಾರ್ ಪೋಸ್ಟ್ ಮಾಡಿದ್ದಾರೆ.

ಅನಿವಾರ್ಯವಿದ್ದವರು ಕಾಫಿ, ಟೀ ದರ ಏರಿಸಬಹುದು

ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ



ಮೈಸೂರು, ಮಾ.27(ಎಸ್‌ಬಿಡಿ)– ಅನಿವಾರ್ಯವಿದ್ದವರು ಮಾತ್ರ ಕಾಫಿ–ಟೀ ದರವನ್ನು ಹೆಚ್ಚಿಸುವಂತೆ ಹೋಟೆಲ್ ಮಾಲೀಕರಿಗೆ ತಿಳಿಸಲಾಗಿದೆ ಎಂದು ಮೈಸೂರು ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಹೇಳಿದ್ದಾರೆ.

ಹಾಲಿನ ದರ ಏರಿಕೆ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕಳೆದ ಸೆಪ್ಟೆಂಬರ್‌ನಲ್ಲೇ ಹಾಲಿನ ದರ ಏರಿಕೆಗೆ ಮುಂದಾಗಿದ್ದರು. ನಮ್ಮ ಸಂಘದ ವತಿಯಿಂದ ಮುಖ್ಯಮಂತ್ರಿಗಳಿಗೆ ಮನವಿ ನೀಡಿದ್ದರ ಹಿನ್ನೆಲೆಯಲ್ಲಿ ಏಳು ತಿಂಗಳ ಕಾಲ ಯಥಾಸ್ಥಿತಿ ಕಾಪಾಡಿದ್ದಾರೆ. ರೈತರಿಗೆ ಪ್ರೋತ್ಸಾಹ ಧನ ನೀಡುವ ಉದ್ದೇಶದ ಜೊತೆಗೆ ಖರ್ಚು ವೆಚ್ಚ ಗಳೂ ಜಾಸ್ತಿಯಾಗಿರುವುದರಿಂದ ಹಾಲಿನ ದರ ಏರಿಕೆಯನ್ನು ವಿರೋಧಿಸುವುದಿಲ್ಲ ಎಂದಿದ್ದಾರೆ.

ಕಾಫಿ ಪುಡಿ ದರ ಏರಿಕೆ ಬೆನ್ನಲ್ಲೇ ಹಾಲಿನ ದರವೂ ಏರಿಕೆಯಾಗಿರುವುದರಿಂದ ಹೋಟೆಲ್ ಉದ್ಯಮಕ್ಕೆ ಹೊರೆಯಾಗಲಿದೆ. ಆದರೂ ಗ್ರಾಹಕರ ಹಿತದೃಷ್ಟಿ ಹಾಗೂ ತಮ್ಮ ಆರ್ಥಿಕ ಪರಿಸ್ಥಿತಿ ನೋಡಿಕೊಂಡು ಸರಿದೂಗಿಸಿಕೊಂಡು ಹೋಗುವಂತೆ ಉದ್ಯಮಿಗಳಿಗೆ ತಿಳಿಸಲಾಗಿದೆ ಅನಿವಾರ್ಯ ವಾದವರು ಮಾತ್ರ ಸ್ವಲ್ಪ ಮಟ್ಟಿನ ದರ ಏರಿಕೆ ಮಾಡಿಕೊಳ್ಳಬೇಕಾಗುತ್ತದೆ. ಇದಕ್ಕೆ ಗ್ರಾಹಕರು ಸಹಕರಿಸಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

ಹನಿಟ್ರ್ಯಾಪ್ ವಿಚಾರವೇ ಯತ್ನಾಳ್‌ಗೆ ಕುತ್ತಾಯ್ತು!



ಮೈಸೂರು, ಮಾ.27(ಎಸ್‌ಬಿಡಿ)– ಸದನದಲ್ಲಿ ಹನಿಟ್ರ್ಯಾಪ್ ವಿಚಾರ ಪ್ರಸ್ತಾಪಿಸಿದ್ದಕ್ಕೆ ಯತ್ನಾಳ್ ಅವರನ್ನು ಬಿಜೆಪಿ ಉಚ್ಛಾಟಿಸಿದೆ ಎಂದು ಚಾಮರಾಜ ಕ್ಷೇತ್ರದ ಶಾಸಕ ಕೆ.ಹರೀಶ್‌ಗೌಡ ಅಭಿಪ್ರಾಯಿಸಿದ್ದಾರೆ.

ಬಿಜೆಪಿ ಶಾಸಕ ಯತ್ನಾಳ್ ಅವರನ್ನು 6 ವರ್ಷ ಪಕ್ಷದಿಂದ ಉಚ್ಛಾಟಿಸಿರುವ ಬಗ್ಗೆ ಪ್ರತಿಕ್ರಿಯಿಸಿ, ಯತ್ನಾಳ್ ಅವರು ಹನಿಟ್ರ್ಯಾಪ್ ವಿಚಾರವನ್ನು ಸದನದಲ್ಲಿ ಪ್ರಸ್ತಾಪಿಸಿದರು. ಈ ಕಾರಣದಿಂದಲೇ ಅವರನ್ನು ಪಕ್ಷದಿಂದಲೇ ವಜಾ ಮಾಡಿದ್ದಾರೆ ಎನ್ನುವುದು ನನ್ನ ಅಭಿಪ್ರಾಯ. ಪವಿತ್ರವಾದ ಸದನದಲ್ಲಿ ಅಂತಹ ವಿಚಾರವನ್ನು ಮಾತನಾಡುವುದು ಎಷ್ಟು ಸರಿ ಎಂದು ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದರು.

ಯತ್ನಾಳ್ ಅವರಿಗೆ ತಾಯಿ ಚಾಮುಂಡೇಶ್ವರಿ ತಕ್ಕ ಶಿಕ್ಷೆಯನ್ನೇ ನೀಡಿದ್ದಾರೆ. ಅವರು ಸುಖಾಸುಮ್ಮನೆ ಯಾರ ಮೇಲೆಯೂ ಆರೋಪ ಮಾಡಬಾರದು. ಕಾಂಗ್ರೆಸ್ ಸಚಿವರುಗಳೇ ನನಗೆ ಚೀಟಿ ಕೊಟ್ಟಿದ್ದಾರೆ ಎಂದು ಆರೋಪಿಸಿದರು. ಈ ರೀತಿ ಗಾಳಿಯಲ್ಲಿ ಗುಂಡು ಹೊಡೆಯುವುದು ಬೇಡ. ಅವರಿಗೆ ಚೀಟಿ ಕೊಟ್ಟವರ ಹೆಸರನ್ನು ಬಹಿರಂಗಪಡಿಸಲಿ. ಬಳಿಕ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಹಾಗೂ ಹೈಕಮಾಂಡ್ ಚರ್ಚಿಸಿ, ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಸ್ಪರ್ಧಾತ್ಮಕ ಪರೀಕ್ಷೆಗಳ ಎದುರಿಸುವುದು ಹೇಗೆ?

ಕಠಿಣ ಪರಿಶ್ರಮ, ಶ್ರದ್ಧೆಯಿಂದ ಮಾತ್ರ ಯಶಸ್ಸು ಸಾಧ್ಯ

ಸಿಐಡಿ ಎಸ್ಪಿ ಕಾಶಿಗೌಡ ಕಿವಿಮಾತು

ಮೈಸೂರು, ಮಾ.27(ಎಂಟಿವೈ)– ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕೇವಲ ಔಪಚಾರಿಕವಾಗಿ ಸ್ವೀಕರಿಸದೆ ಕಠಿಣ ಪರಿಶ್ರಮ, ಶ್ರದ್ಧೆಯಿಂದ ಎದುರಿಸಿದಾಗ ಮಾತ್ರ ಯಶಸ್ಸು ಸಾಧಿಸಬಹುದು ಎಂದು ಸಿಐಡಿ ಎಸ್ಪಿ ಕಾಶಿಗೌಡ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಮೇಟಗಳ್ಳಿಯಲ್ಲಿರುವ ಪೂಜಾ ಭಗವತ್ ಮಹಾಜನ ಶಿಕ್ಷಣ ಸಂಸ್ಥೆಯಲ್ಲಿ ಒಕ್ಕಲಿಗ ಯುವ ಬ್ರಿಗೇಡ್ ವತಿಯಿಂದ 'ಐಎಎಸ್, ಕೆಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವುದು ಹೇಗೆ'? ಕುರಿತು ಆಯೋಜಿಸಿದ್ದ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕೇವಲ ಔಪಚಾರಿಕವಾಗಿ ಪರಿಗಣಿಸಿದರೆ ಯಶಸ್ಸು ಸಾಧಿಸಲು ಸಾಧ್ಯವಿಲ್ಲ. ಯಾವುದೇ ಸ್ಪರ್ಧಾತ್ಮಕ ಪರೀಕ್ಷೆ ತೆಗೆದುಕೊಳ್ಳುವ ಮುನ್ನ ಅದಕ್ಕೆ ಪೂರ್ವ ತಯಾರಿ ಜೊತೆಗೆ ಶ್ರದ್ಧೆ, ಪರಿಶ್ರಮ, ಕಠಿಣಾಭ್ಯಾಸ ಅಗತ್ಯ. ಇಂತಹ ಪರೀಕ್ಷೆ ಎದುರಿಸುವುದು ಸವಾಲಿನ ಸಂಗತಿ. ಎದುರಾಗುವ ಸವಾಲುಗಳನ್ನೇ ಸಾಧನೆ ಮಾಡಲು ಸ್ಫೂರ್ತಿಯಾಗಿ ಸ್ವೀಕರಿಸಬೇಕು. ಸಮಗ್ರ ಅಧ್ಯಯನದಲ್ಲಿ ತೊಡಗಿಸಿಕೊಂಡರೆ ಸಾಧನೆ ಹಾದಿ ಸುಗಮವಾಗಲಿದೆ. ಸಾಧಿಸಲು ಸಾಧ್ಯವಾಗದೇ ಇರುವುದು ಜಗತ್ತಿನಲ್ಲಿ ಯಾವುದೂ ಇಲ್ಲ. ಇದನ್ನು ಮನಗಂಡು ಸಾಧನೆ ಮಾಡುವ ಗುರಿಯೊಂದಿಗೆ, ಛಲದಿಂದ ಅಭ್ಯಾಸ ಮಾಡಬೇಕು. ಇದರೊಂದಿಗೆ ನಡೆ– ನುಡಿ, ಗುರಿ, ಶಿಸ್ತು ಮುಖ್ಯ, ಕಲಿಯುವ ಹಸಿವು ಹೆಚ್ಚಾಗಿರಬೇಕು ಎಂದು ಅಭಿಪ್ರಾಯಪಟ್ಟರು.

ಇನ್‌ಸೈಟ್ಸ್ ಐಎಎಸ್ ಸಂಸ್ಥಾಪಕ ವಿನಯ್ ಕುಮಾರ್ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆ ಎದುರಿಸಲು ಕಠಿಣ ನಿರ್ಧಾರ, ಆಸಕ್ತಿ, ಸಾಮರ್ಥ್ಯ ಮತ್ತು ಕೌಶಲ ಮುಖ್ಯ. ಐಎಎಸ್ ಮಾಡಬೇಕಾದರೆ ಮಹತ್ವಾಕಾಂಕ್ಷೆ ಇರಬೇಕು. ದೊಡ್ಡ ದೊಡ್ಡ ಕನಸುಗಳನ್ನು ಕಾಣಬೇಕು. ಅದನ್ನು ನನಸು ಮಾಡಿಕೊಳ್ಳಲು ಪರಿಶ್ರಮ ಹಾಕಬೇಕು. ಪ್ರತಿ ವರ್ಷ 2 ಕೋಟಿ ಜನ ಐಎಎಸ್ ಮಾಡುವ ಕನಸು ಕಾಣುತ್ತಾರೆ. 5 ಲಕ್ಷ ಮಂದಿ ಮಾತ್ರ ಪರೀಕ್ಷೆ ಬರೆಯುತ್ತಾರೆ. ಅದರಲ್ಲಿ ಕೆಲವರು ಮಾತ್ರ ಆಯ್ಕೆಯಾಗುತ್ತಾರೆ. ಕರ್ನಾಟಕದವರು ಪ್ರತಿ ಬಾರಿ ನೂರು ಮಂದಿಯಾದರೂ ಆಯ್ಕೆಯಾಗಬೇಕು ಎಂಬುದು ನನ್ನ ಆಶಯ. ಹುಣಸೂರಿನಲ್ಲಿ ಪಿಡಿಒ ಆಗಿದ್ದ ನಾನು ನಂತರ ಕೆಎಎಸ್ ಪರೀಕ್ಷೆ ಬರೆದು ಸಿಟಿಒ ಆಗಿ ಆಯ್ಕೆಯಾಗಿದ್ದೆ. ಆದರೆ ಆ ಪಟ್ಟಿ ತಡೆಹಿಡಿಯಲ್ಪಟ್ಟಿತು. ಹೀಗಾಗಿ ನನ್ನಲ್ಲಿರುವ ಜ್ಞಾನ ಹಂಚಿಕೊಳ್ಳಲು ವೆಬ್‌ಸೈಟ್‌ನಲ್ಲಿ ಬರೆಯತೊಡಗಿದೆ. ಉತ್ತಮ ಪ್ರತಿಕ್ರಿಯೆ ಸಿಕ್ಕಿದ್ದರಿಂದ ನಾನೇ ಇನ್‌ಸೈಟ್ಸ್ ಐಎಎಸ್ ಸಂಸ್ಥೆ ಪ್ರಾರಂಭಿಸಿದೆ. ನಾಲ್ಕು ಬಾರಿ ಐಎಎಸ್ ಪರೀಕ್ಷೆ ಬರೆದು, ಒಮ್ಮೆ ಸಂದರ್ಶನಕ್ಕೂ ಹೋಗಿ ಬಂದೆ. ಎರಡು ಅಂಕದಲ್ಲಿ ರ್ಯಾಂಕಿಂಗ್ ಹೋಯಿತು. ಮುಂದೆ ಸಂಸ್ಥೆಯನ್ನು ಕಟ್ಟಿ ಬೆಳೆಸಿದೆ. ಇದುವರೆಗೆ 1547 ಮಂದಿ ವಿವಿಧ ಹುದ್ದೆಗಳಿಗೆ ಆಯ್ಕೆಯಾಗಿದ್ದಾರೆ ಎಂದರು.

ಒಕ್ಕಲಿಗ ಯುವ ಬ್ರಿಗೇಡಿನ ಸಂಸ್ಥಾಪಕ ಅಧ್ಯಕ್ಷ ನಂಜೇಗೌಡ ನಂಜುಂಡ ಮಾತನಾಡಿ, ಒಕ್ಕಲಿಗ ಯುವ ಬ್ರಿಗೇಡ್ ವತಿಯಿಂದ ಈಗಾಗಲೇ ವಿವಿಧ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿಕೊಂಡು ಬರಲಾಗುತ್ತಿದೆ. ಅನ್ನ, ಅಕ್ಷರ ಮತ್ತು ಅಹಾಶ ಕಲ್ಪಿಸುವ ಸಂಕಲ್ಪದೊಂದಿಗೆ ಗ್ರಾಮೀಣ ಜನತೆಯ ಬದುಕು ಕಟ್ಟುವ ಕೆಲಸವನ್ನು ಮುಂದುವರಿಸುತ್ತೇವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತರಾದ ಅಂಶಿ ಪ್ರಸನ್ನಕುಮಾರ್, ಎಂ.ಆರ್. ಸತ್ಯನಾರಾಯಣ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಾಜನ ಸ್ನಾತಕೋತ್ತರ ಕೇಂದ್ರದ ನಿರ್ದೇಶಕ ಡಾ.ಸಿ.ಕೆ. ರೇಣುಕಾರ್ಯ ಮಾತನಾಡಿ, ಐಎಎಸ್, ಐಎಫ್‌ಎಸ್, ಐಆರ್‌ಎಸ್ ಇನ್ನಿತರ ಪರೀಕ್ಷೆಗಳಲ್ಲಿ ಉತ್ತರ ಭಾರತೀಯರೇ ಮೇಲುಗೈ ಸಾಧಿಸುತ್ತಿದ್ದಾರೆ. ದಕ್ಷಿಣ ಭಾರತದಲ್ಲಿ ಕೇರಳ ಹಾಗೂ ತಮಿಳುನಾಡಿನವರು ಹೆಚ್ಚಾಗಿದ್ದಾರೆ. ದೇಶದಲ್ಲಿ ಕರ್ನಾಟಕ ಒಂದು ಪ್ರಮುಖ ರಾಜ್ಯ. ಜಿಡಿಪಿ ಹೆಚ್ಚಿದೆ. ಹೆಚ್ಚಿನ ವಿದ್ಯಾವಂತರು ಇದ್ದಾರೆ. ಆದರೆ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಮಾತ್ರ ಹಿಂದೆ ಇದ್ದಾರೆ ಎಂದು ವಿಷಾದಿಸಿದರು.

ಈ ಸಂದರ್ಭದಲ್ಲಿ ಮಹಾಜನ ಸ್ನಾತಕೋತ್ತರ ಕೇಂದ್ರದ ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥೆ ಡಾ.ವಿ. ಭಾವನಾ ಸ್ವಾಗತಿಸಿದರು. ರಾಜ್ಯಶಾಸ್ತ್ರ ವಿಷಯ ತರಬೇತುದಾರ ನಿಖಿಲ್, ಸಾಮಾನ್ಯ ಪರೀಕ್ಷೆ ತರಬೇತುದಾರ ಕೃಷ್ಣ ಗರಣಿ ಇನ್ನಿತರರು ಉಪಸ್ಥಿತರಿದ್ದರು.



ಮೈಸೂರಿನ ಮೇಟಗಳ್ಳಿಯಲ್ಲಿರುವ ಪೂಜಾ ಭಗವತ್ ಮಹಾಜನ ಶಿಕ್ಷಣ ಸಂಸ್ಥೆಯಲ್ಲಿ ಒಕ್ಕಲಿಗ ಯುವ ಬ್ರಿಗೇಡ್ ವತಿಯಿಂದ ಆಯೋಜಿಸಿದ್ದ 'ಐಎಎಸ್, ಕೆಎಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವುದು ಹೇಗೆ'? ಕುರಿತ ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಸಿಐಡಿ ಎಸ್ಪಿ ಕಾಶಿಗೌಡ ಉದ್ಘಾಟಿಸಿದರು.

ಸಿಟಿ ಕೋ–ಆಪರೇಟಿವ್ ಬ್ಯಾಂಕ್ ನೂತನ ಉಪಾಧ್ಯಕ್ಷರ ಆಯ್ಕೆ



ಮೈಸೂರು ನಗರ ಶ್ರೀ ಹರ್ಷ ರಸ್ತೆಯ ದಿ. ಸಿಟಿ ಕೋ–ಆಪರೇಟಿವ್ ಬ್ಯಾಂಕ್‌ನ ಉಪಾಧ್ಯಕ್ಷರಾಗಿ ಸ್ವಾಮಿ ಆಯ್ಕೆಯಾದರು. ಇವರನ್ನು (ಎಡದಿಂದ) ಬ್ಯಾಂಕ್‌ನ ಪ್ರಭಾರ ವ್ಯವಸ್ಥಾಪಕ ರಾಜಶೇಖರ್, ನಿರ್ದೇಶಕರಾದ ಶ್ರೀಮತಿ ಪುಷ್ಪಲತಾ ಚಿಕ್ಕಣ್ಣ, ಎನ್.ಧ್ರುವರಾಜ್, ಎಂ.ಪುಟ್ಟಸ್ವಾಮಿ, ಜಯಕುಮಾರ್, ಹಾಲಿ ಅಧ್ಯಕ್ಷ ಎಂ.ಎನ್ ಸ್ವರೂಪ್, ನಿರ್ದೇಶಕ ಕುರುಬಾರಹಳ್ಳಿ ಜೆ.ಪ್ರಕಾಶ್ ಅಭಿನಂದಿಸಿದರು.

ಉತ್ಕರ್ಷ ಯೋಗ ಶಿಬಿರ

ಮೈಸೂರು, ಮಾ. 27– ಮೈಸೂರಿನ ಲಲಿತಾದ್ರಿಪುರ ರಸ್ತೆಯಲ್ಲಿರುವ ಆರ್ಟ್ ಆಫ್ ಲಿವಿಂಗ್ ಆಶ್ರಮದಲ್ಲಿ ಏ. 1 ರಿಂದ 6 ರವರೆಗೆ ಬೆಳಗ್ಗೆ 10 ರಿಂದ ಸಂಜೆ 4 ರವರೆಗೆ ಉತ್ಕರ್ಷ ಯೋಗ ಶಿಬಿರ (8 ರಿಂದ 13 ವರ್ಷ ವಯಸ್ಸಿನವರಿಗೆ) ಹಮ್ಮಿಕೊಳ್ಳಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ. 9845685892, 9886009208 ಸಂಪರ್ಕಿಸಬಹುದು.

ಮೈಸೂರು ಜನರಿಗೆ ಮತ್ತೊಂದು ಶಾಕ್

ಏ.1ರಿಂದ ಪಾಲಿಕೆ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಹೆಚ್ಚಳ

ಮೈಸೂರು, ಮಾ.27(ಬಿಎಲ್‌ಯು)– ಮೈಸೂರು ನಗರ ಪಾಲಿಕೆ ವ್ಯಾಪ್ತಿಯ ಆಸ್ತಿಗಳಿಗೆ ಏಪ್ರಿಲ್ 1ರಿಂದ ಅನ್ವಯ ಆಗುವಂತೆ ಶೇಕಡ 3 ರಷ್ಟು ದರ ಹೆಚ್ಚಳ ಮಾಡಿ ಜಾರಿಗೊಳಿಸಲಾಗಿದೆ ಎಂದು ನಗರ ಪಾಲಿಕೆ ಆಯುಕ್ತ ಷೇಕ್ ತನ್ವೀರ್ ಆಸೀಫ್ ತಿಳಿಸಿದ್ದಾರೆ. ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕರ್ನಾಟಕ ಮಹಾ ನಗರ ಪಾಲಿಕೆಗಳ ಅಧಿನಿಯಮ– 1976 ರ ಕಲಂ 108,109 ಮತ್ತು 109/ಎ ಗಳಿಗೆ ತಿದ್ದುಪಡಿಯಾಗಿರುವಂತೆ ಆಸ್ತಿ ತೆರಿಗೆ ದರ ಪರಿಷ್ಕರಿಸಿ ಜಾರಿ ಮಾಡಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಪ್ರತಿ ಆರ್ಥಿಕ ಸಾಲಿನ ಪ್ರಾರಂಭದ ಮಾಹೆಯಂತೆ ಪಾವತಿ ಮಾಡಬೇಕಾದ ಆಸ್ತಿ ತೆರಿಗೆಯಲ್ಲಿ ಶೇಕಡ 5 ರಷ್ಟು ಆಸ್ತಿ ತೆರಿಗೆ ರಿಯಾಯಿತಿ ಪಡೆಯುವ ಅವಕಾಶ ನೀಡಲಾಗಿದೆ. ಆಸ್ತಿ ಮಾಲೀಕರು ಇದನ್ನು ಸದುಪಯೋಗ ಮಾಡಿಕೊಳ್ಳುವಂತೆ ಸಲಹೆ ನೀಡಿದ್ದಾರೆ.

ಸ್ವತ್ತಿನ ಮಾರ್ಗಸೂಚಿ ಮೌಲ್ಯದ ಪರಿಷ್ಕರಣೆ ಆಗದ ವರ್ಷದಲ್ಲಿ ಆಸ್ತಿ ತೆರಿಗೆ ಮೊತ್ತದ ಶೇಕಡ 3 ರಿಂದ 5 ರವರೆಗೆ ಆಸ್ತಿ ತೆರಿಗೆ ಹೆಚ್ಚಳ ಮಾಡಲು ಅಗತ್ಯ ಕ್ರಮ ವಹಿಸಲಾಗಿದೆ. ಆಸ್ತಿ ತೆರಿಗೆ ಕ್ಯಾಲ್ಕ್ಯುಲೇಟರ್ ನಲ್ಲಿ ಸದರಿ ದರಗಳನ್ನು ಮಾರ್ಚ್ 2025 ರೊಳಗೆ ಕಾಲೋಚಿತ (ಋತು ಅಥವಾ ಅವಧಿ) ಗೊಳಿಸಲು ನಿರ್ದೇಶನ ನೀಡಲಾಗಿದೆ ಎಂದು ಷೇಕ್ ತನ್ವೀರ್ ಆಸೀಫ್ ತಿಳಿಸಿದ್ದಾರೆ.

ಈಗಾಗಲೇ ವಿದ್ಯುತ್, ಹಾಲು ಸೇರಿದಂತೆ ಹಲವು ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಜನತೆಗೆ ಈಗ ಆಸ್ತಿ ತೆರಿಗೆ ಬೆಲೆ ಹೆಚ್ಚಳ ಮತ್ತೊಂದು ಬರೆಯಾಗಿದೆ.

ವೈಕುಂಠ ಸಮಾರಾಧನಾ ಆಹ್ವಾನ ಪತ್ರಿಕೆ




ಶ್ರೀ.ಜಿ.ಸುರೇಶ್

ಇವರು ದಿನಾಂಕ 17-03-2025ನೇ ಸೋಮವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ವೈಕುಂಠ ಸಮಾರಾಧನೆ ಕಾರ್ಯವನ್ನು ದಿನಾಂಕ 28-03-2025ನೇ ಶುಕ್ರವಾರ ಬೆಳಗ್ಗೆ 10.30 ಗಂಟೆಗೆ ಮೃತರ ಸ್ವಗೃಹ ಹೆಚ್.ಡಿ.ಕೋಟೆ ಟೌನ್, ಆಸ್ಪತ್ರೆ ಬಡಾವಣೆ ಇಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಸಕಾಲಕ್ಕೆ ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ದುಃಖತಪ್ತರು: ಮೃತರ ಪತ್ನಿ ಸುಶೀಲಾ ಹಾಗೂ ಕುಟುಂಬವರ್ಗದವರು, ಮಕ್ಕಳು, ಅಳಿಯಂದಿರು ಮತ್ತು ಮೊಮ್ಮಕ್ಕಳು, ಬಂಧು-ಮಿತ್ರರು
ಮೊ:8970001566

9ನೇ ವರ್ಷದ ಪುಣ್ಯಸ್ಮರಣೆ



ಎಸ್.ಮೊಗಣ್ಣೇಗೌಡ
(ನಿವೃತ್ತ ಸ್ಕೂಲ್ ಮಾಸ್ಟರ್)
ಸದಾ ನಿಮ್ಮ ನೆನಪಿನಲ್ಲಿರುವ
ದುಃಖತಪ್ತರು: ಪತ್ನಿ ಮಹದೇವಮ್ಮ, ಸಾಕಮ್ಮ, ಮಂಜುನಾಥ, ಗಣೇಶ, ಶ್ರೀಧರ, ವರಲಕ್ಷ್ಮಿ, ಜ್ಯೋತಿ ಮತ್ತು ಕುಟುಂಬವರ್ಗದವರು.

ಮೊದಲನೇ ವರ್ಷದ ಪುಣ್ಯಸ್ಮರಣೆ



ದಿ|| ಆದಿತ್ಯ ಪೈ
ನಿಧನ : 28-03-2024
ನೀವು ನಮ್ಮನ್ನು ಅಗಲಿ ಒಂದು ವರ್ಷ ಕಳೆದರುನಿಮ್ಮ ನೆನಪು ನಮ್ಮೆಲ್ಲರ ಮನದಲ್ಲಿ ಅಚ್ಚು-ಹಸಿರಾಗಿದೆ ನಿಮ್ಮ ಆತ್ಮಕ್ಕೆ ಪರಮಾತ್ಮನ್ನು ಚಿರಶಾಂತಿ ಕರುಣಿಸಲಿ
ಸದಾ ನಿಮ್ಮ ಸ್ಮರಣೆಯಲ್ಲಿರುವ :
ಶ್ರೀಮತಿ ಸುಜಾತ ಪೈ ಮತ್ತು ಶ್ರೀ ಶಾಂತರಾಮ್ ಪೈ ಕುಟುಂಬ ವರ್ಗದವರು ಹಾಗೂ ಸ್ನೇಹಿತರು

ಮೈಸೂರು ಮಿತ್ರ 45 — ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ. ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು


ಹಸಿರು ನಮ್ಮ ಉಸಿರು

ಸಾರ್ವಜನಿಕ ಪ್ರಕಟಣೆ

(ಮೂಲ ದಾಖಲೆ ಪತ್ರವನ್ನು ಕಳೆದುಕೊಂಡಿರುವ ಬಗ್ಗೆ)
ಈ ನೋಟಿಸನ್ನು ಈ ಕೆಳಕಂಡ ನನ್ನ ಕಕ್ಷೀದಾರನ ಪರವಾಗಿ ನೀಡಲಾಗಿದೆ, ಶ್ರೀ ಬಿ.ಜಿ. ಚಿಂಗಪ್ಪ (ಮಿಟ್ಟೂ ಚಿಂಗಪ್ಪ) ಶ್ರೀ ದಿವಂಗತ ಬಿ.ಸಿ. ಗಣಪತಿ, ಈ ನೋಟಿಸಿನ ಮೂಲಕ ಸಾರ್ವಜನಿಕವಾಗಿ ತಿಳಿಯಪಡಿಸುವುದೇನೆಂದರೆ, ದಿನಾಂಕ 12/09/2006 ರ ಶುದ್ಧ ಕ್ರಯ ಪತ್ರ ದಾಖಲೆ ಸಂಖ್ಯೆ PYB-1-03756-2006-07, ಪುಸ್ತಕ-1, ಸಿಡಿ PYPD26 ಪಿರಿಯಾಪಟ್ಟಣ ಸಬ್-ರಿಜಿಸ್ಟ್ರಾರ್ ಕಚೇರಿಯಾಗಿದ್ದು ಸದರಿ ಮೂಲ ದಾಖಲೆಯು ಕಳೆದು ಹೋಗಿರುತ್ತದೆ, ಅದರಂತೆ ದಿನಾಂಕ 27/03/2025 ಕರ್ನಾಟಕ ರಾಜ್ಯ ಪೊಲೀಸ್ ಅವರಿಗೆ ದೂರನ್ನು ನೀಡಲಾಗಿದೆ ದೂರಿನ No. E-Lost Report No. 1540052/2025.
ಯಾವುದೇ ವ್ಯಕ್ತಿಗಳು, ಫರ್ಮ್, ಕಂಪನಿ, ಸಂಸ್ಥೆ, ಬ್ಯಾಂಕ್ ಅಥವಾ ಯಾವುದೇ ಸಂಘವು ಯಾವುದೇ ಕ್ಲೈಮ್ ಹೊಂದಿದ್ದು ಹಾಗೂ ಮೇಲೆ ತಿಳಿಸಿದ ಡಾಕ್ಯುಮೆಂಟನ್ನು ಹೊಂದಿದ್ದಲ್ಲಿ, ಅವರು ಅದನ್ನು ಹಿಂದಿರುಗಿಸತಕ್ಕದ್ದು ಅಥವಾ ಕೆಳಗೆ ಸಹಿ ಮಾಡಿರುವವರನ್ನು ಸೂಚನೆ ಸ್ವೀಕರಿಸಿದ ದಿನದಿಂದ 7 ದಿನಗಳ ಒಳಗೆ ಸಂಪರ್ಕಿಸತಕ್ಕದ್ದು, ಒಂದು ವೇಳೆ ವಿಫಲವಾದಲ್ಲಿ ಯಾವುದೇ ಹಕ್ಕುಗಳಿಲ್ಲವೆಂದು ಭಾವಿಸಲಾಗುತ್ತದೆ.

SCHEDULE PROPERTY
All that piece and parcel of the Kushki property land bearing Sy. No. 6/4B measuring 4 acres situated in Benagalu village, Kanagalu Grama Panchayath, Harnahal1 Hobli, Periyapatna Taluk, Mysore District, Karnataka State and bounded on the: East by : Govt Kharab, **West by :** Property belong to Mr. Raviraj Urs, **North by :** Property belong to Mr. Late Subbaraj Urs, **South by :** Remaining land.

AKSHAY RAJ B R, Advocate
#9, Ground Floor, Lucelle Court, Berlie Street, Bangalore-560025.
Mobile: 9686393267
Email : akshay2596raj@gmail.com

ಸಾರ್ವಜನಿಕ ಪ್ರಕಟಣೆ

ಸಾಮಾನ್ಯ ಅಧಿಕಾರ ಪತ್ರವನ್ನು ರದ್ದಿಯಾಂಖಿತಿ ಮಾಡಿರುವ ಬಗ್ಗೆ ಸ್ಪಷ್ಟನೆ
ಆರ್.ಉಮೇಶ್, ಬಿನ್ ಲೇಟ್.ಎಂ.ಟಿ ರಾಜಯ್ಯ ಹಳೆಯ ವಿಳಾಸ :- ಮನೆ ನಂ.2169, ಅಕ್ಬರ್ ರಸ್ತೆ, ಮಂಡಿ ಮೊಹಲ್ಲಾ, ಮೈಸೂರು, ಪ್ರಸ್ತುತ ವಾಸ :- ಮನೆ ನಂ.55, 5ನೇ ಕ್ರಾಸ್, ರೈಲ್ವೆ ಕಾಲೋನಿ, ವಿಜಯನಗರ 2ನೇ ಹಂತ, ಮೈಸೂರು-570016 ಆದ ನಾನು ನನ್ನ ಅಣ್ಣನಾದ ಆರ್.ರಮೇಶ್ ರವರಿಗೆ ದಿನಾಂಕ: 16-01-1989 ರಂದು ಮಾಡಿದ್ದಂತಹ ಜಿ.ಪಿ.ಎ /ಸಾಮಾನ್ಯ ಅಧಿಕಾರ ಪತ್ರವನ್ನು ನೋಟರಿರವರ ಮುಂದೆ ಮಾಡಿಸಲಾಗಿತ್ತು. ಆದರೆ, ಈಗ ನನ್ನ ಎಲ್ಲಾ ರೀತಿಯ ಕೆಲಸ ಕಾರ್ಯಗಳಿಂದ ಬಿಡುವು ಇರುವ ಕಾರಣದಿಂದಾಗಿ ನಾನು ಈ ಹಿಂದೆ ನನ್ನ ಅಣ್ಣನಿಗೆ ನೀಡಿರುವ ಸಾಮಾನ್ಯ ಅಧಿಕಾರ ಪತ್ರವನ್ನು ನೋಟರಿ ಸಿ.ಪಿ ಪದ್ಮ ಬಿ.ಎ.ಎಲ್., ಎಲ್ ಎಲ್.ಬಿ., ವಕೀಲರು ಮತ್ತು ನೋಟರಿ, ಕಛೇರಿ ವಿಳಾಸ : ನಂ.67, 2ನೇ ಮೇನ್, 18ನೇ ಕ್ರಾಸ್, ಜಯನಗರ, ಮೈಸೂರುರವರ ಸಮ್ಮುಖದಲ್ಲಿ ರದ್ದು ಮಾಡಿಸಿ, ಸಾರ್ವಜನಿಕ ಪ್ರಕಟಣೆ ನೀಡಲಾಗಿದೆ.

Sd/- **C.P.Padma**
B.A.L, LL.B.,
Advocate & Notary
#67, 18th Cross,
Jayanagara, MYSURU-14,
Mob: 94807-32923

ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.,
ಮೆಗಾ ಡೈರಿ ಸಂಕೀರ್ಣ, ಬನ್ನೂರು ರಸ್ತೆ, ಆಲನಹಳ್ಳಿ ಅಂಚೆ, ಮೈಸೂರು – 570028.
ದೂರವಾಣಿ ಸಂಖ್ಯೆ:0821–2474475, ಫ್ಯಾಕ್ಸ್ ನಂ.0821–2474476,
ಇ–ಮೇಲ್ : purmymul@gmail.com

ಟೆಂಡರ್ ಪ್ರಕಟಣೆ (ಇ–ಟೆಂಡರ್ ಮುಖಾಂತರ ಮಾತ್ರ)

ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟಕ್ಕೆ ಅವಶ್ಯವಿರುವ ಈ ಕೆಳಕಂಡ ಸಾಮಾಗ್ರಿಗಳನ್ನು ಖರೀದಿಸಲು ಅರ್ಹ ಟೆಂಡರ್‌ದಾರರಿಂದ ಇ–ಪ್ರೊಕ್ಯೂರ್‌ಮೆಂಟ್ ಮುಖೇನ ಟೆಂಡರನ್ನು ಆಹ್ವಾನಿಸಲಾಗಿದೆ. ಟೆಂಡರ್ ದಾಸ್ತಾವೇಜುಗಳನ್ನು ಕರ್ನಾಟಕ ಸರ್ಕಾರದ ಇ–ಪ್ರೊಕ್ಯೂರ್‌ಮೆಂಟ್ ಪ್ಲಾಟ್ ಫಾರಂ ಅಡಿ https://kppp.karnataka.gov.in ಅಪ್‌ಲೋಡ್ ಮಾಡಬಹುದಾಗಿರುತ್ತದೆ.

ಕ್ರ.ಸಂ	ಟೆಂಡರ್ ಪ್ರಕಟಣೆ ಮತ್ತು ದಿನಾಂಕ	ಸೇವೆಯ ವಿವರ	ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ
1	KMF/2024-25/ IND1345	ಒಕ್ಕೂಟಕ್ಕೆ ಅಗತ್ಯವಿರುವ ಸಿ.ಐ.ಪಿ. ಕೆಮಿಕಲ್ (ಕ್ಲೀನಿಂಗ್ ಸೊಲ್ಯೂಷನ್) ಅನ್ನು ಸರಬರಾಜು ಮಾಡುವ ಬಗ್ಗೆ.	09.04.2025 ಸಂಜೆ 5.00 ಗಂಟೆಯವರೆಗೆ
2	KMF/2024-25/ IND1344	ಒಕ್ಕೂಟಕ್ಕೆ ಅಗತ್ಯವಿರುವ ಕೌವ್ ಮ್ಯಾಟ್/ ರಬ್ಬರ್ ಮ್ಯಾಟ್‌ಅನ್ನು ಖರೀದಿಸುವ ಬಗ್ಗೆ.	11.04.2025 ಸಂಜೆ 5.00 ಗಂಟೆಯವರೆಗೆ
3	KMF/2024-25/ IND1343	ಒಕ್ಕೂಟಕ್ಕೆ ಅಗತ್ಯವಿರುವ ಚಾಫ್ ಕಟ್ಟರ್ ಅನ್ನು ಖರೀದಿಸುವ ಬಗ್ಗೆ.	11.04.2025 ಸಂಜೆ 5.00 ಗಂಟೆಯವರೆಗೆ
4	KMF/2024-25/ SE3332	ಒಕ್ಕೂಟಕ್ಕೆ ಅಗತ್ಯವಿರುವ ನೂತನ ಯೋಜನೆಗಳ ಯೋಜನಾ ನಿರ್ವಹಣೆಗೆ ತಾಂತ್ರಿಕ ಸಲಹಾ ಸೇವೆಗಳನ್ನು ಪಡೆಯುವ ಸಂಬಂಧ.	05.04.2025 ಸಂಜೆ 5.00 ಗಂಟೆಯವರೆಗೆ

ಹೆಚ್ಚಿನ ಮಾಹಿತಿಗಾಗಿ ಖರೀದಿ ವಿಭಾಗವನ್ನು (6366430821,9482231739) ಸಂಪರ್ಕಿಸಬಹುದಾಗಿದೆ.
ಸಹಿ/-, ವ್ಯವಸ್ಥಾಪಕ ನಿರ್ದೇಶಕರು
ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟ ನಿ.,